# ಯೊವಾನ್ನನು ಬರೆದ ಶುಭಸಂದೇಶ

## ಮುನ್ನುಡಿ

ಯೇಸುಸ್ವಾಮಿ ದೇವರ ‘ದಿವ್ಯವಾಣಿ’. ಈ ವಾಣಿ ಒಬ್ಬ ನರಮಾನವನಾಗಿ ನಮ್ಮ ನಡುವೆ ವಾಸ ಮಾಡಿದರು. ಹೀಗೆಂದು ಆರಂಭವಾಗುವ ಈ ನಾಲ್ಕನೆಯ ಶುಭಸಂದೇಶ ತನ್ನ ಉದ್ದೇಶವನ್ನು ತಾನೇ ಹೇಳಿಕೊಳ್ಳುತ್ತದೆ: “ಇದರಲ್ಲಿ ಬರೆದವುಗಳ ಉದ್ದೇಶ ಇಷ್ಟೆ – ಯೇಸುಸ್ವಾಮಿ ದೇವರ ಪುತ್ರ ಹಾಗೂ ಲೋಕೋದ್ಧಾರಕ ಎಂದು ನೀವು ನಂಬಿ ವಿಶ್ವಾಸಿಸಬೇಕು. ಹೀಗೆ ವಿಶ್ವಾಸಿಸಿ ಅವರ ಹೆಸರಿನಲ್ಲಿ ಸಜೀವವನ್ನು ಪಡೆಯಬೇಕು” (20.31).

ಅಮರವಾದ ಈ ದಿವ್ಯವಾಣಿ ಮಾಡಿದ ನಾನಾ ಸೂಚಕಕಾರ್ಯಗಳಲ್ಲಿ ಕೆಲವೇ ಕೆಲವು ಯೊವಾನ್ನನು ಬರೆದ ಈ ಪುಸ್ತಕದಲ್ಲಿ ವರದಿಯಾಗಿವೆ. ಯೇಸುಸ್ವಾಮಿ ದೇವರ ಏಕೈಕ ಪುತ್ರ ಹಾಗೂ ಪುರಾತನ ಕಾಲದಿಂದಲೂ ದೇವರು ವಾಗ್ದಾನ ಮಾಡಿದ ಲೋಕೋದ್ಧಾರಕ ಎಂಬ ಸತ್ಯವನ್ನು ಸಾದೃಶ್ಯ ಪಡಿಸುವುದೇ ಈ ಸೂಚಕಕಾರ್ಯಗಳ ಗುರಿ ಹಾಗೂ ಧ್ಯೇಯ.

ಅನಂತರ ಬೋಧನಾಭಾಗ ಆರಂಭವಾಗುತ್ತದೆ. ಸ್ವಾಮಿಯ ಈ ಅಮೋಘ ಬೋಧನೆಯನ್ನು ಕೇಳಿದ ಕೆಲವರು ವಿಶ್ವಾಸವಿಟ್ಟು ಅವರಿಗೆ ಶರಣಾಗುತ್ತಾರೆ: ಮಿಕ್ಕವರು ಅಂಥ ವಿಶ್ವಾಸವನ್ನು ನಿರಾಕರಿಸುತ್ತಾರೆ. ಯೇಸುಸ್ವಾಮಿಗೂ ಅವರ ಆಪ್ತಶಿಷ್ಯರಿಗೂ ಇದ್ದ ನಿಕಟ ಬಾಂಧವ್ಯವನ್ನು ಅಧ್ಯಾಯ 13 ರಿಂದ 17ರವರೆಗೆ ಓದುಗನ ಮನಮುಟ್ಟುವಂತೆ ವರ್ಣಿಸಲಾಗಿದೆ. ಶತ್ರುಗಳು ಸ್ವಾಮಿಯನ್ನು ಬಂಧಿಸಿದ ರಾತ್ರಿ, ಅವರನ್ನು ಶಿಲುಬೆಗೇರಿಸಿದ ಹಿಂದಿನ ದಿನ, ಅವರು ಶಿಷ್ಯರಿಗೆ ಕೊಟ್ಟ ಬುದ್ಧಿವಾದ ಓದಲು ಮಾತ್ರವಲ್ಲ, ಧ್ಯಾನಿಸಲೂ ಯೋಗ್ಯವಾದುದು. ಅನಂತರದ ಅಧ್ಯಾಯಗಳಲ್ಲಿ ಯೇಸುವಿನ ಬಂಧನ, ನ್ಯಾಯವಿಚಾರಣೆ, ಶಿಲುಬೆಮರಣ, ಪುನರುತ್ಥಾನ, ಶಿಷ್ಯರಿಗಿತ್ತ ದಿವ್ಯ ದರ್ಶನಗಳು – ಇವುಗಳನ್ನು ವಿವರಿಸಲಾಗಿದೆ.

ಕೆಲವು ಮೂಲ ಪ್ರತಿಗಳಲ್ಲಿ, ವ್ಯಭಿಚಾರದಲ್ಲಿ ಸಿಕ್ಕಿಬಿದ್ದ ಸ್ತ್ರೀಯ ವೃತ್ತಾಂತವಿಲ್ಲ. ಮತ್ತೆ ಕೆಲವು ಪ್ರತಿಗಳಲ್ಲಿ ಅದು ಬೇರೆ ಬೇರೆ ಅಧ್ಯಾಯಗಳಡಿ ಕಾಣಿಸಿಕೊಳ್ಳುತ್ತದೆ. ಈ ಕಾರಣ, ಈ ವೃತ್ತಾಂತವನ್ನು (8.1–11) ಆವರಣಗಳೊಳಗೆ ಕೊಡಲಾಗಿದೆ.

ಕ್ರಿಸ್ತಯೇಸು ಅನುಗ್ರಹಿಸುವ ಜೀವ ಸತ್ಯವಾದುದು, ನಿತ್ಯವಾದುದು. ಅದೊಂದು ಪರಮೋನ್ನತ ಕೊಡುಗೆ. ‘ಮಾರ್ಗವೂ ಸತ್ಯವೂ ಜೀವವೂ ನಾನೇ’ ಎಂದು ಸ್ವಾಮಿ ಈ ಅಮರ ಜೀವವನ್ನು ತನ್ನ ಕರೆಗೆ ಓಗೊಡುವ ಭಕ್ತಾದಿಗಳಿಗೆ ಇಹದಲ್ಲೇ ನೀಡುತ್ತಾರೆಂದು ಲೇಖಕ ಯೊವಾನ್ನನು ಹಲವಾರು ವಿಧದಲ್ಲಿ ನಿರೂಪಿಸುತ್ತಾನೆ.

ದಿನನಿತ್ಯದ ಬಳಕೆಗಾಗುವ ನೀರು, ರೊಟ್ಟಿ, ಬೆಳಕು, ದ್ರಾಕ್ಷಾರಸ ಮುಂತಾದ ಪದಾರ್ಥಗಳ ಮೂಲಕ, ಕುರಿ, ಕುರಿಗಾಹಿ ಇಂಥ ಸಾಮಾನ್ಯ ಉದಾಹರಣೆಗಳ ಮೂಲಕ ಆಳವಾದ ಆಧ್ಯಾತ್ಮಿಕ ಸತ್ಯಗಳನ್ನು ವ್ಯಕ್ತಪಡಿಸುವುದು ಯೊವಾನ್ನನ ವೈಶಿಷ್ಟ್ಯವೆನ್ನಬಹುದು.

**ಪರಿವಿಡಿ**


| | | |
|---|---|---|
| ದಿವ್ಯವಾಣಿ | – | 1.1 – 1.18 |
| ಯೊವಾನ್ನನ ಶಿಷ್ಯರು ಮತ್ತು ಯೇಸುವಿನ ಪ್ರಥಮ ಶಿಷ್ಯರು | – | 1.19 – 1.51 |
| ಯೇಸುವಿನ ಸಾರ್ವಜನಿಕ ಸೇವೆ | – | 2.1 – 12.50 |
| ಜೆರುಸಲೇಮಿನಲ್ಲೂ ಅದರ ಪರಿಸರದಲ್ಲೂ ಅಂತಿಮ ದಿನಗಳು | – | 13.1 – 19.42 |
| ಪುನರುತ್ಥಾನ ಮತ್ತು ದಿವ್ಯದರ್ಶನಗಳು | – | 20.1 – 20.31 |
| ಗಲಿಲೇಯದಲ್ಲಿ ಅಂತಿಮ ದರ್ಶನ | – | 21.1 – 21.25 |

# ದಿವ್ಯವಾಣಿ

**1** ಜಗತ್ತು ಉಂಟಾಗುವ ಮೊದಲೇ 'ದಿವ್ಯವಾಣಿ' ಎಂಬವರಿದ್ದರು. ಆ ದಿವ್ಯವಾಣಿ ದೇವರಾಗಿದ್ದರು. ಆ
ದಿವ್ಯವಾಣಿ ದೇವರೊಂದಿಗೆ ಇದ್ದರು; [2]ಅನಾದಿಯಿಂದಲೇ ಅವರು ದೇವರೊಂದಿಗೆ ಇದ್ದರು. [3]ದಿವ್ಯವಾಣಿಯ
ಮುಖಾಂತರವೇ ಸಮಸ್ತವೂ ಉಂಟಾಯಿತು. ಉಂಟಾದವುಗಳಲ್ಲಿ ಯಾವುದೂ ಆ ದಿವ್ಯವಾಣಿಯಿಂದಲ್ಲದೆ
ಆದುದಲ್ಲ.

[4] ಆ ದಿವ್ಯವಾಣಿಯಲ್ಲಿ ಸಜ್ಜೀವವಿತ್ತು.
ಆ ಜೀವವೇ ಮಾನವಜನಾಂಗದ
ಜ್ಯೋತಿಯಾಗಿತ್ತು.
[5] ಆ ಜ್ಯೋತಿ ಕತ್ತಲಲ್ಲಿ ಪ್ರಕಾಶಿಸುತ್ತದೆ.
ಕತ್ತಲಿಗಾದರೋ ಅದನ್ನು ನಿಗ್ರಹಿಸಲಾಗಲಿಲ್ಲ.
[6] ದೇವರು ಒಬ್ಬ ವ್ಯಕ್ತಿಯನ್ನು ಕಳುಹಿಸಿದರು.
ಆತನ ಹೆಸರು ಯೊವಾನ್ನ.
[7] ಈತನು ಸಾಕ್ಷಿಕೊಡಲು ಬಂದನು.
ತನ್ನ ಮುಖಾಂತರ ಸರ್ವರೂ ವಿಶ್ವಾಸಿಸುವಂತೆ
ಆ ಜ್ಯೋತಿಯನ್ನು ಕುರಿತು ಸಾಕ್ಷಿ ನೀಡಿದನು.
[8] ಈತನೇ ಜ್ಯೋತಿಯಾಗಿರಲಿಲ್ಲ;
ಆ ಜ್ಯೋತಿಯನ್ನು ಕುರಿತು ಸಾಕ್ಷಿ ನೀಡಲೆಂದೇ
ಬಂದವನು.
[9] ನಿಜವಾದ ಜ್ಯೋತಿ ಆ ದಿವ್ಯವಾಣಿಯೇ.
ಮಾನವರೆಲ್ಲರನ್ನು ಬೆಳಗಿಸಲು ಲೋಕಕ್ಕೆ
ಆಗಮಿಸಲಿದ್ದ ಜಗಜ್ಯೋತಿ ಅವರೇ.
[10] ದಿವ್ಯವಾಣಿ ಲೋಕದಲ್ಲಿ ಇದ್ದರು.
ಅವರ ಮುಖಾಂತರವೇ ಲೋಕವು
ಉಂಟಾಯಿತು.
ಲೋಕವಾದರೋ ಅವರನ್ನು ಅರಿತುಕೊಳ್ಳದೆ
ಹೋಯಿತು.
[11] ಅವರು ತಮ್ಮ ಸ್ವದೇಶಕ್ಕೆ ಬಂದರು;
ಸ್ವಜನರೇ ಅವರನ್ನು ಬರಮಾಡಿಕೊಳ್ಳದೆ
ಹೋದರು.
[12] ಕೆಲವರಾದರೋ ಅವರನ್ನು ಬರಮಾಡಿ
ಕೊಂಡರು.
ಅಂಥವರಿಗೆ, ಅಂದರೆ ಅವರಲ್ಲಿ ವಿಶ್ವಾಸ
ಇಟ್ಟವರಿಗೆ,
ದೇವರ ಮಕ್ಕಳಾಗುವ ಹಕ್ಕನ್ನು ಅವರು
ಕೊಟ್ಟರು.
[13] ಅಂಥವರ ಜನನವು ರಕ್ತಸಂಬಂಧದಿಂದ ಅಲ್ಲ,
ಶಾರೀರಕ ಇಚ್ಛೆಯಿಂದ ಅಲ್ಲ,
ಮಾನವಸಹಜ ಬಯಕೆಯಿಂದಲೂ ಅಲ್ಲ,
ದೇವರಿಂದಲೇ ಆದುದು.

14 ಆ ದಿವ್ಯವಾಣಿ ಮನುಷ್ಯ ಆದರು.
ಮನುಷ್ಯನಾಗಿ ನಮ್ಮೊಡನೆ ವಾಸಮಾಡಿದರು.
ಅವರ ಮಹಿಮೆಯನ್ನು ನಾವು ನೋಡಿದೆವು.
ಪಿತನಿಂದ ಪಡೆದ ಆ ಮಹಿಮೆ
ಏಕೈಕ ಪುತ್ರನಿಗೆ ಮೀಸಲಾದ ಮಹಿಮೆಯೇ.
ಎಂದೇ ಅವರು ವರಪ್ರಸಾದದಿಂದಲೂ
ಸತ್ಯದಿಂದಲೂ ಪರಿಪೂರ್ಣರಾಗಿದ್ದರು.
15 ಯೊವಾನ್ನನು ಅವರನ್ನು ಕುರಿತು ಸಾಕ್ಷಿ
ನುಡಿಯುತ್ತಾ,
“ ‘ಅವರು ನನ್ನ ಬಳಿಕ ಬಂದವರಾದರೂ
ನನಗಿಂತ ಮೊದಲೇ ಇದ್ದವರು;
ಆದುದರಿಂದ ಅವರು ನನಗಿಂತಲೂ ಶ್ರೇಷ್ಠರು’
ಎಂದು ನಾನು ಹೇಳಿದ್ದು ಅವರನ್ನು ಕುರಿತೇ,”
ಎಂದು ಘೋಷಿಸಿದನು.
16 ಅವರ ಪರಿಪೂರ್ಣತೆಯಿಂದ ನಾವೆಲ್ಲರು
ವರಪ್ರಸಾದದ ಮೇಲೆ ವರಪ್ರಸಾದವನ್ನು
ಪಡೆದಿದ್ದೇವೆ.
17 ಧರ್ಮಶಾಸ್ತ್ರವನ್ನು ಮೋಶೆಯ ಮುಖಾಂತರ
ಕೊಡಲಾಯಿತು.
ವರಪ್ರಸಾದ ಹಾಗೂ ಸತ್ಯವಾದರೋ
ಯೇಸುಕ್ರಿಸ್ತರ ಮುಖಾಂತರ ಬಂದವು.
18 ಯಾರೂ ಎಂದೂ ದೇವರನ್ನು ಕಂಡಿಲ್ಲ;
ಪಿತನ ವಕ್ಷಸ್ಥಳದಲ್ಲಿರುವ,
ಸ್ವತಃ ದೇವರಾಗಿರುವ
ಏಕೈಕ ಪುತ್ರನೇ ಅವರನ್ನು ತಿಳಿಯಪಡಿಸಿದ್ದಾರೆ.

### ಸ್ನಾನಿಕ ಯೊವಾನ್ನನ ಸಾಕ್ಷ್ಯ

(ಮತ್ತಾ. 31.1–12; ಮಾರ್ಕ 1.1–8; ಲೂಕ 3.1–18)

19 ಜೆರುಸಲೇಮಿನ ಯೆಹೂದ್ಯ ಅಧಿಕಾರಿಗಳು, ಯಾಜಕರನ್ನೂ ಲೇವಿಯರನ್ನೂ ಯೊವಾನ್ನನ
ಬಳಿಗೆ ಕಳಿಸಿದರು. ಇವರು, “ನೀನು ಯಾರು?” ಎಂದು ಪ್ರಶ್ನಿಸಿದರು. 20ಯೊವಾನ್ನನು ಅದಕ್ಕೆ ಉತ್ತರವಾಗಿ,
“ಅಭಿಷಿಕ್ತನಾದ ಲೋಕೋದ್ಧಾರಕ ನಾನಲ್ಲ,” ಎಂದು ಸ್ಪಷ್ಟವಾಗಿ ಹೇಳಿದನು. ಏನನ್ನೂ ಮರೆಮಾಚಲಿಲ್ಲ.
21ಹಾಗಾದರೆ, “ನೀನು ಎಲೀಯನೋ?” ಎಂದು ಕೇಳಲು ‘ಅಲ್ಲ’ ಎಂದನು. “ನೀನು ಬರಬೇಕಾಗಿದ್ದ
ಪ್ರವಾದಿಯಿರಬಹುದೇ?” ಎಂದು ಅವರು ಮತ್ತೆ ಕೇಳಲು, “ಅದೂ ಅಲ್ಲ,” ಎಂದು ಮರುನುಡಿದನು.
22“ಹಾಗಾದರೆ ನೀನು ಯಾರೆಂದು ನಮಗೆ ತಿಳಿಸು. ನಮ್ಮನ್ನು ಕಳುಹಿಸಿದವರಿಗೆ ನಾವು
ಉತ್ತರಕೊಡಬೇಕಾಗಿದೆ. ನಿನ್ನನ್ನು ಕುರಿತು ನೀನು ಏನು ಹೇಳುತ್ತೀ?” ಎಂದು ಅವರು ಮತ್ತೊಮ್ಮೆ ಕೇಳಿದರು.
23ಅದಕ್ಕೆ ಯೊವಾನ್ನನು, “ಪ್ರಭುವಿನ ಮಾರ್ಗವನ್ನು ನೇರಗೊಳಿಸಿರೆಂದು ಬೆಂಗಾಡಿನಲ್ಲಿ ಕೂಗುವವನ ಸ್ವರವೇ
ನಾನು,” ಎಂದು ಯೆಶಾಯ ಪ್ರವಾದಿಯ ಮಾತುಗಳಲ್ಲೇ ಉತ್ತರಕೊಟ್ಟನು. 24–25ಆಗ ಫರಿಸಾಯರ
ಕಡೆಯಿಂದ ಬಂದಿದ್ದ ಕೆಲವರು, “ನೀನು ಲೋಕೋದ್ಧಾರಕನಾಗಲಿ, ಎಲೀಯನಾಗಲಿ, ಬರಬೇಕಾಗಿದ್ದ
ಪ್ರವಾದಿಯೇ ಆಗಲಿ ಅಲ್ಲವೆಂದ ಮೇಲೆ ಸ್ನಾನದೀಕ್ಷೆ ಕೊಡುವುದೇಕೆ?” ಎಂದು ಪ್ರಶ್ನಿಸಿದರು.
26ಪ್ರತ್ಯುತ್ತರವಾಗಿ ಯೊವಾನ್ನನು, “ನಾನು ನಿಮಗೆ ನೀರಿನಿಂದ ಸ್ನಾನದೀಕ್ಷೆ ಕೊಡುತ್ತಿದ್ದೇನೆ. ನಿಮಗೆ ತಿಳಿಯದ

ಒಬ್ಬ ವ್ಯಕ್ತಿ ನಿಮ್ಮ ನಡುವೆ ಇದ್ದಾರೆ. [27]ನನ್ನ ಬಳಿಕ ಬರಬೇಕಾಗಿದ್ದವರು ಅವರೇ. ಅವರ ಪಾದರಕ್ಷೆಗಳನ್ನು ಬಿಚ್ಚುವುದಕ್ಕೂ ನಾನು ಯೋಗ್ಯನಲ್ಲ," ಎಂದನು.

28 ಯೊವಾನ್ನನು ಸ್ನಾನದೀಕ್ಷೆ ಕೊಡುತ್ತಿದ್ದ ಜೋರ್ಡನ್ ನದಿಯ ಆಚೆದಡದಲ್ಲಿದ್ದ ಬೆಥಾನಿಯ ಎಂಬಲ್ಲಿ ಇದೆಲ್ಲವೂ ನಡೆಯಿತು.

### ದೇವರ ಯಜ್ಞಪಶು

29 ಮರುದಿನ ಯೊವಾನ್ನನು, ತಾನಿದ್ದಲ್ಲಿಗೇ ಯೇಸು ಬರುತ್ತಿರುವುದನ್ನು ಕಂಡು, "ಇಗೋ
ನೋಡಿ, ಬಲಿಯರ್ಪಣೆಗಾಗಿ ದೇವರು ನೇಮಿಸಿರುವ ಕುರಿಮರಿ; ಲೋಕದ ಪಾಪಗಳನ್ನು ಪರಿಹರಿಸುವವರು
ಇವರೇ. [30]ಇವರು 'ನನ್ನ ಬಳಿಕ ಬಂದವರಾದರೂ ನನಗಿಂತಲೂ ಮೊದಲೇ ಇದ್ದವರು; ಆದುದರಿಂದ
ಇವರು ನನಗಿಂತಲೂ ಶ್ರೇಷ್ಠರು,' ಎಂದು ನಾನು ಹೇಳಿದುದು ಇವರನ್ನು ಕುರಿತೇ. [31]ಇಸ್ರಯೇಲರಿಗೆ
ಇವರನ್ನು ತೋರ್ಪಡಿಸಬೇಕೆಂದೇ ನಾನು ನೀರಿನಿಂದ ಸ್ನಾನದೀಕ್ಷೆ ಕೊಡುತ್ತಾ ಬಂದೆನು; ಬರಬೇಕಾಗಿದ್ದವರು
ಇವರೇ ಎಂದು ನನಗೂ ತಿಳಿದಿರಲಿಲ್ಲ," ಎಂದು ನುಡಿದನು. [32]ಯೊವಾನ್ನನು ತನ್ನ ಸಾಕ್ಷ್ಯವನ್ನು
ಮುಂದುವರಿಸುತ್ತಾ, "ಪಾರಿವಾಳದ ರೂಪದಲ್ಲಿ ಪವಿತ್ರಾತ್ಮ ಸ್ವರ್ಗದಿಂದ ಇಳಿದು ಬಂದು ಅವರ ಮೇಲೆ
ನೆಲಸುವುದನ್ನು ನಾನು ನೋಡಿದೆನು. [33]ಬರಬೇಕಾಗಿದ್ದವರು ಇವರೇ ಎಂದು ನನಗೂ ತಿಳಿದಿರಲಿಲ್ಲ. ಆದರೆ
ನೀರಿನಿಂದ ಸ್ನಾನದೀಕ್ಷೆ ಕೊಡುವಂತೆ ನನ್ನನ್ನು ಕಳುಹಿಸಿದ ದೇವರು, 'ಪವಿತ್ರಾತ್ಮ ಇಳಿದು ಬಂದು ಯಾವ
ವ್ಯಕ್ತಿಯ ಮೇಲೆ ನೆಲಸುವುದನ್ನು ನೀನು ನೋಡುವಿಯೋ ಆತನೇ ಪವಿತ್ರಾತ್ಮನಿಂದ ದೀಕ್ಷಾಸ್ನಾನ
ಕೊಡುವಾತ,' ಎಂದಿದ್ದರು. [34]ಅದನ್ನು ನಾನು ಕಣ್ಣಾರೆ ನೋಡಿದ್ದೇನೆ. ಆದುದರಿಂದ ಅವರೇ ದೇವರ
ಪುತ್ರನೆಂದು ಸಾಕ್ಷಿ ನೀಡುತ್ತಿದ್ದೇನೆ," ಎಂದು ಹೇಳಿದನು.

### ಪ್ರಥಮ ಶಿಷ್ಯರು

35 ಮಾರನೆಯ ದಿನ ಯೊವಾನ್ನನು ತನ್ನಿಬ್ಬರು ಶಿಷ್ಯರ ಸಂಗಡ ನಿಂತುಕೊಂಡಿರುವಾಗ,
ಯೇಸುಸ್ವಾಮಿ ಆ ಮಾರ್ಗವಾಗಿ ಹೋಗುತ್ತಿದ್ದರು. [36]ಅವರನ್ನು ನೋಡುತ್ತಲೇ ಯೊವಾನ್ನನು ತನ್ನ ಆ
ಶಿಷ್ಯರಿಗೆ, "ಇಗೋ ನೋಡಿ, ಬಲಿಯರ್ಪಣೆಗಾಗಿ ದೇವರು ನೇಮಿಸಿರುವ ಕುರಿಮರಿ," ಎಂದು ಹೇಳಿದನು.
[37]ಇದನ್ನು ಕೇಳಿದ ಆ ಶಿಷ್ಯರು ಯೇಸುವನ್ನು ಹಿಂಬಾಲಿಸಿದರು. [38]ಯೇಸುಸ್ವಾಮಿ, ತಮ್ಮನ್ನು ಹಿಂಬಾಲಿಸಿ
ಬರುತ್ತಿರುವುದನ್ನು ನೋಡಿ, "ನಿಮಗೆ ಏನು ಬೇಕು?" ಎಂದು ಕೇಳಿದರು. ಅವರು, "ರಬ್ಬಿ, ತಾವು ವಾಸ
ಮಾಡುವುದೆಲ್ಲಿ?" ಎಂದು ವಿಚಾರಿಸಿದರು. ('ರಬ್ಬಿ' ಎಂದರೆ ಗುರುದೇವ ಎಂದು ಅರ್ಥ.) [39]ಯೇಸು
ಉತ್ತರವಾಗಿ, "ಬಂದು ನೋಡಿ" ಎನ್ನಲು ಅವರು ಹೋಗಿ ಯೇಸುಸ್ವಾಮಿ ಇದ್ದ ಸ್ಥಳವನ್ನು ಕಂಡು ಆ
ದಿನವನ್ನು ಅವರೊಡನೆ ಕಳೆದರು. ಆಗ ಸಾಯಂಕಾಲ ಸುಮಾರು ನಾಲ್ಕು ಗಂಟೆಯಾಗಿತ್ತು.

40 ಯೊವಾನ್ನನ ಮಾತನ್ನು ಕೇಳಿ ಯೇಸುವನ್ನು ಹಿಂಬಾಲಿಸಿದ್ದ ಇಬ್ಬರು ಶಿಷ್ಯರಲ್ಲಿ ಸಿಮೋನ
ಪೇತ್ರನ ಸಹೋದರನಾದ ಅಂದ್ರೆಯನು ಒಬ್ಬನು. [41]ಇವನು ಮೊದಲು ತನ್ನ ಸಹೋದರ ಸಿಮೋನನನ್ನು
ಕಂಡು, "ನಮಗೆ 'ಮೆಸ್ಸೀಯ' ಸಿಕ್ಕಿದ್ದಾರೆ," ಎಂದು ತಿಳಿಸಿ [42]ಅವನನ್ನು ಯೇಸುವಿನ ಬಳಿಗೆ ಕರೆತಂದನು.
('ಮೆಸ್ಸೀಯ' ಎಂದರೆ ಅಭಿಷಿಕ್ತನಾದ ಲೋಕೋದ್ಧಾರಕ ಎಂದು ಅರ್ಥ). ಯೇಸು ಸಿಮೋನನನ್ನು ನೋಡಿ,
"ಯೊವಾನ್ನನ ಮಗನಾದ ಸಿಮೋನನೇ, ಇನ್ನು ಮುಂದೆ ನಿನ್ನನ್ನು ಕೇಫನೆಂದು ಕರೆಯುವರು," ಎಂದು
ನುಡಿದರು. ('ಕೇಫ' ಎಂದರೆ 'ಪೇತ್ರ' ಇಲ್ಲವೇ 'ಬಂಡೆ' ಎಂದರ್ಥ).

### ಫಿಲಿಪ್ಪ ಮತ್ತು ನತಾನಿಯೇಲರಿಗೆ ಕರೆ

43 ಮರುದಿನ ಯೇಸುಸ್ವಾಮಿ ಗಲಿಲೇಯ ನಾಡಿಗೆ ಹೋಗಲು ನಿರ್ಧರಿಸಿದರು. ಅವರು
ಫಿಲಿಪ್ಪನನ್ನು ಕಂಡು, "ನನ್ನೊಡನೆ ಬಾ," ಎಂದು ಕರೆದರು. [44]ಅಂದ್ರೆಯ ಮತ್ತು ಪೇತ್ರನಂತೆ ಫಿಲಿಪ್ಪನು
ಕೂಡ ಬೆತ್ಸಾಯಿದ ಎಂಬ ಊರಿನವನು. [45]ಫಿಲಿಪ್ಪನು ನತಾನಿಯೇಲನನ್ನು ಕಂಡು, "ಧರ್ಮಶಾಸ್ತ್ರದಲ್ಲಿ
ಮೋಶೆ ಉಲ್ಲೇಖಿಸಿದ ಮತ್ತು ಪ್ರವಾದಿಗಳು ಪ್ರವಚನ ಮಾಡಿದ ವ್ಯಕ್ತಿಯು ನಮಗೆ ಸಿಕ್ಕಿದ್ದಾರೆ. ಇವರೇ

ಜೋಸೆಫನ ಮಗನಾದ ನಜರೇತ್ ಊರಿನ ಯೇಸು," ಎಂದು ಹೇಳಿದನು. 46ಅದಕ್ಕೆ ನತಾನಿಯೇಲನು,
"ಏನು? ನಜರೇತಿನಿಂದ ಒಳ್ಳೆಯದೇನಾದರೂ ಬರುವುದು ಉಂಟೆ?" ಎಂದು ಕೇಳಲು, "ಬಂದು ನೀನೇ
ನೋಡು," ಎಂದು ಫಿಲಿಪ್ಪನು ಉತ್ತರಕೊಟ್ಟನು. 47ತಮ್ಮ ಬಳಿಗೆ ಬರುತ್ತಿದ್ದ ನತಾನಿಯೇಲನನ್ನು ಕಂಡ
ಯೇಸು, "ಇಗೋ ನೋಡಿ, ನಿಜವಾದ ಇಸ್ರಯೇಲನು, ಈತನಲ್ಲಿ ಕಪಟವಿಲ್ಲ," ಎಂದು ನುಡಿದರು.
48ನತಾನಿಯೇಲನು, "ನನ್ನ ಪರಿಚಯ ನಿಮಗೆ ಹೇಗಾಯಿತು?" ಎಂದು ಕೇಳಲು ಯೇಸು, "ಫಿಲಿಪ್ಪನು
ನಿನ್ನನ್ನು ಕರೆಯುವ ಮೊದಲೇ ನೀನು ಅಂಜೂರದ ಮರದಡಿ ಇದ್ದಾಗ ನಾನು ನಿನ್ನನ್ನು ಕಂಡೆ," ಎಂದು
ಉತ್ತರ ಕೊಟ್ಟರು. 49ಅದಕ್ಕೆ ನತಾನಿಯೇಲನು "ಗುರುದೇವಾ, ದೇವರ ಪುತ್ರ ನೀವೇ; ಇಸ್ರಯೇಲರ ಅರಸ
ನೀವೇ," ಎಂದನು. 50ಆಗ ಯೇಸು, "ಅಂಜೂರದ ಮರದಡಿಯಲ್ಲಿ ನಿನ್ನನ್ನು ಕಂಡೆ ಎಂದು ನಾನು ಹೇಳಿದ
ಮಾತ್ರಕ್ಕೆ ಇಷ್ಟೊಂದು ವಿಶ್ವಾಸವೆ? ಇದಕ್ಕೂ ಮಿಗಿಲಾದುವುಗಳನ್ನು ನೀನು ಕಾಣುವೆ," ಎಂದು ನುಡಿದರು.
ತಮ್ಮ ಮಾತನ್ನು ಮುಂದುವರಿಸುತ್ತಾ, "ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ: ಸ್ವರ್ಗವು ತೆರೆದಿರುವುದನ್ನೂ
ನರಪುತ್ರನ ಮುಖಾಂತರ ದೇವದೂತರು ಏರುವುದನ್ನೂ ಇಳಿಯುವುದನ್ನೂ ನೀವು ಕಾಣುವಿರಿ," ಎಂದು
ಹೇಳಿದರು.

### ಮೊದಲನೆಯ ಸೂಚಕಕಾರ್ಯ

**2** ಮಾರನೆಯ ದಿನ ಗಲಿಲೇಯದ ಕಾನಾ ಎಂಬ ಊರಿನಲ್ಲಿ ಒಂದು ಮದುವೆ ನಡೆಯಿತು.
2ಯೇಸುಸ್ವಾಮಿಯ ತಾಯಿ ಅಲ್ಲಿಗೆ ಬಂದಿದ್ದರು. ಯೇಸುವಿಗೂ ಅವರ ಶಿಷ್ಯರಿಗೂ ಆ ಮದುವೆಗೆ
ಆಮಂತ್ರಣವಿತ್ತು. 3ಆ ಸಂದರ್ಭದಲ್ಲಿ ದ್ರಾಕ್ಷಾರಸ ಸಾಲದೆ ಹೋಯಿತು. ಆಗ ಯೇಸುವಿನ ತಾಯಿ, "ಅವರಲ್ಲಿ
ದ್ರಾಕ್ಷಾರಸ ಮುಗಿದು ಹೋಗಿದೆ," ಎಂದು ಯೇಸುವಿಗೆ ಹೇಳಿದರು. 4ಅದಕ್ಕೆ ಯೇಸು, "ಅಮ್ಮಾ, ಇದನ್ನು
ನನಗೇಕೆ ಹೇಳುತ್ತೀ? ನನ್ನ ಗಳಿಗೆ ಇನ್ನೂ ಬಂದಿಲ್ಲ," ಎಂದು ಉತ್ತರಕೊಟ್ಟರು. 5ತಾಯಿ ಸೇವಕರಿಗೆ, "ಆತ
ಹೇಳಿದಂತೆ ಮಾಡಿ," ಎಂದು ತಿಳಿಸಿದರು.

6 ಯೆಹೂದ್ಯರ ಶುದ್ಧಾಚಾರ ಪದ್ಧತಿಯಂತೆ ಆರು ಕಲ್ಲುಬಾನೆಗಳನ್ನು ಅಲ್ಲಿ ಇಟ್ಟಿದ್ದರು. ಅವು
ಒಂದೊಂದೂ ಎರಡು ಮೂರು ಕೊಡ ನೀರು ಹಿಡಿಯುವಷ್ಟು ದೊಡ್ಡದಾಗಿದ್ದವು. 7ಯೇಸುಸ್ವಾಮಿ
ಸೇವಕರಿಗೆ, "ಆ ಬಾನೆಗಳಲ್ಲಿ ನೀರು ತುಂಬಿರಿ," ಎಂದು ಹೇಳಿದರು. ಅವರು ಕಂಠದವರೆಗೆ ತುಂಬಿದರು.
8ಯೇಸು, "ಈಗ ತೋಡಿಕೊಂಡು ಹೋಗಿ ಔತಣದ ಮೇಲ್ವಿಚಾರಕನಿಗೆ ಕೊಡಿ," ಎಂದು ಹೇಳಲು ಅವರು
ಹಾಗೆಯೇ ಮಾಡಿದರು. 9ಮೇಲ್ವಿಚಾರಕನು ದ್ರಾಕ್ಷಾರಸವಾಗಿ ಮಾರ್ಪಟ್ಟಿದ್ದ ನೀರಿನ ರುಚಿ ನೋಡಿದನು.
ಅದು ಎಲ್ಲಿಂದ ಬಂದಿತೆಂಬುದು ಅವನಿಗೆ ತಿಳಿದಿರಲಿಲ್ಲ. ನೀರನ್ನು ತೋಡಿಕೊಂಡು ಬಂದ ಸೇವಕರಿಗೆ
ಮಾತ್ರ ತಿಳಿದಿತ್ತು. 10ಆದುದರಿಂದ ಅವನು ಮದುಮಗನನ್ನು ಕರೆದು, "ಜನರೆಲ್ಲರೂ ಉತ್ತಮವಾದ
ದ್ರಾಕ್ಷಾರಸವನ್ನು ಮೊದಲು ಹಂಚುತ್ತಾರೆ; ಅತಿಥಿಗಳು ಯಥೇಚ್ಛವಾಗಿ ಕುಡಿದಾದ ಮೇಲೆ ಸಾಧಾರಣ
ದ್ರಾಕ್ಷಾರಸವನ್ನು ಕೊಡುತ್ತಾರೆ. ನೀನಾದರೋ ಉತ್ತಮವಾದುದನ್ನು ಈವರೆಗೂ ಇಟ್ಟಿದ್ದೀಯಲ್ಲಾ!" ಎಂದು
ಹೇಳಿದನು.

11 ಯೇಸು ಮಾಡಿದ ಮೊದಲನೆಯ ಸೂಚಕಕಾರ್ಯ ಇದು. ಇದನ್ನು ಗಲಿಲೇಯ ನಾಡಿನ ಕಾನಾ
ಊರಿನಲ್ಲಿ ಮಾಡಿ ತಮ್ಮ ಮಹಿಮೆಯನ್ನು ತೋರ್ಪಡಿಸಿದರು. ಅವರ ಶಿಷ್ಯರಿಗೂ ಅವರಲ್ಲಿ ವಿಶ್ವಾಸ
ಮೂಡಿತು.

12 ಇದಾದ ಮೇಲೆ ಯೇಸು, ಅವರ ತಾಯಿ, ಸಹೋದರರು ಮತ್ತು ಶಿಷ್ಯರು ಕಫೆರ್ನವುಮಿಗೆ
ಹೋಗಿ ಅಲ್ಲಿ ಕೆಲವು ದಿನ ತಂಗಿದ್ದರು.

## ವ್ಯಾಪಾರಿಗಳ ಉಚ್ಚಾಟನೆ

(ಮತ್ತಾ. 21.12–13; ಮಾರ್ಕ 11.15–17; ಲೂಕ 19.45–46)

13 ಯೆಹೂದ್ಯರ ಪಾಸ್ಕ ಹಬ್ಬವು ಹತ್ತಿರವಾಗಿದ್ದುದರಿಂದ ಯೇಸುಸ್ವಾಮಿ ಜೆರುಸಲೇಮಿಗೆ ತೆರಳಿದರು.
[14]ಅಲ್ಲಿಯ ಮಹಾದೇವಾಲಯದಲ್ಲಿ ದನ, ಕುರಿ ಮತ್ತು ಪಾರಿವಾಳಗಳನ್ನು ಮಾರುವವರು ಮತ್ತು
ನಾಣ್ಯವಿನಿಮಯ ಮಾಡುವವರು ವ್ಯಾಪಾರಕ್ಕೆ ಕುಳಿತಿದ್ದರು. [15]ಅದನ್ನು ಕಂಡ ಯೇಸು, ಹಗ್ಗವನ್ನು
ಚಾವಟಿಯಂತೆ ಹೆಣೆದು ಅದರಿಂದ ಅವರನ್ನೆಲ್ಲಾ ದೇವಾಲಯದಿಂದ ಹೊರಗಟ್ಟಿದರು. ದನಕುರಿಗಳನ್ನು
ಓಡಿಸಿದರು. ನಾಣ್ಯವಿನಿಮಯ ಮಾಡುವವರ ಮೇಜುಗಳನ್ನು ಕೆಡವಿ, ಚಿಲ್ಲರೆ ಹಣವನ್ನು ಚೆಲ್ಲಿದರು.
[16]ಪಾರಿವಾಳಗಳನ್ನು ಮಾರುತ್ತಿದ್ದವರಿಗೆ, "ಇವನ್ನು ಇಲ್ಲಿಂದ ತೆಗೆದುಕೊಂಡು ಹೊರಡಿ. ನನ್ನ ಪಿತನ
ಆಲಯವನ್ನು ಸಂತೆಯನ್ನಾಗಿ ಮಾಡಬೇಡಿ," ಎಂದು ಹೇಳಿದರು. [17]'ನಿನ್ನ ಆಲಯದ ಮೇಲಿನ
ಅಭಿಮಾನವು ನನ್ನನ್ನು ಬೆಂಕಿಯಂತೆ ದಹಿಸುತ್ತದೆ,' ಎಂದು ಪವಿತ್ರಗ್ರಂಥದಲ್ಲೇ ಬರೆದಿರುವ ವಾಕ್ಯವು ಶಿಷ್ಯರಿಗೆ
ಆಗ ನೆನಪಾಯಿತು.

18 ಯೆಹೂದ್ಯರು, "ಇಷ್ಟೆಲ್ಲಾ ಮಾಡಲು ನಿನಗೆ ಅಧಿಕಾರವಿದೆ ಎಂದು ರುಜುವಾತು ಪಡಿಸುವುದಕ್ಕೆ
ಯಾವ ಪವಾಡವನ್ನು ಮಾಡಿ ತೋರಿಸಬಲ್ಲೆ?" ಎಂದು ಯೇಸುವನ್ನು ಪ್ರಶ್ನಿಸಿದರು. [19]ಅದಕ್ಕೆ ಯೇಸು,
"ಈ ದೇವಾಲಯವನ್ನು ಕೆಡವಿಬಿಡಿ, ಮೂರು ದಿನದಲ್ಲಿ ಅದನ್ನು ಪುನಃ ಎಬ್ಬಿಸುವೆನು," ಎಂದು
ಉತ್ತರಕೊಟ್ಟರು. [20]ಚಕಿತರಾದ ಯೆಹೂದ್ಯರು, "ಈ ದೇವಾಲಯವನ್ನು ಕಟ್ಟಲು ನಲವತ್ತಾರು ವರ್ಷಗಳು
ಹಿಡಿದಿವೆ. ನೀನು ಮೂರು ದಿನಗಳಲ್ಲೇ ಅದನ್ನು ಎಬ್ಬಿಸಬಲ್ಲೆಯಾ?" ಎಂದು ಕೇಳಿದರು. [21]ಯೇಸು ಹೇಳಿದ್ದು
ತಮ್ಮ ದೇಹವೆಂಬ ದೇಗುಲವನ್ನು ಕುರಿತು. [22]ಅವರು ಸತ್ತು ಪುನರುತ್ಥಾನ ಹೊಂದಿದ ಬಳಿಕ ಶಿಷ್ಯರು ಅವರ
ಈ ಮಾತುಗಳನ್ನು ಸ್ಮರಿಸಿಕೊಂಡರು. ಪವಿತ್ರಗ್ರಂಥದಲ್ಲೂ ಯೇಸುವಿನ ಮಾತಿನಲ್ಲೂ ಅವರಿಗೆ ಆಗ ವಿಶ್ವಾಸ
ಹುಟ್ಟಿತು.

## ಅಂತರಂಗದ ಅರಿಕೆ

23 ಯೇಸುಸ್ವಾಮಿ ಪಾಸ್ಕಹಬ್ಬಕ್ಕಾಗಿ ಜೆರುಸಲೇಮಿನಲ್ಲಿದ್ದಾಗ ಮಾಡಿದ ಸೂಚಕ ಕಾರ್ಯಗಳನ್ನು
ನೋಡಿ ಅನೇಕರು ಅವರನ್ನು ನಂಬಿದರು. [24]ಆದರೆ ಯೇಸು ಎಲ್ಲರನ್ನು ಚೆನ್ನಾಗಿ ಬಲ್ಲವರಾದ್ದರಿಂದ ಅವರ
ಈ ನಂಬಿಕೆಗೆ ಮಾರುಹೋಗಲಿಲ್ಲ. [25]ಜನರನ್ನು ಕುರಿತು ಯಾರೂ ಅವರಿಗೆ ತಿಳಿಸಬೇಕಾದ
ಪ್ರಮೇಯವಿರಲಿಲ್ಲ. ಮಾನವನ ಅಂತರಂಗ ಅವರಿಗೆ ಬಹಿರಂಗವಾಗಿತ್ತು.

## ನವಜನ್ಮದ ಸಮಸ್ಯೆ

**3** ಅಲ್ಲಿ ನಿಕೊದೇಮನೆಂಬ ಫರಿಸಾಯನು ಇದ್ದನು. [2]ಅವನು ಯೆಹೂದ್ಯರ ನಾಯಕರಲ್ಲಿ ಒಬ್ಬನು. ಒಂದು
ರಾತ್ರಿ ಅವನು ಯೇಸುಸ್ವಾಮಿಯ ಬಳಿಗೆ ಬಂದು, "ಗುರುದೇವಾ, ತಾವು ದೇವರಿಂದ ಬಂದ
ಬೋಧಕರೆಂದು ನಾವು ಬಲ್ಲೆವು. ದೇವರು ತನ್ನೊಡನೆ ಇಲ್ಲದ ಹೊರತು ಯಾರಿಂದಲೂ ತಾವು ಮಾಡುವ
ಸೂಚಕಕಾರ್ಯಗಳನ್ನು ಮಾಡಲು ಆಗದು," ಎಂದು ಹೇಳಿದನು. [3]ಆಗ ಯೇಸು, "ನಾನು ನಿನಗೆ ಸತ್ಯವಾಗಿ
ಹೇಳುತ್ತೇನೆ: ಒಬ್ಬನು ಹೊಸದಾಗಿ ಹುಟ್ಟದಿದ್ದರೆ ಅವನು ದೇವರ ಸಾಮ್ರಾಜ್ಯವನ್ನು ಸೇರಲಾರ," ಎಂದು
ಹೇಳಿದರು. [4]ಅದಕ್ಕೆ ನಿಕೊದೇಮನು, "ವಯಸ್ಸಾದ ಒಬ್ಬನು ಹೊಸದಾಗಿ ಹುಟ್ಟುವುದಾದರೂ ಹೇಗೆ?
ತಾಯಿಯ ಗರ್ಭವನ್ನು ಮತ್ತೊಮ್ಮೆ ಹೊಕ್ಕು ಅವನು ಹುಟ್ಟಲು ಸಾಧ್ಯವೇ?" ಎಂದು ಕೇಳಿದನು. [5]ಅದಕ್ಕೆ
ಪ್ರತ್ಯುತ್ತರವಾಗಿ ಯೇಸು, "ನಾನು ನಿನಗೆ ಸತ್ಯವಾಗಿ ಹೇಳುತ್ತೇನೆ: ನೀರಿನಿಂದಲೂ ಪವಿತ್ರಾತ್ಮನಿಂದಲೂ
ಹುಟ್ಟಿದ ಹೊರತು ಯಾವನೂ ದೇವರ ರಾಜ್ಯವನ್ನು ಪ್ರವೇಶಿಸಲಾರನು. [6]ಶರೀರದಿಂದ ಹುಟ್ಟಿದ್ದು
ಶರೀರಮಯ, ದೇವರಿಂದ ಹುಟ್ಟಿದ್ದು ದೈವಮಯ. [7]ನೀವು ಹೊಸ ಜನ್ಮ ಪಡೆಯಬೇಕೆಂದು ನಾನು
ಹೇಳಿದ್ದನ್ನು ಕೇಳಿ ಬೆರಗಾಗಬೇಕಿಲ್ಲ. [8]ಗಾಳಿ ತನಗೆ ತೋಚಿದ ಕಡೆ ಬಿಸುತ್ತದೆ, ಅದರ ಸದ್ದು ನಿನಗೆ

ಕೇಳಿಸುತ್ತದೆ; ಆದರೆ ಅದು ಎಲ್ಲಿಂದ ಬರುತ್ತದೆ, ಎಲ್ಲಿಗೆ ಹೋಗುತ್ತದೆ ಎಂಬುದು ನಿನಗೆ ತಿಳಿಯದು. ದೇವರ
ಆತ್ಮನಿಂದ ಹುಟ್ಟಿದ ಪ್ರತಿಯೊಬ್ಬನೂ ಅದರಂತೆಯೇ," ಎಂದು ಹೇಳಿದರು. 9ಅದಕ್ಕೆ ನಿಕೊದೇಮನು,
"ಇದೆಲ್ಲಾ ಹೇಗೆ ಸಾಧ್ಯ?" ಎಂದು ಕೇಳಿದನು. 10ಆಗ ಯೇಸು, "ಇಸ್ರಯೇಲಿನ ಹೆಸರಾಂತ ಬೋಧಕನಾದ
ನಿನಗೇ ಇದು ಅರ್ಥವಾಗಲಿಲ್ಲವೆ? 11ನಾನು ನಿನಗೆ ಸತ್ಯವಾಗಿ ಹೇಳುತ್ತೇನೆ ಕೇಳು: ನಮಗೆ ತಿಳಿದುದನ್ನೇ
ಕುರಿತು ನಾವು ಮಾತನಾಡುತ್ತೇವೆ; ನಾವು ಕಂಡದ್ದನ್ನು ಕುರಿತು ಸಾಕ್ಷಿ ನೀಡುತ್ತೇವೆ. ಆದರೂ ನಮ್ಮ
ಸಾಕ್ಷ್ಯವನ್ನು ನೀವು ಒಪ್ಪಿಕೊಳ್ಳಲು ಸಿದ್ಧರಿಲ್ಲ. 12ಭೂಲೋಕದ ವಿಷಯವನ್ನು ಕುರಿತು ನಾನು
ಮಾತನಾಡಿದಾಗಲೇ ನಿಮಗೆ ವಿಶ್ವಾಸವಿಲ್ಲವೆಂದ ಮೇಲೆ, ಸ್ವರ್ಗಲೋಕದ ವಿಷಯವನ್ನು ಕುರಿತು ನಾನು
ಮಾತನಾಡಿದಲ್ಲಿ ನೀವು ವಿಸ್ವಾಸಿಸುವುದು ಉಂಟೆ? 13ಸ್ವರ್ಗಲೋಕದಿಂದಲೇ ಇಳಿದು ಬಂದ ನರಪುತ್ರನೇ
ಹೊರತು ಬೇರೆ ಯಾರೂ ಸ್ವರ್ಗಕ್ಕೆ ಏರಿಹೋದವರಿಲ್ಲ.

14 "ಮೋಶೆ ಮರುಭೂಮಿಯಲ್ಲಿ ಸರ್ಪವನ್ನು ಮೇಲಕ್ಕೆ ಏರಿಸಿದನು. 15ಅಂತೆಯೇ ನರಪುತ್ರನಲ್ಲಿ
ವಿಶ್ವಾಸವಿಟ್ಟವರೆಲ್ಲರೂ ನಿತ್ಯಜೀವವನ್ನು ಪಡೆಯುವಂತೆ ನರಪುತ್ರನನ್ನು ಸಹ ಮೇಲಕ್ಕೆ ಏರಿಸಬೇಕು.
16ದೇವರು ಲೋಕವನ್ನು ಎಷ್ಟಾಗಿ ಪ್ರೀತಿಸಿದರೆಂದರೆ ತಮ್ಮ ಏಕೈಕ ಪುತ್ರನನ್ನೇ ಧಾರೆಯೆರೆದರು; ಆತನಲ್ಲಿ
ವಿಶ್ವಾಸವಿಟ್ಟ ಯಾರೂ ನಾಶವಾಗದೆ ಎಲ್ಲರೂ ನಿತ್ಯ ಜೀವವನ್ನು ಪಡೆಯಬೇಕೆಂಬುದೇ ದೇವರ ಉದ್ದೇಶ.
17ದೇವರು ತಮ್ಮ ಪುತ್ರನನ್ನು ಈ ಲೋಕಕ್ಕೆ ಕಳುಹಿಸಿದ್ದು ಲೋಕವನ್ನು ತೀರ್ಪಿಗೆ ಗುರಿಮಾಡಲೆಂದಲ್ಲ;
ಪುತ್ರನ ಮುಖಾಂತರ ಲೋಕ ಉದ್ಧಾರವಾಗಲೆಂದು. 18ಪುತ್ರನಲ್ಲಿ ವಿಶ್ವಾಸವಿಟ್ಟವನಿಗೆ ತೀರ್ಪಿಲ್ಲ. ಆತನಲ್ಲಿ
ವಿಶ್ವಾಸವಿಡದವನಾದರೋ ಈಗಾಗಲೇ ತೀರ್ಪಿಗೆ ಗುರಿಯಾಗಿದ್ದಾನೆ. ಏಕೆಂದರೆ, ಅವನಿಗೆ ದೇವರ ಏಕೈಕ
ಪುತ್ರನಲ್ಲಿ ವಿಶ್ವಾಸವಿಲ್ಲ. 19ಈ ತೀರ್ಪು ಏನೆಂದರೆ: ಜ್ಯೋತಿ ಜಗತ್ತಿಗೆ ಬಂದಿತು; ಮಾನವರಾದರೋ ತಮ್ಮ
ದುಷ್ಕೃತ್ಯಗಳಿಂದಾಗಿ ಆ ಜ್ಯೋತಿಗೆ ಬದಲು ಅಂಧಕಾರವನ್ನೇ ಅವಲಂಬಿಸಿದರು. 20ಕೇಡನ್ನು ಮಾಡುವವನಿಗೆ
ಬೆಳಕೆಂದರೆ ಆಗದು. ತನ್ನ ದುಷ್ಕೃತ್ಯಗಳು ಬಯಲಾಗಬಾರದೆಂದು ಅವನು ಬೆಳಕಿನ ಬಳಿಗೆ ಸುಳಿಯುವುದೂ
ಇಲ್ಲ, 21ಸತ್ಯಸಂಧನಾದರೋ ಬೆಳಕಿನ ಬಳಿಗೆ ಬರುತ್ತಾನೆ. ತಾನು ಮಾಡುವುದು ದೇವರು ಮೆಚ್ಚುವುದನ್ನೇ
ಎಂಬುದನ್ನು ತೋರ್ಪಡಿಸುತ್ತಾನೆ.

## ಯೇಸು ಮತ್ತು ಯೊವಾನ್ನ

22 ಇದಾದ ಬಳಿಕ ಯೇಸುಸ್ವಾಮಿ ತಮ್ಮ ಶಿಷ್ಯರೊಡನೆ ಜುದೇಯ ಪ್ರಾಂತ್ಯಕ್ಕೆ ಬಂದು ಅವರೊಡನೆ
ಕೆಲವು ಕಾಲ ಅಲ್ಲೇ ಉಳಿದುಕೊಂಡು ದೀಕ್ಷಾಸ್ನಾನ ಮಾಡಿಸತೊಡಗಿದರು. 23ಅತ್ತ ಯೊವಾನ್ನನು ಕೂಡ
ಸಾಲಿಮ್ ಎಂಬ ಊರಿಗೆ ಹತ್ತಿರವಾಗಿದ್ದ ಐನೋನ್ ಎಂಬ ಸ್ಥಳದಲ್ಲಿ ನೀರು ಹೆಚ್ಚಾಗಿದ್ದುದರಿಂದ
ಸ್ನಾನದೀಕ್ಷೆಯನ್ನು ಮಾಡಿಸುತ್ತಿದ್ದನು. ಜನರು ಬಂದು ಸ್ನಾನದೀಕ್ಷೆಯನ್ನು ಪಡೆಯುತ್ತಿದ್ದರು. 24ಯೊವಾನ್ನನು
ಆಗ ಇನ್ನೂ ಬಂಧಿತನಾಗಿರಲಿಲ್ಲ.

25 ಶುದ್ಧಾಚಾರವನ್ನು ಕುರಿತು ಯೊವಾನ್ನನ ಶಿಷ್ಯರಿಗೂ ಯೆಹೂದ್ಯನೊಬ್ಬನಿಗೂ ವಿವಾದ ಎದ್ದಿತು.
26ಅವರು ಯೊವಾನ್ನನ ಬಳಿಗೆ ಬಂದು, "ಗುರುವೇ, ಜೋರ್ಡನಿನ ಆಚೆಕಡೆಯಲ್ಲಿ ನಿಮ್ಮೊಡನೆ ಒಬ್ಬನು
ಇದ್ದನಲ್ಲವೆ? ಆತನನ್ನು ಕುರಿತು ನೀವೇ ಸಾಕ್ಷಿ ಹೇಳಲಿಲ್ಲವೆ? ಈಗ ನೋಡಿ, ಆತನೇ ದೀಕ್ಷಾಸ್ನಾನ
ಮಾಡಿಸುತ್ತಿದ್ದಾನೆ. ಎಲ್ಲರೂ ಆತನ ಬಳಿಗೆ ಹೋಗುತ್ತಿದ್ದಾರೆ," ಎಂದು ದೂರಿತ್ತರು. 27ಅದಕ್ಕೆ ಯೊವಾನ್ನನು,
"ದೇವರು ದಯಪಾಲಿಸದೆ ಹೋದರೆ ಮಾನವನಿಗೇನೂ ದಕ್ಕದು. 28'ನಾನು ಲೋಕೋದ್ಧಾರಕನಲ್ಲ; ಆತನ
ಮುಂದೂತ ಮಾತ್ರ' ಎಂದು ನಾನು ಹೇಳಿದ್ದಕ್ಕೆ ನೀವೇ ಸಾಕ್ಷಿಗಳಾಗಿದ್ದೀರಿ. 29ಮದುಮಗಳು ಮದುಮಗನಿಗೆ
ಸೇರಿದವಳು. ಮದುಮಗನ ಗೆಳೆಯನಾದರೋ ಪಕ್ಕದಲ್ಲಿದ್ದು ಮದುಮಗನ ಕರೆಗೆ ಕಿವಿಗೊಡುತ್ತಾನೆ; ಆತನ
ಸ್ವರ ಕೇಳಿ ಹರ್ಷಿಸುತ್ತಾನೆ. ಇಂಥ ಆನಂದದಿಂದ ನಾನೀಗ ಭರಿತನಾಗಿದ್ದೇನೆ. 30ಆತ ಬೆಳೆಯುತ್ತಿರಬೇಕು,
ನಾನು ಅಳಿಯುತ್ತಿರಬೇಕು.

## ಪರದಿಂದ ಬಂದವನು

31 “ಮೇಲಿಂದ ಬಂದವನೇ ಎಲ್ಲರಿಗಿಂತ ಮೇಲಾದವನು. ಇಹಲೋಕದಿಂದ ಬಂದವನು
ಆದರೋ ಈ ಲೋಕಕ್ಕೆ ಸೇರಿದವನು; ಅವನು ಲೌಕಿಕವಾದುದನ್ನೇ ಹೇಳುವವನು. ಸ್ವರ್ಗದಿಂದ
ಬಂದವನಾದರೋ ಸರ್ವರಿಗೂ ಶ್ರೇಷ್ಠನು. 32ಆತನು ತಾನು ಕಂಡದ್ದನ್ನೂ ಕೇಳಿದ್ದನ್ನೂ ಕುರಿತೇ
ಸಾಕ್ಷಿಹೇಳುತ್ತಾನೆ. ಆದರೂ ಆತನ ಮಾತನ್ನು ಯಾರೂ ಅಂಗೀಕರಿಸುವುದಿಲ್ಲ. 33ಆತನ ಮಾತನ್ನು
ಅಂಗೀಕರಿಸುವವನು ದೇವರು ಸತ್ಯಸ್ವರೂಪಿ ಎಂದು ಸಾದೃಶ್ಯಪಡಿಸುತ್ತಾನೆ. 34ದೇವರು ಕಳುಹಿಸಿದಾತನು
ದೇವರ ಮಾತುಗಳನ್ನೇ ಆಡುತ್ತಾನೆ. ಏಕೆಂದರೆ ದೇವರು ಆತನಿಗೆ ಪವಿತ್ರಾತ್ಮ ಅವರನ್ನು ಪೂರ್ಣವಾಗಿ
ಕೊಟ್ಟಿರುತ್ತಾರೆ. 35ಪಿತ ಪುತ್ರನನ್ನು ಪ್ರೀತಿಸಿ ಸರ್ವಸ್ವವನ್ನೂ ಆತನ ಕೈಗೆ ಕೊಟ್ಟಿದ್ದಾರೆ. 36ಪುತ್ರನಲ್ಲಿ
ವಿಶ್ವಾಸವಿಟ್ಟವನು ನಿತ್ಯಜೀವವನ್ನು ಪಡೆದಿರುತ್ತಾನೆ; ಪುತ್ರನಿಗೆ ಶರಣಾಗದವನು ನಿತ್ಯಜೀವವನ್ನು ಸವಿಯನು.
ಅವನು ದೇವರ ಕೋಪಾಗ್ನಿಗೆ ಗುರಿಯಾಗುತ್ತಾನೆ,” ಎಂದು ಉತ್ತರಕೊಟ್ಟನು.

## ಯೇಸು ಮತ್ತು ಸಮಾರಿಯದ ಮಹಿಳೆ

**4** ಯೊವಾನ್ನನಿಗಿಂತಲೂ ಯೇಸುಸ್ವಾಮಿಯೇ ಹೆಚ್ಚುಮಂದಿ ಜನರನ್ನು ಶಿಷ್ಯರನ್ನಾಗಿಸಿಕೊಳ್ಳುತ್ತಾ, ಅವರಿಗೆ
ದೀಕ್ಷಾಸ್ನಾನವನ್ನು ಮಾಡಿಸುತ್ತಾ ಇದ್ದಾರೆಂಬ ವಾರ್ತೆ ಫರಿಸಾಯರ ಕಿವಿಗೆ ಬಿದ್ದಿತು. 2(ವಾಸ್ತವವಾಗಿ
ದೀಕ್ಷಾಸ್ನಾನವನ್ನು ಮಾಡಿಸುತ್ತಿದ್ದವರು ಯೇಸುವಿನ ಶಿಷ್ಯರೇ ಹೊರತು ಯೇಸುವಲ್ಲ). 3ಯೇಸು ಇದನ್ನು
ತಿಳಿದು ಜುದೇಯವನ್ನು ಬಿಟ್ಟು ಮತ್ತೆ ಗಲಿಲೇಯಕ್ಕೆ ಹೊರಟರು. 4ದಾರಿಯಲ್ಲಿ ಸಮಾರಿಯ ಪ್ರಾಂತ್ಯವನ್ನು
ಹಾದುಹೋಗಬೇಕಾಗಿತ್ತು.

5 ಯೇಸು ಹೋಗುತ್ತಿರುವಾಗ ಸಮಾರಿಯದ ಸಿಖಾರೆಂಬ ಊರನ್ನು ತಲುಪಿದರು. ಈ ಊರಿನ
ಪಕ್ಕದಲ್ಲೇ ಯಕೋಬನು ತನ್ನ ಮಗನಾದ ಜೋಸೆಫನಿಗೆ ಕೊಟ್ಟ ಭೂಮಿ ಇದೆ. 6ಅಲ್ಲೇ ಯಕೋಬನ
ಬಾವಿಯೂ ಇದೆ. ಪಯಣದಿಂದ ಬಳಲಿದ್ದ ಯೇಸು ಬಾವಿಯ ಬಳಿ ಕುಳಿತುಕೊಂಡರು. ಆಗ ಸುಮಾರು
ಮಧ್ಯಾಹ್ನದ ಹೊತ್ತು. 7ಒಬ್ಬ ಸಮಾರಿಯದ ಮಹಿಳೆ ನೀರು ಸೇದಲು ಅಲ್ಲಿಗೆ ಬಂದಳು. ಆಗ ಯೇಸು,
“ಕುಡಿಯಲು ಕೊಂಚ ನೀರು ಕೊಡು,” ಎಂದು ಕೇಳಿದರು. 8ಶಿಷ್ಯರು ಊಟಕ್ಕೆ ಏನಾದರೂ ಕೊಂಡು
ತರುವುದಕ್ಕೆ ಊರಿನೊಳಗೆ ಹೋಗಿದ್ದರು. 9ಅದಕ್ಕೆ ಆಕೆ, “ನೀವು ಯೆಹೂದ್ಯರು, ನಾನು ಸಮಾರಿಯದವಳು.
ಹೀಗಿರುವಲ್ಲಿ ನೀವು ನನ್ನಿಂದ ನೀರು ಕೇಳಬಹುದೇ?” ಎಂದಳು. (ಯೆಹೂದ್ಯರಿಗೂ ಸಮಾರಿಯದವರಿಗೂ
ಹೊಕ್ಕುಬಳಕೆ ಇರಲಿಲ್ಲ). 10ಆಗ ಯೇಸು, “ದೇವರು ಕೊಡುವ ವರದಾನವನ್ನು ಮತ್ತು ಕುಡಿಯಲು ನಿನ್ನಿಂದ
ನೀರು ಕೇಳುತ್ತಿರುವ ವ್ಯಕ್ತಿಯನ್ನು ನೀನು ಅರಿತಿದ್ದರೆ ಆಗ ನೀನೇ ಆತನಲ್ಲಿ ಬೇಡುತ್ತಿದ್ದೆ. ಆತನು ನಿನಗೆ
ಜೀವಜಲವನ್ನು ಕೊಡುತ್ತಿದ್ದನು,” ಎಂದು ಉತ್ತರಕೊಟ್ಟರು. 11ಅದಕ್ಕೆ ಆಕೆ, “ನೀರು ಸೇದುವುದಕ್ಕೆ ನಿಮ್ಮಲ್ಲಿ
ಏನೂ ಇಲ್ಲ, ಬಾವಿಯೂ ಆಳವಾಗಿದೆ; ಹೀಗಿರುವಲ್ಲಿ ನಿಮಗೆ ಜೀವಜಲ ಎಲ್ಲಿಂದ ಬಂದೀತು? 12ನಮಗೆ
ಈ ಬಾವಿಯನ್ನು ಕೊಟ್ಟವನು ನಮ್ಮ ಪಿತಾಮಹ ಯಕೋಬನು. ಆತನು, ಆತನ ಮಕ್ಕಳು ಮತ್ತು
ದನಕರುಗಳು ಇದೇ ಬಾವಿಯ ನೀರನ್ನು ಕುಡಿದರು. ಅಂಥ ಪಿತಾಮಹನಿಗಿಂತ ತಾವು ದೊಡ್ಡವರೋ?”
ಎಂದಳು. 13ಆಗ ಯೇಸು, “ಈ ನೀರನ್ನು ಕುಡಿಯುವ ಎಲ್ಲರಿಗೂ ಮತ್ತೆ ದಾಹವಾಗುತ್ತದೆ. 14ಆದರೆ ನಾನು
ಕೊಡುವ ನೀರನ್ನು ಕುಡಿದವನಿಗೆ ಎಂದಿಗೂ ದಾಹವಾಗದು; ಆ ನೀರು ಅವನಲ್ಲಿ ಉಕ್ಕಿ ಹರಿಯುವ
ಬುಗ್ಗೆಯಾಗಿ, ನಿತ್ಯಜೀವವನ್ನು ತರುತ್ತದೆ,” ಎಂದು ಉತ್ತರಕೊಟ್ಟರು. 15ಅದಕ್ಕೆ ಆಕೆ, “ಸ್ವಾಮಿ, ಅಂಥ
ನೀರನ್ನು ಕೊಡಿ; ಇನ್ನು ಮುಂದೆ ನನಗೆ ದಾಹವಾಗದಿರಲಿ. ನೀರು ಸೇದಲು ಇಷ್ಟು ದೂರ ಬರುವುದು
ತಪ್ಪಲಿ,” ಎಂದಳು. 16ಅದಕ್ಕೆ ಯೇಸು, “ಹೋಗಿ ನಿನ್ನ ಗಂಡನನ್ನು ಕರೆದುಕೊಂಡು ಬಾ,” ಎಂದು
ಹೇಳಿದರು. 17ಆಕೆ, “ನನಗೆ ಗಂಡನಿಲ್ಲ,” ಎಂದಳು. 18“ಗಂಡನಿಲ್ಲವೆಂದು ಸರಿಯಾಗಿ ಹೇಳಿದೆ. ನಿನಗೆ ಐದು
ಜನ ಗಂಡಂದಿರು ಇದ್ದರು. ಈಗ ನಿನ್ನೊಡನೆ ಇರುವವನು ನಿನ್ನ ಗಂಡನಲ್ಲ, ನೀನು ಹೇಳಿದ್ದು ಸರಿಯೇ,”
ಎಂದರು ಯೇಸುಸ್ವಾಮಿ. 19ಅದಕ್ಕೆ ಆ ಮಹಿಳೆ, “ಸ್ವಾಮಿ, ತಾವು ಪ್ರವಾದಿ ಎಂದು ನನಗೀಗ ತಿಳಿಯಿತು.

[20]ನಮ್ಮ ಪೂರ್ವಜರು ಈ ಬೆಟ್ಟದ ಮೇಲೆ ದೇವರನ್ನು ಆರಾಧಿಸುತ್ತಿದ್ದರು. ಆದರೆ ಆರಾಧಿಸತಕ್ಕ ಕ್ಷೇತ್ರ ಇರುವುದು ಜೆರುಸಲೇಮಿನಲ್ಲೇ ಎಂದು ಯೆಹೂದ್ಯರಾದ ನೀವು ಹೇಳುತ್ತೀರಲ್ಲ" ಎಂದಳು. [21]ಆಗ ಯೇಸು,
"ತಾಯಿ, ನಾನು ಹೇಳುವುದನ್ನು ಕೇಳು. ಪಿತನ ಆರಾಧನೆಗೆ ಈ ಬೆಟ್ಟಕ್ಕೂ ಬರಬೇಕಾಗಿಲ್ಲ; ಜೆರುಸಲೇಮಿಗೂ ಹೋಗಬೇಕಾಗಿಲ್ಲ. ಅಂಥ ಕಾಲವೂ ಬರುವುದು. [22]ನೀವು ಆರಾಧಿಸುವುದು ಯಾರೆಂದು ನಿಮಗೇ
ತಿಳಿಯದು. ನಾವು ಆರಾಧಿಸುವುದು ಯಾರೆಂದು ನಮಗೆ ತಿಳಿದಿದೆ. ಏಕೆಂದರೆ ಲೋಕೋದ್ಧಾರಕ ಬರುವುದು ಯೆಹೂದ್ಯರಿಂದಲೇ. [23]ಕಾಲ ಬರುವುದು; ಅದು ಈಗಲೇ ಬಂದಿದೆ. ಇನ್ನು ಮೇಲೆ ನಿಜವಾದ
ಆರಾಧಕರು ಪಿತನನ್ನು ಆತ್ಮದಿಂದಲೂ ಸತ್ಯದಿಂದಲೂ ಆರಾಧಿಸುವರು. ಅಂಥವರೇ ತಮ್ಮನ್ನು ಆರಾಧಿಸಬೇಕೆಂದು ಪಿತ ಆಶಿಸುತ್ತಾರೆ. [24]ದೇವರು ಆತ್ಮಸ್ವರೂಪಿ. ಅವರನ್ನು ಆತ್ಮದಿಂದಲೂ ಸತ್ಯದಿಂದಲೂ
ಆರಾಧಿಸತಕ್ಕದ್ದು," ಎಂದು ಹೇಳಿದರು. [25]ಆಕೆ "ಅಭಿಷಿಕ್ತನಾದ ಲೋಕೋದ್ಧಾರಕ ಬರುವನೆಂದು ನಾನು ಬಲ್ಲೆ. ಆತನು ಬಂದಾಗ ಎಲ್ಲವನ್ನೂ ತಿಳಿಸುವನು," ಎಂದು ಹೇಳಿದಳು. [26]ಆಗ ಯೇಸು, "ನಿನ್ನೊಡನೆ
ಮಾತನಾಡುತ್ತಿರುವ ನಾನೇ ಆತನು," ಎಂದು ನುಡಿದರು. [27]ಅಷ್ಟರಲ್ಲಿ ಹಿಂದಿರುಗಿ ಬಂದ ಶಿಷ್ಯರು ಯೇಸು ಆ ಮಹಿಳೆಯೊಡನೆ ಮಾತನಾಡುತ್ತಿರುವುದನ್ನು ಕಂಡು ಆಶ್ಚರ್ಯಪಟ್ಟರು. ಆದರೆ, "ಏನು ಬೇಕು?" ಎಂದು ಆಕೆಯನ್ನಾಗಲಿ, "ಆಕೆಯೊಡನೆ ಏಕೆ ಮಾತನಾಡುತ್ತಿದ್ದೀರಿ?" ಎಂದು ಯೇಸುವನ್ನಾಗಲಿ ಅವರು ಕೇಳಲಿಲ್ಲ.
[28]ಆ ಮಹಿಳೆ ತನ್ನ ಕೊಡವನ್ನು ಅಲ್ಲಿಯೇ ಬಿಟ್ಟು ಊರಿಗೆ ನಡೆದಳು. [29]"ನಾನು ಮಾಡಿದ್ದ ಕೃತ್ಯಗಳನ್ನೆಲ್ಲಾ ಕಂಡಂತೆ ತಿಳಿಸಿದ ಒಬ್ಬ ವ್ಯಕ್ತಿ ಅಲ್ಲಿ ಇದ್ದಾರೆ. ಬಂದು ನೋಡಿ. ಅವರೇ ಅಭಿಷಿಕ್ತನಾದ ಲೋಕೋದ್ಧಾರಕ ಏಕಾಗಿರಬಾರದು?" ಎಂದು ಊರಿನ ಜನರನ್ನು ಕರೆದಳು. [30]ಅವರು ಯೇಸುವಿನ ಬಳಿಗೆ ಬಂದರು.

31 ಈ ಮಧ್ಯೆ ಶಿಷ್ಯರು, "ಗುರುದೇವಾ, ಊಟಮಾಡಿ," ಎಂದು ಯೇಸುವನ್ನು ಒತ್ತಾಯ ಮಾಡಿದರು. [32]ಆಗ ಯೇಸು, "ನಿಮಗೆ ತಿಳಿಯದಂಥ ಆಹಾರ ನನ್ನಲ್ಲಿದೆ," ಎಂದರು. [33]ಶಿಷ್ಯರು,
"ಯಾರಾದರೂ ಅವರಿಗೆ ತಿನ್ನಲು ತಂದು ಕೊಟ್ಟಿರಬಹುದೇ?" ಎಂದು ಮಾತನಾಡಿಕೊಂಡರು. [34]ಯೇಸು
ಅವರಿಗೆ, "ನನ್ನನ್ನು ಕಳುಹಿಸಿದಾತನ ಚಿತ್ತವನ್ನು ನೆರವೇರಿಸುವುದೇ ನನಗೆ ಆಹಾರ. ಆತನು ಕೊಟ್ಟ ಕಾರ್ಯಗಳನ್ನು ಪೂರೈಸುವುದೇ ನನಗೆ ತಿಂಡಿತೀರ್ಥ. [35]ಇನ್ನು ನಾಲ್ಕು ತಿಂಗಳು ಆದ ಮೇಲೆ ಸುಗ್ಗಿ
ಬರುತ್ತದೆ ಎಂದು ನೀವು ಹೇಳುವುದಿಲ್ಲವೆ? ಇಗೋ, ಕಣ್ಣುಹಾಯಿಸಿ ನೋಡಿ; ಬಲಿತು ಕೊಯ್ಲಿಗೆ ಬಂದಿರುವ ಹೊಲಗಳನ್ನು ನೋಡಿ. [36]ಕೊಯ್ದವನು ಈಗಾಗಲೇ ಕೂಲಿಯನ್ನು ಪಡೆಯುತ್ತಾನೆ. ಅವನು ನಿತ್ಯಜೀವಕ್ಕೆ
ಫಲವನ್ನು ಕೂಡಿಸಿಡುತ್ತಾನೆ. ಹೀಗೆ ಬಿತ್ತುವವನೂ ಕೊಯ್ಯುವವನೂ ಒಟ್ಟಿಗೆ ಸಂತೋಷಪಡುತ್ತಾರೆ.
[37]'ಬಿತ್ತುವವನೊಬ್ಬ, ಕೊಯ್ಯುವವನಿನ್ನೊಬ್ಬ,' ಎಂಬ ನಾಣ್ನುಡಿ ನಿಜವಾದುದು. [38]ನೀವು ದುಡಿಯದ
ಎಡೆಯಲ್ಲಿ ಕೊಯ್ಲುಮಾಡಲು ನಾನು ನಿಮ್ಮನ್ನು ಕಳುಹಿಸಿದ್ದೇನೆ. ದುಡಿದವರು ಬೇರೆ. ಅವರ ದುಡಿಮೆಯ ಫಲ ಬರುವುದು ನಿಮ್ಮ ಪಾಲಿಗೆ," ಎಂದು ಹೇಳಿದರು.

39 'ನಾನು ಮಾಡಿದ ಕೃತ್ಯಗಳನ್ನೆಲ್ಲಾ ಕಂಡಂತೆ ಹೇಳಿದ ವ್ಯಕ್ತಿ' ಎಂದು ಸಾರಿದ ಮಹಿಳೆಯ ಮಾತಿನಿಂದ ಸಮಾರಿಯ ಊರಿನ ಹಲವು ಮಂದಿಗೆ ಯೇಸುವಿನಲ್ಲಿ ನಂಬಿಕೆ ಹುಟ್ಟಿತು. [40]ಎಂದೇ ಆ
ಊರಿನ ಜನರು ಯೇಸುವಿನ ಬಳಿಗೆ ಬಂದು ತಮ್ಮಲ್ಲಿಯೇ ತಂಗಬೇಕೆಂದು ಬೇಡಿಕೊಂಡರು. ಅಂತೆಯೇ ಯೇಸು, ಅಲ್ಲಿ ಎರಡು ದಿನ ಉಳಿದರು. [41]ಇನ್ನೂ ಅನೇಕರಿಗೆ ಯೇಸುವಿನ ಬೋಧನೆಯನ್ನು ಅವರ
ಬಾಯಿಂದಲೇ ಕೇಳಿ ಅವರಲ್ಲಿ ನಂಬಿಕೆ ಮೂಡಿತು. [42]ಆಗ ಅವರು, ಆ ಮಹಿಳೆಗೆ, "ನೀನು ಹೇಳಿದುದರಿಂದ
ಮಾತ್ರವೇ ಈಗ ನಾವು ನಂಬುತ್ತಿಲ್ಲ, ನಾವೇ ಕಿವಿಯಾರೆ ಕೇಳಿ ನಂಬಿದ್ದೇವೆ; ಲೋಕೋದ್ಧಾರಕ ಇವರೇ ಎಂದು ನಮಗೀಗ ತಿಳಿಯಿತು," ಎಂದರು.

### ಅಧಿಕಾರಿಯ ಮಗನಿಗೆ ಆರೋಗ್ಯದಾನ

43 ಎರಡು ದಿನಗಳಾದ ಬಳಿಕ ಯೇಸುಸ್ವಾಮಿ ಅಲ್ಲಿಂದ ಗಲಿಲೇಯಕ್ಕೆ ಹೊರಟರು. [44]ಪ್ರವಾದಿಗೆ
ಸ್ವಗ್ರಾಮದಲ್ಲಿ ಮರ್ಯಾದೆ ಇಲ್ಲ ಎಂದು ಅವರೇ ಸಾರಿದ್ದರು. [45]ಗಲಿಲೇಯವನ್ನು ತಲುಪಿದೊಡನೆ ಜನರು ಅವರನ್ನು ಆದರದಿಂದ ಬರಮಾಡಿಕೊಂಡರು. ಏಕೆಂದರೆ, ಹಬ್ಬಕ್ಕಾಗಿ ಆ ಜನರು ಜೆರುಸಲೇಮಿಗೆ ಹೋಗಿದ್ದಾಗ ಹಬ್ಬದ ಸಮಯದಲ್ಲಿ ಯೇಸು ಮಾಡಿದ್ದನ್ನೆಲ್ಲಾ ನೋಡಿದ್ದರು.

46 ಯೇಸು ಗಲಿಲೇಯದ ಕಾನಾ ಊರಿಗೆ ಮರಳಿ ಬಂದರು. ಅವರು ಹಿಂದೆ ನೀರನ್ನು
ದ್ರಾಕ್ಷಾರಸವನ್ನಾಗಿ ಮಾಡಿದ್ದು ಅಲ್ಲಿಯೇ. ಕಫೆರ್ನವುಮಿನಲ್ಲಿ ರಾಜಸೇವೆಯಲ್ಲಿದ್ದ ಒಬ್ಬ ಅಧಿಕಾರಿಯ
ಮಗನಿಗೆ ಕಾಯಿಲೆಯಾಗಿತ್ತು. 47ಯೇಸು ಜುದೇಯದಿಂದ ಗಲಿಲೇಯಕ್ಕೆ ಬಂದಿರುವುದನ್ನು ಕೇಳಿದ ಆ
ಅಧಿಕಾರಿ, ಅವರ ಬಳಿಗೆ ಬಂದು, ಸಾವಿನ ದವಡೆಯಲ್ಲಿರುವ ತನ್ನ ಮಗನನ್ನು ಬಂದು ಬದುಕಿಸಬೇಕೆಂದು
ಬೇಡಿಕೊಂಡನು. 48ಯೇಸು ಅವನಿಗೆ "ಸೂಚಕಕಾರ್ಯಗಳನ್ನೂ ಅದ್ಭುತಗಳನ್ನೂ ಕಂಡ ಹೊರತು ನೀವು
ನಂಬುವುದಿಲ್ಲವಲ್ಲಾ," ಎಂದರು. 49ಆದರೂ ಆ ಅಧಿಕಾರಿ, "ನನ್ನ ಮಗನು ಪ್ರಾಣಬಿಡುವ ಮೊದಲೇ ಬನ್ನಿ
ಸ್ವಾಮಿ," ಎಂದು ಅಂಗಲಾಚಿದನು. 50ಆಗ ಯೇಸು, "ಹೋಗು, ನಿನ್ನ ಮಗನು ಬದುಕುತ್ತಾನೆ," ಎಂದು
ಹೇಳಿದರು. ಆ ಅಧಿಕಾರಿ ಯೇಸುವಿನ ಮಾತನ್ನು ನಂಬಿ ಹೊರಟನು. 51ಅವನು ಅರ್ಧದಾರಿಯಲ್ಲಿ
ಇದ್ದಾಗಲೇ ಆಳುಗಳು ಅವನಿಗೆ ಎದುರಾಗಿ ಬಂದು, "ನಿಮ್ಮ ಮಗ ಬದುಕಿಕೊಂಡ," ಎಂದು ತಿಳಿಸಿದರು.
52ಎಷ್ಟು ಹೊತ್ತಿಗೆ ತನ್ನ ಮಗ ಚೇತರಿಸಿಕೊಂಡನೆಂದು ಆ ಅಧಿಕಾರಿ ವಿಚಾರಿಸಿದಾಗ, "ನಿನ್ನೆ ಮಧ್ಯಾಹ್ನ
ಒಂದು ಗಂಟೆಗೆ ಅವನ ಜ್ವರ ಬಿಟ್ಟಿತು," ಎಂದು ಆಳುಗಳು ಉತ್ತರಕೊಟ್ಟರು. 53'ನಿನ್ನ ಮಗ ಬದುಕುತ್ತಾನೆ'
ಎಂದು ಯೇಸು ಹೇಳಿದ್ದ ಗಳಿಗೆಯಲ್ಲಿಯೇ ತನ್ನ ಮಗ ಬದುಕಿಕೊಂಡನೆಂದು ತಂದೆಗೆ ತಿಳಿಯಿತು. ಅವನೂ
ಅವನ ಮನೆಯವರೆಲ್ಲರೂ ಯೇಸುವನ್ನು ವಿಶ್ವಾಸಿಸಿದರು.

54 ಯೇಸು ಜುದೇಯದಿಂದ ಗಲಿಲೇಯಕ್ಕೆ ಬಂದು, ಮಾಡಿದ ಎರಡನೆಯ ಸೂಚಕಕಾರ್ಯ
ಇದು.

## ಸಬ್ಬತಿನಂದು ಸ್ವಸ್ಥನಾದ ರೋಗಿ

**5** ಇದಾದ ಮೇಲೆ ಯೆಹೂದ್ಯರ ಹಬ್ಬ ಬಂದಿತು. ಯೇಸುಸ್ವಾಮಿ ಜೆರುಸಲೇಮಿಗೆ ತೆರಳಿದರು. 2ಅಲ್ಲಿ,
'ಕುರಿಬಾಗಿಲು' ಎಂಬ ಸ್ಥಳದ ಬಳಿ ಐದು ಮಂಟಪಗಳಿಂದ ಕೂಡಿದ ಒಂದು ಕೊಳವಿದೆ. ಅದನ್ನು ಹಿಬ್ರಿಯ
ಭಾಷೆಯಲ್ಲಿ 'ಬೆತ್ಸಥ' ಎಂದು ಕರೆಯುತ್ತಾರೆ. 3-4ಕುರುಡರು, ಕುಂಟರು, ಪಾರ್ಶ್ವವಾಯು ಪೀಡಿತರು
ಮೊದಲಾದ ಅನೇಕ ರೋಗಿಗಳು ಆ ಮಂಟಪಗಳಲ್ಲಿ ಬಿದ್ದುಕೊಳ್ಳುತ್ತಾ ಇದ್ದರು. 5ಮೂವತ್ತೆಂಟು ವರ್ಷ
ಕಾಯಿಲೆಯಿಂದ ನರಳುತ್ತಿದ್ದ ಒಬ್ಬ ರೋಗಿ ಅಲ್ಲಿ ಮಲಗಿದ್ದನು. 6ಯೇಸು ಅವನನ್ನು ನೋಡಿ,
ದೀರ್ಘಕಾಲದಿಂದ ಅವನು ಹಾಗೆ ಬಿದ್ದುಕೊಂಡಿರುವುದನ್ನು ತಿಳಿದು, "ನಿನಗೆ ಗುಣಹೊಂದಲು
ಮನಸ್ಸಿದೆಯೇ?" ಎಂದು ಕೇಳಿದರು. 7"ಸ್ವಾಮಿ, ನೀರು ಉಕ್ಕಿದಾಗ ನನ್ನನ್ನು ಕೊಳಕ್ಕಿಳಿಸಲು ಸಹಾಯಕರು
ಇರುವುದಿಲ್ಲ; ನಾನು ಹೋಗುವಷ್ಟರಲ್ಲೇ ಬೇರೆ ಯಾರಾದರೂ ಇಳಿದು ಬಿಡುತ್ತಾರೆ," ಎಂದು ಉತ್ತರಿಸಿದ
ಆ ರೋಗಿ. 8ಯೇಸು ಅವನಿಗೆ, "ಎದ್ದು ನಿಲ್ಲು, ನಿನ್ನ ಹಾಸಿಗೆಯನ್ನು ಸುತ್ತಿಕೊಂಡು ನಡೆ," ಎಂದರು. 9ಆ
ಕ್ಷಣವೇ ಅವನು ಗುಣಹೊಂದಿ, ತನ್ನ ಹಾಸಿಗೆಯನ್ನು ಸುತ್ತಿಕೊಂಡು ನಡೆಯತೊಡಗಿದನು.

10 ಅದು ಸಬ್ಬತ್ತಿನ ದಿನವಾಗಿತ್ತು. ಆದುದರಿಂದ ಯೆಹೂದ್ಯ ಅಧಿಕಾರಿಗಳು ಗುಣಹೊಂದಿದ ಆ
ಮನುಷ್ಯನಿಗೆ, "ಇಂದು ಸಬ್ಬತ್ತಿನ ದಿನ. ನೀನು ಹಾಸಿಗೆಯನ್ನು ಎತ್ತಿಕೊಂಡು ನಡೆಯುವುದು ನಿಷಿದ್ಧ,"
ಎಂದು ಹೇಳಿದರು. 11ಅದಕ್ಕೆ ಅವನು: "ನನ್ನನ್ನು ಗುಣಪಡಿಸಿದವರೇ, 'ನಿನ್ನ ಹಾಸಿಗೆಯನ್ನು ಎತ್ತಿಕೊಂಡು
ನಡೆ' ಎಂದು ಹೇಳಿದರು," ಎಂದು ಉತ್ತರಕೊಟ್ಟನು. 12ಅಧಿಕಾರಿಗಳು, "ಅದನ್ನು ಎತ್ತಿಕೊಂಡು ನಡೆ ಎಂದ
ಅವನು ಯಾರು?" ಎಂದು ಪ್ರಶ್ನಿಸಿದರು. 13ತನ್ನನ್ನು ಗುಣಪಡಿಸಿದವರು ಯಾರೆಂದು ಅವನಿಗೆ ತಿಳಿದಿರಲಿಲ್ಲ;
ಅಲ್ಲದೆ ಜನಸಂದಣಿಯ ನಿಮಿತ್ತ ಯೇಸು ಆಗಲೇ ಮರೆಯಾಗಿ ಬಿಟ್ಟಿದ್ದರು.

14 ಅನಂತರ ದೇವಾಲಯದಲ್ಲಿ ಯೇಸು ಆ ಮನುಷ್ಯನನ್ನು ಕಂಡು, "ನೋಡು, ನೀನು
ಗುಣಹೊಂದಿರುವೆ; ಇನ್ನುಮೇಲೆ ಪಾಪ ಮಾಡುವುದನ್ನು ಬಿಟ್ಟುಬಿಡು. ಇಲ್ಲದಿದ್ದರೆ ನಿನ್ನ ಗತಿ ಇನ್ನಷ್ಟು
ಚಿಂತಾಜನಕವಾದೀತು," ಎಂದರು.

15 ಆ ಮನುಷ್ಯ ಅಲ್ಲಿಂದ ಯೆಹೂದ್ಯರ ಬಳಿಗೆ ಹೋಗಿ, "ನನ್ನನ್ನು ಗುಣಪಡಿಸಿದವನು
ಯೇಸುವೇ," ಎಂದು ತಿಳಿಸಿದನು. 16ಯೇಸು ಇದನ್ನು ಸಬ್ಬತ್ ದಿನದಲ್ಲಿ ಮಾಡಿದ್ದರಿಂದ ಯೆಹೂದ್ಯರು

ಅವರಿಗೆ ಕಿರುಕುಳಕೊಡಲು ತೊಡಗಿದರು. [17]ಅದಕ್ಕೆ ಉತ್ತರವಾಗಿ ಯೇಸು, "ನನ್ನ ಪಿತ ಸತತವೂ
ಕಾರ್ಯನಿರತರು. ಅವರಂತೆಯೇ ನಾನು ಸದಾ ಕಾರ್ಯನಿರತನಾಗಿದ್ದೇನೆ," ಎಂದು ನುಡಿದರು. [18]ಯೇಸು
ಸಬ್ಬತ್ತಿನ ನಿಯಮವನ್ನು ಮುರಿದುದೇ ಅಲ್ಲದೆ, ದೇವರನ್ನು ತನ್ನ ಪಿತನೆಂದು ಹೇಳಿಕೊಳ್ಳುತ್ತಾ, ತನ್ನನ್ನೇ
ದೇವರಿಗೆ ಸರಿಸಮ ಮಾಡಿಕೊಳ್ಳುತ್ತಿದ್ದಾನೆಂದು ಯೆಹೂದ್ಯರು ಅವರನ್ನು ಕೊಲ್ಲಲು ಮತ್ತಷ್ಟು ಹವಣಿಸಿದರು.

## ದೈವಪುತ್ರನಿಗೆ ಸರ್ವಾಧಿಕಾರ

19 ಯೇಸುಸ್ವಾಮಿ ಅವರನ್ನು ಉದ್ದೇಶಿಸಿ ಹೀಗೆಂದರು: "ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ:
ಪುತ್ರನು ತನ್ನಷ್ಟಕ್ಕೆ ತಾನೇ ಏನೂ ಮಾಡಲಾರನು; ಪಿತನು ಮಾಡುವುದನ್ನು ಕಂಡು ತಾನೂ ಹಾಗೆಯೇ
ಮಾಡುತ್ತಾನೆ. ಪಿತನು ಮಾಡುವುದನ್ನೇ ಪುತ್ರನೂ ಮಾಡುವುದು. [20]ಪುತ್ರನೆಂದರೆ ಪಿತನಿಗೆ ಪ್ರೀತಿ.
ಆದುದರಿಂದ ತಾವು ಮಾಡುವುದನ್ನೆಲ್ಲಾ ಪುತ್ರನಿಗೆ ತೋರಿಸುತ್ತಾರೆ. ಇದಲ್ಲದೆ ಇನ್ನೂ ಎಷ್ಟೋ ಮಿಗಿಲಾದ
ಕಾರ್ಯಗಳನ್ನು ಪುತ್ರನಿಗೆ ತೋರಿಸುತ್ತಾರೆ. ಅವುಗಳನ್ನು ಕಂಡು ನೀವು ಬೆರಗಾಗುವಿರಿ. [21]ಪಿತನು ಸತ್ತವರನ್ನು
ಎಬ್ಬಿಸಿ ಅವರಿಗೆ ಜೀವವನ್ನು ಕೊಡುವಂತೆಯೇ ಪುತ್ರನೂ ತನಗೆ ಬೇಕಾದವರಿಗೆ ಜೀವವನ್ನು ಕೊಡುತ್ತಾನೆ.
[22]ಅಲ್ಲದೆ, ಪಿತನು ಯಾರನ್ನೂ ತೀರ್ಪಿಗೆ ಗುರಿಮಾಡುವುದಿಲ್ಲ. ತೀರ್ಪುಕೊಡುವ ಅಧಿಕಾರವನ್ನೆಲ್ಲಾ ಅವರು
ಪುತ್ರನಿಗೆ ಕೊಟ್ಟಿದ್ದಾರೆ. [23]ಏಕೆಂದರೆ, ತಮ್ಮನ್ನು ಗೌರವಿಸುವಂತೆಯೇ ಜನರೆಲ್ಲರು ಪುತ್ರನನ್ನು
ಗೌರವಿಸಬೇಕೆಂಬುದು ಅವರ ಬಯಕೆ. ಪುತ್ರನನ್ನು ಗೌರವಿಸದವನು ಆತನನ್ನು ಕಳುಹಿಸಿದ ಪಿತನನ್ನೂ
ಗೌರವಿಸುವುದಿಲ್ಲ.

24 "ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ: ನನ್ನ ಮಾತಿಗೆ ಕಿವಿಗೊಟ್ಟು ನನ್ನನ್ನು ಕಳುಹಿಸಿದ
ಆತನಲ್ಲಿ ವಿಶ್ವಾಸವಿಡುವವನು ನಿತ್ಯಜೀವವನ್ನು ಪಡೆದಿರುತ್ತಾನೆ. ಅವನು ಖಂಡನೆಗೆ ಗುರಿ ಆಗನು; ಅವನು
ಈಗಾಗಲೇ ಸಾವನ್ನು ದಾಟಿ ಜೀವವನ್ನು ಸೇರಿರುತ್ತಾನೆ. [25]ಸತ್ಯವಾಗಿ ನಿಮಗೆ ಮತ್ತೆ ಹೇಳುತ್ತೇನೆ; ಸತ್ತವರು
ದೇವರ ಪುತ್ರನ ಧ್ವನಿಯನ್ನು ಕೇಳುವ ಕಾಲ ಬರುವುದು; ಈಗಾಗಲೇ ಬಂದಿದೆ; ಈ ಧ್ವನಿಯನ್ನು
ಕೇಳುವವರು ಜೀವಿಸುವರು. [26]ಪಿತನು ತಾವೇ ಸ್ವಯಂ ಜೀವಮೂಲವಾಗಿರುವಂತೆ ಪುತ್ರನು ಸಹ ಸ್ವಯಂ
ಜೀವಮೂಲವಾಗಿರುವಂತೆ ಕರುಣಿಸಿದ್ದಾರೆ. [27]ಅದೂ ಅಲ್ಲದೆ, ಆತನು ನರಪುತ್ರನಾಗಿರುವ ಕಾರಣ
ತೀರ್ಪನ್ನು ಕೊಡುವ ಹಕ್ಕನ್ನು ಆತನಿಗೇ ದಯಪಾಲಿಸಿದ್ದಾರೆ. [28]ಇದನ್ನು ಕೇಳಿ ನೀವು ಬೆರಗಾಗುವುದು
ಬೇಡ. ಸತ್ತು ಸಮಾಧಿಯಲ್ಲಿರುವವರೆಲ್ಲರೂ ಆತನ ಧ್ವನಿಯನ್ನು ಕೇಳುವ ಕಾಲ ಬರುವುದು. [29]ಹಾಗೆ
ಕೇಳಿದವರೆಲ್ಲಾ ಸಮಾಧಿಯನ್ನು ಬಿಟ್ಟು ಎದ್ದುಬರುವರು; ಸಜ್ಜನರು ಸಜ್ಜೀವಕ್ಕಾಗಿ ಪುನರುತ್ಥಾನರಾಗುವರು,
ದುರ್ಜನರು ದಂಡನಾ ತೀರ್ಪಿಗಾಗಿ ಪುನರುತ್ಥಾನ ಆಗುವರು.

## ಯೇಸುವಿನ ಪರವಾಗಿ ಸಾಕ್ಷ್ಯಗಳು

30 "ನನ್ನಷ್ಟಕ್ಕೇ ನಾನೇ ಏನೂ ಮಾಡಲಾರೆ. ಪಿತನು ನನಗೆ ತಿಳಿಸಿದ ಪ್ರಕಾರ ನಾನು
ತೀರ್ಪುಕೊಡುತ್ತೇನೆ. ಈ ನನ್ನ ತೀರ್ಪು ನ್ಯಾಯಬದ್ಧ ಆದುದು. ಏಕೆಂದರೆ, ನಾನು ನನ್ನ ಸ್ವಂತ ಇಚ್ಛೆಯನ್ನು
ನೆರವೇರಿಸದೆ ಪಿತನ ಚಿತ್ತವನ್ನೇ ನೆರವೇರಿಸಲು ಆಶಿಸುತ್ತೇನೆ.

31 "ನನ್ನ ಪರವಾಗಿ ನಾನೇ ಸಾಕ್ಷಿ ನೀಡಿದರೆ ನನ್ನ ಸಾಕ್ಷಿಗೆ ಬೆಲೆಯಿರದು. [32]ನನ್ನ ಪರವಾಗಿ ಸಾಕ್ಷಿ
ನೀಡುವಾತನು ಇನ್ನೊಬ್ಬನಿದ್ದಾನೆ. ಆತನು ನೀಡುವ ಸಾಕ್ಷ್ಯಕ್ಕೆ ಬೆಲೆಯಿದೆ ಎಂದು ನಾನು ಬಲ್ಲೆ. [33]ನೀವೇ
ಯೊವಾನ್ನನ ಬಳಿಗೆ ದೂತರನ್ನು ಕಳುಹಿಸಿದ್ದಿರಿ. ಆತನು ಸತ್ಯವನ್ನು ಕುರಿತು ಸಾಕ್ಷಿ ಹೇಳಿದ್ದಾನೆ. [34]ನನಗೆ
ಮಾನವ ಸಾಕ್ಷಿ ಬೇಕೆಂದು ಅಲ್ಲ; ಆದರೆ ಇದನ್ನೆಲ್ಲಾ ನಿಮ್ಮ ಉದ್ಧಾರಕ್ಕೆಂದು ನಾನು ಹೇಳುತ್ತಿದ್ದೇನೆ.
[35]ಯೊವಾನ್ನನು ಉಜ್ವಲವಾಗಿ ಉರಿಯುವ ದೀಪದಂತೆ ಇದ್ದನು. ಆ ಬೆಳಕಿನಲ್ಲಿ ನೀವು ಸ್ವಲ್ಪಕಾಲ
ನಲಿದಾಡಿದಿರಿ. [36]ಯೊವಾನ್ನನು ನೀಡಿದ ಸಾಕ್ಷ್ಯಕ್ಕಿಂತಲೂ ಮಿಗಿಲಾದ ಸಾಕ್ಷ್ಯ ನನಗುಂಟು: ನಾನು
ಸಾಧಿಸುತ್ತಿರುವ ಸುಕೃತ್ಯಗಳೇ, ಅಂದರೆ, ಪಿತನು ನನಗೆ ಮಾಡಿ ಮುಗಿಸಲು ಕೊಟ್ಟ ಕಾರ್ಯಗಳೇ, ನಾನು
ಪಿತನಿಂದ ಬಂದವನೆಂದು ನನ್ನ ಪರವಾಗಿ ಸಾಕ್ಷಿಕೊಡುತ್ತವೆ. [37]ನನ್ನನ್ನು ಕಳುಹಿಸಿದ ಪಿತನೇ ನನ್ನ ಪರವಾಗಿ
ಸಾಕ್ಷಿ ನೀಡಿದ್ದಾರೆ. ನೀವಾದರೋ ಅವರ ಧ್ವನಿಯನ್ನು ಎಂದೂ ಕೇಳಿಲ್ಲ, ಅವರ ದರ್ಶನವನ್ನು ಎಂದೂ

ಕಂಡಿಲ್ಲ. [38]ಅವರ ಸಂದೇಶ ನಿಮ್ಮಲ್ಲಿ ನೆಲಸಿಲ್ಲ. ಏಕೆಂದರೆ, ಅವರು ಕಳುಹಿಸಿದವನಲ್ಲಿ ನೀವು
ವಿಶ್ವಾಸವಿಡಲಿಲ್ಲ. [39]ಪವಿತ್ರ ಗ್ರಂಥದಿಂದಲೇ ನಿತ್ಯಜೀವ ಲಭಿಸುವುದೆಂದು ಭಾವಿಸಿ, ನೀವು ಅದನ್ನು
ಪರಿಶೀಲಿಸಿ ನೋಡುತ್ತೀರಿ. ಆ ಗ್ರಂಥವು ಸಹ ನನ್ನ ಪರವಾಗಿ ಸಾಕ್ಷಿಹೇಳುತ್ತದೆ. [40]ಆದರೂ ನಿತ್ಯಜೀವವನ್ನು
ಪಡೆಯುವುದಕ್ಕಾಗಿ ನನ್ನ ಬಳಿಗೆ ಬರಲು ನಿಮಗೆ ಇಷ್ಟವಿಲ್ಲ.

41 "ನಾನು ಮನುಷ್ಯರಿಂದ ಬರುವ ಗೌರವವನ್ನು ಅರಸುವುದಿಲ್ಲ. [42]ದೇವರ ಮೇಲೆ ನಿಮಗೆ
ಪ್ರೀತಿಯಿಲ್ಲವೆಂದು ನಾನು ಚೆನ್ನಾಗಿ ಬಲ್ಲೆ. [43]ನಾನು ಬಂದಿರುವುದು ಪಿತನ ಹೆಸರಿನಲ್ಲೇ. ಆದರೂ ನೀವು
ನನ್ನನ್ನು ಬರಮಾಡಿಕೊಳ್ಳುವುದಿಲ್ಲ. ಬೇರೊಬ್ಬನು ತನ್ನ ಸ್ವಂತ ಹೆಸರಿನಲ್ಲಿ ಬಂದನೆಂದರೆ ಅಂಥವನನ್ನು
ನೀವು ಬರಮಾಡಿಕೊಳ್ಳುತ್ತೀರಿ. [44]ಕಾರಣ, ದೇವರಿಂದ ಸಿಗುವಂಥ ಗೌರವವನ್ನು ಅರಸದೆ ನಿಮ್ಮ ನಿಮ್ಮಲ್ಲೇ
ಪರಸ್ಪರ ಗೌರವವನ್ನು ಬಯಸುತ್ತೀರಿ. ಹೀಗಿರುವಲ್ಲಿ, ನಿಮ್ಮಲ್ಲಿ ವಿಶ್ವಾಸಮೂಡಲು ಹೇಗೆ ತಾನೆ ಸಾಧ್ಯ? ಪಿತನ
ಮುಂದೆ ನಾನು ನಿಮ್ಮನ್ನು ಆಪಾದಿಸುತ್ತಿರುವೆನೆಂದು ಎಣಿಸಬೇಡಿ. [45]ಆಪಾದಿಸುವವನು ಒಬ್ಬನಿದ್ದಾನೆ. ಆತನೇ
ನೀವು ಆಶ್ರಯಿಸಿಕೊಂಡಿರುವ ಮೋಶೆ. [46]ಮೋಶೆಯಲ್ಲಿ ನಿಮಗೆ ವಿಶ್ವಾಸ ಇದ್ದಿದ್ದರೆ ನನ್ನಲ್ಲಿ ವಿಶ್ವಾಸ
ಇಡುತ್ತಿದ್ದಿರಿ. ಏಕೆಂದರೆ, ಆತನು ಬರೆದುದು ನನ್ನನ್ನು ಕುರಿತೇ. [47]ಆತನು ಬರೆದುದರಲ್ಲಿ ನಿಮಗೆ
ನಂಬಿಕೆಯಿಲ್ಲವೆಂದ ಮೇಲೆ ನನ್ನ ಮಾತಿನಲ್ಲಿ ನಿಮಗೆ ಹೇಗೆ ನಂಬಿಕೆ ಹುಟ್ಟೀತು?"

## ಐದುಸಾವಿರ ಮಂದಿಗೆ ಅದ್ಭುತ ಆಹಾರ

(ಮತ್ತಾ. 14.13–21; ಮಾರ್ಕ 6.30–44; ಲೂಕ 9.10–17)

**6** ಯೇಸುಸ್ವಾಮಿ ಗಲಿಲೇಯ ಸರೋವರವನ್ನು ದಾಟಿ, ಆಚೆಯ ದಡಕ್ಕೆ ಹೋದರು. ಅದಕ್ಕೆ ತಿಬೇರಿಯ
ಸರೋವರವೆಂದು ಹೆಸರು. [2]ಜನರು ದೊಡ್ಡ ಗುಂಪೊಂದು ಅವರ ಹಿಂದೆ ಹೋಯಿತು. ಏಕೆಂದರೆ, ಯೇಸು
ಸೂಚಕಕಾರ್ಯಗಳನ್ನು ಮಾಡುತ್ತಾ ರೋಗಪೀಡಿತರನ್ನು ಗುಣಪಡಿಸುತ್ತಾ ಇದ್ದುದ್ದನ್ನು ಆ ಜನರು
ನೋಡಿದ್ದರು. [3]ಯೇಸು ಬೆಟ್ಟವನ್ನು ಹತ್ತಿ ತಮ್ಮ ಶಿಷ್ಯರ ಸಂಗಡ ಕುಳಿತುಕೊಂಡರು. [4]ಯೆಹೂದ್ಯರ ಪಾಸ್ಕ
ಹಬ್ಬವು ಹತ್ತಿರವಾಗಿತ್ತು. [5]ಯೇಸು ಕಣ್ಣು ಹಾಯಿಸಿ ನೋಡಿದಾಗ ಆ ದೊಡ್ಡ ಗುಂಪು ತಮ್ಮ ಕಡೆಗೆ
ಬರುವುದನ್ನು ಕಂಡರು. "ಈ ಜನರ ಊಟಕ್ಕೆ ರೊಟ್ಟಿಯನ್ನು ನಾವು ಎಲ್ಲಿಂದ ಕೊಂಡುಕೊಳ್ಳುವುದು?"
ಎಂದು ಯೇಸು ಫಿಲಿಪ್ಪನನ್ನು ಕೇಳಿದರು. [6]ಫಿಲಿಪ್ಪನನ್ನು ಪರೀಕ್ಷಿಸುವ ಸಲುವಾಗಿ ಅವರು ಹಾಗೆ ಹೇಳಿದರು.
ಏಕೆಂದರೆ, ತಾವು ಮಾಡಲಿರುವುದು ಅವರಿಗೆ ತಿಳಿದಿತ್ತು. [7]ಅದಕ್ಕೆ ಫಿಲಿಪ್ಪನು, "ಇನ್ನೂರು ದಿನಾರಿ
ನಾಣ್ಯಗಳನ್ನು ಕೊಟ್ಟು ರೊಟ್ಟಿಯನ್ನು ತಂದರೂ ಆಳಿಗೊಂದು ತುಂಡೂ ಬಾರದು," ಎಂದನು. [8]ಆಗ
ಶಿಷ್ಯರಲ್ಲಿ ಒಬ್ಬನು, ಅಂದರೆ ಸಿಮೋನ್ ಪೇತ್ರನ ಸಹೋದರನಾದ ಅಂದ್ರೆಯನು, [9]"ಇಲ್ಲಿ ಒಬ್ಬ ಹುಡುಗನ
ಬಳಿ ಜವೆಗೋದಿಯ ಐದು ರೊಟ್ಟಿಗಳೂ ಎರಡು ಮೀನುಗಳೂ ಇವೆ. ಆದರೆ ಈ ಜನಸಮೂಹಕ್ಕೆ ಇವೆಲ್ಲಿ
ಸಾಕಾಗುತ್ತವೆ?" ಎಂದನು.

10 ಯೇಸು, "ಜನರನ್ನು ಊಟಕ್ಕೆ ಕೂರಿಸಿರಿ," ಎಂದರು. ಅಲ್ಲಿ ಹುಲುಸಾಗಿದ್ದ ಹುಲ್ಲಿನ ಮೇಲೆ
ಜನರು ಕುಳಿತುಕೊಂಡರು. ಗಂಡಸರ ಸಂಖ್ಯೆಯೇ ಐದುಸಾವಿರದಷ್ಟಿತ್ತು. [11]ಯೇಸು, ರೊಟ್ಟಿಗಳನ್ನು
ತೆಗೆದುಕೊಂಡು ದೇವರಿಗೆ ಸ್ತೋತ್ರವನ್ನು ಸಲ್ಲಿಸಿ, ಕುಳಿತಿದ್ದ ಜನರಿಗೆ ಅವುಗಳನ್ನು ಹಂಚಿದರು. ಹಾಗೆಯೇ
ಮೀನುಗಳನ್ನೂ ಹಂಚಿಕೊಟ್ಟರು. ಎಲ್ಲರೂ ತಮಗೆ ಬೇಕಾದಷ್ಟು ತಿಂದರು. [12]ಅವರೆಲ್ಲರೂ ತಿಂದು ತೃಪ್ತರಾದ
ಮೇಲೆ ಯೇಸು, "ತಿಂದುಳಿದ ತುಂಡುಗಳನ್ನೆಲ್ಲಾ ಒಟ್ಟುಗೂಡಿಸಿರಿ; ಒಂದು ತುಂಡೂ ಹಾಳಾಗಬಾರದು,"
ಎಂದು ತಮ್ಮ ಶಿಷ್ಯರಿಗೆ ಹೇಳಿದರು. [13]ತಿಂದುಳಿದ ಆ ಐದು ರೊಟ್ಟಿಗಳ ತುಂಡುಗಳನ್ನು ಒಟ್ಟುಗೂಡಿಸಲು
ಅವು ಹನ್ನೆರಡು ಬುಟ್ಟಿಗಳ ತುಂಬಾ ಆದವು.

14 ಯೇಸು ಮಾಡಿದ ಈ ಸೂಚಕಕಾರ್ಯಗಳನ್ನು ಕಂಡ ಜನರು, "ಲೋಕಕ್ಕೆ ಬರಬೇಕಾಗಿದ್ದ
ಪ್ರವಾದಿ ನಿಜವಾಗಿಯೂ ಇವರೇ," ಎಂದು ಹೇಳತೊಡಗಿದ್ದರು. [15]ಅವರೆಲ್ಲರೂ ಬಂದು ತಮ್ಮನ್ನು ಹಿಡಿದು
ಅರಸನನ್ನಾಗಿ ಮಾಡುವ ಯೋಚನೆಯಲ್ಲಿದ್ದಾರೆ ಎಂಬುದನ್ನು ಅರಿತ ಯೇಸು ತಾವೊಬ್ಬರೇ ಬೆಟ್ಟದ ಕಡೆಗೆ
ಹೊರಟುಬಿಟ್ಟರು.

### ನೀರಿನ ಮೇಲೆ ನಡೆ

(ಮತ್ತಾ. 14.22–23; ಮಾರ್ಕ 6.45–52)

16 ಸಾಯಂಕಾಲವಾದ ಮೇಲೆ ಯೇಸುಸ್ವಾಮಿಯ ಶಿಷ್ಯರು ಸರೋವರಕ್ಕೆ ಹೋಗಿ [17]ದೋಣಿಯನ್ನು
ಹತ್ತಿ ಕಫೆರ್ನವುಮಿನ ಕಡೆ ಸಾಗಿದರು. ಆಗಲೇ ಕತ್ತಲು ಕವಿದಿತ್ತು. ಯೇಸು ಅವರ ಬಳಿಗೆ ಇನ್ನೂ
ಬಂದಿರಲಿಲ್ಲ. [18]ಅಷ್ಟರಲ್ಲಿ ರಭಸವಾದ ಗಾಳಿ ಬೀಸತೊಡಗಿತು. ಸರೋವರವು ಅಲ್ಲೋಲಕಲ್ಲೋಲವಾಯಿತು.
[19]ಐದು ಆರು ಕಿಲೋಮೀಟರಿನಷ್ಟು ಹುಟ್ಟು ಹಾಕಿರಬೇಕು. ಆಗ ಯೇಸು ನೀರಿನ ಮೇಲೆ ನಡೆಯುತ್ತಾ
ದೋಣಿಯನ್ನು ಸಮೀಪಿಸುತ್ತಿರುವುದು ಶಿಷ್ಯರಿಗೆ ಕಾಣಿಸಿತು. ಅದನ್ನು ನೋಡಿ ಅವರು ಹೆದರಿದರು. [20]ಆಗ
ಯೇಸು, "ನಾನೇ, ಇನ್ನಾರೂ ಅಲ್ಲ; ಅಂಜಬೇಡಿ," ಎಂದು ಹೇಳಿದರು. [21]ಶಿಷ್ಯರು ಅವರನ್ನು
ದೋಣಿಯೊಳಕ್ಕೆ ಬರಮಾಡಿಕೊಳ್ಳುವುದರಲ್ಲಿದ್ದರು. ಅಷ್ಟರಲ್ಲಿ, ದೋಣಿಯು ಸೇರಬೇಕಾಗಿದ್ದ ದಡವನ್ನು
ತಲುಪಿತು.

### ಜನಪ್ರಿಯ ಯೇಸು

22 ನೆರೆದಿದ್ದ ಜನರು ಮಾರನೆಯ ದಿನವೂ ಸರೋವರದ ಆಚೆಕಡೆಯೇ ಉಳಿದಿದ್ದರು. ಹಿಂದಿನ
ದಿನ ಅಲ್ಲಿ ಒಂದೇ ಒಂದು ದೋಣಿ ಇದ್ದುದನ್ನು ಅವರು ನೋಡಿದ್ದರು. ಯೇಸುಸ್ವಾಮಿ ಶಿಷ್ಯರೊಡನೆ
ದೋಣಿಯನ್ನು ಹತ್ತಲಿಲ್ಲವಾದ್ದರಿಂದ ಶಿಷ್ಯರು ಮಾತ್ರ ಹೊರಟು ಹೋಗಿದ್ದಾರೆಂದು ಅವರಿಗೆ ತಿಳಿದಿತ್ತು.
[23]ತಿಬೇರಿಯದಿಂದ ಹೊರಟಿದ್ದ ದೋಣಿಗಳು ಅಷ್ಟು ಹೊತ್ತಿಗೆ ಅಲ್ಲಿಗೆ ಬಂದು ಸೇರಿದವು. ಪ್ರಭುವು ದೇವರಿಗೆ
ಸ್ತೋತ್ರವನ್ನು ಸಲ್ಲಿಸಿ, ಜನರಿಗೆ ರೊಟ್ಟಿ ಬಡಿಸಿದ್ದ ಸ್ಥಳ ಅಲ್ಲೇ ಪಕ್ಕದಲ್ಲಿತ್ತು. [24]ಯೇಸು ಆಗಲಿ, ಅವರ
ಶಿಷ್ಯರಾಗಲಿ ಇಲ್ಲದ್ದನ್ನು ನೋಡಿ ಜನರು ಆ ದೋಣಿಗಳನ್ನು ಹತ್ತಿ ಯೇಸುವನ್ನು ಹುಡುಕುತ್ತಾ
ಕಫೆರ್ನವುಮಿಗೆ ಬಂದರು.

### ಯೇಸುವೇ ಜೀವದಾಯಕ ರೊಟ್ಟಿ

25 ಜನರು ಯೇಸುಸ್ವಾಮಿಯನ್ನು ಸರೋವರದ ಆಚೆದಡದಲ್ಲಿ ಕಂಡೊಡನೆ, "ಗುರುದೇವಾ,
ತಾವಿಲ್ಲಿಗೆ ಬಂದುದು ಯಾವಾಗ?" ಎಂದು ಕೇಳಿದರು. [26]ಯೇಸು ಅವರಿಗೆ, "ನಾನು ನಿಮಗೆ ಸತ್ಯವಾಗಿ
ಹೇಳುತ್ತೇನೆ: ನೀವು ನನ್ನನ್ನು ಹುಡುಕಿಕೊಂಡು ಬಂದದ್ದು ಸೂಚಕಕಾರ್ಯಗಳನ್ನು ನೋಡಿ
ಗ್ರಹಿಸಿಕೊಂಡಿದ್ದರಿಂದ ಅಲ್ಲ, ಹೊಟ್ಟೆತುಂಬುವಷ್ಟು ರೊಟ್ಟಿ ಸಿಕ್ಕಿದ್ದರಿಂದ. [27]ಅಳಿದುಹೋಗುವ ಆಹಾರಕ್ಕಾಗಿ
ದುಡಿಯಬೇಡಿ; ಉಳಿಯುವ ಮತ್ತು ನಿತ್ಯಜೀವವನ್ನು ಈಯುವ ಆಹಾರಕ್ಕಾಗಿ ದುಡಿಯಿರಿ. ಇಂಥ
ಆಹಾರವನ್ನು ನಿಮಗೆ ನೀಡುವವನು ನರಪುತ್ರನೇ. ಏಕೆಂದರೆ, ಪಿತನಾದ ದೇವರು ತಮ್ಮ ಅಧಿಕಾರ
ಮುದ್ರೆಯನ್ನು ಆತನ ಮೇಲೆ ಒತ್ತಿದ್ದಾರೆ," ಎಂದು ಉತ್ತರಕೊಟ್ಟರು. [28]ಆಗ ಆ ಜನರು, "ದೇವರು ಮೆಚ್ಚುವ
ಕಾರ್ಯಗಳನ್ನು ನಾವು ಮಾಡಬೇಕಾದರೆ, ಏನು ಮಾಡಬೇಕು?" ಎಂದು ಕೇಳಿದರು. [29]ಅದಕ್ಕೆ ಯೇಸು,
"ದೇವರು ಕಳುಹಿಸಿದಾತನನ್ನು ನೀವು ವಿಶ್ವಾಸಿಸಬೇಕು. ಇದೇ ಅವರು ಮೆಚ್ಚುವ ಕಾರ್ಯ," ಎಂದರು.
[30]ಅದಕ್ಕೆ ಆ ಜನರು, "ನಾವು ನೋಡಿ ನಿಮ್ಮಲ್ಲಿ ವಿಶ್ವಾಸ ಇಡುವಂತೆ ನೀವು ಏನು ಮಾಡುವಿರಿ? ಯಾವ
ಸೂಚಕಕಾರ್ಯವನ್ನು ತೋರಿಸುವಿರಿ? [31]ನಮ್ಮ ಪೂರ್ವಜರಿಗೆ ಮರುಭೂಮಿಯಲ್ಲಿ ತಿನ್ನಲು 'ಮನ್ನಾ'
ಸಿಕ್ಕಿತು, ತಿನ್ನಲು ಅವರಿಗೆ ಸ್ವರ್ಗದಿಂದ ರೊಟ್ಟಿ ದೊರಕಿತು, ಎಂದು ಪವಿತ್ರಗ್ರಂಥವೇ ಹೇಳುತ್ತದೆಯಲ್ಲವೇ?"
ಎಂದರು. [32]ಯೇಸು ಅವರಿಗೆ, "ನಿಮಗೆ ಸತ್ಯವಾಗಿ ಹೇಳುತ್ತೇನೆ; ಸ್ವರ್ಗದಿಂದ ನಿಮಗೆ ರೊಟ್ಟಿಯನ್ನು
ಕೊಟ್ಟವನು ಮೋಶೆಯಲ್ಲ; ನಿಮಗೆ ಸ್ವರ್ಗದಿಂದ ನಿಜವಾದ ರೊಟ್ಟಿಯನ್ನು ಕೊಡುವವರು ನನ್ನ ಪಿತನೇ.
[33]ಏಕೆಂದರೆ, ಸ್ವರ್ಗದಿಂದ ಇಳಿದು ಬಂದು ಲೋಕಕ್ಕೆ ಸಜ್ಜೀವವನ್ನೀಯುವಾತನೇ ದೇವರು ಕೊಡುವ
ರೊಟ್ಟಿ," ಎಂದು ಹೇಳಿದರು. [34]ಅದಕ್ಕೆ ಆ ಜನರು, "ಅಂಥಾ ರೊಟ್ಟಿಯನ್ನೇ ನಮಗೆ ಯಾವಾಗಲೂ ಕೊಡಿ,"
ಎಂದು ಕೇಳಿದರು. [35]ಆಗ ಯೇಸು, "ನಾನೇ ಜೀವದಾಯಕ ರೊಟ್ಟಿ, ನನ್ನ ಬಳಿ ಬರುವವನಿಗೆ ಹಸಿವೇ
ಇರದು; ನನ್ನಲ್ಲಿ ವಿಶ್ವಾಸವಿಡುವವನಿಗೆ ಎಂದಿಗೂ ದಾಹವಾಗದು. [36]ಆದರೆ, ನಾನು ನಿಮಗೆ ಹೇಳಿದಂತೆ,

ನೀವು ನನ್ನನ್ನು ನೋಡಿಯೂ ವಿಶ್ವಾಸಿಸದೆ ಇದ್ದೀರಿ. [37]ಪಿತನು ನನಗೆಂದು ಕೊಟ್ಟಿರುವ ಪ್ರತಿಯೊಬ್ಬನೂ ನನ್ನಲ್ಲಿಗೆ ಬರುತ್ತಾನೆ. ನನ್ನಲ್ಲಿಗೆ ಬರುವವನನ್ನು ನಾನೆಂದಿಗೂ ತಳ್ಳಿಬಿಡುವುದಿಲ್ಲ. [38]ನಾನು ಸ್ವರ್ಗದಿಂದ ಇಳಿದು ಬಂದುದು ನನ್ನ ಇಚ್ಛೆಯಂತೆ ನಡೆಯುವುದಕ್ಕಲ್ಲ, ನನ್ನನ್ನು ಕಳುಹಿಸಿದಾತನ ಚಿತ್ತದಂತೆ ನಡೆಯುವುದಕ್ಕೆ. [39]ಅವರ ಚಿತ್ತವೇನೆಂದರೆ: ಅವರು ನನಗೆ ಕೊಟ್ಟವರಲ್ಲಿ ಒಬ್ಬನನ್ನೂ ಕಳೆದುಕೊಳ್ಳದೆ ಅಂತಿಮ ದಿನದಂದು ಅವರೆಲ್ಲರನ್ನೂ ನಾನು ಜೀವಕ್ಕೆ ಎಬ್ಬಿಸಬೇಕು. [40]ಪುತ್ರನನ್ನು ಕಂಡು ಆತನಲ್ಲಿ ವಿಶ್ವಾಸ ಇಡುವ ಪ್ರತಿಯೊಬ್ಬನೂ ನಿತ್ಯಜೀವವನ್ನು ಪಡೆಯಬೇಕೆಂಬುದೇ ನನ್ನ ಪಿತನ ಸಂಕಲ್ಪ. ಅಂಥವನನ್ನು ಅಂತಿಮ ದಿನದಂದು ನಾನು ಜೀವಕ್ಕೆ ಎಬ್ಬಿಸುತ್ತೇನೆ," ಎಂದು ನುಡಿದರು.

41 "ಸ್ವರ್ಗದಿಂದ ಇಳಿದು ಬಂದ ರೊಟ್ಟಿ ನಾನೇ" ಎಂದು ಯೇಸು ಹೇಳಿದ್ದಕ್ಕೆ ಯೆಹೂದ್ಯರು ಗೊಣಗತೊಡಗಿದರು. [42]ಅವರು, "ಈತನು ಜೋಸೆಫನ ಮಗನಾದ ಯೇಸು ಅಲ್ಲವೆ? ಈತನ ತಂದೆ ತಾಯಿ ನಮಗೆ ಗೊತ್ತಿಲ್ಲವೆ? ಅಂದಮೇಲೆ, 'ನಾನು ಸ್ವರ್ಗದಿಂದ ಬಂದಿದ್ದೇನೆ,' ಎಂದು ಈತನು ಹೇಳುವುದಾದರೂ ಹೇಗೆ?" ಎಂದರು. [43]ಅದಕ್ಕೆ ಯೇಸು, "ನಿಮ್ಮನಿಮ್ಮೊಳಗೆ ಗೊಣಗುಟ್ಟದಿರಿ. [44]ನನ್ನನ್ನು ಕಳುಹಿಸಿಕೊಟ್ಟ ಪಿತನು, ನನ್ನತ್ತ ಸೆಳೆಯದ ಹೊರತು, ಯಾರೂ ನನ್ನ ಬಳಿಗೆ ಬಾರರು. ಬಂದವರನ್ನು ನಾನು ಅಂತಿಮ ದಿನದಂದು ಜೀವಕ್ಕೆ ಎಬ್ಬಿಸುತ್ತೇನೆ. [45]'ದೇವರಿಂದಲೇ ಅವರೆಲ್ಲರೂ ಬೋಧನೆ ಪಡೆಯುವರು,' ಎಂದು ಪ್ರವಾದಿಗಳ ಗ್ರಂಥದಲ್ಲಿ ಬರೆದಿದೆ. ಪಿತನಿಗೆ ಕಿವಿಗೊಟ್ಟು ಅವರಿಂದಲೇ ಕಲಿತುಕೊಂಡ ಪ್ರತಿ ಒಬ್ಬನೂ ನನ್ನ ಬಳಿಗೆ ಬರುತ್ತಾನೆ. [46]ಹಾಗೆಂದ ಮಾತ್ರಕ್ಕೆ ಪಿತನನ್ನು ಯಾರಾದರೂ ಕಣ್ಣಾರೆ ಕಂಡಿದ್ದಾರೆ ಎಂದಲ್ಲ, ದೇವರಿಂದ ಬಂದಿರುವ ಒಬ್ಬನು ಮಾತ್ರ ಪಿತನನ್ನು ಕಂಡಿದ್ದಾನೆ. [47]ವಿಶ್ವಾಸವುಳ್ಳವನಲ್ಲಿ ನಿತ್ಯಜೀವ ಇದೆಯೆಂದು ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ. [48]ಜೀವದಾಯಕ ರೊಟ್ಟಿ ನಾನೇ. [49]ನಿಮ್ಮ ಪೂರ್ವಜರು ಮರಳುಗಾಡಿನಲ್ಲಿ 'ಮನ್ನಾ'ವನ್ನು ತಿಂದರು; ಆದರೂ ಸಾವಿಗೆ ತುತ್ತಾದರು. [50]ಸ್ವರ್ಗದಿಂದ ಇಳಿದು ಬಂದ ರೊಟ್ಟಿಯಾದರೋ ಹಾಗಲ್ಲ. ಇದನ್ನು ತಿನ್ನುವ ಯಾರಿಗೂ ಸಾವೆಂಬುದು ಇಲ್ಲ. [51]ನಾನೇ ಸ್ವರ್ಗದಿಂದ ಇಳಿದು ಬಂದ ಜೀವಂತ ರೊಟ್ಟಿ. ಈ ರೊಟ್ಟಿಯನ್ನು ತಿಂದವನು ಚಿರಕಾಲ ಬಾಳುತ್ತಾನೆ. ಲೋಕೋದ್ಧಾರಕ್ಕಾಗಿ ನಾನು ಅರ್ಪಿಸುವ ನನ್ನ ಮಾಂಸವೇ ನಾನು ಕೊಡುವ ರೊಟ್ಟಿ," ಎಂದು ಹೇಳಿದರು.

52 ಅಷ್ಟಕ್ಕೆ ಆ ಯೆಹೂದ್ಯರಲ್ಲಿ ತೀವ್ರ ವಾಗ್ವಾದ ಉಂಟಾಯಿತು. "ಈತನು ತನ್ನ ಮಾಂಸವನ್ನು ತಿನ್ನಲು ಹೇಗೆ ಕೊಟ್ಟಾನು?" ಎಂದು ಕೇಳತೊಡಗಿದರು. [53]ಅದಕ್ಕೆ ಯೇಸು, "ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ: ನೀವು ನರಪುತ್ರನ ಮಾಂಸವನ್ನು ತಿನ್ನದೆ, ಆತನ ರಕ್ತವನ್ನು ಕುಡಿಯದೆ ಹೋದರೆ ನಿಮ್ಮಲ್ಲಿ ಜೀವ ಇರುವುದಿಲ್ಲ. [54]ನನ್ನ ಮಾಂಸವನ್ನು ತಿಂದು ನನ್ನ ರಕ್ತವನ್ನು ಕುಡಿಯುವವನಲ್ಲಿ ನಿತ್ಯಜೀವ ಇರುತ್ತದೆ. ಅಲ್ಲದೆ ಅಂತಿಮ ದಿನದಂದು ನಾನು ಅವನನ್ನು ಜೀವಕ್ಕೆ ಎಬ್ಬಿಸುತ್ತೇನೆ. [55]ನನ್ನ ಮಾಂಸವೇ ನಿಜವಾದ ಆಹಾರ; ನನ್ನ ರಕ್ತವೇ ನಿಜವಾದ ಪಾನ. [56]ನನ್ನ ಮಾಂಸವನ್ನು ತಿಂದು, ನನ್ನ ರಕ್ತವನ್ನು ಕುಡಿಯುವವನು ನನ್ನಲ್ಲಿ ನೆಲೆಸಿರುತ್ತಾನೆ. ನಾನು ಅವನಲ್ಲಿ ನೆಲೆಸಿರುತ್ತೇನೆ. [57]ಜೀವಸ್ವರೂಪಿ ಆದ ಪಿತನು ನನ್ನನ್ನು ಕಳುಹಿಸಿಕೊಟ್ಟಿರುವರು. ನಾನು ಅವರಿಂದಲೇ ಜೀವಿಸುತ್ತೇನೆ. ಅಂತೆಯೇ ನನ್ನನ್ನು ಭುಜಿಸುವವನು ನನ್ನಿಂದಲೇ ಜೀವಿಸುತ್ತಾನೆ. [58]ಸ್ವರ್ಗದಿಂದ ಇಳಿದು ಬಂದ ರೊಟ್ಟಿ ಇದೇ. ನಿಮ್ಮ ಪೂರ್ವಜರು 'ಮನ್ನಾ'ವನ್ನು ತಿಂದರೂ ಸಾವಿಗೆ ತುತ್ತಾದರು. ಇದು ಹಾಗಲ್ಲ, ಈ ರೊಟ್ಟಿಯನ್ನು ತಿನ್ನುವವನು ಚಿರಕಾಲ ಬಾಳುವನು," ಎಂದು ಹೇಳಿದರು.

59 ಕಫೆರ್ನವುಮಿನ ಪ್ರಾರ್ಥನಾಮಂದಿರದಲ್ಲಿ ಯೇಸು ಬೋಧನೆ ಮಾಡುತ್ತಿದ್ದಾಗ ಆಡಿದ ಮಾತುಗಳಿವು.

## ಜೀವದಾಯಕ ನುಡಿ

60 ಯೇಸುಸ್ವಾಮಿಯ ಶಿಷ್ಯರಲ್ಲಿ ಹಲವರು, "ಇವು ಕಟುವಾದ ಮಾತುಗಳು, ಇವನ್ನು ಯಾರುತಾನೆ ಕೇಳಿಯಾರು?" ಎಂದು ಮಾತನಾಡಿಕೊಂಡರು. [61]ಈ ವಿಷಯವಾಗಿ ತಮ್ಮ ಶಿಷ್ಯರು ಗೊಣಗುಟ್ಟುತ್ತಿರುವುದನ್ನು ಯೇಸು ತಾವಾಗಿಯೇ ಅರಿತು, "ಇಷ್ಟು ಮಾತ್ರಕ್ಕೆ ನೀವು ಕಂಗೆಡಬೇಕೆ?

62ಹಾಗಾದರೆ ನರಪುತ್ರನು ತಾನು ಮೊದಲಿದ್ದ ಸ್ಥಳಕ್ಕೆ ಮರಳಿ ಏರುವುದನ್ನು ನೀವು ಕಂಡಾಗ ಏನನ್ನುವಿರಿ?
63ಸಜೀವವನ್ನು ಕೊಡುವಂಥಾದ್ದು ದೇವರ ಆತ್ಮವೇ. ನರಮಾಂಸದಿಂದ ಏನೂ ಆಗದು. ನಾನು ನಿಮ್ಮೊಡನೆ
ಆಡಿದ ಮಾತುಗಳು ಜೀವದಾಯಕ ದೇವರಾತ್ಮವನ್ನು ತರುತ್ತವೆ. 64ಆದರೂ ನಿಮ್ಮಲ್ಲಿ ಕೆಲವರಿಗೆ
ವಿಶ್ವಾಸವಿಲ್ಲ," ಎಂದು ಹೇಳಿದರು. (ವಿಶ್ವಾಸವಿಲ್ಲದವರು ಯಾರು, ತಮ್ಮನ್ನು ಹಿಡಿದುಕೊಡುವ ಗುರುದ್ರೋಹಿ
ಯಾರು, ಎಂದು ಯೇಸುವಿಗೆ ಮೊದಲಿನಿಂದಲೂ ತಿಳಿದಿತ್ತು.) 65" 'ಪಿತನು ಅನುಗ್ರಹಿಸಿದ ಹೊರತು
ಯಾರೂ ನನ್ನ ಬಳಿಗೆ ಬರಲಾರರು,' ಎಂದು ನಾನು ಹೇಳಿದುದು ಇದಕ್ಕಾಗಿಯೇ," ಎಂದು ಯೇಸು ಮತ್ತೆ
ನುಡಿದರು.

### ಪೇತ್ರನ ವಿಶ್ವಾಸ ಪ್ರಮಾಣ

66 ಅಂದಿನಿಂದ ಯೇಸುಸ್ವಾಮಿಯ ಹಿಂಬಾಲಕರಲ್ಲಿ ಹಲವರು ಅವರ ಸಹವಾಸವನ್ನು
ಬಿಟ್ಟುಬಿಟ್ಟರು. ಹೋದವರು ಹಿಂದಿರುಗಿ ಬರಲಿಲ್ಲ. 67ಆಗ ಯೇಸು ಹನ್ನೆರಡು ಮಂದಿ ಶಿಷ್ಯರಿಗೆ, "ನೀವು
ಕೂಡ ಹೋಗಬೇಕೆಂದು ಇದ್ದೀರಾ?" ಎಂದು ಕೇಳಿದರು. 68ಅದಕ್ಕೆ ಸಿಮೋನ ಪೇತ್ರನು, "ಪ್ರಭುವೇ, ನಾವು
ಹೋಗುವುದಾದರೂ ಯಾರ ಬಳಿಗೆ? ನಿತ್ಯಜೀವವನ್ನು ಈಯುವ ನುಡಿ ಇರುವುದು ತಮ್ಮಲ್ಲೇ. 69ತಾವೇ
ದೇವರಿಂದ ಬಂದ ಪರಮಪೂಜ್ಯರು. ಹೌದು, ಇದೇ ನಮ್ಮ ವಿಶ್ವಾಸ ಮತ್ತು ಗ್ರಹಿಕೆ," ಎಂದು ಹೇಳಿದನು.
70ಆಗ ಯೇಸು, "ನಿಮ್ಮಲ್ಲಿ ಹನ್ನೆರಡು ಮಂದಿಯನ್ನು ನಾನು ಆಯ್ದುಕೊಂಡೆನಲ್ಲವೆ? ಆದರೂ ನಿಮ್ಮಲ್ಲಿ
ಒಬ್ಬನು ಪಿಶಾಚಿಯಾಗಿ ಇದ್ದಾನೆ," ಎಂದರು. 71ಅವರು ಹೀಗೆ ಹೇಳಿದ್ದು ಸಿಮೋನನ ಮಗ ಇಸ್ಕರಿಯೋತಿನ
ಯೂದನನ್ನು ಕುರಿತು. ಹನ್ನೆರಡು ಮಂದಿಯಲ್ಲಿ ಒಬ್ಬನಾಗಿದ್ದ ಇವನೇ ಯೇಸುವನ್ನು ಹಿಡಿದುಕೊಡಲಿದ್ದ
ಗುರುದ್ರೋಹಿ.

### ಯೇಸು ಮತ್ತು ಸಹೋದರರು

**7** ಇದಾದ ಬಳಿಕ ಯೇಸುಸ್ವಾಮಿ ಗಲಿಲೇಯದಲ್ಲಿ ಸಂಚರಿಸತೊಡಗಿದರು. ಯೆಹೂದ್ಯರು ತಮ್ಮನ್ನು
ಕೊಲ್ಲಲು ಹವಣಿಸುತ್ತಿದ್ದುದರಿಂದ ಜುದೇಯದಲ್ಲಿ ಸಂಚರಿಸಲು ಅವರು ಇಷ್ಟಪಡಲಿಲ್ಲ. 2ಯೆಹೂದ್ಯರ
ಪರ್ಣಕುಟೀರಗಳ ಹಬ್ಬವು ಹತ್ತಿರವಾಗುತ್ತಿತ್ತು. ಯೇಸುವಿನ ಸೋದರರು, 3"ನೀನು ಇಲ್ಲಿಂದ ಜುದೇಯಕ್ಕೆ
ಹೋಗು. ಅಲ್ಲಿ ನೀನು ಮಾಡುವುದನ್ನೆಲ್ಲಾ ನಿನ್ನ ಅನುಯಾಯಿಗಳು ನೋಡಲಿ. 4ಪ್ರಖ್ಯಾತನಾಗಬೇಕೆಂದಿರುವ
ಯಾರೂ ತನ್ನ ಕಾರ್ಯಗಳನ್ನು ಮರೆಯಲ್ಲಿ ಮಾಡುವುದಿಲ್ಲ, ಇವನ್ನೆಲ್ಲಾ ನೀನು ಮಾಡುವುದಾದರೆ ಲೋಕಕ್ಕೆ
ಪ್ರಕಟವಾಗುವಂತೆ ಮಾಡಬೇಕು," ಎಂದು ಯೇಸುವಿಗೆ ಹೇಳಿದರು. 5ಅವರ ಸೋದರರಿಗೆ ಕೂಡ ಅವರಲ್ಲಿ
ವಿಶ್ವಾಸ ಇರಲಿಲ್ಲ. 6ಅದಕ್ಕೆ ಯೇಸು, "ನನಗೆ ಸೂಕ್ತ ಸಮಯ ಇನ್ನೂ ಬಂದಿಲ್ಲ, ನಿಮಗಾದರೋ ಎಲ್ಲಾ
ಸಮಯವೂ ಒಂದೇ. 7ಲೋಕಕ್ಕೆ ನಿಮ್ಮ ಮೇಲೆ ಹಗೆಯಿಲ್ಲ. ಅದಕ್ಕೆ ಹಗೆಯಿರುವುದು ನನ್ನ ಮೇಲೆ. ಏಕೆಂದರೆ,
ಅದರ ವರ್ತನೆ ಕೆಟ್ಟದೆಂದು ನಾನು ಯಥಾರ್ಥವಾಗಿ ಹೇಳುತ್ತಾ ಇದ್ದೇನೆ. 8ಹಬ್ಬಕ್ಕೆ ನೀವೇ ಹೋಗಿರಿ, ನನಗೆ
ಸಮಯವು ಇನ್ನೂ ಬಂದಿಲ್ಲವಾದ ಕಾರಣ ನಾನು ಹಬ್ಬಕ್ಕೆ ಈಗ ಹೋಗುವುದಿಲ್ಲ," 9ಎಂದು ಹೇಳಿ ಯೇಸು
ಗಲಿಲೇಯದಲ್ಲೇ ಉಳಿದುಕೊಂಡರು.

### ಪರ್ಣಕುಟೀರ ಹಬ್ಬದಲ್ಲಿ ಯೇಸು

10 ಯೇಸುಸ್ವಾಮಿಯ ಸೋದರರು ಹಬ್ಬಕ್ಕೆ ಹೋದರು. ಯೇಸುವೂ ಅಲ್ಲಿಗೆ ಹೋದರು.
ಬಹಿರಂಗವಾಗಿ ಅಲ್ಲ, ಗುಟ್ಟಾಗಿ. 11ಹಬ್ಬದ ಸಮಯದಲ್ಲಿ ಯೆಹೂದ್ಯರು ಯೇಸು ಎಲ್ಲಿದ್ದಾನೆಂದು
ಹುಡುಕುತ್ತಿದ್ದರು. ಯೇಸುವನ್ನು ಕುರಿತು ಜನರಗುಂಪು ಗುಜುಗುಜು ಮಾತನಾಡುತ್ತಿತ್ತು. 12'ಆತ ಒಳ್ಳೆಯ
ವ್ಯಕ್ತಿ' ಎಂದು ಕೆಲವರು ಹೇಳಿದರೆ, 'ಇಲ್ಲ, ಆತನು ಜನರನ್ನು ಅಡ್ಡದಾರಿಗೆ ಎಳೆಯುತ್ತಿದ್ದಾನೆ,' ಎನ್ನುತ್ತಿದ್ದರು
ಇತರರು. 13ಯೆಹೂದ್ಯರಿಗೆ ಅಂಜಿ ಅವರಾರೂ ಬಹಿರಂಗವಾಗಿ ಮಾತನಾಡುತ್ತಿರಲಿಲ್ಲ. 14ಹಬ್ಬವು ಅರ್ಧಕ್ಕೆ

ಅರ್ಧ ಮುಗಿಯಿತು. ಆಗ ಯೇಸು ಮಹಾದೇವಾಲಯಕ್ಕೆ ಹೋಗಿ ಬೋಧನೆ ಮಾಡತೊಡಗಿದರು.
15ಅದನ್ನು ಕೇಳಿ ಯೆಹೂದ್ಯ ಅಧಿಕಾರಿಗಳು ಬೆರಗಾದರು. "ಕಲಿಯದಿದ್ದರೂ ಈ ಮನುಷ್ಯನಿಗೆ ಇಷ್ಟೆಲ್ಲಾ
ಪಾಂಡಿತ್ಯ ಎಲ್ಲಿಂದ ಬಂದಿತು?" ಎಂದು ವಿಚಾರಿಸತೊಡಗಿದರು.

16 ಆಗ ಯೇಸುಸ್ವಾಮಿ, "ನಾನು ಮಾಡುವ ಬೋಧನೆ ನನ್ನದಲ್ಲ; ನನ್ನನ್ನು ಕಳುಹಿಸಿದಾತನದು.
17ದೇವರ ಚಿತ್ತದಂತೆ ನಡೆಯಲು ಮನಸ್ಸು ಉಳ್ಳವನಿಗೆ, ನಾನು ಬೋಧಿಸುವುದು ದೇವರಿಂದ ಬಂದುದೋ
ಅಥವಾ ನನ್ನ ಸ್ವಂತ ಕಲ್ಪನೆಯೋ ಎಂಬುದು ತಿಳಿಯುತ್ತದೆ. 18ಸ್ವಂತ ಕಲ್ಪನೆಯಿಂದ ಮಾತನಾಡುವವನು
ತನ್ನ ಸ್ವಪ್ರತಿಷ್ಠೆಯನ್ನು ಬಯಸುತ್ತಾನೆ. ತನ್ನನ್ನು ಕಳುಹಿಸಿದಾತನ ಪ್ರತಿಷ್ಠೆಯನ್ನು ಬಯಸುವವನು
ಪ್ರಾಮಾಣಿಕನು. ಕಪಟವೆಂಬುದು ಅವನಲ್ಲಿ ಇರದು. 19ಮೋಶೆ ಕೊಟ್ಟ ಧರ್ಮಶಾಸ್ತ್ರ ನಿಮಗಿದೆಯಲ್ಲವೇ,
ಆದರೂ ಅದಕ್ಕೆ ಸರಿಯಾಗಿ ನಡೆಯುವವರಾರೂ ನಿಮ್ಮಲ್ಲಿ ಇಲ್ಲ. ನನ್ನನ್ನು ಕೊಲ್ಲಬೇಕೆಂದು ನೀವು
ಹವಣಿಸುವುದೇಕೆ?" ಎಂದರು. 20ಅದಕ್ಕೆ ಆ ಜನರು, "ನಿನಗೆ ದೆವ್ವ ಹಿಡಿದಿರಬೇಕು; ನಿನ್ನನ್ನು ಕೊಲ್ಲಲು
ಹವಣಿಸುತ್ತಿರುವವರಾದರು ಯಾರು?" ಎಂದರು. 21ಯೇಸು ಅವರಿಗೆ, "ಸಬ್ಬತ್ ದಿನ ನಾನು ಮಾಡಿದ್ದು
ಒಂದು ಸೂಚಕಕಾರ್ಯ ಮಾತ್ರ. ಅಷ್ಟಕ್ಕೇ ನೀವೆಲ್ಲರೂ ಕಂಗಾಲಾಗಿದ್ದೀರಿ. 22ಸುನ್ನತಿಯನ್ನು
ಆಚರಿಸಬೇಕೆಂದು ನಿಯಮಿಸಿದವನು ಮೋಶೆ. (ವಾಸ್ತವವಾಗಿ ಅದು ಮೋಶೆಯ ಕಾಲದಿಂದಲ್ಲ,
ಪೂರ್ವಜರ ಕಾಲದಿಂದಲೂ ರೂಢಿಯಲ್ಲಿತ್ತು). ಸಬ್ಬತ್ ದಿನದಲ್ಲಿಯೂ ನೀವು ಸುನ್ನತಿಯನ್ನು
ಮಾಡುವುದುಂಟು. 23ಮೋಶೆಯ ನಿಯಮವನ್ನು ಉಲ್ಲಂಘಿಸದೆ ನೀವು ಸಬ್ಬತ್‌ದಿನದಲ್ಲಿ ಒಬ್ಬನಿಗೆ ಸುನ್ನತಿ
ಮಾಡಬಹುದಾದರೆ ಅದೇ ಸಬ್ಬತ್‌ದಿನದಲ್ಲಿ ನಾನು ಒಬ್ಬ ಮನುಷ್ಯನನ್ನು ಸಂಪೂರ್ಣ ಸ್ವಸ್ಥಪಡಿಸಿದ್ದಕ್ಕೆ ನೀವು
ಸಿಟ್ಟಾಗಬೇಕೆ? 24ಬರೀ ತೋರಿಕೆಯಿಂದ ತೀರ್ಪು ಕೊಡುವುದು ಸಲ್ಲದು; ನಿಮ್ಮ ತೀರ್ಪು
ನ್ಯಾಯಬದ್ಧವಾಗಿರಬೇಕು," ಎಂದು ಹೇಳಿದರು.

## ಯೇಸು ಲೋಕೋದ್ಧಾರಕನೇ?

25 ಜೆರುಸಲೇಮಿನ ಕೆಲವು ಮಂದಿ ಇದನ್ನು ಕೇಳಿ, "ಅವರು ಕೊಲ್ಲಬೇಕೆಂದು ಹವಣಿಸುತ್ತಾ
ಇರುವುದು ಈತನನ್ನೇ ಅಲ್ಲವೆ? 26ಇಗೋ, ಈತ ಬಹಿರಂಗವಾಗಿ ಮಾತನಾಡುತ್ತಿದ್ದಾನೆ. ಆದರೂ ಈತನಿಗೆ
ವಿರುದ್ಧವಾಗಿ ಅವರಾರೂ ಮಾತೆತ್ತುತ್ತಿಲ್ಲ! ಈತನೇ ಲೋಕೋದ್ಧಾರಕನೆಂದು ಆ ಮುಖಂಡರಿಗೆ
ಹೊಳೆದಿರಬಹುದೆ? 27ಲೋಕೋದ್ಧಾರಕನು ಕಾಣಿಸಿಕೊಳ್ಳುವಾಗ ಆತನು ಎಲ್ಲಿಂದ ಬಂದನೆಂದು ಯಾರಿಗೂ
ತಿಳಿದಿರುವುದಿಲ್ಲ. ಆದರೆ ಈತನು ಎಲ್ಲಿಂದ ಬಂದವನೆಂದು ನಮ್ಮೆಲ್ಲರಿಗೂ ತಿಳಿದಿದೆಯಲ್ಲಾ!" ಎಂದು
ತಮ್ಮತಮ್ಮೊಳಗೆ ಮಾತನಾಡಿಕೊಂಡರು. 28ಆದುದರಿಂದ ದೇವಾಲಯದಲ್ಲಿ ಬೋಧಿಸುತ್ತಿದ್ದ ಯೇಸುಸ್ವಾಮಿ
ಆಗ ಗಟ್ಟಿಯಾಗಿ ಇಂತೆಂದರು: "ನಾನು ಯಾರೆಂದು, ಎಲ್ಲಿಂದ ಬಂದವನೆಂದು ನೀವು ಬಲ್ಲಿರೋ? ನಾನು
ನನ್ನಷ್ಟಕ್ಕೇ ಬಂದವನಲ್ಲ; ನನ್ನನ್ನು ಕಳುಹಿಸಿದಾತನು ಸತ್ಯಸ್ವರೂಪಿ. ಆತನನ್ನು ನೀವು ಅರಿತಿಲ್ಲ.
29ನಾನಾದರೋ ಆತನನ್ನು ಅರಿತಿದ್ದೇನೆ. ಏಕೆಂದರೆ, ನಾನು ಬಂದುದು ಆತನಿಂದಲೇ. ಆತನೇ ನನ್ನನ್ನು
ಕಳುಹಿಸಿದ್ದು," 30ಇದನ್ನು ಕೇಳಿದ ಯೆಹೂದ್ಯರು ಯೇಸುವನ್ನು ಹಿಡಿದು ಬಂಧಿಸಲು ಪ್ರಯತ್ನಿಸಿದರು. ಆದರೆ
ಅವರ ಗಳಿಗೆ ಇನ್ನೂ ಬಾರದೆ ಇದ್ದ ಕಾರಣ ಯಾರೂ ಅವರ ಮೇಲೆ ಕೈಹಾಕಲಿಲ್ಲ. 31ಅಲ್ಲಿ ನೆರೆದಿದ್ದ
ಹಲವರಿಗೆ ಯೇಸುವಿನಲ್ಲಿ ನಂಬಿಕೆ ಹುಟ್ಟಿತು. "ಲೋಕೋದ್ಧಾರಕ ಬಂದಾಗ ಈತನು ಮಾಡಿದ್ದಕ್ಕೂ
ಮಿಗಿಲಾದ ಸೂಚಕಕಾರ್ಯಗಳನ್ನು ಮಾಡಿಯಾನೆ?" ಎಂದುಕೊಂಡರು.

## ಯೇಸುವನ್ನು ಬಂಧಿಸಲು ಸಂಚು

32 ಯೇಸುಸ್ವಾಮಿಯನ್ನು ಕುರಿತು ಜನರು ಹೀಗೆ ಆಡುತ್ತಿದ್ದ ಗುಸುಗುಸು ಮಾತು ಫರಿಸಾಯರ
ಕಿವಿಗೆ ಮುಟ್ಟಿತು. ಅವರೂ ಮುಖ್ಯಯಾಜಕರೂ ಯೇಸುವನ್ನು ಬಂಧಿಸಲು ಕಾವಲಾಳುಗಳನ್ನು
ಕಳುಹಿಸಿದರು. 33ಆಗ ಯೇಸು, "ಇನ್ನು ತುಸುಕಾಲ ಮಾತ್ರ ನಾನು ನಿಮ್ಮೊಡನೆ ಇರುತ್ತೇನೆ. ಅನಂತರ
ನನ್ನನ್ನು ಕಳುಹಿಸಿದಾತನ ಬಳಿಗೆ ಹೊರಟು ಹೋಗುತ್ತೇನೆ. 34ಆಗ ನೀವು ನನ್ನನ್ನು ಹುಡುಕುವಿರಿ. ಆದರೆ
ನಾನು ನಿಮಗೆ ಕಾಣಸಿಗುವುದಿಲ್ಲ. ನಾನು ಇರುವಲ್ಲಿಗೆ ನೀವು ಬರುವಂತೆಯೂ ಇಲ್ಲ," ಎಂದು ಹೇಳಿದರು.

35ಯೆಹೂದ್ಯ ಅಧಿಕಾರಿಗಳು, “ನಮಗೆ ಕಾಣಸಿಗದ ಹಾಗೆ ಇವನು ಎಲ್ಲಿ ಹೋಗಲಿದ್ದಾನೆ? ಗ್ರೀಕರ ನಡುವೆ
ಚದರಿ ಹೋಗಿರುವ ಯೆಹೂದ್ಯರಲ್ಲಿಗೆ ಹೋಗಿ ಅವರಿಗೆ ಬೋಧಿಸುವನೋ? 36‘ನನ್ನನ್ನು ಅರಸುವಿರಿ,
ಆದರೆ ನಾನು ನಿಮಗೆ ಕಾಣಸಿಗುವುದಿಲ್ಲ. ನಾನಿರುವಲ್ಲಿಗೆ ನೀವು ಬರುವಂತಿಲ್ಲ’ ಎಂದು ಇವನು
ಹೇಳುವುದರ ಅರ್ಥ ಏನಿರಬಹುದು?” ಎಂದು ತಮ್ಮತಮ್ಮೊಳಗೆ ಮಾತನಾಡಿಕೊಂಡರು.

### ಜೀವದಾಯಕ ಹೊನಲು

37 ಹಬ್ಬದ ಕೊನೆಯ ದಿನ ಮಹಾದಿನ ಆಗಿತ್ತು. ಅಂದು ಯೇಸುಸ್ವಾಮಿ ಅಲ್ಲಿ ನಿಂತುಕೊಂಡು,
“ಬಾಯಾರಿದವನು ನನ್ನ ಬಳಿಗೆ ಬಂದು ಕುಡಿಯಲಿ. 38ಪವಿತ್ರಗ್ರಂಥದಲ್ಲಿ ಹೇಳಿರುವಂತೆ, ‘ನನ್ನಲ್ಲಿ
ವಿಶ್ವಾಸವಿಡುವವನ ಹೃದಯದಿಂದ ಜೀವಜಲ ಹೊನಲುಹೊನಲಾಗಿ ಹರಿಯುವುದು’,” ಎಂದು ಕೂಗಿ
ಹೇಳಿದರು. 39ತಮ್ಮಲ್ಲಿ ವಿಶ್ವಾಸವಿಡುವವರು ಪಡೆಯಲಿದ್ದ ಪವಿತ್ರಾತ್ಮರನ್ನು ಕುರಿತೇ ಯೇಸು ಹೀಗೆ ಹೇಳಿದ್ದು.
ಪವಿತ್ತ ಆತ್ಮ ಇನ್ನೂ ಬಂದಿರಲಿಲ್ಲ. ಏಕೆಂದರೆ, ಯೇಸು ಇನ್ನೂ ಮೇಲೇರಿ ಮಹಿಮೆಯನ್ನು ಪಡೆದಿರಲಿಲ್ಲ.

### ಜನರಲ್ಲಿ ಭಿನ್ನಭಾವನೆ

40 ಇದನ್ನು ಕೇಳಿ ನೆರೆದಿದ್ದವರಲ್ಲಿ ಕೆಲವರು, “ಬರಬೇಕಾಗಿದ್ದ ಪ್ರವಾದಿ ಈತನೇ ಸರಿ,” ಎಂದರು.
41ಇನ್ನೂ ಕೆಲವರು, “ಈತನೇ ಲೋಕೋದ್ಧಾರಕ,” ಎಂದರು. ಮತ್ತೆ ಕೆಲವರು, “ಲೋಕೋದ್ಧಾರಕ
ಗಲಿಲೇಯದಿಂದ ಬರುವುದುಂಟೇ? 42‘ಆತ ದಾವೀದ ವಂಶಜನು; ಆತನು ಹುಟ್ಟುವುದು ದಾವೀದನ
ಊರಾದ ಬೆತ್ಲೆಹೇಮಿನಲ್ಲಿ’ ಎಂದು ಪವಿತ್ರ ಗ್ರಂಥವೇ ಹೇಳಿದೆಯಲ್ಲವೆ?” ಎಂದು ವಾದಿಸಿದರು. 43ಹೀಗೆ
ಯೇಸುವನ್ನು ಕುರಿತು ಜನರಲ್ಲಿ ಭಿನ್ನಾಭಿಪ್ರಾಯ ಉಂಟಾಯಿತು. 44ಕೆಲವರಿಗಂತೂ ಯೇಸುವನ್ನು ಹಿಡಿದು
ಬಂಧಿಸಬೇಕೆನಿಸಿತು. ಆದರೆ ಯಾರೂ ಅವರ ಮೇಲೆ ಕೈಹಾಕಲಿಲ್ಲ.

### ವಿಶ್ವಾಸವಿಹೀನ ಮುಖಂಡರು

45 ಕಾವಲಾಳುಗಳು ಹಿಂದಿರುಗಿದಾಗ, ಮುಖ್ಯಯಾಜಕರು ಮತ್ತು ಫರಿಸಾಯರು, “ಅವನನ್ನೇಕೆ
ನೀವು ಹಿಡಿದು ತರಲಿಲ್ಲ?” ಎಂದು ಕೇಳಿದರು. 46ಅವರು, “ಆತನು ಮಾತನಾಡುವಂತೆ ಯಾರೂ ಎಂದೂ
ಮಾತನಾಡಿದ್ದಿಲ್ಲ,” ಎಂದು ಉತ್ತರಿಸಿದರು. 47ಅದಕ್ಕೆ ಫರಿಸಾಯರು, “ಏನು, ನೀವು ಕೂಡ ಅವನಿಗೆ
ಮರುಳಾಗಿಬಿಟ್ಟಿರೋ? 48ನಮ್ಮ ಮುಖಂಡರಲ್ಲಾಗಲಿ, ಫರಿಸಾಯರಲ್ಲಾಗಲಿ, ಯಾರಾದರೂ ಅವನನ್ನು
ನಂಬಿದ್ದುಂಟೆ? 49ಧರ್ಮಶಾಸ್ತ್ರದ ಗಂಧವೂ ಇಲ್ಲದ ಜನಜಂಗುಳಿ ಶಾಪಗ್ರಸ್ತವಾಗಿದೆ,” ಎಂದರು. 50ಅಲ್ಲಿದ್ದ
ಫರಿಸಾಯರಲ್ಲಿ ನಿಕೊದೇಮನು ಒಬ್ಬನು. ಹಿಂದೆ ಯೇಸುವನ್ನು ಕಾಣಲು ಬಂದಿದ್ದವನು ಈತನೇ. 51ಈತನು
ಅವರಿಗೆ, “ಒಬ್ಬ ವ್ಯಕ್ತಿಯ ಹೇಳಿಕೆಯನ್ನು ಕೇಳದೆ, ಆತನು ಮಾಡಿರುವುದನ್ನು ಕಂಡುಕೊಳ್ಳದೆ, ಆತನನ್ನು
ದೋಷಿಯೆಂದು ನಿರ್ಧರಿಸುವುದು ಶಾಸ್ತ್ರಸಮ್ಮತವೇ?” ಎಂದು ಕೇಳಿದನು. 52ಅದಕ್ಕೆ ಅವರು, “ನೀನೂ
ಗಲಿಲೇಯದವನೋ? ಪವಿತ್ರಗ್ರಂಥವನ್ನು ಓದಿ ನೋಡು; ಗಲಿಲೇಯದಿಂದ ಯಾವ ಪ್ರವಾದಿಯೂ
ತಲೆಯೆತ್ತುವುದಿಲ್ಲ, ಎಂಬುದು ನಿನಗೇ ಗೊತ್ತಾಗುತ್ತದೆ,” ಎಂದು ಮರುತ್ತರ ಕೊಟ್ಟರು. 53ಬಳಿಕ ಎಲ್ಲರೂ
ತಮ್ಮತಮ್ಮ ಮನೆಗಳಿಗೆ ತೆರಳಿದರು.

### ವ್ಯಭಿಚಾರಿಣಿಗೂ ಕ್ಷಮಾಪಣೆ

**8** (ಯೇಸುಸ್ವಾಮಿ ಓಲಿವ್ ಗುಡ್ಡಕ್ಕೆ ಹೋದರು. 2ಮರುದಿನ ಮುಂಜಾನೆ ಅವರು ಮತ್ತೆ
ಮಹಾದೇವಾಲಯಕ್ಕೆ ಬಂದರು. ಜನರು ಸುತ್ತಲೂ ಬಂದು ನೆರೆಯಲು ಯೇಸು ಕುಳಿತುಕೊಂಡು
ಬೋಧಿಸತೊಡಗಿದರು.

3 ಆಗ ಧರ್ಮಶಾಸ್ತ್ರಿಗಳೂ ಫರಿಸಾಯರೂ ಒಬ್ಬ ಹೆಂಗಸನ್ನು ಅಲ್ಲಿಗೆ ಕರೆತಂದರು; ಅವಳು
ವ್ಯಭಿಚಾರಮಾಡುತ್ತಿದ್ದಾಗಲೇ ಸಿಕ್ಕಿಬಿದ್ದಿದ್ದಳು. 4ಅವಳನ್ನು ಎಲ್ಲರ ಮುಂದೆ ನಿಲ್ಲಿಸಿ, "ಬೋಧಕರೇ, ಈ
ಹೆಂಗಸು ವ್ಯಭಿಚಾರಮಾಡುತ್ತಿದ್ದಾಗಲೇ ಸಿಕ್ಕಿಬಿದ್ದಳು. 5ಇಂಥವರನ್ನು ಕಲ್ಲೆಸೆದು ಕೊಲ್ಲಬೇಕೆಂದು ಮೋಶೆಯೇ
ಧರ್ಮಶಾಸ್ತ್ರದಲ್ಲಿ ವಿಧಿಸಿದ್ದಾನೆ. ಈ ಕುರಿತು ನಿಮ್ಮ ಅಭಿಪ್ರಾಯವೇನು?" ಎಂದು ಪ್ರಶ್ನಿಸಿದರು.
6ಯೇಸುವನ್ನು ಮಾತಿನಲ್ಲಿ ಸಿಕ್ಕಿಸಿ ಅವರ ಮೇಲೆ ತಪ್ಪುಹೊರಿಸಬೇಕೆಂಬುದೇ ಅವರ ಉದ್ದೇಶವಾಗಿತ್ತು.
ಯೇಸುವಾದರೋ ಬಗ್ಗಿಕೊಂಡು ಬೆರಳಿನಿಂದ ಮರಳ ಮೇಲೆ ಏನನ್ನೋ ಬರೆಯುತ್ತಾ ಕುಳಿತರು.
ಬಂದವರಾದರೋ ಮೇಲಿಂದ ಮೇಲೆ ಪ್ರಶ್ನೆಹಾಕುತ್ತಲೇ ಇದ್ದರು. 7ಆಗ ಯೇಸು ನೆಟ್ಟಗೆ ಕುಳಿತು, "ನಿಮ್ಮಲ್ಲಿ
ಪಾಪ ಮಾಡದವನು ಯಾವನೋ ಅಂಥವನು ಇವಳ ಮೇಲೆ ಮೊದಲನೆಯ ಕಲ್ಲು ಬೀರಲಿ," ಎಂದು
ಹೇಳಿ, 8ಪುನಃ ಬಗ್ಗಿಕೊಂಡು ನೆಲದ ಮೇಲೆ ಬರೆಯತೊಡಗಿದರು. 9ಇದನ್ನು ಕೇಳಿದ್ದೇ ಹಿರಿಯರಿಂದ
ಹಿಡಿದು ಅವರೆಲ್ಲರೂ ಒಬ್ಬೊಬ್ಬರಾಗಿ ಅಲ್ಲಿಂದ ಕಾಲುಕಿತ್ತರು. ಕೊನೆಗೆ ಅಲ್ಲಿ ಉಳಿದವರೆಂದರೆ, ಯೇಸು
ಮತ್ತು ನಿಂತುಕೊಂಡಿದ್ದ ಆ ಹೆಂಗಸು. 10ಆಗ ಯೇಸು ತಲೆಯೆತ್ತಿ, "ತಾಯಿ, ಅವರೆಲ್ಲಾ ಎಲ್ಲಿ? ನಿನಗೆ
ಯಾರೂ ಶಿಕ್ಷೆ ವಿಧಿಸಲಿಲ್ಲವೆ?" ಎಂದು ಕೇಳಿದರು. 11ಅವಳು "ಇಲ್ಲ, ಸ್ವಾಮಿ," ಎಂದಳು. ಯೇಸು ಅವಳಿಗೆ,
"ನಾನೂ ನಿನಗೆ ಶಿಕ್ಷೆವಿಧಿಸುವುದಿಲ್ಲ, ಹೋಗು; ಇನ್ನು ಮೇಲೆ ಪಾಪಮಾಡಬೇಡ," ಎಂದರು).

**ಲೋಕಕ್ಕೆ ಬೆಳಕು**

12 ಬಳಿಕ ಯೇಸುಸ್ವಾಮಿ ಜನರನ್ನು ಮತ್ತೊಮ್ಮೆ ಕಂಡು ಹೀಗೆಂದರು: "ನಾನೇ ಜಗಜ್ಯೋತಿ,
ನನ್ನನ್ನು ಹಿಂಬಾಲಿಸುವವನು ಕತ್ತಲಲ್ಲಿ ನಡೆಯುವುದಿಲ್ಲ. ಜೀವದಾಯಕ ಜ್ಯೋತಿ ಅವನಲ್ಲಿರುತ್ತದೆ." 13ಅದಕ್ಕೆ
ಫರಿಸಾಯರು, "ಈಗ ನೀನು ನಿನ್ನ ಪರವಾಗಿಯೇ ಸಾಕ್ಷಿ ನೀಡುತ್ತಿರುವೆ, ಅಂಥ ಸಾಕ್ಷಿಗೆ ಬೆಲೆಯಿಲ್ಲ,"
ಎಂದರು. 14ಅದಕ್ಕೆ ಯೇಸು, "ನಾನೇ ನನ್ನ ಪರವಾಗಿ ಸಾಕ್ಷಿ ನೀಡಿದರೂ ನನ್ನ ಸಾಕ್ಷಿಗೆ ಬೆಲೆಯುಂಟು.
ಏಕೆಂದರೆ, ನಾನು ಎಲ್ಲಿಂದ ಬಂದೆ, ಎಲ್ಲಿಗೆ ಹೋಗುತ್ತಿರುವೆ, ಎಂದು ನನಗೆ ತಿಳಿದಿದೆ. ನಿಮಗಾದರೋ
ನಾನು 'ಬಂದುದು ಎಲ್ಲಿಂದ, ಹೋಗುವುದು ಎಲ್ಲಿಗೆ' ಎಂದು ತಿಳಿಯದು. 15ನೀವು ತೀರ್ಪುಕೊಡುವುದು
ಲೋಕದ ದೃಷ್ಟಿಯಿಂದ. ನಾನಾದರೋ ಯಾರ ಬಗ್ಗೆಯೂ ತೀರ್ಪುಕೊಡಲು ಹೋಗುವುದಿಲ್ಲ. 16ನಾನು
ತೀರ್ಪುಕೊಟ್ಟರೂ ಅದು ಯಥಾರ್ಥವಾದುದು. ಕಾರಣ, ತೀರ್ಪುಕೊಡುವವನು ನಾನೊಬ್ಬನೇ ಅಲ್ಲ;
ನನ್ನನ್ನು ಕಳುಹಿಸಿದ ಪಿತ ಸಹ ನನ್ನೊಡನೆ ಇದ್ದಾರೆ. 17ಇಬ್ಬರ ಸಾಕ್ಷ್ಯ ಒಂದೇ ಆಗಿದ್ದರೆ ಅದು ಸತ್ಯವೆಂದು
ನಿಮ್ಮ ಧರ್ಮಶಾಸ್ತ್ರದಲ್ಲಿಯೇ ಬರೆದಿದೆ. 18ನಾನು ನನ್ನ ಪರವಾಗಿ ಸಾಕ್ಷಿ ಹೇಳುತ್ತೇನೆ; ನನ್ನನ್ನು ಕಳುಹಿಸಿದ
ಪಿತ ಸಹ ನನ್ನ ಪರವಾಗಿ ಸಾಕ್ಷಿ ಹೇಳುತ್ತಾರೆ," ಎಂದು ನುಡಿದರು. 19ಅದಕ್ಕೆ ಅವರು, "ನಿನ್ನ ಪಿತನೆಲ್ಲಿ?"
ಎಂದು ಕೇಳಿದರು. ಯೇಸು, "ನೀವು ನನ್ನನ್ನು ಅರಿತಿಲ್ಲ, ನನ್ನ ಪಿತನನ್ನೂ ಅರಿತಿಲ್ಲ. ನೀವು ನನ್ನನ್ನು
ಅರಿತಿದ್ದರೆ, ನನ್ನ ಪಿತನನ್ನೂ ಅರಿಯುತ್ತಿದ್ದಿರಿ," ಎಂದರು.

20 ಮಹಾದೇವಾಲಯದೊಳಗೆ ಕಾಣಿಕೆ ಪೆಟ್ಟಿಗೆಗಳನ್ನಿಟ್ಟ ಕೋಣೆಯಲ್ಲಿ ಯೇಸು ಮಾತಾಡುತ್ತಾ
ಹೇಳಿದ ಮಾತುಗಳಿವು. ಅವರ ಗಳಿಗೆ ಇನ್ನೂ ಬಾರದಿದ್ದ ಕಾರಣ ಯಾರೂ ಅವರನ್ನು ಬಂಧಿಸಲಿಲ್ಲ.

**ನಾನು ಹೋಗುವಲ್ಲಿಗೆ ನೀವು ಬರಲಾರಿರಿ**

21 ಯೇಸುಸ್ವಾಮಿ ಪುನಃ ಅವರಿಗೆ, "ನಾನು ಹೊರಟುಹೋಗುತ್ತೇನೆ, ನೀವು ನನ್ನನ್ನು ಹುಡುಕುವಿರಿ.
ಆದರೆ ನಿಮ್ಮ ಪಾಪದಲ್ಲೇ ನೀವು ಸಾಯುವಿರಿ. ನಾನು ಹೋಗುವಲ್ಲಿಗೆ ನೀವು ಬರಲಾರಿರಿ," ಎಂದರು.
22ಅದಕ್ಕೆ ಯೆಹೂದ್ಯರು, 'ತಾನು ಹೋಗುವಲ್ಲಿಗೆ ನಮ್ಮಿಂದ ಬರಲಾಗದಂತೆ! ಹಾಗೆಂದರೆ ಆತ್ಮಹತ್ಯೆ
ಮಾಡಿಕೊಳ್ಳಬೇಕೆಂಬುದು ಇವನ ಇಂಗಿತವೆ?' ಎಂದು ಮಾತನಾಡಿಕೊಂಡರು. 23"ನೀವು
ನರಲೋಕದವರು, ನಾನು ಪರಲೋಕದವನು. ನಿಮ್ಮಂತೆ ನಾನು ಇಹಲೋಕದವನಲ್ಲ, 24ನಿಮ್ಮ ಪಾಪಗಳಲ್ಲೇ
ನೀವು ಸಾಯುವಿರೆಂದು ನಾನು ಹೇಳಿದುದು ಇದಕ್ಕಾಗಿಯೇ. 'ಇರುವಾತನೇ ನಾನು' ಎಂಬುದನ್ನು ನೀವು
ವಿಶ್ವಾಸಿಸದೆ ಹೋದರೆ ನಿಮ್ಮ ಪಾಪಗಳಲ್ಲೇ ಸಾಯುವಿರಿ," ಎಂದು ಯೇಸು ಅವರಿಗೆ ಹೇಳಿದರು. 25ಅವರು,
"ನೀನು ಯಾರು?" ಎಂದು ಪ್ರಶ್ನಿಸಿದರು. 26ಯೇಸು, "ನಾನು ಯಾರೆಂದು ನಿಮಗೆ ಮೊದಲಿನಿಂದಲೂ

ತಿಳಿಸುತ್ತಾ ಬಂದಿದ್ದೇನೆ. ನಿಮ್ಮನ್ನು ಕುರಿತು ನಾನು ಎಷ್ಟೋ ಹೇಳಿಯೇನು; ಎಷ್ಟೋ ಖಂಡಿಸಿಯೇನು. ಆದರೆ
ನನ್ನನ್ನು ಕಳುಹಿಸಿದಾತನು ಹೇಳಿದ್ದನ್ನೇ ಲೋಕಕ್ಕೆ ಸಾರುತ್ತೇನೆ. ಆತನು ಸತ್ಯಸ್ವರೂಪಿ," ಎಂದು ಹೇಳಿದರು.
27 ಯೇಸುಸ್ವಾಮಿ ತಮ್ಮ ಪಿತನನ್ನು ಕುರಿತು ಹೀಗೆನ್ನುತ್ತಿದ್ದಾರೆಂದು ಅವರು ಅರಿತುಕೊಳ್ಳಲಿಲ್ಲ.
28ಎಂದೇ ಯೇಸು ಮತ್ತೆ ಇಂತೆಂದರು: "ನರಪುತ್ರನನ್ನು ನೀವು ಮೇಲಕ್ಕೇರಿಸಿದಾಗ, 'ಇರುವಾತನೇ ನಾನು'
ಎಂದು ನಿಮಗೆ ತಿಳಿಯುವುದು. ನಾನಾಗಿಯೇ ಏನನ್ನೂ ಮಾಡುವುದಿಲ್ಲವೆಂದೂ ಪಿತನು ನನಗೆ
ಬೋಧಿಸಿದಂತೆ ನಾನು ಮಾತನಾಡುತ್ತೇನೆಂದೂ ನಿಮಗೆ ಆಗ ಅರಿವಾಗುವುದು. 29ನನ್ನನ್ನು ಕಳುಹಿಸಿದಾತನು
ನನ್ನೊಡನಿದ್ದಾನೆ. ಆತನು ಮೆಚ್ಚುವುದನ್ನೇ ನಾನು ಸತತವೂ ಮಾಡುವುದರಿಂದ ಆತನು ನನ್ನನ್ನು
ಏಕಾಕಿಯಾಗಿ ಬಿಟ್ಟಿಲ್ಲ." 30ಯೇಸುಸ್ವಾಮಿ ಹೀಗೆ ಹೇಳಿದ್ದನ್ನು ಕೇಳಿ ಹಲವರಿಗೆ ಅವರಲ್ಲಿ ನಂಬಿಕೆ ಹುಟ್ಟಿತು.

## ದಾಸ್ಯ ಮತ್ತು ಸ್ವಾತಂತ್ರ್ಯ

31 ಯೇಸುಸ್ವಾಮಿ ತಮ್ಮಲ್ಲಿ ನಂಬಿಕೆ ಇಟ್ಟಿದ್ದ ಯೆಹೂದ್ಯರಿಗೆ ಹೀಗೆಂದರು: "ನನ್ನ ಮಾತಿಗೆ ನೀವು
ಶರಣಾದರೆ ನಿಜವಾಗಿಯೂ ನೀವು ನನ್ನ ಶಿಷ್ಯರು. 32ನೀವು ಸತ್ಯವನ್ನು ಅರಿತುಕೊಳ್ಳುವಿರಿ. ಸತ್ಯವು ನಿಮಗೆ
ಸ್ವಾತಂತ್ರ್ಯ ನೀಡುವುದು." 33ಅದಕ್ಕೆ ಯೆಹೂದ್ಯರು, "ನಾವು ಅಬ್ರಹಾಮನ ವಂಶಜರು; ಯಾರಿಗೂ ಎಂದೂ
ನಾವು ದಾಸರಾಗಿಲ್ಲ. ಅಂದಮೇಲೆ ನಾವು ಸ್ವತಂತ್ರರಾಗುತ್ತೇವೆ, ಎಂದು ನೀನು ಹೇಳುವುದಾದರೂ ಹೇಗೆ?"
ಎಂದು ಪ್ರಶ್ನಿಸಿದರು. 34ಅದಕ್ಕೆ ಪ್ರತ್ಯುತ್ತರವಾಗಿ ಯೇಸು, "ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ ಕೇಳಿ:
ಪಾಪವನ್ನು ಮಾಡುವವನು ಪಾಪಕ್ಕೆ ದಾಸನೇ. 35ದಾಸನಾದವನು ಶಾಶ್ವತವಾಗಿ ಮನೆಯಲ್ಲಿ ಇರುವಂತಿಲ್ಲ.
ಶಾಶ್ವತವಾಗಿ ಇರುವವನು ಪುತ್ರನೇ. 36ಪುತ್ರನು ನಿಮಗೆ ಸ್ವಾತಂತ್ರ್ಯ ನೀಡಿದರೆ, ನೀವು ನಿಜವಾಗಿಯೂ
ಸ್ವತಂತ್ರರು. 37ನೀವು ಅಬ್ರಹಾಮನ ವಂಶಜರೆಂದು ನಾನು ಬಲ್ಲೆ. ಆದರೆ ನನ್ನ ಮಾತು ಹಿಡಿಸದ ಕಾರಣ
ನನ್ನನ್ನು ಕೊಲ್ಲಲು ಹವಣಿಸುತ್ತೀರಿ. 38ನಾನಾಡುವ ಮಾತುಗಳು ಪಿತನ ಸನ್ನಿಧಿಯಲ್ಲಿ ನಾನು ಕಂಡದ್ದನ್ನೇ
ನಿರೂಪಿಸುತ್ತವೆ. ನೀವು ಮಾಡುವ ಕಾರ್ಯಗಳೋ ನಿಮ್ಮ ತಂದೆಯಿಂದ ನೀವು ಕಲಿತದ್ದನ್ನೇ
ವ್ಯಕ್ತಪಡಿಸುತ್ತವೆ," ಎಂದರು. 39ಆಗ ಆ ಯೆಹೂದ್ಯರು, "ಅಬ್ರಹಾಮನೇ ನಮ್ಮ ತಂದೆ," ಎಂದು
ಮರುನುಡಿದರು. ಯೇಸು, "ಅಬ್ರಹಾಮನ ಮಕ್ಕಳು ನೀವಾಗಿದ್ದರೆ ಅಬ್ರಹಾಮನು ಮಾಡಿದಂತೆ ನೀವು
ಮಾಡುತ್ತಿದ್ದಿರಿ. 40ಅದಕ್ಕೆ ಬದಲಾಗಿ ದೇವರಿಂದಲೇ ತಿಳಿದ ಸತ್ಯವನ್ನು ನಿಮಗೆ ಹೇಳುತ್ತಿರುವ ನನ್ನನ್ನು
ಕೊಲ್ಲಲು ಹವಣಿಸುತ್ತಿದ್ದೀರಿ. ಅಬ್ರಹಾಮನು ಹಾಗೇನೂ ಮಾಡಲಿಲ್ಲ. 41ನೀವಾದರೋ ನಿಮಗೆ
ತಂದೆಯಾದವನು ಮಾಡಿದಂತೆ ಮಾಡುತ್ತೀರಿ," ಎಂದರು. ಅದಕ್ಕೆ ಅವರು, "ನಾವೇನು ಹಾದರಕ್ಕೆ
ಹುಟ್ಟಿದವರಲ್ಲ, ದೇವರೇ ನಮ್ಮ ತಂದೆ," ಎಂದು ಪ್ರತಿಭಟಿಸಿದರು. 42ಯೇಸು, ಅವರಿಗೆ, "ದೇವರೇ ನಿಮ್ಮ
ತಂದೆಯಾಗಿದ್ದರೆ, ನನ್ನ ಮೇಲೆ ನಿಮಗೆ ಪ್ರೀತಿಯಿರುತ್ತಿತ್ತು. ಕಾರಣ, ನಾನು ದೇವರಿಂದಲೇ ಹೊರಟು ಇಲ್ಲಿಗೆ
ಬಂದವನು. ನನ್ನಷ್ಟಕ್ಕೆ ನಾನೇ ಬರಲಿಲ್ಲ. ನನ್ನನ್ನು ಕಳುಹಿಸಿದ್ದು ದೇವರೇ. 43ನಾನು ಹೇಳುವುದು ನಿಮಗೆ
ಅರ್ಥವಾಗುವುದಿಲ್ಲ, ಏಕೆ? ನನ್ನ ಸಂದೇಶಕ್ಕೆ ಕಿವಿಗೊಡಲು ನಿಮ್ಮಿಂದಾಗದಿರುವುದೇ ಇದಕ್ಕೆ ಕಾರಣ.
44ಸೈತಾನನೇ ನಿಮಗೆ ತಂದೆ; ಆ ನಿಮ್ಮ ತಂದೆ ಮಾಡಬಯಸುವುದನ್ನು ನೀವು ಮಾಡಬಯಸುತ್ತೀರಿ; ಮೊತ್ತ
ಮೊದಲಿನಿಂದಲೂ ಅವನು ಕೊಲೆಪಾತಕ. ಸತ್ಯವೆಂಬುದೇ ಅವನಲ್ಲಿ ಇಲ್ಲದ ಕಾರಣ ಅವನು ಸತ್ಯಪರನಲ್ಲ.
ಸುಳ್ಳಾಡುವಾಗ ಅವನು ತನಗೆ ಸಹಜವಾದುದನ್ನೇ ಆಡುತ್ತಾನೆ. ಅವನು ಸುಳ್ಳುಗಾರ. ಸುಳ್ಳಿನ
ಮೂಲಪುರುಷನೇ ಅವನು. 45ನಾನು ನುಡಿಯುವುದಾದರೋ ಸತ್ಯವನ್ನೇ. ಆದುದರಿಂದಲೇ ನಿಮಗೆ ನನ್ನಲ್ಲಿ
ನಂಬಿಕೆ ಇಲ್ಲ. 46ನನ್ನಲ್ಲಿ ತಪ್ಪಿದೆಯೆಂದು ಸಮರ್ಥಿಸಬಲ್ಲವರು ನಿಮ್ಮಲ್ಲಿ ಯಾರಿದ್ದಾರೆ? ನಾನು ಸತ್ಯವನ್ನೇ
ಆಡುವುದಾದರೆ ನನ್ನನ್ನು ನೀವು ನಂಬುವುದಿಲ್ಲವೇಕೆ? 47ದೇವರ ಮಕ್ಕಳು ದೇವರ ಮಾತಿಗೆ ಕಿವಿಗೊಡುತ್ತಾರೆ.
ನೀವೋ ದೇವರ ಮಕ್ಕಳಲ್ಲ, ಆದುದರಿಂದಲೇ ಕಿವಿಗೊಡುವುದಿಲ್ಲ," ಎಂದು ನುಡಿದರು.

## ಯೇಸು ಮತ್ತು ಅಬ್ರಹಾಮ

48 ಆಗ ಯೆಹೂದ್ಯರಲ್ಲಿ ಕೆಲವರು ಯೇಸುಸ್ವಾಮಿಗೆ, "ನೀನು ಸಮಾರಿಯದವನು.
ದೆವ್ವಹಿಡಿದವನು, ಎಂದು ನಾವು ಹೇಳಿದ್ದು ಸರಿಯಾಗಿದೆ ಅಲ್ಲವೆ?" ಎಂದರು. 49ಅದಕ್ಕೆ ಯೇಸು, "ನಾನು

ದೆವ್ವಹಿಡಿದವನಲ್ಲ, ನನ್ನ ಪಿತನನ್ನು ನಾನು ಗೌರವಿಸುತ್ತೇನೆ. ನೀವಾದರೋ ನನ್ನನ್ನು ಅವಮಾನಪಡಿಸುತ್ತೀರಿ.
[50]ನನ್ನ ಘನತೆ ಗೌರವವನ್ನು ನಾನು ಅಪೇಕ್ಷಿಸುವುದಿಲ್ಲ. ಅದನ್ನು ಅಪೇಕ್ಷಿಸುವವರು ಬೇರೊಬ್ಬರಿದ್ದಾರೆ. ನನ್ನ
ಪರವಾಗಿ ತೀರ್ಮಾನ ಮಾಡುವುದೂ ಅವರೇ. [51]ನನ್ನ ಮಾತಿಗೆ ಶರಣಾಗಿ ನಡೆಯುವವನು ನಿತ್ಯಮರಣಕ್ಕೆ
ತುತ್ತಾಗನು, ಎಂದು ಸತ್ಯವಾಗಿ ನಿಮಗೆ ಹೇಳುತ್ತೇನೆ," ಎಂದರು. [52]"ನೀನು ದೆವ್ವಹಿಡಿದವನೆಂದು ಈಗ
ನಮಗೆ ಸ್ಪಷ್ಟವಾಯಿತು. ಅಬ್ರಹಾಮನು ಸತ್ತುಹೋದನು; ಪ್ರವಾದಿಗಳೂ ಸತ್ತುಹೋದರು. ಆದರೂ ನೀನು,
'ನನ್ನ ಮಾತಿಗೆ ಶರಣಾಗಿ ನಡೆಯುವವನು ಎಂದೆಂದಿಗೂ ಸಾವಿಗೆ ತುತ್ತಾಗನು,' ಎಂದು ಹೇಳುತ್ತಿರುವೆ;
[53]ನಮ್ಮ ತಂದೆ ಅಬ್ರಹಾಮನಿಗಿಂತಲೂ ನೀನು ಶ್ರೇಷ್ಠನೋ? ಆತನೂ ಸಾವಿಗೀಡಾದನು, ಪ್ರವಾದಿಗಳೂ
ಸಾವಿಗೆ ಈಡಾಗಿರುವರು; ನೀನು ಯಾರೆಂದು ನಿನ್ನ ಎಣಿಕೆ?" ಎಂದು ಆ ಯೆಹೂದ್ಯ ಅಧಿಕಾರಿಗಳು
ಕೇಳಿದರು. [54]ಯೇಸು ಪ್ರತ್ಯುತ್ತರವಾಗಿ, "ನನ್ನ ಘನತೆಗೌರವವನ್ನು ನಾನೇ ಸಾರಹೊರಟರೆ ಅದಕ್ಕೆ
ಬೆಲೆಯಿರದು. ನನ್ನ ಘನತೆಗೌರವವನ್ನು ಸಾರುವವರಾದರೋ ನನ್ನ ಪಿತನು. ಆ ಪಿತನನ್ನು ಕುರಿತೇ 'ಅವರು
ನಮ್ಮ ದೇವರು' ಎಂದು ನೀವು ಹೇಳಿಕೊಳ್ಳುತ್ತೀರಿ. [55]ಆದರೆ ಅವರ ಅರಿವು ನಿಮಗಿಲ್ಲ; ನನಗಿದೆ. ಅವರ
ಅರಿವು ನನಗಿಲ್ಲವೆಂದು ನಾನು ಹೇಳಿದೆಯಾದರೆ ನಿಮ್ಮಂತೆ ನಾನೂ ಸುಳ್ಳುಗಾರನಾಗುತ್ತೇನೆ. ಅವರ ಅರಿವು
ನನಗಿದೆ. ಅವರ ಮಾತನ್ನು ನಾನು ಪಾಲಿಸುತ್ತೇನೆ. [56]ನಿಮ್ಮ ತಂದೆ ಅಬ್ರಹಾಮನು ನನ್ನ ದಿನವನ್ನು ತಾನು
ಕಾಣುವನೆಂದು ಹಿಗ್ಗಿದನು. ಆತನು ಅದನ್ನು ಕಂಡೂ ಆಯಿತು; ಹಿಗ್ಗಿಯೂ ಆಯಿತು," ಎಂದು
ಉತ್ತರಕೊಟ್ಟರು. [57]ಯೆಹೂದ್ಯರು, "ನಿನಗಿನ್ನೂ ಐವತ್ತು ವರ್ಷವಾಗಿಲ್ಲ; ನೀನು ಅಬ್ರಹಾಮನನ್ನು
ನೋಡಿದ್ದೀಯಾ?" ಎಂದರು. [58]ಯೇಸು ಅವರಿಗೆ, "ಅಬ್ರಹಾಮನು ಹುಟ್ಟುವುದಕ್ಕೆ ಮೊದಲಿನಿಂದಲೂ
ನಾನಿದ್ದೇನೆ," ಎಂದು ಮರುನುಡಿದರು. [59]ಇದನ್ನು ಕೇಳಿದ್ದೇ ಆ ಯೆಹೂದ್ಯರು ಯೇಸುವಿನತ್ತ ಬೀರಲು
ಕಲ್ಲುಗಳನ್ನು ಎತ್ತಿಕೊಂಡರು. ಯೇಸುವಾದರೋ ಮರೆಯಾಗಿ ಮಹಾದೇವಾಲಯದಿಂದ ಹೊರಟು
ಹೋದರು.

### ಹುಟ್ಟು ಕುರುಡನಿಗೆ ದೃಷ್ಟಿದಾನ

**9** ಯೇಸುಸ್ವಾಮಿ ನಡೆದು ಹೋಗುತ್ತಿದ್ದಾಗ, ಒಬ್ಬ ಹುಟ್ಟು ಕುರುಡನನ್ನು ಕಂಡರು. [2]ಶಿಷ್ಯರು, "ಗುರುದೇವಾ,
ಇವನು ಕುರುಡನಾಗಿ ಹುಟ್ಟಬೇಕಾದರೆ ಅದಕ್ಕೆ ಯಾರ ಪಾಪ ಕಾರಣ? ಇವನದೋ ಅಥವಾ ಇವನನ್ನು
ಹೆತ್ತವರದೋ?" ಎಂದು ಕೇಳಿದರು. [3]ಅದಕ್ಕೆ ಉತ್ತರವಾಗಿ ಯೇಸು, ಇವನ ಪಾಪವಾಗಲಿ, ಇವನನ್ನು
ಹೆತ್ತವರ ಪಾಪವಾಗಲಿ ಇದಕ್ಕೆ ಕಾರಣವಲ್ಲ, ದೇವರ ಕಾರ್ಯ ಇವನಲ್ಲಿ ವ್ಯಕ್ತವಾಗುವಂತೆ ಹೀಗಾಗಿದೆ.
[4]ಹಗಲಿರುವಾಗಲೇ ನನ್ನನ್ನು ಕಳುಹಿಸಿರುವಾತನ ಕೆಲಸವನ್ನು ನಾನು ಮಾಡುತ್ತಿರಬೇಕು. ರಾತ್ರಿ ಆದಮೇಲೆ
ಯಾರೂ ಕೆಲಸಮಾಡಲಾಗದು. [5]ಜಗತ್ತಿನಲ್ಲಿ ನಾನಿರುವಾಗ ಜಗದ ಜ್ಯೋತಿ ನಾನೇ," ಎಂದು ನುಡಿದರು.
[6]ತರುವಾಯ ನೆಲದಲ್ಲಿ ಉಗುಳಿ, ಮಣ್ಣಿನ ಲೇಪಮಾಡಿ, ಅದನ್ನು ಕುರುಡನ ಕಣ್ಣಿಗೆ ಲೇಪಿಸಿ, "ನೀನು
ಶಿಲೋವಾಮಿನ ಕೊಳಕ್ಕೆ ಹೋಗಿ ತೊಳೆದುಕೋ," ಎಂದು ಹೇಳಿದರು. [7]('ಶಿಲೋವಾಮ್' ಎಂದರೆ
ಕಳುಹಿಸಲಾದವನು ಎಂದರ್ಥ). ಅದರಂತೆಯೇ ಆ ಕುರುಡನು ಹೋಗಿ ಕಣ್ಣುಗಳನ್ನು ತೊಳೆದುಕೊಂಡನು;
ಹಿಂದಿರುಗಿದಾಗ ಅವನಿಗೆ ಕಣ್ಣು ಬಂದಿತ್ತು.

8 ಅವನ ನೆರೆಯವರು ಮತ್ತು ಹಿಂದೆ ಅವನು ಭಿಕ್ಷೆಬೇಡುತ್ತಿದ್ದಾಗ ಅವನನ್ನು ನೋಡಿದ್ದವರು,
"ಭಿಕ್ಷೆಬೇಡುತ್ತಾ ಕುಳಿತುಕೊಂಡಿದ್ದವನು ಇವನೇ ಅಲ್ಲವೆ?" ಎಂದು ವಿಚಾರಿಸಿದರು. [9]"ಹೌದು ಅವನೇ,"
ಎಂದರು ಕೆಲವರು. "ಇಲ್ಲ, ಇವನು ಅವನಂತೆ ಕಾಣುತ್ತಾನೆ, ಅಷ್ಟೆ," ಎಂದರು ಇತರರು. ಆ ಕುರುಡನು
"ನಾನೇ ಅವನು" ಎಂದು ತಿಳಿಸಿದನು. [10]ಆಗ ಅವರು, "ಹಾಗಾದರೆ ನಿನಗೆ ಕಣ್ಣು ಹೇಗೆ ಬಂತು?" ಎಂದು
ಕೇಳಿದರು. [11]ಅದಕ್ಕೆ ಅವನು, "ಯೇಸು ಎಂಬುವರು ಮಣ್ಣಿನ ಲೇಪಮಾಡಿ ನನ್ನ ಕಣ್ಣಿಗೆ ಹಚ್ಚಿದರು,
'ಶಿಲೋವಾಮಿಗೆ ಹೋಗಿ ತೊಳೆದುಕೊ,' ಎಂದು ಹೇಳಿದರು; ನಾನು ಹೋಗಿ ತೊಳೆದುಕೊಂಡೆ; ನನಗೆ

ಕಣ್ಣು ಬಂತು," ಎಂದು ಹೇಳಿದನು. [12]ಅದಕ್ಕೆ ಅವರು, "ಆತ ಎಲ್ಲಿದ್ದಾನೆ?" ಎಂದು ವಿಚಾರಿಸಿದರು. ಅವನು ಉತ್ತರವಾಗಿ "ನಾನರಿಯೆ," ಎಂದನು.

## ಫರಿಸಾಯರಿಂದ ವಿಚಾರಣೆ

13 ಆಗ ಆ ಜನರು ಅವನನ್ನು ಫರಿಸಾಯರ ಬಳಿಗೆ ಕರೆದುಕೊಂಡು ಹೋದರು. [14]ಏಕೆಂದರೆ, ಯೇಸುಸ್ವಾಮಿ ಮಣ್ಣಿನ ಲೇಪವನ್ನು ಮಾಡಿ ಅವನಿಗೆ ಕಣ್ಣುಕೊಟ್ಟ ದಿನ ಸಬ್ಬತ್ ದಿನವಾಗಿತ್ತು. [15]ಕಣ್ಣು ಬಂದುದು ಹೇಗೆಂದು ಫರಿಸಾಯರು ಅವನನ್ನು ಮತ್ತೆ ಕೇಳಿದರು. "ಯೇಸು ನನ್ನ ಕಣ್ಣುಗಳಿಗೆ ಮಣ್ಣಿನ ಲೇಪವನ್ನು ಹಚ್ಚಿದರು; ನಾನು ಹೋಗಿ ಕಣ್ಣುಗಳನ್ನು ತೊಳೆದುಕೊಳ್ಳುತ್ತಲೇ ನನಗೆ ದೃಷ್ಟಿ ಬಂತು," ಎಂದನು ಅವನು. [16]ಫರಿಸಾಯರಲ್ಲಿ ಕೆಲವರು, "ಹೀಗೆ ಮಾಡಿದವನು ದೇವರಿಂದ ಬಂದವನಲ್ಲ, ಅವನು ಸಬ್ಬತ್ ನಿಯಮವನ್ನು ಪಾಲಿಸುವುದಿಲ್ಲ," ಎಂದರು. ಇತರರು, "ಪಾಪಿಯಾದವನು ಇಂಥ ಸೂಚಕಕಾರ್ಯಗಳನ್ನು ಮಾಡಲು ಸಾಧ್ಯವೇ?" ಎಂದರು. ಹೀಗೆ ಅವರಲ್ಲೇ ಭಿನ್ನಬೇಧವುಂಟಾಯಿತು. [17]ಆದ್ದರಿಂದ ಫರಿಸಾಯರು ಆ ಕುರುಡನನ್ನು ಕುರಿತು, "ಅವನೇ ನಿನಗೆ ಕಣ್ಣು ಕೊಟ್ಟನೆಂದು ಹೇಳುತ್ತೀಯಲ್ಲಾ, ಅವನ ಬಗ್ಗೆ ನಿನಗೇನು ಅನ್ನಿಸುತ್ತದೆ?" ಎಂದು ವಿಚಾರಿಸಿದರು. ಅದಕ್ಕೆ ಅವನು, "ಅವರೊಬ್ಬ ಪ್ರವಾದಿಯೇ ಸರಿ," ಎಂದನು. [18]ಆ ಕುರುಡನು ಹಿಂದೆ ನಿಜವಾಗಿಯೂ ಕುರುಡನಾಗಿದ್ದು ಈಗ ದೃಷ್ಟಿ ಪಡೆದಿದ್ದಾನೆ ಎಂದು ಯೆಹೂದ್ಯ ಅಧಿಕಾರಿಗಳು ನಂಬಲು ಒಪ್ಪಲಿಲ್ಲ. [19]ಈ ಕಾರಣ ಅವನ ಹೆತ್ತವರನ್ನು ಕರೆಯಿಸಿ, "ಇವನು ನಿಮ್ಮ ಮಗನೋ? ಇವನು ಹುಟ್ಟು ಕುರುಡನೋ? ಹಾಗಾದರೆ ಇವನಿಗೆ ಈಗ ಕಣ್ಣು ಬಂದದ್ದು ಹೇಗೆ?" ಎಂದು ಕೇಳಿದರು. [20]ಅದಕ್ಕೆ ಅವನ ತಂದೆ ತಾಯಿಗಳು, "ಇವನಿಗೆ ದೃಷ್ಟಿ ಬಂದದ್ದು ಹೇಗೆ ಎಂದು ನಮಗೆ ಗೊತ್ತಿಲ್ಲ; ಇವನಿಗೆ ಕಣ್ಣುಕೊಟ್ಟವರು ಯಾರೆಂದೂ ನಮಗೆ ತಿಳಿಯದು. [21]ಇವನನ್ನೇ ಕೇಳಿ, ಹೇಗೂ ಪ್ರಾಯದವನಾಗಿದ್ದಾನಲ್ಲವೆ? ತನ್ನ ವಿಷಯವಾಗಿ ತಾನೇ ಮಾತನಾಡಬಲ್ಲ," ಎಂದು ಉತ್ತರಿಸಿದರು. [22]ಅವರು ಹೀಗೆ ಹೇಳಿದ್ದು ಯೆಹೂದ್ಯ ಅಧಿಕಾರಿಗಳ ಅಂಜಿಕೆಯಿಂದ. ಏಕೆಂದರೆ, ಯಾರಾದರೂ ಯೇಸುವನ್ನು ಲೋಕೋದ್ಧಾರಕ ಎಂದು ಒಪ್ಪಿಕೊಂಡರೆ ಅಂಥವರಿಗೆ ಪ್ರಾರ್ಥನಾ ಮಂದಿರದಿಂದ ಬಹಿಷ್ಕಾರ ಹಾಕಬೇಕೆಂದು ಅಧಿಕಾರಿಗಳು ಈ ಮೊದಲೇ ಗೊತ್ತುಮಾಡಿದ್ದರು. [23]ಆದುದರಿಂದಲೇ, "ಅವನು ಪ್ರಾಯದವನು, ಅವನನ್ನೇ ಕೇಳಿ" ಎಂದು ಅವನ ತಂದೆತಾಯಿಗಳು ಹೇಳಿದ್ದು. [24]ಅಧಿಕಾರಿಗಳು ಆ ಹುಟ್ಟು ಕುರುಡನನ್ನು ಮತ್ತೆ ಕರೆಯಿಸಿ, "ನೀನು ದೇವರ ಮುಂದೆ ಪ್ರಮಾಣ ಮಾಡಿ ಹೇಳು. ಆ ಮನುಷ್ಯ ಪಾಪಿಯೆಂದು ನಮಗೆ ಗೊತ್ತು," ಎಂದು ಕೇಳಿದರು. [25]ಉತ್ತರವಾಗಿ ಅವನು, "ಅವರು ಪಾಪಿಯೋ, ಅಲ್ಲವೋ ನಾನರಿಯೆ; ಆದರೆ ನಾನೊಮ್ಮೆ ಕುರುಡನಾಗಿದ್ದೆ; ಈಗಲಾದರೋ ಕಣ್ಣುಕಾಣಿಸುತ್ತದೆ ಇಷ್ಟು ಮಾತ್ರ ಬಲ್ಲೆ," ಎಂದು ಹೇಳಿದನು. [26]"ಅವನು ನಿನಗೇನು ಮಾಡಿದ? ನಿನಗೆ ಹೇಗೆ ಕಣ್ಣು ಬರಿಸಿದ?" ಎಂದು ಅವರು ಮತ್ತೆ ಪ್ರಶ್ನಿಸಿದರು. [27]ಅವನು, "ನಿಮಗೆ ಆಗಲೇ ಹೇಳಿದ್ದೇನೆ. ಆದರೆ ನೀವು ನಂಬುವುದಿಲ್ಲ. ಅದನ್ನೇ ಏಕೆ ಮತ್ತೆ ಮತ್ತೆ ಕೇಳುತ್ತೀರಿ? ಅವನ ಶಿಷ್ಯರಾಗಲು ನಿಮಗೂ ಮನಸ್ಸಿದೆಯೇ?" ಎಂದನು. [28]ಆಗ ಅಧಿಕಾರಿಗಳು ಅವನನ್ನು ಶಪಿಸಿದರು. "ನೀನೇ ಅವನ ಶಿಷ್ಯ, ನಾವು ಮೋಶೆಯ ಶಿಷ್ಯರು. [29]ಮೋಶೆಯೊಡನೆ ದೇವರು ಮಾತನಾಡಿದರು ಎಂಬುದನ್ನು ನಾವು ಬಲ್ಲೆವು. ಆದರೆ ಇವನು ಎಲ್ಲಿಯವನೋ ನಾವು ಅರಿಯೆವು," ಎಂದರು. [30]ಅದಕ್ಕೆ ಆ ಕುರುಡ, "ಏನಾಶ್ಚರ್ಯ! ನನಗೆ ಕಣ್ಣು ಬರಿಸಿದ್ದಾರೆ. ಆದರೂ 'ಅವನು ಎಲ್ಲಿಯವನೋ ನಾವರಿಯೆವು' ಎನ್ನುತ್ತೀರಿ. [31]ದೇವರು ಪಾಪಿಗಳಿಗೆ ಓಗೊಡುವುದಿಲ್ಲ. ಯಾರು ಭಕ್ತಿಯಿಂದ ಅವರ ಚಿತ್ತದಂತೆ ನಡೆಯುತ್ತಾರೋ ಅವರಿಗೆ ಓಗೊಡುತ್ತಾರೆಂದು ನಮಗೆಲ್ಲಾ ಚೆನ್ನಾಗಿ ತಿಳಿದಿದೆ. [32]ಹುಟ್ಟುಕುರುಡನಿಗೆ ಯಾರಾದರೂ ಕಣ್ಣುಕೊಟ್ಟ ಸುದ್ದಿಯನ್ನು ಲೋಕ ಸೃಷ್ಟಿಯಾದಾಗಿನಿಂದ ಒಬ್ಬರೂ ಕೇಳಿಲ್ಲ. [33]ಇವರು ದೇವರಿಂದ ಬಂದವರು ಅಲ್ಲದಿದ್ದರೆ ಇಂಥದ್ದೇನನ್ನೂ ಮಾಡಲಾಗುತ್ತಿರಲಿಲ್ಲ," ಎಂದನು. [34]ಆಗ ಫರಿಸಾಯರು, "ಪಾಪದಲ್ಲೇ ಹುಟ್ಟಿ ಬೆಳೆದವನು ನೀನು. ನಮಗೇ ಬುದ್ಧಿ ಹೇಳ ಹೊರಟೆಯಾ?" ಎಂದು ಹೇಳಿ ಅವನನ್ನು ತಳ್ಳಿಬಿಟ್ಟರು.

## ಆತ್ಮದ ಅಂಧತ್ವ

35 ಹುಟ್ಟು ಕುರುಡನನ್ನು ಹೊರಗೆ ತಳ್ಳಿದ ವಾರ್ತೆ ಯೇಸುಸ್ವಾಮಿಯ ಕಿವಿಗೆ ಮುಟ್ಟಿತು. ಯೇಸು ಅವನನ್ನು ಕಂಡು, "ನರಪುತ್ರನಲ್ಲಿ ನಿನಗೆ ವಿಶ್ವಾಸವಿದೆಯೇ?" ಎಂದು ಕೇಳಿದರು. 36ಅವನು, "ಅವರು ಯಾರೆಂದು ತಿಳಿಸಿ ಸ್ವಾಮಿ, ನಾನು ವಿಶ್ವಾಸಿಸುತ್ತೇನೆ," ಎಂದನು. 37ಯೇಸು, "ನೀನು ಆತನನ್ನು ಕಂಡಿದ್ದೀಯೆ, ನಿನ್ನೊಡನೆ ಮಾತನಾಡುತ್ತಿರುವ ನಾನೇ ಆತನು," ಎಂದರು. 38"ಸ್ವಾಮಿ, ನಾನು ವಿಶ್ವಾಸಿಸುತ್ತೇನೆ," ಎಂದು ಹೇಳುತ್ತಾ ಅವನು ಯೇಸುವಿಗೆ ಅಡ್ಡಬಿದ್ದನು. 39ಆಗ ಯೇಸು, "ಕುರುಡರು ಕಾಣುವಂತೆಯೂ ಕಾಣುವವರು ಕುರುಡರಾಗುವಂತೆಯೂ ತೀರ್ಪುಕೊಡಲೆಂದೇ ನಾನು ಈ ಲೋಕಕ್ಕೆ ಬಂದುದು," ಎಂದು ನುಡಿದರು. 40ಅಲ್ಲಿ ನಿಂತಿದ್ದ ಫರಿಸಾಯರು ಈ ಮಾತನ್ನು ಕೇಳಿ, "ಹಾಗಾದರೆ ನಾವು ಕೂಡ ಕುರುಡರೋ?" ಎಂದು ಪ್ರಶ್ನಿಸಿದರು. 41ಯೇಸು, "ನೀವು ಕುರುಡರೇ ಆಗಿದ್ದರೆ ಪಾಪಿಗಳಾಗುತ್ತಿರಲಿಲ್ಲ, ಆದರೆ, 'ನಮಗೆ ಕಣ್ಣು ಕಾಣುತ್ತದೆ,' ಎಂದು ಹೇಳಿಕೊಳ್ಳುತ್ತೀರಿ; ಆದ್ದರಿಂದ ನೀವು ಪಾಪಿಗಳಾಗಿದ್ದೀರಿ," ಎಂದರು.

## ಉತ್ತಮ ಕುರಿಗಾಹಿ

**10** "ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ: ಕುರಿಹಟ್ಟಿಗೆ ಬಾಗಿಲ ಮೂಲಕ ಬರದೆ ಗೋಡೆ ಹತ್ತಿ ಬರುವವನು ಕಳ್ಳ ಹಾಗೂ ಕೊಳ್ಳೆಗಾರ. 2ಬಾಗಿಲ ಮೂಲಕ ಬರುವವನು ಕುರಿಗಾಹಿ. 3ಕಾವಲುಗಾರನು ಅವನಿಗೆ ಬಾಗಿಲು ತೆರೆಯುತ್ತಾನೆ. ಕುರಿಗಳು ಅವನ ಸ್ವರವನ್ನು ಕೇಳುತ್ತವೆ. ಅವನು ತನ್ನ ಕುರಿಗಳನ್ನು ಹೆಸರಿಟ್ಟು ಕರೆದು ಹೊರಗೆ ಬಿಡುತ್ತಾನೆ. 4ತನ್ನ ಕುರಿಗಳನ್ನೆಲ್ಲಾ ಹೊರಗೆ ಬಿಟ್ಟ ನಂತರ ಅವನು ಅವುಗಳ ಮುಂದೆ ಹೋಗುತ್ತಾನೆ. ಕುರಿಗಳು ಅವನ ಹಿಂದೆ ಹೋಗುತ್ತವೆ. ಏಕೆಂದರೆ ಅವುಗಳಿಗೆ ಅವನ ಸ್ವರ ಗೊತ್ತು. 5ಅಪರಿಚಿತನನ್ನು ಅವು ಹಿಂಬಾಲಿಸುವುದಿಲ್ಲ; ಅವನಿಂದ ದೂರ ಓಡಿಹೋಗುತ್ತವೆ. ಅಪರಿಚಿತರ ಸ್ವರವನ್ನು ಅವು ಗುರುತಿಸುವುದಿಲ್ಲ."

6 ಯೇಸುಸ್ವಾಮಿ ಹೇಳಿದ ಈ ಸಾಮತಿಯನ್ನು ಕೇಳಿದವರು ಅರ್ಥಮಾಡಿಕೊಳ್ಳಲಿಲ್ಲ.

## ಉತ್ತಮ ಕುರಿಗಾಹಿ ಯೇಸು

7 ಆದುದರಿಂದ ಯೇಸುಸ್ವಾಮಿ, "ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ: ಕುರಿಗಳಿಗೆ ನಾನೇ ಬಾಗಿಲು. 8ನನಗಿಂತ ಮೊದಲು ಬಂದವರೆಲ್ಲರು ಕಳ್ಳರು ಹಾಗೂ ಕೊಳ್ಳೆಗಾರರು, ಕುರಿಗಳು ಅವರಿಗೆ ಕಿವಿಗೊಡಲಿಲ್ಲ. 9ಹೌದು, ನಾನೇ ಬಾಗಿಲು, ನನ್ನ ಮೂಲಕ ಒಳಹೋಗುವವನು ಸುರಕ್ಷಿತನಾಗಿರುತ್ತಾನೆ. ಅವನು ಒಳಗೆ ಹೋಗುತ್ತಾನೆ, ಹೊರಗೆ ಬರುತ್ತಾನೆ; ಮೇವನ್ನು ಕಂಡುಕೊಳ್ಳುತ್ತಾನೆ. 10ಕಳ್ಳನು ಬರುವುದು ಕಳ್ಳತನಕ್ಕಾಗಿ, ಕೊಲ್ಲುವುದಕ್ಕಾಗಿ ಮತ್ತು ನಾಶಮಾಡುವುದಕ್ಕಾಗಿ ಮಾತ್ರ, ನಾನು ಬಂದದ್ದಾದರೋ ಜೀವನೀಡಲು, ಯಥೇಚ್ಛವಾಗಿ ನೀಡಲು.

11 "ನಾನೇ ಉತ್ತಮ ಕುರಿಗಾಹಿ. ಉತ್ತಮ ಕುರಿಗಾಹಿಯು ಕುರಿಗಳಿಗೋಸ್ಕರ ತನ್ನ ಪ್ರಾಣವನ್ನೇ ಕೊಡುತ್ತಾನೆ. 12ಕುರಿಗಾಹಿಯಾಗಲಿ, ಕುರಿಗಳ ಒಡೆಯನಾಗಲಿ ಅಲ್ಲದ ಕೂಲಿಯಾಳು, ತೋಳ ಬರುವುದನ್ನು ಕಂಡದ್ದೇ, ಕುರಿಗಳನ್ನು ಬಿಟ್ಟು ಓಡಿಹೋಗುತ್ತಾನೆ. ತೋಳವು ಬಂದು ಕುರಿಗಳ ಮೇಲೆ ಎರಗಿ, ಮಂದೆಯನ್ನು ಚದರಿಸುತ್ತದೆ. 13ಅವನು ಕೇವಲ ಕೂಲಿಯಾಳು; ಕುರಿಗಳ ಚಿಂತೆ ಅವನಿಗಿಲ್ಲ. 14–15ನಾನಾದರೋ ಉತ್ತಮ ಕುರಿಗಾಹಿ. ಪಿತನು ನನ್ನನ್ನು ಬಲ್ಲರು; ನಾನೂ ಪಿತನನ್ನು ಬಲ್ಲೆ. ಅಂತೆಯೇ ನಾನು ನನ್ನ ಕುರಿಗಳನ್ನು ಬಲ್ಲೆನು; ಅವು ನನ್ನನ್ನು ಬಲ್ಲವು. ಅವುಗಳಿಗೋಸ್ಕರ ನಾನು ನನ್ನ ಪ್ರಾಣವನ್ನೇ ಕೊಡುತ್ತೇನೆ. 16ಈ ಮಂದೆಗೆ ಸೇರದ ಬೇರೆ ಕುರಿಗಳೂ ನನಗಿವೆ. ಅವನ್ನೂ ನಾನು ಕರೆತರಬೇಕು. ಅವು ಸಹ ನನ್ನ ಸ್ವರಕ್ಕೆ ಕಿವಿಗೊಡುತ್ತವೆ. ಆಗ ಒಂದೇ ಕುರಿಹಿಂಡು ಆಗುವುದು. ಒಬ್ಬನೇ ಕುರಿಗಾಹಿ ಇರುವನು.

17 “ಏಕೆಂದರೆ, ನನ್ನ ಪಿತನಿಗೆ ನನ್ನಲ್ಲಿ ಪ್ರೀತಿ ಇದೆ. ನನ್ನ ಪ್ರಾಣವನ್ನು ಮರಳಿ ಪಡೆಯುವಂತೆ ನಾನದನ್ನು ಧಾರೆಯೆರೆಯುತ್ತೇನೆ. 18ನನ್ನ ಪ್ರಾಣವನ್ನು ಯಾರೂ ನನ್ನಿಂದ ಕಸಿದುಕೊಳ್ಳಲಾರರು; ನಾನಾಗಿಯೇ ಅದನ್ನು ಧಾರೆಯೆರೆಯುತ್ತೇನೆ. ಅದನ್ನು ಧಾರೆಯೆರೆಯುವ ಹಕ್ಕು ನನಗಿದೆ. ಅದನ್ನು ಪುನಃ ಪಡೆಯುವ ಹಕ್ಕು ಸಹ ನನಗಿದೆ. ಈ ಆಜ್ಞೆಯನ್ನು ನಾನು ನನ್ನ ಪಿತನಿಂದ ಪಡೆದಿದ್ದೇನೆ,” ಎಂದು ನುಡಿದರು.

19 ಈ ಮಾತುಗಳನ್ನು ಕೇಳಿದ ಯೆಹೂದ್ಯರಲ್ಲಿ ಮತ್ತೆ ವಾದವೆದ್ದಿತು. 20ಅವರಲ್ಲಿ ಹಲವರು, “ಅವನಿಗೆ ದೆವ್ವಹಿಡಿದಿದೆ; ಅವನೊಬ್ಬ ಹುಚ್ಚ, ಅವನಿಗೇಕೆ ಕಿವಿಗೊಡುತ್ತೀರಿ?” ಎಂದರು. 21ಉಳಿದವರಾದರೋ, “ಇವು ದೆವ್ವಹಿಡಿದವನ ಮಾತುಗಳೆಂದಿಗೂ ಅಲ್ಲ. ದೆವ್ವವು ಕುರುಡನಿಗೆ ಕಣ್ಣು ಕೊಡುವುದುಂಟೆ?” ಎಂದರು.

### ಪರಿತ್ಯಕ್ತರಾದ ಯೇಸು

22 ಅದು ಚಳಿಗಾಲವಾಗಿತ್ತು. ಜೆರುಸಲೇಮಿನಲ್ಲಿ ಮಹಾದೇವಾಲಯದ ಪ್ರತಿಷ್ಠಾಪನೆಯ ಹಬ್ಬಾಚರಣೆ ನಡೆಯುತ್ತಿತ್ತು. 23ಯೇಸುಸ್ವಾಮಿ ಆ ದೇವಾಲಯದ ಆವರಣದಲ್ಲಿದ್ದ ಸೊಲೋಮೋನನ ಮಂಟಪದಲ್ಲಿ ತಿರುಗಾಡುತ್ತಿದ್ದರು. 24ಯೆಹೂದ್ಯರು, ಅವರನ್ನು ಸುತ್ತುವರಿದು, “ಇನ್ನೆಷ್ಟು ಕಾಲ ನಮ್ಮನ್ನು ಸಂಶಯದಲ್ಲಿರಿಸುವೆ? ನೀನೇ ಅಭಿಷಿಕ್ತನಾದ ಲೋಕೋದ್ಧಾರಕ ಆಗಿದ್ದರೆ ನಮಗೆ ಸ್ಪಷ್ಟವಾಗಿ ಹೇಳು,” ಎಂದರು. 25ಯೇಸು ಪ್ರತ್ಯುತ್ತರವಾಗಿ, “ನಾನು ನಿಮಗೆ ಹೇಳಿಯಾಯಿತು. ಆದರೂ ನೀವು ನಂಬುತ್ತಿಲ್ಲ. ನನ್ನ ಪಿತನ ಹೆಸರಿನಲ್ಲಿ ನಾನು ಮಾಡುವ ಕಾರ್ಯಗಳೇ ನನ್ನ ಪರವಾಗಿ ಸಾಕ್ಷಿಕೊಡುತ್ತವೆ. 26ಆದರೂ ನಿಮಗೆ ನಂಬಿಕೆಯೆಂಬುದಿಲ್ಲ. ಕಾರಣ, ನೀವು ನನ್ನ ಕುರಿಗಳಲ್ಲ. 27ನನ್ನ ಕುರಿಗಳಾದರೋ ನನ್ನ ಸ್ವರವನ್ನು ಗುರುತಿಸುತ್ತವೆ. ನಾನು ಅವನ್ನು ಬಲ್ಲೆನು. ಅವು ನನ್ನನ್ನು ಹಿಂಬಾಲಿಸುತ್ತವೆ. 28ನಾನು ಅವುಗಳಿಗೆ ನಿತ್ಯ ಜೀವವನ್ನು ಕೊಡುತ್ತೇನೆ. ಅವು ಎಂದಿಗೂ ನಾಶ ಆಗುವುದಿಲ್ಲ. ನನ್ನ ಕೈಯಿಂದ ಅವನ್ನು ಯಾರೂ ಕಸಿದುಕೊಳ್ಳಲಾರರು, 29ಅವನ್ನು ನನಗೆ ಕೊಟ್ಟ ಪಿತ ಸರ್ವಶ್ರೇಷ್ಠರು. ಪಿತನ ಕೈಯಿಂದ ಅವನ್ನು ಯಾರೂ ಕಸಿದುಕೊಳ್ಳಲಾರರು. 30ನಾನೂ ಪಿತನೂ ಒಂದೇ ಆಗಿದ್ದೇವೆ,” ಎಂದರು. 31ಆಗ ಯೆಹೂದ್ಯರು, ಅವರತ್ತ ಬೀರಲು ಕಲ್ಲುಗಳನ್ನು ಆಯ್ದುಕೊಂಡರು. 32ಅದಕ್ಕೆ ಯೇಸು, “ಪಿತನ ಹೆಸರಿನಲ್ಲಿ ನಾನು ಎಷ್ಟೋ ಸತ್ಕಾರ್ಯಗಳನ್ನು ನಿಮ್ಮ ಮುಂದೆ ಮಾಡಿದ್ದೇನೆ. ಇವುಗಳಲ್ಲಿ ಯಾವುದಕ್ಕಾಗಿ ನನ್ನ ಮೇಲೆ ಕಲ್ಲೆಸೆಯಬೇಕೆಂದಿದ್ದೀರಿ?” ಎಂದರು. 33ಅದಕ್ಕೆ ಯೆಹೂದ್ಯರು, “ನಿನ್ನ ಮೇಲೆ ಕಲ್ಲೆಸೆಯುವುದು ಸತ್ಕಾರ್ಯಕ್ಕಾಗಿ ಅಲ್ಲ, ದೇವದೂಷಣೆಗಾಗಿ. ನೀನು ಮನುಷ್ಯ ಮಾತ್ರನು; ಆದರೂ ನಿನ್ನನ್ನೇ ದೇವರನ್ನಾಗಿ ಮಾಡಿಕೊಳ್ಳುತ್ತಿದೀಯೇ,” ಎಂದು ಉತ್ತರಕೊಟ್ಟರು.

34 ಆಗ ಯೇಸು, “ ‘ನೀವು ದೇವರುಗಳು’ ಎಂದು ದೇವರೇ ಹೇಳಿರುವ ಮಾತು ನಿಮ್ಮ ಧರ್ಮಶಾಸ್ತ್ರದಲ್ಲಿ ಬರೆದಿದೆಯಲ್ಲವೆ? 35ದೇವರ ವಾಕ್ಯವನ್ನು ಪಡೆದವರು ದೇವರುಗಳೇ ಎಂದು ಕರೆಯಲಾಗಿದೆ. ಹೀಗೆ ಪವಿತ್ರಗ್ರಂಥದಲ್ಲೇ ಲಿಖಿತವಾಗಿರುವುದು ನಿರರ್ಥಕವೇನೂ ಅಲ್ಲ. 36ಇಂತಿರುವಲ್ಲಿ, ಪಿತನೇ ಪ್ರತಿಷ್ಠಿಸಿ ಕಳುಹಿಸಿಕೊಟ್ಟವನಾದ ನಾನು, ‘ದೇವರ ಪುತ್ರನಾಗಿದ್ದೇನೆ’ ಎಂದು ಹೇಳಿಕೊಂಡದ್ದಕ್ಕೆ, ‘ಇವನು ದೇವದೂಷಣೆ ಮಾಡಿದ್ದಾನೆ’ ಎನ್ನುತ್ತೀರಲ್ಲಾ? 37ನಾನು ನನ್ನ ಪಿತನ ಕಾರ್ಯಗಳನ್ನು ಮಾಡದಿದ್ದರೆ ನೀವು ನನ್ನನ್ನು ನಂಬಬೇಕಾಗಿಲ್ಲ. 38ನಾನು ಹಾಗೆ ಮಾಡಿದ್ದೇ ಆದರೆ, ನನ್ನನ್ನು ನಂಬದೆ ಹೋದರೂ ನನ್ನ ಕಾರ್ಯಗಳನ್ನಾದರೂ ನಂಬಿರಿ. ಆಗ ಪಿತನು ನನ್ನಲ್ಲಿಯೂ ನಾನು ಪಿತನಲ್ಲಿಯೂ ಇರುವುದು ನಿಮಗೆ ಅರಿವಾಗುವುದು ಹಾಗೂ ಮನದಟ್ಟಾಗುವುದು,” ಎಂದರು.

39 ಮತ್ತೊಮ್ಮೆ ಯೇಸುವನ್ನು ಬಂಧಿಸಲು ಆ ಯೆಹೂದ್ಯರು ಪ್ರಯತ್ನಿಸಿದರು. ಆದರೆ ಯೇಸು ಅವರ ಕೈಯಿಂದ ತಪ್ಪಿಸಿಕೊಂಡರು.

40 ಬಳಿಕ ಯೇಸುಸ್ವಾಮಿ ಜೋರ್ಡನ್ ನದಿಯನ್ನು ದಾಟಿ ಯೊವಾನ್ನನು ಮೊತ್ತ ಮೊದಲು ಸ್ನಾನದೀಕ್ಷೆಯನ್ನು ಕೊಡುತ್ತಿದ್ದ ಸ್ಥಳಕ್ಕೆ ಬಂದು ಅಲ್ಲಿ ತಂಗಿದರು. 41ಹಲವರು ಅವರ ಬಳಿಗೆ ಬರತೊಡಗಿದರು. ‘ಯೊವಾನ್ನನು ಒಂದು ಸೂಚಕಕಾರ್ಯವನ್ನೂ ಮಾಡಲಿಲ್ಲ; ಆದರೆ ಇವರ

ವಿಷಯವಾಗಿ ಆತ ಹೇಳಿದ್ದೆಲ್ಲವೂ ನಿಜವಾಗಿದೆ' ಎಂದು ಆ ಜನರು ಮಾತನಾಡಿಕೊಳ್ಳುತ್ತಿದ್ದರು. 42ಅಲ್ಲಿ
ಹಲವರಿಗೆ ಯೇಸುವಿನಲ್ಲಿ ವಿಶ್ವಾಸ ಹುಟ್ಟಿತು.

### ಲಾಸರನ ಸಾವು

**11** ಬೆಥಾನಿಯ ಎಂಬ ಊರಿನಲ್ಲಿ ಲಾಸರ್ ಎಂಬವನು ಅಸ್ವಸ್ಥನಾಗಿದ್ದನು. ಮರಿಯ ಮತ್ತು ಅವಳ
ಸಹೋದರಿ ಮಾರ್ತ ಎಂಬವರ ಊರು ಅದೇ ಆಗಿತ್ತು. (2ಹಿಂದೊಮ್ಮೆ ಪ್ರಭುವಿನ ಪಾದಗಳಿಗೆ ಸುಗಂಧ
ತೈಲವನ್ನು ಹಚ್ಚಿ ಅವರ ಪಾದಗಳನ್ನು ತನ್ನ ತಲೆಗೂದಲಿನಿಂದ ಒರಸಿದವಳೇ ಈ ಮರಿಯ. ಅಸ್ವಸ್ಥನಾಗಿದ್ದ
ಲಾಸರನು ಇವಳ ಸಹೋದರ.) 3ಈ ಸಹೋದರಿಯರು, ಯೇಸುಸ್ವಾಮಿಗೆ, "ಪ್ರಭುವೇ, ನಿಮ್ಮ ಆಪ್ತಮಿತ್ರನು
ಅಸ್ವಸ್ಥನಾಗಿದ್ದಾನೆ," ಎಂದು ಹೇಳಿಕಳುಹಿಸಿದರು. 4ಇದನ್ನು ಕೇಳಿದ ಯೇಸು, "ಈ ಕಾಯಿಲೆ ಮರಣಕ್ಕಾಗಿ
ಬಂದುದಲ್ಲ, ದೇವರ ಮಹಿಮೆಗೋಸ್ಕರ ಬಂದಿದೆ. ಇದರ ಮೂಲಕ ದೇವರ ಪುತ್ರನಿಗೆ ಮಹಿಮೆ
ಉಂಟಾಗಲಿದೆ," ಎಂದು ನುಡಿದರು. 5ಮಾರ್ತ, ಅವಳ ಸಹೋದರಿ ಮರಿಯ ಮತ್ತು ಲಾಸರ, ಇವರು
ಯೇಸುವಿಗೆ ಅಚ್ಚುಮೆಚ್ಚಿನವರು. 6ಲಾಸರನ ಕಾಯಿಲೆಯ ಸುದ್ದಿಯನ್ನು ಕೇಳಿದ ಮೇಲೂ ಯೇಸು
ತಾವಿದ್ದಲ್ಲಿಯೇ ಇನ್ನೂ ಎರಡು ದಿನ ಉಳಿದುಕೊಂಡರು. 7ಅನಂತರ ತಮ್ಮ ಶಿಷ್ಯರಿಗೆ, "ಬನ್ನಿ, ಜುದೇಯಕ್ಕೆ
ಮರಳಿ ಹೋಗೋಣ," ಎಂದರು. 8ಆ ಶಿಷ್ಯರು, "ಗುರುದೇವಾ, ಇತ್ತೀಚೆಗೆ ತಾನೆ ಯೆಹೂದ್ಯರು ನಿಮ್ಮನ್ನು
ಕಲ್ಲಿನಿಂದ ಹೊಡೆಯಬೇಕೆಂದಿದ್ದರು. ಪುನಃ ಅಲ್ಲಿಗೇ ಹೋಗಬೇಕೆಂದಿರುವಿರಾ?" ಎಂದು ಕೇಳಿದರು.
9ಅದಕ್ಕೆ ಯೇಸು, "ಹಗಲಿಗೆ ಹನ್ನೆರಡು ತಾಸು ಉಂಟಲ್ಲವೆ? ಹಗಲಿನಲ್ಲಿ ನಡೆಯುವವನು ಎಡವಿ
ಬೀಳುವುದಿಲ್ಲ. ಏಕೆಂದರೆ ಈ ಲೋಕದ ಬೆಳಕು ಅವನಿಗೆ ಕಾಣಿಸುತ್ತದೆ. 10ಆದರೆ ರಾತ್ರಿಯಲ್ಲಿ
ನಡೆಯುವವನು ಎಡವಿ ಬೀಳುತ್ತಾನೆ. ಕಾರಣ, ಅವನಲ್ಲಿ ಬೆಳಕು ಇಲ್ಲ," ಎಂದರು. 11ಬಳಿಕ ಯೇಸು, "ನಮ್ಮ
ಮಿತ್ರನಾದ ಲಾಸರನು ನಿದ್ರೆ ಮಾಡುತ್ತಿದ್ದಾನೆ, ಅವನನ್ನು ಎಬ್ಬಿಸಲು ನಾನು ಹೋಗಬೇಕು," ಎಂದು
ನುಡಿದರು. 12ಶಿಷ್ಯರು, "ಪ್ರಭುವೇ, ಅವನು ನಿದ್ರೆ ಮಾಡುತ್ತಿರುವನಾದರೆ ಚೇತರಿಸಿಕೊಳ್ಳುತ್ತಾನೆ," ಎಂದರು.
13ಯೇಸು ಹೇಳಿದ್ದು ಅವನ ಮರಣವನ್ನು ಕುರಿತು. ಶಿಷ್ಯರಾದರೋ ಅದು ಸಾಮಾನ್ಯ ನಿದ್ರೆಯೆಂದು
ತಿಳಿದುಕೊಂಡರು. 14ಆದುದರಿಂದ ಯೇಸು ಅವರಿಗೆ ಸ್ಪಷ್ಟವಾಗಿ, "ಲಾಸರನು ಸತ್ತು ಹೋಗಿದ್ದಾನೆ; 15ನಾನು
ಅಲ್ಲಿ ಇಲ್ಲದೆ ಹೋದದ್ದು ನಿಮಗೆ ಒಳ್ಳೆಯದೇ ಆಯಿತು. ನಿಮಗೆ ನನ್ನಲ್ಲಿ ವಿಶ್ವಾಸ ಮೂಡುವಂತೆ ಇದೆಲ್ಲಾ
ನಡೆದಿದೆ. ಬನ್ನಿ, ಅವನ ಬಳಿಗೆ ಹೋಗೋಣ," ಎಂದರು. 16ಆಗ ದಿದುಮನೆಂಬ ತೋಮನು ತನ್ನ ಜೊತೆ
ಶಿಷ್ಯರಿಗೆ, "ನಾವು ಕೂಡ ಪ್ರಭುವಿನೊಡನೆ ಹೋಗಿ ಸಾಯೋಣ," ಎಂದು ಹೇಳಿದನು.

### 'ನಾನೇ ಪುನರುತ್ಥಾನ; ನಾನೇ ಜೀವ!'

17 ಯೇಸುಸ್ವಾಮಿ ಅಲ್ಲಿಗೆ ಬಂದಾಗ ಲಾಸರನನ್ನು ಸಮಾಧಿಯಲ್ಲಿ ಹೂಳಿಟ್ಟು ಆಗಾಗಲೇ ನಾಲ್ಕು
ದಿನಗಳಾಗಿದ್ದುವೆಂದು ತಿಳಿಯಿತು. 18ಬೆಥಾನಿಯ ಜೆರುಸಲೇಮಿನಿಂದ ಸುಮಾರು ಮೂರು ಕಿಲೊಮೀಟರು
ದೂರದಲ್ಲಿದೆ. 19ಅನೇಕ ಯೆಹೂದ್ಯರು ಮಾರ್ತಳನ್ನೂ ಮರಿಯಳನ್ನೂ ಕಂಡು ಅವರ ಸೋದರನ
ಮರಣಕ್ಕಾಗಿ ಸಂತಾಪ ಸೂಚಿಸಲು ಬಂದಿದ್ದರು. 20ಯೇಸು ಬರುತ್ತಿದ್ದಾರೆಂದು ಕೇಳಿದೊಡನೆ ಮಾರ್ತ
ಅವರನ್ನು ಎದುರುಗೊಳ್ಳಲು ಹೋದಳು. ಮರಿಯ ಮನೆಯಲ್ಲೇ ಇದ್ದಳು. 21ಮಾರ್ತ ಯೇಸುವನ್ನು ಕಂಡು,
'ಪ್ರಭುವೇ, ನೀವು ಇಲ್ಲಿದ್ದಿದ್ದರೆ ನನ್ನ ಸಹೋದರ ಸಾಯುತ್ತಿರಲಿಲ್ಲ. 22ಈಗಲೂ ದೇವರಲ್ಲಿ ನೀವು ಏನೇ
ಕೇಳಿಕೊಂಡರೂ ನಿಮಗವರು ನೀಡುವರೆಂದು ನಾನು ಬಲ್ಲೆ," ಎಂದಳು. 23ಯೇಸು, "ನಿನ್ನ ಸಹೋದರನು
ಜೀವಂತವಾಗಿ ಏಳುವನು," ಎಂದರು. 24"ಅವನು ಅಂತಿಮ ದಿನದ ಪುನರುತ್ಥಾನದಲ್ಲಿ ಜೀವಂತವಾಗಿ
ಏಳುವನೆಂದು ನನಗೆ ತಿಳಿದಿದೆ," ಎಂದಳು ಮಾರ್ತ. 25ಯೇಸು, ಅವಳಿಗೆ, "ಪುನರುತ್ಥಾನವೂ ಜೀವವೂ
ನಾನೇ; ನನ್ನಲ್ಲಿ ವಿಶ್ವಾಸವಿಟ್ಟವನು ಸಾವಿಗೀಡಾದರೂ ಜೀವಿಸುವನು. 26ಜೀವಿಸುವ ಪ್ರತಿಯೊಬ್ಬನೂ ನನ್ನಲ್ಲಿ
ವಿಶ್ವಾಸವಿಟ್ಟನೆಂದರೆ ಅವನೆಂದಿಗೂ ಸಾಯನು. ಇದನ್ನು ನೀನು ವಿಶ್ವಾಸಿಸುತ್ತೀಯಾ?" ಎಂದು ಕೇಳಲು

ಅವಳು, [27]“ಹೌದು ಪ್ರಭುವೇ, ನೀವೇ ಅಭಿಷಿಕ್ತರಾದ ಲೋಕೋದ್ಧಾರಕ; ದೇವರ ಪುತ್ರ; ಈ ಲೋಕಕ್ಕೆ ಬರಬೇಕಾದವರು – ಎಂದು ನಾನು ವಿಶ್ವಾಸಿಸುತ್ತೇನೆ,” ಎಂದು ಹೇಳಿದಳು.

### ಕಂಬನಿಗರೆದ ಯೇಸು

28 ಹೀಗೆ ಹೇಳಿದ ಮೇಲೆ ಅವಳು ತನ್ನ ಸೋದರಿಯನ್ನು ಕರೆಯಲು ಹೋದಳು. ಅವಳನ್ನು ಕಂಡು, “ಬೋಧಕರು ಬಂದಿದ್ದಾರೆ; ನಿನ್ನನ್ನು ಕರೆಯುತ್ತಿದ್ದಾರೆ,” ಎಂದು ಹೇಳಿದಳು. [29]ಇದನ್ನು ಕೇಳಿದ ಮರಿಯಳು ತಟ್ಟನೆ ಎದ್ದು ಯೇಸುವನ್ನು ಕಾಣಹೋದಳು. [30]ಯೇಸು ಇನ್ನೂ ಊರೊಳಗೆ ಬಂದಿರಲಿಲ್ಲ; ಮಾರ್ತ ತಮ್ಮನ್ನು ಎದುರುಗೊಂಡ ಸ್ಥಳದಲ್ಲಿಯೇ ಇದ್ದರು. [31]ಇತ್ತ ಮನೆಯಲ್ಲಿ ಮರಿಯಳನ್ನು ಸಂತೈಸಿಕೊಂಡಿದ್ದ ಯೆಹೂದ್ಯರು, ಆಕೆ ಅವಸರವಸರವಾಗಿ ಎದ್ದುಹೋಗುವುದನ್ನು ಕಂಡು ಗೋಳಿಡುವುದಕ್ಕಾಗಿಯೇ ಸಮಾಧಿಯ ಕಡೆಗೆ ಹೋಗುತ್ತಿದ್ದಾಳೆಂದು ಎಣಿಸಿ ಆಕೆಯ ಹಿಂದೆಯೇ ಹೋದರು. [32]ಮರಿಯಳು ಯೇಸುವಿನ ಬಳಿಗೆ ಬಂದಕೂಡಲೇ ಅವರ ಕಾಲಿಗೆ ಬಿದ್ದು, “ಪ್ರಭುವೇ, ನೀವು ಇಲ್ಲಿದ್ದಿದ್ದರೆ ನನ್ನ ಸಹೋದರನು ಸಾಯುತ್ತಿರಲಿಲ್ಲ,” ಎಂದಳು.

33 ಆಕೆಯ ಮತ್ತು ಆಕೆಯೊಡನೆ ಬಂದಿದ್ದ ಯೆಹೂದ್ಯರ ಗೋಳಾಟವನ್ನು ಯೇಸು ನೋಡಿದರು. ಅವರ ಮನ ಕರಗಿತು; ದುಃಖ ತುಂಬಿ ಬಂದಿತು. [34]ಯೇಸು ಅವರಿಗೆ, “ಆತನನ್ನು ಎಲ್ಲಿ ಸಮಾಧಿಮಾಡಿದ್ದೀರಿ?” ಎಂದು ಕೇಳಿದರು. ಅವರು, “ಬಂದು ನೋಡಿ ಸ್ವಾಮಿ,” ಎಂದರು. [35]ಯೇಸು ಕಣ್ಣೀರಿಟ್ಟರು. [36]ಇದನ್ನು ಕಂಡ ಯೆಹೂದ್ಯರು, “ಅವನ ಮೇಲೆ ಈತನಿಗೆಷ್ಟು ಪ್ರೀತಿಯಿತ್ತು, ನೋಡಿದಿರಾ!” ಎಂದುಕೊಂಡರು. [37]ಕೆಲವರಾದರೋ, “ಆ ಕುರುಡನಿಗೆ ಕಣ್ಣುಕೊಟ್ಟ ಈತ ಲಾಸರನು ಸಾಯದಂತೆ ಮಡಬಾರದಿತ್ತೆ?” ಎಂದರು.

### ಲಾಸರನ ಪುನರುಜ್ಜೀವನ

38 ಯೇಸುಸ್ವಾಮಿ ಮತ್ತೊಮ್ಮೆ ಮನಮರುಗಿ ಸಮಾಧಿಯ ಬಳಿಗೆ ಬಂದರು. ಅದು ಒಂದು ಗವಿಯಾಗಿತ್ತು; ಅದರ ಬಾಯಿಗೆ ಒಂದು ಕಲ್ಲನ್ನು ಮುಚ್ಚಲಾಗಿತ್ತು. [39]ಯೇಸು, “ಆ ಕಲ್ಲನ್ನು ತೆಗೆಯಿರಿ,” ಎಂದು ಆಜ್ಞಾಪಿಸಿದರು. ಮೃತನ ಸಹೋದರಿಯಾದ ಮಾರ್ತಳು, “ಪ್ರಭುವೇ, ಅವನು ಸತ್ತು ನಾಲ್ಕು ದಿನಗಳಾದವು; ಈಗಾಗಲೇ ಅವನ ದೇಹ ಕೊಳೆತು ನಾರುತ್ತಿರಬೇಕು,” ಎಂದಳು. [40]“ನಿನಗೆ ವಿಶ್ವಾಸವಿದ್ದಲ್ಲಿ ದೇವರ ಮಹಿಮೆಯನ್ನು ಕಾಣುವೆ ಎಂದು ನಾನು ಹೇಳಲಿಲ್ಲವೆ?” ಎಂದು ಮರುನುಡಿದರು ಯೇಸು. [41]ಆಗ ಕಲ್ಲನ್ನು ತೆಗೆದುಹಾಕಲಾಯಿತು. ಯೇಸು ಕಣ್ಣೆತ್ತಿ ಮೇಲಕ್ಕೆ ನೋಡಿ, “ಪಿತನೇ, ನನ್ನ ಪ್ರಾರ್ಥನೆಗೆ ನೀವು ಕಿವಿಗೊಡುತ್ತೀರಿ; ಆದುದರಿಂದ ನಾನು ನಿಮಗೆ ಕೃತಜ್ಞತೆಯನ್ನು ಸಲ್ಲಿಸುತ್ತೇನೆ. [42]ನನ್ನ ಪ್ರಾರ್ಥನೆಗೆ ನೀವು ಯಾವಾಗಲೂ ಕಿವಿಗೊಡುತ್ತೀರಿ ಎಂಬುದು ನನಗೆ ಚೆನ್ನಾಗಿ ತಿಳಿದಿದೆ. ಆದರೆ ನನ್ನನ್ನು ಕಳುಹಿಸಿದಾತ ನೀವೇ ಎಂದು ಸುತ್ತಲೂ ನೆರೆದಿರುವವರು ನಂಬುವಂತೆ ನಾನು ಹೀಗೆ ಹೇಳಿದೆನು,” ಎಂದು ನುಡಿದರು. [43]ಅನಂತರ ಗಟ್ಟಿಯಾದ ಧ್ವನಿಯಿಂದ, “ಲಾಸರನೇ, ಹೊರಗೆ ಬಾ,” ಎಂದು ಕೂಗಿದರು. [44]ಸತ್ತಿದ್ದವನು ಕೂಡಲೇ ಹೊರಗೆ ಬಂದನು. ಅವನ ಕೈಕಾಲುಗಳು ಶವವಸ್ತ್ರದಿಂದ ಸುತ್ತಿದ್ದವು; ಮುಖವು ಬಟ್ಟೆಯಿಂದ ಮುಚ್ಚಿತ್ತು. ಆಗ ಯೇಸು, “ಕಟ್ಟುಗಳನ್ನು ಬಿಚ್ಚಿ ಅವನನ್ನು ಹೋಗಲು ಬಿಡಿ,” ಎಂದು ಅಲ್ಲಿದ್ದವರಿಗೆ ಹೇಳಿದರು.

### ಯೇಸುವಿನ ವಿರುದ್ಧ ಹಂಚಿಕೆ

(ಮತ್ತಾ. 26.1–5; ಮಾರ್ಕ 14.1–2; ಲೂಕ 22.1–2)

45 ಮರಿಯಳನ್ನು ನೋಡಲು ಬಂದಿದ್ದ ಹಲವು ಮಂದಿ ಯೆಹೂದ್ಯರು ನಡೆದ ಸಂಗತಿಯನ್ನು ನೋಡಿ ಯೇಸುವನ್ನು ವಿಶ್ವಾಸಿಸಿದರು. [46]ಕೆಲವರಾದರೋ ಫರಿಸಾಯರ ಬಳಿಗೆ ಹೋಗಿ ಯೇಸು ಮಾಡಿದ್ದೆಲ್ಲವನ್ನೂ ತಿಳಿಸಿದರು. [47]ಮುಖ್ಯ ಯಾಜಕರೂ ಫರಿಸಾಯರೂ ‘ನ್ಯಾಯಸಭೆ’ಯನ್ನು ಕರೆದರು. “ಈಗ ನಾವೇನು ಮಾಡೋಣ? ಈ ಮನುಷ್ಯನು ಎಷ್ಟೋ ಸೂಚಕಕಾರ್ಯಗಳನ್ನು ಮಾಡುತ್ತಾನಲ್ಲಾ;

48ಇವನನ್ನು ಹೀಗೆಯೇ ಬಿಟ್ಟರೆ ಜನರೆಲ್ಲರೂ ಇವನನ್ನೇ ನಂಬುವರು. ರೋಮನರು ಬಂದು ನಮ್ಮ ಪವಿತ್ರ
ದೇವಾಲಯವನ್ನೂ ರಾಷ್ಟ್ರವನ್ನೂ ನೆಲಸಮ ಮಾಡುವರು," ಎಂದು ವಾದಿಸಿದರು. 49ಆ ವರ್ಷ ಪ್ರಧಾನ
ಯಾಜಕನಾಗಿದ್ದ ಕಾಯಫನು, 50"ಇಡೀ ರಾಷ್ಟ್ರವೇ ನಿರ್ನಾಮವಾಗುವುದಕ್ಕಿಂತ ಜನತೆಗೋಸ್ಕರ ಒಬ್ಬನು
ಸಾಯುವುದೇ ವಿಹಿತವೆಂದು ನಿಮಗೆ ಅರ್ಥವಾಗುತ್ತಿಲ್ಲವಲ್ಲಾ," ಎಂದು ನುಡಿದನು. 51ಇದನ್ನು ಅವನು
ತಾನಾಗಿಯೇ ಹೇಳಲಿಲ್ಲ. ಆ ವರ್ಷ ಆತನು ಪ್ರಧಾನ ಯಾಜಕನಾಗಿದ್ದ ಕಾರಣ, ಯೇಸು ಜನತೆಗಾಗಿ
ಪ್ರಾಣತ್ಯಾಗ ಮಾಡಲಿದ್ದಾರೆ ಎಂದು ಹೀಗೆ ಪ್ರವಾದಿಸಿದನು. 52ಆ ಜನತೆಗಾಗಿ ಮಾತ್ರವಲ್ಲ, ಚದರಿಹೋಗಿದ್ದ
ದೇವಜನರನ್ನು ಒಂದುಗೂಡಿಸುವ ಸಲುವಾಗಿಯೂ ಪ್ರಾಣತ್ಯಾಗ ಮಾಡಲಿದ್ದಾರೆಂಬುದು ಆ ಮಾತಿನ
ಇಂಗಿತ. 53ಅಂದಿನಿಂದಲೇ ಯೆಹೂದ್ಯ ಅಧಿಕಾರಿಗಳು ಯೇಸುವನ್ನು ಕೊಲ್ಲಬೇಕೆಂದು ನಿರ್ಧಾರ
ಮಾಡಿಕೊಂಡರು. 54ಎಂದೇ ಯೇಸು ಜುದೇಯದಲ್ಲಿ ಬಹಿರಂಗವಾಗಿ ಓಡಾಡುವುದನ್ನು ಕೈಬಿಟ್ಟರು.
ಬೆಂಗಾಡಿನ ಪಕ್ಕದಲ್ಲಿದ್ದ ಪ್ರದೇಶಕ್ಕೆ ತೆರಳಿ ಎಫ್ರಯಿಮ್ ಎಂಬ ಗ್ರಾಮದಲ್ಲಿ ತಮ್ಮ ಶಿಷ್ಯರ ಸಂಗಡ ತಂಗಿದರು.
55 ಆಗ ಯೆಹೂದ್ಯರ ಪಾಸ್ಕಹಬ್ಬವು ಸಮೀಪಿಸಿತ್ತು. ಹಬ್ಬಕ್ಕೆ ಮುಂಚೆ ನಡೆಯುವ ಶುದ್ಧೀಕರಣಕ್ಕಾಗಿ
ಹಲವರು ಜೆರುಸಲೇಮಿಗೆ ಗ್ರಾಮಾಂತರ ಪ್ರದೇಶಗಳಿಂದ ಮೊದಲೇ ಬಂದಿದ್ದರು. 56ಯೇಸುವನ್ನು
ನೋಡಬೇಕೆಂಬ ಆಶೆ ಅವರಿಗಿತ್ತು. "ಆತ ಹಬ್ಬಕ್ಕೆ ಬರುತ್ತಾನೋ ಇಲ್ಲವೋ ನಿಮ್ಮ ಎಣಿಕೆ ಏನು?" ಎಂದು
ಮಹಾದೇವಾಲಯದಲ್ಲಿ ತಮ್ಮತಮ್ಮೊಳಗೆ ವಿಚಾರಿಸಿಕೊಳ್ಳುತ್ತಿದ್ದರು. 57ಯೇಸುವನ್ನು ಬಂಧಿಸುವ
ಉದ್ದೇಶದಿಂದ ಮುಖ್ಯಯಾಜಕರೂ ಫರಿಸಾಯರೂ ಆತನ ಸುಳಿವು ಯಾರಿಗಾದರೂ ಸಿಕ್ಕಿದ್ದೇ ಆದರೆ
ತಮಗೆ ತಿಳಿಸಬೇಕೆಂದು ಆಜ್ಞೆ ಹೊರಡಿಸಿದ್ದರು.

### ಯೇಸುವಿಗೆ ಅಭಿಷೇಕ

(ಮತ್ತಾ. 26.6-13; ಮಾರ್ಕ 14.3-9)

**12** ಪಾಸ್ಕಹಬ್ಬಕ್ಕೆ ಇನ್ನೂ ಆರು ದಿನಗಳಿರುವಾಗ ಯೇಸುಸ್ವಾಮಿ ಬೆಥಾನಿಯಕ್ಕೆ ಬಂದರು. ಅವರು
ಲಾಸರನನ್ನು ಸಾವಿನಿಂದ ಜೀವಕ್ಕೆ ಎಬ್ಬಿಸಿದ ಊರದು. 2ಯೇಸುವಿಗೆ ಅಲ್ಲಿ ಒಂದು ಔತಣವನ್ನು
ಏರ್ಪಡಿಸಲಾಗಿತ್ತು. ಮಾರ್ಥಳು ಬಡಿಸುತ್ತಿದ್ದಳು. ಯೇಸುವಿನೊಡನೆ ಪಂಕ್ತಿಯಲ್ಲಿ ಊಟಕ್ಕೆ ಕುಳಿತಿದ್ದವರಲ್ಲಿ
ಲಾಸರನೂ ಒಬ್ಬ. 3ಆಗ ಮರಿಯಳು ಸುಮಾರು ಅರ್ಧ ಲೀಟರಿನಷ್ಟು, ಅತ್ಯಂತ ಬೆಲೆಬಾಳುವ ಅಚ್ಚ
ಜಟಾಮಾಂಸಿ ಸುಗಂಧ ತೈಲವನ್ನು ತಂದು ಯೇಸುವಿನ ಪಾದಗಳಿಗೆ ಹಚ್ಚಿ, ತನ್ನ ತಲೆಗೂದಲಿನಿಂದ ಆ
ಪಾದಗಳನ್ನು ಒರಸಿದಳು. ತೈಲದ ಸುವಾಸನೆ ಮನೆಯಲ್ಲೆಲ್ಲಾ ಹರಡಿತು. 4ಯೇಸುವನ್ನು ಹಿಡಿದುಕೊಡಲಿದ್ದ
ಹಾಗೂ ಶಿಷ್ಯರಲ್ಲಿ ಒಬ್ಬನಾಗಿದ್ದ ಇಸ್ಕರಿಯೋತಿನ ಯೂದನು, 5"ಈ ಸುಗಂಧ ತೈಲವನ್ನು ಮುನ್ನೂರು
ದೆನಾರಿ ನಾಣ್ಯಗಳಿಗೆ ಮಾರಿ, ಬಂದ ಹಣವನ್ನು ಬಡಬಗ್ಗರಿಗೆ ಕೊಡಬಹುದಿತ್ತಲ್ಲಾ?" ಎಂದನು. 6ಬಡವರ
ಹಿತಚಿಂತನೆಯಿಂದೇನೂ ಅವನು ಹೀಗೆ ಹೇಳಲಿಲ್ಲ. ತನ್ನ ವಶದಲ್ಲಿ ಇಡಲಾಗಿದ್ದ ಹಣದ ಚೀಲದಿಂದ ಸ್ವಂತ
ಉಪಯೋಗಕ್ಕಾಗಿ ಬಳಸುತ್ತಿದ್ದ ಕಳ್ಳ ಅವನು. 7ಆಗ ಯೇಸು, "ಆಕೆಯ ಗೊಡವೆ ನಿನಗೆ ಬೇಡ. ನನ್ನ
ಶವಸಂಸ್ಕಾರದ ದಿನಕ್ಕಾಗಿ ಆಕೆ ಅದನ್ನು ಇಟ್ಟುಕೊಳ್ಳಲಿ. 8ಬಡಬಗ್ಗರು ನಿಮ್ಮ ಬಳಿಯಲ್ಲಿ ಯಾವಾಗಲೂ
ಇರುತ್ತಾರೆ. ಆದರೆ ನಾನು ಯಾವಾಗಲೂ ನಿಮ್ಮ ಬಳಿ ಇರುವುದಿಲ್ಲ," ಎಂದರು.

### ಲಾಸರನ ಕೊಲೆಗೆ ಹಂಚಿಕೆ

9 ಯೇಸುಸ್ವಾಮಿ ಅಲ್ಲಿರುವುದನ್ನು ಕೇಳಿ ಯೆಹೂದ್ಯರ ಒಂದು ದೊಡ್ಡಗುಂಪು ಬಂದಿತು.
ಯೇಸುವನ್ನು ಮಾತ್ರವಲ್ಲ, ಅವರು ಸಾವಿನಿಂದ ಜೀವಕ್ಕೆ ಎಬ್ಬಿಸಿದ ಲಾಸರನನ್ನೂ ಕಾಣಲು ಆ ಜನರು
ಅಲ್ಲಿಗೆ ಬಂದಿದ್ದರು. 10-11ಲಾಸರನ ನಿಮಿತ್ತವಾಗಿ ಅನೇಕ ಯೆಹೂದ್ಯರು ತಮ್ಮನ್ನು ಬಿಟ್ಟು ಯೇಸುವಿನಲ್ಲಿ
ನಂಬಿಕೆಯಿಟ್ಟ ಕಾರಣ ಲಾಸರನನ್ನು ಕೂಡ ಕೊಲ್ಲಬೇಕೆಂದು ಮುಖ್ಯಯಾಜಕರು ಆಲೋಚಿಸಿದರು.

## ಜೆರುಸಲೇಮಿಗೆ ರಾಜಪ್ರವೇಶ

(ಮತ್ತಾ. 21.1–11; ಮಾರ್ಕ 11.1–11; ಲೂಕ 19.28–40)

12 ಮಾರನೆಯ ದಿನ ಯೇಸುಸ್ವಾಮಿ ಜೆರುಸಲೇಮಿಗೆ ಬರುತ್ತಿದ್ದಾರೆಂಬ ಸುದ್ದಿ ಹರಡಿತು. ಹಬ್ಬಕ್ಕೆ ಬಂದು ನೆರೆದಿದ್ದ ಜನ ಸಮೂಹಕ್ಕೆ ಈ ಸುದ್ದಿ ಮುಟ್ಟಿತು. 13ಖರ್ಜೂರದ ಗರಿಗಳನ್ನು ಹಿಡಿದುಕೊಂಡು ಅವರು ಯೇಸುವನ್ನು ಎದುರುಗೊಳ್ಳಲು ಹೊರಟರು.

'ಸರ್ವೇಶ್ವರನ ನಾಮದಲ್ಲಿ ಬರುವಾತನಿಗೆ
ಜಯಜಯವಾಗಲಿ !
ಇಸ್ರಯೇಲಿನ ಅರಸನಿಗೆ ಶುಭವಾಗಲಿ!'

ಎಂದು ಘೋಷಿಸುತ್ತಾ ಅವರನ್ನು ಸ್ವಾಗತಿಸಿದರು. 14ಯೇಸು ದಾರಿಯಲ್ಲಿದ್ದ ಪ್ರಾಯದ ಹೇಸರಗತ್ತೆಯೊಂದನ್ನು ಹತ್ತಿ ಹೊರಟರು. 15ಇದನ್ನು ಕುರಿತೇ, 'ಸಿಯೋನ್ ನಗರಿಯೇ, ಅಂಜಬೇಡ. ಇಗೋ ನೋಡು; ಹೇಸರಗತ್ತೆಯನ್ನೇರಿ ಬರುತ್ತಿರುವನು ನಿನ್ನ ಅರಸನು' ಎಂದಿದೆ ಪವಿತ್ರ ಗ್ರಂಥ. 16ಇದೆಲ್ಲ ಶಿಷ್ಯರಿಗೆ ಆಗ ಅರ್ಥವಾಗಲಿಲ್ಲ. ಇದೆಲ್ಲವನ್ನೂ ಬರೆದದ್ದು ಅವರನ್ನು ಕುರಿತೇ; ಆ ಪ್ರಕಾರವೇ ನೆರವೇರಿದೆ ಎಂಬುದನ್ನು ಯೇಸು ಮಹಿಮಾಪದವಿಯನ್ನು ಪಡೆದಾದ ಮೇಲೆ ಅವರು ನೆನಪಿಗೆ ತಂದುಕೊಂಡರು. 17ಇದಲ್ಲದೆ ಯೇಸು ಲಾಸರನನ್ನು ಸಮಾಧಿಯಿಂದ ಹೊರಗೆ ಕರೆದು ಸಾವಿನಿಂದ ಜೀವಕ್ಕೆ ಎಬ್ಬಿಸಿದಾಗ ಅವರ ಸಂಗಡ ಇದ್ದವರು ನಡೆದ ವಿಷಯವನ್ನು ಇತರರಿಗೆ ಸಾರುತ್ತಿದ್ದರು. 18ಈ ಸೂಚಕಕಾರ್ಯವನ್ನು ಕೇಳಿದ್ದ ಕಾರಣದಿಂದಲೂ ಜನರು ಯೇಸುವನ್ನು ಎದುರುಗೊಳ್ಳಲು ಹೋಗಿದ್ದರು. 19ಇದನ್ನೆಲ್ಲಾ ಕಂಡ ಫರಿಸಾಯರು ತಮ್ಮ ತಮ್ಮೊಳಗೆ, "ನೋಡಿದಿರಾ? ನಮ್ಮ ಕೈಯಿಂದ ಏನೂ ಆಗಲಿಲ್ಲ. ಇಡೀ ಜಗತ್ತೇ ಅವನ ಹಿಂದೆ ಹೋಗುತ್ತಿದೆಯಲ್ಲಾ!" ಎಂದುಕೊಂಡರು.

## ಗ್ರೀಕರಿಗೂ ಯೇಸುವನ್ನು ಕಾಣುವ ಬಯಕೆ

20 ಆರಾಧನೆಗೆಂದು ಹಬ್ಬಕ್ಕೆ ಬಂದಿದ್ದವರಲ್ಲಿ ಕೆಲವರು ಗ್ರೀಕರು. 21ಇವರು ಗಲಿಲೇಯದ ಬೆತ್ಸಾಯಿದ ಎಂಬ ಊರಿನವನಾದ ಫಿಲಿಪ್ಪನ ಬಳಿ ಬಂದು, "ಅಯ್ಯಾ, ನಾವು ಯೇಸುವನ್ನು ನೋಡಬೇಕೆಂದಿದ್ದೇವೆ," ಎಂದು ಕೇಳಿಕೊಂಡರು. 22ಫಿಲಿಪ್ಪನು ಬಂದು ಅಂದ್ರೆಯನಿಗೆ ಹೇಳಿದನು. ಅವರಿಬ್ಬರೂ ಹೋಗಿ ಯೇಸುವಿಗೆ ಈ ವಿಷಯವನ್ನು ತಿಳಿಸಿದರು. 23ಅದಕ್ಕೆ ಯೇಸು, "ನರಪುತ್ರನು ಮಹಿಮೆಯನ್ನು ಹೊಂದುವ ಗಳಿಗೆ ಬಂದಿದೆ. 24ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ: ಗೋದಿಯ ಕಾಳು ಭೂಮಿಯಲ್ಲಿ ಬಿದ್ದು ಸಾಯದಿದ್ದರೆ ಅದು ಒಂಟಿಯಾಗಿ ಉಳಿಯುತ್ತದೆ; ಅದು ಸತ್ತರೆ ಮಾತ್ರ ಸಮೃದ್ಧಿಯಾದ ಫಲವನ್ನು ಕೊಡುತ್ತದೆ. 25ತನ್ನ ಪ್ರಾಣವನ್ನು ಪ್ರೀತಿಸುವವನು ಅದನ್ನು ಕಳೆದುಕೊಳ್ಳುತ್ತಾನೆ. ತನ್ನ ಪ್ರಾಣವನ್ನು ಈ ಲೋಕದಲ್ಲಿ ದ್ವೇಷಿಸುವವನು ಅದನ್ನು ನಿತ್ಯ ಜೀವಕ್ಕಾಗಿ ಕಾಯ್ದಿರಿಸಿಕೊಳ್ಳುತ್ತಾನೆ. 26ನನ್ನ ಸೇವೆ ಮಾಡಬೇಕೆಂದಿರುವವನು ನನ್ನನ್ನು ಹಿಂಬಾಲಿಸಲಿ. ಆಗ ನಾನಿರುವಲ್ಲಿಯೇ ನನ್ನ ಸೇವಕನೂ ಇರುತ್ತಾನೆ. ನನ್ನ ಸೇವೆ ಮಾಡುವವನು ನನ್ನ ಪಿತನಿಂದ ಸನ್ಮಾನಹೊಂದುತ್ತಾನೆ," ಎಂದರು.

27 ಯೇಸುಸ್ವಾಮಿ ತಮ್ಮ ಮಾತನ್ನು ಮುಂದುವರಿಸುತ್ತಾ, "ಈಗ ನನ್ನಾತ್ಮ ತತ್ತರಿಸುತ್ತಿದೆ. ನಾನು ಏನೆಂದು ಹೇಳಲಿ? 'ಪಿತನೇ, ಈ ಗಳಿಗೆಯಿಂದ ನನ್ನನ್ನು ಕಾಪಾಡು ಎನ್ನಲೇ?' ಇಲ್ಲ, ಅದಕ್ಕೆ ಬದಲಾಗಿ ಇದನ್ನು ಅನುಭವಿಸಲೆಂದೇ ನಾನು ಈ ಗಳಿಗೆಗೆ ಕಾಲಿಟ್ಟಿದ್ದೇನೆ. 28'ಪಿತನೇ, ನಿಮ್ಮ ನಾಮಮಹಿಮೆಯನ್ನು ಬೆಳಗಿಸಿ' " ಎಂದು ನುಡಿದರು. ಆಗ, "ಹೌದು, ಆ ಮಹಿಮೆಯನ್ನು ಬೆಳಗಿಸಿದ್ದೇನೆ, ಪುನಃ ಬೆಳಗಿಸುತ್ತೇನೆ," ಎಂಬ ಸ್ವರ್ಗೀಯ ವಾಣಿ ಕೇಳಿಸಿತು. 29ಅಲ್ಲಿ ನಿಂತುಕೊಂಡಿದ್ದ ಜನರು ಆ ವಾಣಿಯನ್ನು ಕೇಳಿ, "ಇದೇನು ಗುಡುಗಿನ ಸದ್ದು?" ಎಂದರು. ಕೆಲವರು, "ದೇವದೂತನೊಬ್ಬ ಆತನೊಡನೆ ಮಾತನಾಡಿದನು," ಎಂದರು. 30ಯೇಸುಸ್ವಾಮಿ, "ಈ ವಾಣಿಯಾದುದು ನಿಮಗಾಗಿ, ನನಗಾಗಿ ಅಲ್ಲ. 31ಈಗ ಈ ಲೋಕವು ನ್ಯಾಯತೀರ್ಪಿಗೆ ಒಳಗಾಗುವುದು. ಇದೀಗಲೇ ಈ ಲೋಕಾಧಿಪತಿಯನ್ನು ಹೊರದೂಡಲಾಗುವುದು. 32ಆದರೆ ನನ್ನನ್ನು ಭೂಮಿಯಿಂದ ಮೇಲೇರಿಸಿದಾಗ, ನಾನು ಎಲ್ಲರನ್ನೂ ನನ್ನೆಡೆಗೆ ಸೆಳೆದುಕೊಳ್ಳುತ್ತೇನೆ," ಎಂದು ನುಡಿದರು. 33ಈ ಮಾತಿನಿಂದ ತಮಗೆಂಥ ಮರಣ ಕಾದಿದೆಯೆಂದು ಸೂಚಿಸಿದರು. 34ನೆರೆದಿದ್ದ

ಜನರು ಪ್ರತ್ಯುತ್ತರವಾಗಿ, "ಅಭಿಷಿಕ್ತನಾದ ಲೋಕೋದ್ಧಾರಕ ಸದಾಕಾಲ ಇರುವನೆಂದು ಧರ್ಮಶಾಸ್ತ್ರವೇ ತಿಳಿಸುತ್ತದೆ. ಹೀಗಿರುವಲ್ಲಿ, ನರಪುತ್ರನನ್ನು ಮೇಲೇರಿಸಬೇಕಾಗಿದೆ ಎಂದು ನೀನು ಹೇಳುತ್ತೀಯಲ್ಲಾ, ಅದು ಹೇಗೆ? ಆ ನರಪುತ್ರನು ಯಾರು?" ಎಂದು ಕೇಳಿದರು. [35]ಅದಕ್ಕೆ ಯೇಸು, "ಇನ್ನು ತುಸು ಕಾಲ ಮಾತ್ರ ಜ್ಯೋತಿ ನಿಮ್ಮ ನಡುವೆ ಇರುತ್ತದೆ. ನಿಮ್ಮನ್ನು ಕತ್ತಲು ಕವಿಯದಂತೆ ಜ್ಯೋತಿಯಿರುವಾಗಲೇ ನಡೆಯಿರಿ. ಕತ್ತಲಲ್ಲಿ ನಡೆಯುವವನಿಗೆ ಗೊತ್ತುಗುರಿ ಕಾಣದು. [36]ನಿಮ್ಮೊಡನೆ ಇನ್ನೂ ಜ್ಯೋತಿ ಇರುವುದರಿಂದ ಆ ಜ್ಯೋತಿಯಲ್ಲಿ ನಂಬಿಕೆಯಿಡಿ. ಆಗ ನೀವು ಜ್ಯೋತಿಯ ಮಕ್ಕಳು ಆಗುವಿರಿ," ಎಂದರು. ಇದನ್ನು ಕೇಳಿದ ತರುವಾಯ ಯೇಸು ಅಲ್ಲಿಂದ ಹೊರಟು ಜನರ ಕಣ್ಣಿಗೆ ಬೀಳದಂತೆ ಮರೆಯಾದರು.

### ವಿಶ್ವಾಸವಿಹೀನ ಜನರು

37 ಯೇಸುಸ್ವಾಮಿ ಬಹುತೇಕ ಸೂಚಕ ಕಾರ್ಯಗಳನ್ನು ಜನರ ಕಣ್ಮುಂದೆ ಮಾಡಿದರೂ ಆ ಜನರು ಅವರನ್ನು ವಿಶ್ವಾಸಿಸದೆ ಹೋದರು. [38]ಹೀಗೆ ಯೆಶಾಯ ಪ್ರವಾದಿಯ ಈ ಮಾತು ನೆರವೇರಿತು:

"ಸರ್ವೇಶ್ವರಾ, ನಮ್ಮ ಸಂದೇಶವನ್ನು
ನಂಬಿದವರಾರು?
ದೇವರ ಶಕ್ತಿಸಾಮರ್ಥ್ಯ ಗೋಚರವಾದುದು
ಯಾರಿಗೆ?"

39 ಜನರು ವಿಶ್ವಾಸಿಸದೆ ಹೋದುದಕ್ಕೆ ಯೆಶಾಯನು ಮತ್ತೊಂದು ವಚನದಲ್ಲಿ ಕಾರಣವನ್ನು ಸೂಚಿಸಿದ್ದಾನೆ:

40 "ತಮ್ಮ ಕಣ್ಣುಗಳಿಂದ ಅವರು
ಕಾಣದಂತೆಯೂ
ತಮ್ಮ ಮನದಿಂದ ಗ್ರಹಿಸದಂತೆಯೂ ಹಾಗೂ
ಮನತಿರುಗಿ ನನ್ನಿಂದ ಗುಣಹೊಂದದಂತೆಯೂ
ಅವರ ಕಣ್ಣುಗಳನ್ನು ಕುರುಡಾಗಿಸಿರುವರು;
ಅವರ ಮನಸ್ಸನ್ನು ಕಲ್ಲಾಗಿಸಿರುವರು
ದೇವರು."

41 ಯೇಸುವಿನ ಮಹಿಮೆಯನ್ನು ಮನಗಂಡು, ಅವರನ್ನು ಕುರಿತು ಮಾತನಾಡುವಾಗ
ಯೆಶಾಯನು ಹೇಳಿದ ಮಾತುಗಳಿವು. [42]ಯೆಹೂದ್ಯರಲ್ಲಿ ಹಲವು ಮಂದಿ ಮುಖಂಡರಿಗೆ ಯೇಸುವಿನಲ್ಲಿ
ವಿಶ್ವಾಸಮೂಡಿತು. ಆದರೆ ಫರಿಸಾಯರು ಪ್ರಾರ್ಥನಾಮಂದಿರಗಳಿಂದ ತಮಗೆ ಬಹಿಷ್ಕಾರ ಹಾಕಿಯಾರೆಂಬ
ಅಂಜಿಕೆಯ ಕಾರಣ ಅವರು ತಮ್ಮ ವಿಶ್ವಾಸವನ್ನು ಬಯಲು ಮಾಡಲಿಲ್ಲ. [43]ದೇವರಿಂದ ದೊರಕುವ
ಮನ್ನಣೆಗಿಂತ ಮಾನವರಿಂದ ಸಿಗುವ ಮನ್ನಣೆಯೇ ಅವರಿಗೆ ಪ್ರಿಯವಾಗಿತ್ತು.

### ಯೇಸುವಿನ ಮಾತು ಅಂತಿಮ ತೀರ್ಪು

44 ಯೇಸುಸ್ವಾಮಿ ಗಟ್ಟಿಯಾಗಿ ಕೂಗಿ ಇಂತೆಂದರು: "ನನ್ನಲ್ಲಿ ವಿಶ್ವಾಸವಿಡುವವನು ನನ್ನಲ್ಲಿ ಅಲ್ಲ,
ನನ್ನನ್ನು ಕಳುಹಿಸಿದಾತನಲ್ಲೇ ವಿಶ್ವಾಸವಿಡುತ್ತಾನೆ. [45]ನನ್ನನ್ನು ಕಾಣುವವನು ನನ್ನನ್ನು ಕಳುಹಿಸಿದಾತನನ್ನೇ
ಕಾಣುತ್ತಾನೆ. [46]ನನ್ನಲ್ಲಿ ವಿಶ್ವಾಸವಿಡುವವನು ಅಂಧಕಾರದಲ್ಲಿ ಉಳಿಯಬಾರದೆಂದು ನಾನೇ
ಜಗಜ್ಯೋತಿಯಾಗಿ ಬಂದಿದ್ದೇನೆ. [47]ಯಾವನಾದರೂ ನನ್ನ ಮಾತನ್ನು ಕೇಳಿಯೂ ಅದರಂತೆ ನಡೆಯದೆ
ಹೋದರೆ ಅಂಥವನಿಗೆ ತೀರ್ಪುಕೊಡುವವನು ನಾನಲ್ಲ. ನಾನು ಬಂದುದು ಲೋಕದ ಉದ್ಧಾರಕ್ಕಾಗಿ,
ತೀರ್ಪು ಕೊಡುವುದಕ್ಕಾಗಿ ಅಲ್ಲ. [48]ನನ್ನನ್ನು ನಿರಾಕರಿಸಿ ನನ್ನ ಮಾತುಗಳನ್ನು ಅಂಗೀಕರಿಸದೆ ಹೋದವನಿಗೆ
ತೀರ್ಪುಕೊಡುವಂಥದ್ದು ಒಂದು ಇದೆ. [49]ಅದು ಯಾವುದೆಂದರೆ ನಾನು ಆಡಿದ ಮಾತೇ. ಅಂತಿಮ
ದಿನದಂದು ಅದೇ ಅವನಿಗೆ ತೀರ್ಪುಕೊಡುವುದು. ಏಕೆಂದರೆ, ನನ್ನಷ್ಟಕ್ಕೆ ನಾನೇ ಇದನ್ನೆಲ್ಲಾ ಮಾತನಾಡುತ್ತಿಲ್ಲ.
ನನ್ನನ್ನು ಕಳುಹಿಸಿದ ಪಿತನೇ, ನಾನು ಏನು ಹೇಳಬೇಕು, ಯಾವ ಮಾತನ್ನು ಆಡಬೇಕು ಎಂದು ನನಗೆ

ಆಜ್ಞೆ ಮಾಡಿದ್ದಾರೆ. [50]ಅವರ ಆಜ್ಞೆಯೇ ನಿತ್ಯಜೀವದಾಯಕ ಎಂದು ನಾನು ಬಲ್ಲೆ. ಆದ್ದರಿಂದಲೇ ಪಿತನು
ಹೇಳಿದಂತೆಯೇ ನಾನು ಮಾತನಾಡುತ್ತೇನೆ."

### ಶಿಷ್ಯರಿಗೆ ಪಾದಸ್ನಾನ

**13** ಅಂದು ಪಾಸ್ಕ ಹಬ್ಬದ ಹಿಂದಿನ ದಿನ. ತಾವು ಈ ಲೋಕವನ್ನು ಬಿಟ್ಟು ಪಿತನ ಬಳಿಗೆ ಹೋಗಬೇಕಾದ
ಗಳಿಗೆ ಬಂದಿರುವುದು ಎಂದು ಯೇಸುಸ್ವಾಮಿಗೆ ತಿಳಿದಿತ್ತು. ಈ ಲೋಕದಲ್ಲಿದ್ದ ತಮ್ಮವರನ್ನು ಯಾವಾಗಲೂ
ಪ್ರೀತಿಸುತ್ತಿದ್ದ ಅವರು ಆ ಪ್ರೀತಿಯ ಪರಮಾವಧಿಯನ್ನು ಈಗ ತೋರಿಸಲಿದ್ದರು. [2](ಯೇಸುವನ್ನು
ಗುರುದ್ರೋಹದಿಂದ ಹಿಡಿದುಕೊಡಬೇಕೆಂಬ ಆಲೋಚನೆಯನ್ನು ಸೈತಾನನು ಸಿಮೋನನ ಮಗ
ಇಸ್ಕರಿಯೋತಿನ ಯೂದನಲ್ಲಿ ಈಗಾಗಲೇ ಹುಟ್ಟಿಸಿದ್ದನು). [3]ಊಟಕ್ಕೆ ಎಲ್ಲರೂ ಕುಳಿತಿದ್ದರು. ಪಿತನು
ಎಲ್ಲವನ್ನೂ ತಮ್ಮ ಕೈಗೆ ಒಪ್ಪಿಸಿರುವರೆಂದೂ ತಾವು ದೇವರ ಬಳಿಯಿಂದ ಬಂದಿದ್ದು, ಈಗ ದೇವರ ಬಳಿಗೇ
ಮರಳುತ್ತಿದ್ದೇನೆಂದೂ ಯೇಸುವಿಗೆ ತಿಳಿದಿತ್ತು. [4]ಅವರು ಊಟದಿಂದ ಎದ್ದು, ತಮ್ಮ ಮೇಲುಹೊದಿಕೆಯನ್ನು
ತೆಗೆದಿಟ್ಟರು. ಅಂಗವಸ್ತ್ರವನ್ನು ಸೊಂಟಕ್ಕೆ ಕಟ್ಟಿಕೊಂಡರು. [5]ಅನಂತರ ಒಂದು ಬೋಗುಣಿಗೆ ನೀರು
ಸುರಿದುಕೊಂಡು ತಮ್ಮ ಶಿಷ್ಯರ ಕಾಲುಗಳನ್ನು ತೊಳೆಯುತ್ತಾ ತಾವು ಕಟ್ಟಿಕೊಂಡಿದ್ದ ಅಂಗವಸ್ತ್ರದಿಂದ
ಒರಸತೊಡಗಿದರು. [6]ಹೀಗೆ, ಅವರು ಸಿಮೋನ ಪೇತ್ರನ ಹತ್ತಿರಕ್ಕೆ ಬಂದಾಗ ಆತ, "ಪ್ರಭುವೇ, ನೀವು ನನ್ನ
ಕಾಲುಗಳನ್ನು ತೊಳೆಯುವುದೇ?" ಎಂದನು. [7]ಯೇಸು, "ನಾನು ಮಾಡುತ್ತಿರುವುದು ನಿನಗೆ ಈಗ
ಅರ್ಥವಾಗದು, ಮುಂದೆ ಅರ್ಥವಾಗುತ್ತದೆ," ಎಂದು ಉತ್ತರಿಸಿದರು. [8]"ನೀವು ನನ್ನ ಕಾಲುಗಳನ್ನು
ತೊಳೆಯುವುದು ಎಂದಿಗೂ ಕೂಡದು," ಎಂದು ಪೇತ್ರನು ಪ್ರತಿಭಟಿಸಿದನು. ಅದಕ್ಕೆ ಯೇಸು, "ನಾನು
ತೊಳೆಯದಿದ್ದರೆ ನಿನಗೆ ನನ್ನಲ್ಲಿ ಪಾಲು ಇಲ್ಲ," ಎಂದು ನುಡಿದರು. [9]ಆಗ ಪೇತ್ರನು, "ಹಾಗಾದರೆ ಪ್ರಭೂ,
ನನ್ನ ಕಾಲುಗಳನ್ನು ಮಾತ್ರವಲ್ಲ, ನನ್ನ ಕೈಗಳನ್ನೂ ತಲೆಯನ್ನೂ ತೊಳೆಯಿರಿ," ಎಂದನು. [10]ಯೇಸು,
"ಸ್ನಾನಮಾಡಿಕೊಂಡವನು ಕಾಲುಗಳನ್ನು ತೊಳೆದುಕೊಂಡರೆ ಸಾಕು, ಅವನ ಮೈಯೆಲ್ಲಾ ಶುದ್ಧವಾಗಿರುತ್ತದೆ.
ನೀವೂ ಕೂಡ ಶುದ್ಧರಾಗಿದ್ದೀರಿ. ಆದರೆ ನಿಮ್ಮಲ್ಲಿ ಎಲ್ಲರೂ ಶುದ್ಧರಲ್ಲ," ಎಂದು ಹೇಳಿದರು. [11]ತಮ್ಮನ್ನು
ಗುರುದ್ರೋಹದಿಂದ ಹಿಡಿದುಕೊಡುವವನು ಯಾರೆಂಬುದು ಅವರಿಗೆ ಗೊತ್ತಿತ್ತು. ಅದಕ್ಕಾಗಿಯೇ ಅವರು,
'ನಿಮ್ಮಲ್ಲಿ ಎಲ್ಲರೂ ಶುದ್ಧರಲ್ಲ,' ಎಂದು ಹೇಳಿದರು. [12]ಶಿಷ್ಯರ ಪಾದಗಳನ್ನು ತೊಳೆದ ಮೇಲೆ ಯೇಸು ತಮ್ಮ
ಮೇಲುಹೊದಿಕೆಯನ್ನು ಹಾಕಿಕೊಂಡು ಕುಳಿತುಕೊಂಡರು. ತಮ್ಮ ಶಿಷ್ಯರಿಗೆ, "ನಿಮಗೆ, ನಾನು ಮಾಡಿರುವುದು
ಏನೆಂದು ಅರ್ಥವಾಯಿತೇ? [13]'ಬೋಧಕರೇ, ಪ್ರಭುವೇ' ಎಂದು ನೀವು ನನ್ನನ್ನು ಕರೆಯುತ್ತೀರಿ; ನೀವು
ಹಾಗೆ ಹೇಳುವುದು ಸರಿಯೆ. ನಾನು ಬೋಧಕನೂ ಹೌದು, ಪ್ರಭುವೂ ಹೌದು. [14]ನಿಮಗೆ ಪ್ರಭುವೂ
ಬೋಧಕನೂ ಆಗಿರುವ ನಾನೇ ನಿಮ್ಮ ಕಾಲುಗಳನ್ನು ತೊಳೆದಿರುವಾಗ ನಿವು ಸಹ ಒಬ್ಬರ ಕಾಲುಗಳನ್ನು
ಇನ್ನೊಬ್ಬರು ತೊಳೆಯುವ ಹಂಗಿನಲ್ಲಿದ್ದೀರಿ. [15]ನಾನು ನಿಮಗೆ ಒಂದು ಆದರ್ಶವನ್ನು ಕೊಟ್ಟಿದ್ದೇನೆ. ನಾನು
ನಿಮಗೆ ಮಾಡಿದಂತೆಯೇ ನೀವೂ ಇತರರಿಗೆ ಮಾಡಿರಿ. [16]ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ: ಧಣಿಗಿಂತ
ದಾಸನು ದೊಡ್ಡವನಲ್ಲ. ಅಂತೆಯೇ ಕಳುಹಿಸಲಾದವನು ಕಳುಹಿಸುವವನಿಗಿಂತ ಶ್ರೇಷ್ಠನಲ್ಲ. [17]ಇದನ್ನೆಲ್ಲಾ
ಅರ್ಥಮಾಡಿಕೊಂಡು ಅದರಂತೆ ನಡೆದರೆ, ನೀವು ಧನ್ಯರು!

### ಉಂಡವರ ಮನೆಗೆ ಎರಡು ಬಗೆ

18 "ನಾನು ನಿಮ್ಮೆಲ್ಲರನ್ನೂ ಕುರಿತು ಹೀಗೆ ಹೇಳುತ್ತಾ ಇಲ್ಲ. ಯಾರನ್ನು ನಾನು
ಆರಿಸಿಕೊಂಡಿದ್ದೇನೆಂಬುದು ನನಗೆ ಗೊತ್ತು. ಆದರೆ 'ನನ್ನೊಡನೆ ಉಂಡವನೇ ನನಗೆ ದ್ರೋಹ ಬಗೆದನು'
ಎಂಬುದಾಗಿ ಪವಿತ್ರಗ್ರಂಥದಲ್ಲಿ ಬರೆದಿದೆ. ಆ ಮಾತು ಈಡೇರಬೇಕಾಗಿದೆ. [19]ಅದು ಈಡೇರುವಾಗ
'ಇರುವಾತನು ನಾನೇ' ಎಂದು ನೀವು ವಿಶ್ವಾಸಿಸುವಂತೆ ಅದು ಈಡೇರುವುದಕ್ಕೆ ಮುಂಚೆಯೇ ನಿಮಗೆ
ಹೇಳುತ್ತಿದ್ದೇನೆ. [20]ನಾನು ಕಳುಹಿಸಿದಾತನನ್ನು ಬರಮಾಡಿಕೊಳ್ಳುವವನು ನನ್ನನ್ನೇ ಬರಮಾಡಿಕೊಳ್ಳುತ್ತಾನೆ.

ನನ್ನನ್ನು ಬರಮಾಡಿಕೊಳ್ಳುವವನು ನನ್ನನ್ನು ಕಳುಹಿಸಿದಾತನನ್ನೇ ಬರಮಾಡಿಕೊಳ್ಳುತ್ತಾನೆಂದು ನಿಮಗೆ
ಸತ್ಯವಾಗಿ ಹೇಳುತ್ತೇನೆ," ಎಂದರು.

**ಯೂದನ ಗುರುದ್ರೋಹ**

21 ಇದೆಲ್ಲವನ್ನೂ ಹೇಳಿಯಾದ ಮೇಲೆ ಯೇಸುಸ್ವಾಮಿ ಮನಸ್ಸಿನಲ್ಲಿ ಬಹಳವಾಗಿ
ನೊಂದುಕೊಂಡರು. ಅವರು, "ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ: ನಿಮ್ಮಲ್ಲೊಬ್ಬನು ದ್ರೋಹ ಬಗೆದು
ನನ್ನನ್ನು ಹಿಡಿದೊಪ್ಪಿಸುವನು," ಎಂದು ಸ್ಪಷ್ಟವಾಗಿ ಹೇಳಿದರು. 22ಯೇಸು ಯಾರನ್ನು ಕುರಿತು
ಹಾಗೆಂದರೆಂದು ತಿಳಿಯದೆ ಶಿಷ್ಯರು ಒಬ್ಬರನ್ನೊಬ್ಬರು ಸಂಶಯದಿಂದ ನೋಡುವವರಾದರು. 23ಯೇಸುವಿನ
ಪಕ್ಕದಲ್ಲೇ ಒರಗಿ ಕುಳಿತಿದ್ದ ಅವರ ಆಪ್ತ ಶಿಷ್ಯನಿಗೆ, 24ಸಿಮೋನ ಪೇತ್ರನು, "ಯಾರನ್ನು ಕುರಿತು ಹಾಗೆ
ಹೇಳುತ್ತಿದ್ದಾರೆಂದು ಕೇಳು," ಎಂದು ಸನ್ನೆ ಮಾಡಿದನು. 25ಅಗ ಆ ಶಿಷ್ಯನು, ಯೇಸುವಿನ ಮಗ್ಗುಲಿಗೆ ಸರಿದು,
"ಅಂತವನು ಯಾರು ಪ್ರಭೂ?" ಎಂದು ಕೇಳಿದನು. 26ಯೇಸು, "ನಾನು ರೊಟ್ಟಿಯ ತುಂಡನ್ನು ಬಟ್ಟಲಿನಲ್ಲಿ
ಅದ್ದಿ ಅದನ್ನು ಯಾರಿಗೆ ಕೊಡುತ್ತೇನೋ ಅವನೇ," ಎಂದು ಹೇಳಿ ರೊಟ್ಟಿಯ ತುಂಡನ್ನು ಅದ್ದಿ ಸಿಮೋನನ
ಮಗ ಇಸ್ಕರಿಯೋತಿನ ಯೂದನಿಗೆ ಕೊಟ್ಟರು. 27ಯೂದನು ಅದನ್ನು ತೆಗೆದುಕೊಂಡದ್ದೇ ತಡ, ಸೈತಾನನು
ಅವನನ್ನು ಹೊಕ್ಕನು. 28ಆಗ ಯೇಸು, "ನೀನು ಮಾಡಬೇಕೆಂದಿರುವುದನ್ನು ಬೇಗನೆ ಮಾಡಿಮುಗಿಸು,"
ಎಂದರು. ಊಟಕ್ಕೆ ಕುಳಿತಿದ್ದ ಶಿಷ್ಯರಿಗೆ, ಯೇಸು ಹಾಗೇಕೆ ಹೇಳಿದರೆಂದು ಅರ್ಥವಾಗಲಿಲ್ಲ. 29ಯೂದನ
ವಶದಲ್ಲಿ ಹಣದ ಚೀಲವಿದ್ದುದರಿಂದ, 'ಹಬ್ಬಕ್ಕೆ ನಮಗೆ ಬೇಕಾದುದನ್ನು ಕೊಂಡು ಬಾ," ಎಂದೋ,
'ಬಡವರಿಗೆ ಏನಾದರೂ ಕೊಡು' ಎಂದೋ, ಯೇಸು ಹೇಳಿರಬೇಕೆಂದು ಕೆಲವು ಶಿಷ್ಯರು ಭಾವಿಸಿದರು. 30ಆ
ರೊಟ್ಟಿಯ ತುಂಡನ್ನು ತೆಗೆದುಕೊಂಡಕೂಡಲೇ ಯೂದನು ಎದ್ದು ಹೊರಟುಹೋದನು; ಆಗ
ರಾತ್ರಿಯಾಗಿತ್ತು.

**ಹೊಸ ಕಟ್ಟಳೆ**

31 ಯೂದನು ಹೊರಟುಹೋದಮೇಲೆ ಯೇಸುಸ್ವಾಮಿ ಹೀಗೆಂದರು: "ಈಗ ನರಪುತ್ರನ ಮಹಿಮೆ
ಪ್ರಕಟವಾಗುವುದು. ಆತನಲ್ಲಿ ದೇವರ ಮಹಿಮೆಯೂ ಪ್ರಕಟವಾಗುವುದು. 32ದೇವರ ಮಹಿಮೆ ಆತನಲ್ಲಿ
ಪ್ರಕಟವಾದರೆ, ದೇವರೇ ನರಪುತ್ರನ ಮಹಿಮೆಯನ್ನು ತಮ್ಮಲ್ಲಿ ಪ್ರಕಟಪಡಿಸುವರು, ತಕ್ಷಣವೇ
ಪ್ರಕಟಪಡಿಸುವರು. 33ಪ್ರಿಯ ಮಕ್ಕಳೇ, ಇನ್ನು ತುಸುಕಾಲ ಮಾತ್ರ ನಾನು ನಿಮ್ಮೊಡನೆ ಇರುತ್ತೇನೆ, ಆಮೇಲೆ
ನೀವು ನನ್ನನ್ನು ಹುಡುಕುವಿರಿ, 'ಆದರೆ ನಾನು ಹೋಗುವಲ್ಲಿಗೆ ನೀವು ಬರಲಾರಿರಿ' ಎಂದು ನಾನು
ಯೆಹೂದ್ಯರಿಗೆ ಹೇಳಿದಂತೆಯೇ ನಿಮಗೂ ಹೇಳುತ್ತೇನೆ. 34ನಿಮಗೊಂದು ಹೊಸ ಆಜ್ಞೆಯನ್ನು ಕೊಡುತ್ತೇನೆ:
ಒಬ್ಬರನ್ನೊಬ್ಬರು ಪ್ರೀತಿಸಿರಿ. ನಾನು ನಿಮ್ಮನ್ನು ಪ್ರೀತಿಸಿದಂತೆಯೇ ನೀವು ಸಹ ಒಬ್ಬರನ್ನೊಬ್ಬರು ಪ್ರೀತಿಸಿರಿ.
35ನಿಮ್ಮ ಈ ಪರಸ್ಪರ ಪ್ರೀತಿಯನ್ನು ಕಂಡು ನೀವು ನನ್ನ ಶಿಷ್ಯರೆಂದು ಜನರೆಲ್ಲರೂ ಅರಿತುಕೊಳ್ಳುವರು."

**ಪೇತ್ರನ ಅಲ್ಲಗಳಿಕೆಯ ಮುನ್ಸೂಚನೆ**

(ಮತ್ತಾ. 26.31–35; ಮಾರ್ಕ 14.27–31; ಲೂಕ 22.31–32)

36 ಆಗ ಸಿಮೋನ ಪೇತ್ರನು, "ಪ್ರಭುವೇ, ನೀವು ಹೋಗುವುದಾದರೂ ಎಲ್ಲಿಗೆ?" ಎಂದು
ಕೇಳಿದನು. "ನಾನು ಹೋಗುವಲ್ಲಿಗೆ ನೀನು ಈಗ ಬರಲಾರೆ. ಅನಂತರ ಬರುವೆ," ಎಂದು ಯೇಸು
ಉತ್ತರಕೊಡಲು 37ಪೇತ್ರನು, "ಈಗಲೇ ನಿಮ್ಮ ಹಿಂದೆ ಬರಲು ಏಕಾಗದು? ಪ್ರಭೂ, ನಿಮಗಾಗಿ ಪ್ರಾಣವನ್ನು
ಕೊಡಲೂ ಸಿದ್ಧನಿದ್ದೇನೆ," ಎಂದನು. 38ಆಗ ಯೇಸು, "ನನಗಾಗಿ ಪ್ರಾಣವನ್ನು ಕೊಡಲೂ ಸಿದ್ಧನಿರುವೆಯಾ?
ನಾನು ನಿನಗೆ ನಿಜವಾಗಿ ಹೇಳುತ್ತೇನೆ ಕೇಳು: ನೀನು ನನ್ನನ್ನು ಅರಿಯೆನೆಂದು ಮೂರುಬಾರಿ ತಿರಸ್ಕರಿಸುವ
ತನಕ ನಾಳೆ ಮುಂಜಾನೆ ಕೋಳಿ ಕೂಗುವುದಿಲ್ಲ," ಎಂದು ನುಡಿದರು.

## ನಾನೇ ಮಾರ್ಗ

**14** ಯೇಸುಸ್ವಾಮಿ ತಮ್ಮ ಮಾತನ್ನು ಮುಂದುವರಿಸುತ್ತಾ ಶಿಷ್ಯರಿಗೆ, “ನೀವು ಹೃದಯದಲ್ಲಿ
ಕಳವಳಗೊಳ್ಳದಿರಿ; ದೇವರಲ್ಲಿ ವಿಶ್ವಾಸವಿಡಿ; ನನ್ನಲ್ಲಿಯೂ ವಿಶ್ವಾಸವಿಡಿ. 2ನನ್ನ ಪಿತನ ಆಸ್ಥಾನದಲ್ಲಿ ಅನೇಕ
ನಿವಾಸಗಳು ಇವೆ. ಹಾಗಿಲ್ಲದ ಪಕ್ಷದಲ್ಲಿ ನಿಮಗೆ ತಿಳಿಸುತ್ತಿದ್ದೆ. ನಾನು ಹೋಗಿ ನಿಮಗೆ ಸ್ಥಳವನ್ನು
ಅಣಿಗೊಳಿಸುತ್ತೇನೆ. 3ಅಣಿಗೊಳಿಸಿದ ಬಳಿಕ ಹಿಂದಿರುಗಿ ಬಂದು ನಿಮ್ಮನ್ನು ಕರೆದೊಯ್ಯುತ್ತೇನೆ.
ನಾನಿರುವೆಡೆಯಲ್ಲಿಯೇ ನೀವೂ ಇರಬೇಕು. 4ನಾನು ಹೋಗುವ ಎಡೆಗೆ ಮಾರ್ಗವು ನಿಮಗೆ ತಿಳಿದೇ ಇದೆ,”
ಎಂದು ಹೇಳಿದರು. 5ಆಗ ತೋಮನು, “ಪ್ರಭುವೇ, ನೀವು ಎಲ್ಲಿಗೆ ಹೋಗುತ್ತೀರೆಂದು ನಮಗೆ ತಿಳಿಯದು;
ಅಂದಮೇಲೆ ಅಲ್ಲಿಗೆ ಹೋಗುವ ಮಾರ್ಗವು ಹೇಗೆ ತಿಳಿದೀತು?” ಎಂದು ಕೇಳಿದನು. 6ಅದಕ್ಕೆ ಯೇಸು,
“ಮಾರ್ಗವೂ ಸತ್ಯವೂ ಜೀವವೂ ನಾನೇ. ನನ್ನ ಮುಖಾಂತರ ಬಾರದ ಹೊರತು ಯಾರೂ ಪಿತನ ಬಳಿಗೆ
ಬರಲಾರರು. 7ನೀವು ನನ್ನನ್ನು ಅರಿತವರಾಗಿದ್ದರೆ ನನ್ನ ಪಿತನನ್ನು ಕೂಡ ಅರಿಯುತ್ತಿದ್ದಿರಿ. ಈಗಿನಿಂದ
ಅವರನ್ನು ನೀವು ಅರಿತವರಾಗಿದ್ದೀರಿ ಹಾಗೂ ಕಂಡೂ ಇದ್ದೀರಿ,” ಎಂದು ನುಡಿದರು. 8ಆಗ ಫಿಲಿಪ್ಪನು,
“ಪ್ರಭೂ, ನಮಗೆ ಪಿತನನ್ನು ತೋರಿಸಿ; ಅಷ್ಟೇ ಸಾಕು,” ಎಂದನು. 9ಅದಕ್ಕೆ ಉತ್ತರವಾಗಿ ಯೇಸು, “ನಾನು
ಇಷ್ಟುಕಾಲ ನಿಮ್ಮೊಡನೆ ಇದ್ದರೂ ನಾನು ಯಾರೆಂಬುದನ್ನು ನೀನು ಅರಿತುಕೊಳ್ಳಲಿಲ್ಲವೆ? ನನ್ನನ್ನು
ನೋಡಿದವನು ಪಿತನನ್ನೇ ನೋಡಿದವನಾಗಿದ್ದಾನೆ. ಹೀಗಿರುವಾಗ, ಫಿಲಿಪ್ಪನೇ, ‘ನಮಗೆ ಪಿತನನ್ನು ತೋರಿಸಿ’
ಎಂದು ಹೇಗೆ ಕೇಳುತ್ತೀ? 10ನಾನು ಪಿತನಲ್ಲಿ ಇದ್ದೇನೆ. ಪಿತನು ನನ್ನಲ್ಲಿ ಇದ್ದಾರೆ. ಇದನ್ನು ನೀನು
ವಿಶ್ವಾಸಿಸುವುದಿಲ್ಲವೇ? ನಾನು ನಿಮಗೆ ಹೇಳುವ ಮಾತುಗಳನ್ನು ನನ್ನಷ್ಟಕ್ಕೆ ನಾನೇ ಆಡುತ್ತಿಲ್ಲ. ಪಿತನೇ
ನನ್ನಲ್ಲಿದ್ದುಕೊಂಡು ತಮ್ಮ ಕಾರ್ಯವನ್ನು ಸಾಧಿಸುತ್ತಾರೆ. 11‘ನಾನು ಪಿತನಲ್ಲಿ ಇದ್ದೇನೆ, ಪಿತನು ನನ್ನಲ್ಲಿ
ಇದ್ದಾರೆ,’ ಎನ್ನುವ ನನ್ನ ಮಾತುಗಳನ್ನು ವಿಶ್ವಾಸಿಸಿರಿ; ಇಲ್ಲವೇ, ನಾನು ಸಾಧಿಸಿದ ಸುಕೃತ್ಯಗಳ
ನಿಮಿತ್ತದಿಂದಾದರೂ ವಿಶ್ವಾಸಿಸಿರಿ. 12ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ: ನನ್ನಲ್ಲಿ ವಿಶ್ವಾಸವುಳ್ಳವನು ನಾನು
ಸಾಧಿಸುವ ಕಾರ್ಯಗಳನ್ನು ಆತನೂ ಸಾಧಿಸುವನು. ಅಷ್ಟೇ ಏಕೆ, ಅವುಗಳಿಗಿಂತಲೂ ಮಹತ್ತಾದುವುಗಳನ್ನು
ಸಾಧಿಸುವನು. ಏಕೆಂದರೆ ನಾನು ಪಿತನ ಬಳಿಗೆ ಹೋಗುತ್ತೇನೆ. 13ಇದಲ್ಲದೆ ನೀವು ನನ್ನ ಹೆಸರಿನಲ್ಲಿ
ಕೇಳಿಕೊಳ್ಳುವುದನ್ನೆಲ್ಲಾ ಮಾಡುತ್ತೇನೆ. ಹೀಗೆ ಪಿತನಿಗೆ ಪುತ್ರನಲ್ಲಿ ಮಹಿಮೆ ಉಂಟಾಗುವುದು. 14ಹೌದು, ನನ್ನ
ಹೆಸರಿನಲ್ಲಿ ನೀವು ಏನನ್ನು ಕೇಳಿದರೂ ನಾನು ಅದನ್ನು ಮಾಡಿಯೇ ತೀರುವೆನು.

## ಪೋಷಕರಾದ ಪವಿತ್ರಾತ್ಮ

15 “ನೀವು ನನ್ನನ್ನು ಪ್ರೀತಿಸುವವರಾಗಿದ್ದರೆ ನನ್ನ ಆಜ್ಞೆಗಳನ್ನು ಕೈಗೊಂಡು ನಡೆಯುವಿರಿ. 16ನಾನೂ
ಪಿತನನ್ನು ಕೇಳಿಕೊಳ್ಳುವೆನು; ಅವರು ನಿಮಗೆ ಬೇರೊಬ್ಬ ಪೋಷಕರನ್ನು ಕೊಡುವರು. ಇವರು ನಿಮ್ಮೊಡನೆ
ಯಾವಾಗಲೂ ಇರುವರು. 17ಸತ್ಯಸ್ವರೂಪಿಯಾದ ಪವಿತ್ರಾತ್ಮನೇ ಈ ಪೋಷಕ. ಲೋಕವು ಇವರನ್ನು
ಬರಮಾಡಿಕೊಳ್ಳದು. ಏಕೆಂದರೆ ಲೋಕ ಇವರನ್ನು ಕಾಣುವುದೂ ಇಲ್ಲ, ಅರಿತುಕೊಳ್ಳುವುದೂ ಇಲ್ಲ. ಆದರೆ
ನೀವು ಇವರನ್ನು ಅರಿಯುವಿರಿ. ಕಾರಣ, ಇವರು ನಿಮ್ಮೊಂದಿಗೂ ನಿಮ್ಮಲ್ಲಿಯೂ ನೆಲಸಿರುವರು. 18ನಾನು
ನಿಮ್ಮನ್ನು ಅನಾಥರನ್ನಾಗಿ ಬಿಟ್ಟು ಹೋಗುವುದಿಲ್ಲ. ನಿಮ್ಮ ಬಳಿಗೆ ಪುನಃ ಬರುತ್ತೇನೆ. 19ಇನ್ನು ತುಸುಕಾಲವಾದ
ನಂತರ ಲೋಕವು ನನ್ನನ್ನು ಕಾಣದು. ಆದರೆ ನೀವು ನನ್ನನ್ನು ಕಾಣುವಿರಿ. ನಾನು
ಜೀವಿಸುವವನಾಗಿರುವುದರಿಂದ ನೀವೂ ಜೀವಿಸುವಿರಿ. 20ನಾನು ನನ್ನ ಪಿತನಲ್ಲಿ ಇರುವೆನು; ನೀವು ನನ್ನಲ್ಲಿ
ಇರುವಿರಿ ಮತ್ತು ನಾನು ನಿಮ್ಮಲ್ಲಿ ಇರುವೆನು. ಇದನ್ನು ಆ ದಿನದಂದು ನೀವು ಅರಿತುಕೊಳ್ಳುವಿರಿ. 21ನನ್ನ
ಆಜ್ಞೆಗಳನ್ನು ಅಂಗೀಕರಿಸಿ ಅವುಗಳ ಪ್ರಕಾರ ನಡೆಯುವವನೇ ನನ್ನನ್ನು ಪ್ರೀತಿಸುವವನು. ನನ್ನನ್ನು
ಪ್ರೀತಿಸುವವನು ನನ್ನ ಪಿತನಿಗೂ ಪ್ರಿಯನಾಗಿರುವನು. ನಾನೂ ಅವನನ್ನು ಪ್ರೀತಿಸಿ ನನ್ನನ್ನೇ ಅವನಿಗೆ
ಸಾಕ್ಷಾತ್ಕರಿಸಿ ಕೊಡುವೆನು.”

22 ಆಗ ಯೂದನು, (ಈತ ಇಸ್ಕರಿಯೋತಿನ ಯೂದನಲ್ಲ) “ಪ್ರಭೂ, ನೀವು ಈ ಲೋಕಕ್ಕೆ
ನಿಮ್ಮನ್ನು ಸಾಕ್ಷಾತ್ಕರಿಸಿಕೊಳ್ಳದೆ ನಮಗೆ ಮಾತ್ರ ಸಾಕ್ಷಾತ್ಕರಿಸಿಕೊಳ್ಳುತ್ತೀರಲ್ಲಾ, ಏಕೆ?” ಎಂದು ಕೇಳಿದನು. 23ಆಗ

ಯೇಸು, "ನನ್ನನ್ನು ಪ್ರೀತಿಸುವವನು ನನ್ನ ಮಾತನ್ನು ಕೈಗೊಂಡು ನಡೆಯುವನು. ಅವನನ್ನು ನನ್ನ ಪಿತನೂ
ಪ್ರೀತಿಸುವರು ಮತ್ತು ನಾವಿಬ್ಬರೂ ಅವನ ಬಳಿ ಬಂದು ಅವನಲ್ಲಿ ನೆಲೆಸುವೆವು. 24ನನ್ನನ್ನು ಪ್ರೀತಿಸದೆ
ಇರುವವನು ನನ್ನ ಮಾತನ್ನು ಕೈಗೊಂಡು ನಡೆಯುವುದಿಲ್ಲ. ನೀವು ಕೇಳುತ್ತಿರುವ ಮಾತು ನನ್ನದಲ್ಲ, ನನ್ನನ್ನು
ಕಳುಹಿಸಿದ ಪಿತನದೇ. 25ನಾನು ನಿಮ್ಮೊಡನೆ ಇರುವಾಗಲೇ ಇದನ್ನೆಲ್ಲಾ ನಿಮಗೆ ಹೇಳಿದ್ದೇನೆ. 26ಆದರೆ ಪಿತನು
ನನ್ನ ಹೆಸರಿನಲ್ಲಿ ಕಳುಹಿಸಿಕೊಡುವ ಪೋಷಕರಾದ ಪವಿತ್ರಾತ್ಮ ನಿಮಗೆ ಎಲ್ಲವನ್ನೂ ಬೋಧಿಸಿ ನಾನು
ಹೇಳಿರುವುದನ್ನೆಲ್ಲಾ ನಿಮ್ಮ ನೆನಪಿಗೆ ತರುವರು. 27ನಾನು ಶಾಂತಿಸಮಾಧಾನವನ್ನು ನಿಮಗೆ ಬಿಟ್ಟು
ಹೋಗುತ್ತೇನೆ; ನನ್ನ ಶಾಂತಿಸಮಾಧಾನವನ್ನು ನಿಮಗೆ ಕೊಡುತ್ತೇನೆ. ಈ ಲೋಕವು ಕೊಡುವ ರೀತಿಯಲ್ಲಿ
ನಾನದನ್ನು ನಿಮಗೆ ಕೊಡುವುದಿಲ್ಲ. ನೀವು ಹೃದಯದಲ್ಲಿ ಕಳವಳಗೊಳ್ಳದಿರಿ, ಭಯಪಡಬೇಡಿ. 28ನಾನು
ಹೊರಟು ಹೋಗುತ್ತೇನೆಂದೂ ಮತ್ತೆ ನಿಮ್ಮ ಬಳಿಗೆ ಬರುತ್ತೇನೆಂದೂ ನಾನು ಹೇಳಿದ್ದನ್ನು ನೀವು ಕೇಳಿದ್ದೀರಿ.
ನೀವು ನನ್ನನ್ನು ಪ್ರೀತಿಸುವವರಾಗಿದ್ದರೆ ನಾನು ಪಿತನ ಬಳಿಗೆ ಹೋಗುತ್ತಿರುವುದನ್ನು ಕುರಿತು ಹಿಗ್ಗುತ್ತಿದ್ದಿರಿ.
ಏಕೆಂದರೆ ಪಿತ ನನಗಿಂತಲೂ ಶ್ರೇಷ್ಠರು. 29ಇದೆಲ್ಲಾ ಈಡೇರುವಾಗ ನೀವು ವಿಶ್ವಾಸಿಸುವಂತೆ ಅದು
ಈಡೇರುವುದಕ್ಕೆ ಮುಂಚೆಯೇ ನಿಮಗೆ ತಿಳಿಯಪಡಿಸಿದ್ದೇನೆ. 30ಇಹದ ಲೋಕಾಧಿಪತಿ ಬರುವ
ಸಮಯವಾಯಿತು. ಇನ್ನು ಬಹಳ ಹೊತ್ತು ನಾನು ನಿಮ್ಮೊಡನೆ ಮಾತನಾಡಲು ಕಾಲಾವಕಾಶವಿಲ್ಲ. ನನ್ನ
ಮೇಲೆ ಅವನಿಗೆ ಯಾವ ಅಧಿಕಾರವೂ ಇಲ್ಲ. 31ಆದರೆ ನಾನು ಪಿತನನ್ನು ಪ್ರೀತಿಸುತ್ತೇನೆಂಬುದನ್ನೂ ಅವರು
ವಿಧಿಸಿದಂತೆಯೇ ಮಾಡುತ್ತೇನೆ ಎಂಬುದನ್ನೂ ಲೋಕವು ತಿಳಿಯಬೇಕು. ಏಳಿ, ಇಲ್ಲಿಂದ ಹೋಗೋಣ,"
ಎಂದರು.

### ನೈಜ ದ್ರಾಕ್ಷಾಬಳ್ಳಿ

**15** "ನಾನೇ ನಿಜವಾದ ದ್ರಾಕ್ಷಾಬಳ್ಳಿ. ನನ್ನ ಪಿತನೇ ತೋಟಗಾರ. 2ನನ್ನಲ್ಲಿದ್ದೂ ಫಲಕೊಡದ
ಕವಲುಬಳ್ಳಿಗಳನ್ನೆಲ್ಲಾ ಅವರು ಕತ್ತರಿಸಿಹಾಕುವರು. ಫಲಕೊಡುವ ಕವಲುಬಳ್ಳಿಗಳು ಮತ್ತಷ್ಟು ಫಲಕೊಡುವಂತೆ
ಅವನ್ನು ಸವರಿ ಶುದ್ಧಗೊಳಿಸುವರು. 3ನೀವಾದರೋ, ನಾನು ನಿಮ್ಮೊಡನೆ ಆಡಿದ ಮಾತಿನಿಂದಾಗಿ ಸವರಿದ
ಕವಲುಗಳಂತೆ ಶುದ್ಧರಾಗಿದ್ದೀರಿ. 4ನೀವು ನನ್ನಲ್ಲಿ ನೆಲೆಗೊಂಡಿರಿ, ಆಗ ನಾನು ನಿಮ್ಮಲ್ಲಿ ನೆಲೆಗೊಂಡಿರುವೆನು.
ಕವಲು ಮೂಲಬಳ್ಳಿಯಲ್ಲಿ ಒಂದಾಗಿ ನೆಲಸದಿದ್ದರೆ ತನ್ನಷ್ಟಕ್ಕೆ ತಾನೇ ಫಲಕೊಡಲಾಗದು. ಹಾಗೆಯೇ ನೀವೂ
ಕೂಡ ನನ್ನಲ್ಲಿ ಒಂದಾಗಿ ನೆಲಸದಿದ್ದರೆ ಫಲಕೊಡಲಾರಿರಿ.

5 "ಹೌದು, ನಾನೇ ದ್ರಾಕ್ಷಾಬಳ್ಳಿ; ನೀವೇ ಅದರ ಕವಲುಬಳ್ಳಿಗಳು. ಒಬ್ಬನು ನನ್ನಲ್ಲಿಯೂ ನಾನು
ಅವನಲ್ಲಿಯೂ ನೆಲೆಗೊಂಡಿದ್ದರೆ ಅಂಥವನು ಸಮೃದ್ಧಿಯಾಗಿ ಫಲಕೊಡುವನು. ಏಕೆಂದರೆ, ನನ್ನಿಂದ
ಬೇರ್ಪಟ್ಟು ನಿಮ್ಮಿಂದ ಏನೂ ಮಾಡಲಾಗದು. 6ನನ್ನಲ್ಲಿ ನೆಲಸದವನನ್ನು ಕವಲುಬಳ್ಳಿಯಂತೆ ಕತ್ತರಿಸಿ
ಎಸೆಯಲಾಗುವುದು; ಅವನು ಒಣಗಿಹೋಗುವನು. ಒಣಗಿದ ಕವಲುಗಳನ್ನು ಒಟ್ಟುಗೂಡಿಸಿ ಬೆಂಕಿಯಲ್ಲಿ
ಸುಟ್ಟು ಹಾಕಲಾಗುವುದು.

7 "ನೀವು ನನ್ನಲ್ಲಿಯೂ ನನ್ನ ವಾಕ್ಯವು ನಿಮ್ಮಲ್ಲಿಯೂ ನೆಲೆಗೊಂಡಿದ್ದರೆ ನೀವು ಏನು ಬೇಕಾದರೂ
ಕೇಳಬಹುದು. ನಿಮಗದು ಸಿಗುವುದು. 8ನೀವು ಸಮೃದ್ಧಿಯಾಗಿ ಫಲಕೊಟ್ಟು ನನ್ನ ಶಿಷ್ಯರಾಗಿ
ಬೆಳಗುವುದರಿಂದಲೇ ನನ್ನ ಪಿತನ ಮಹಿಮೆ ಪ್ರಕಟವಾಗುವುದು. 9ಪಿತನು ನನ್ನನ್ನು ಪ್ರೀತಿಸಿದಂತೆಯೇ
ನಾನೂ ನಿಮ್ಮನ್ನು ಪ್ರೀತಿಸಿದ್ದೇನೆ. ನನ್ನ ಪ್ರೀತಿಯಲ್ಲಿ ನೆಲೆಗೊಂಡು ನಿಲ್ಲಿರಿ. 10ನನ್ನ ಪಿತನು ಕೊಟ್ಟ ಆಜ್ಞೆಗಳನ್ನು
ಪಾಲಿಸಿ ಅವರ ಪ್ರೀತಿಯಲ್ಲಿ ನಾನು ನೆಲೆಗೊಂಡಿರುವ ಹಾಗೆ ನೀವು ಕೂಡ ನಾನು ಕೊಟ್ಟ ಆಜ್ಞೆಗಳನ್ನು
ಪಾಲಿಸಿದರೆ ನನ್ನ ಪ್ರೀತಿಯಲ್ಲಿ ನೆಲೆಗೊಂಡಿರುವಿರಿ.

11 "ನನ್ನಲ್ಲಿರುವ ಆನಂದವು ನಿಮ್ಮಲ್ಲಿ ಇರಬೇಕೆಂತಲೂ ನಿಮ್ಮ ಆನಂದವು ತುಂಬಿ
ತುಳುಕಬೇಕೆಂತಲೂ ಇದನ್ನೆಲ್ಲಾ ನಿಮಗೆ ಹೇಳುತ್ತಿದ್ದೇನೆ. 12ನಾನು ಕೊಡುವ ಆಜ್ಞೆ ಏನೆಂದರೆ: ನಾನು
ನಿಮ್ಮನ್ನು ಪ್ರೀತಿಸಿದಂತೆಯೇ ನೀವು ಸಹ ಒಬ್ಬರನ್ನೊಬ್ಬರು ಪ್ರೀತಿಸಬೇಕು. 13ಗೆಳೆಯರಿಗಾಗಿ ತನ್ನ ಪ್ರಾಣವನ್ನೇ

ಧಾರೆಯೆರೆಯುವ ಪ್ರೀತಿಗಿಂತ ಮಿಗಿಲಾದ ಪ್ರೀತಿ ಯಾರಲ್ಲೂ ಇಲ್ಲ. 14ನಾನು ಆಜ್ಞಾಪಿಸಿದಂತೆ ನಡೆದರೆ
ನೀವು ನನ್ನ ಗೆಳೆಯರು. 15ನಾನಿನ್ನು ನಿಮ್ಮನ್ನು ದಾಸರೆಂದು ಕರೆಯುವುದಿಲ್ಲ. ಧಣಿಯ ಕೆಲಸಕಾರ್ಯಗಳು
ದಾಸನಿಗೆ ತಿಳಿಯವು. ನಾನಾದರೋ ಪಿತನಿಂದ ಕೇಳಿಸಿಕೊಂಡದ್ದನ್ನೆಲ್ಲಾ ನಿಮಗೆ ತಿಳಿಸಿದ್ದೇನೆ. ಈ ಕಾರಣ
ನಿಮ್ಮನ್ನು ಗೆಳೆಯರೆಂದು ಕರೆದಿದ್ದೇನೆ. 16ನೀವು ನನ್ನನ್ನು ಆರಿಸಿಕೊಳ್ಳಲಿಲ್ಲ. ನಾನೇ ನಿಮ್ಮನ್ನು
ಆರಿಸಿಕೊಂಡಿದ್ದೇನೆ. ನೀವು ಲೋಕಕ್ಕೆ ಹೋಗಬೇಕು, ಸಫಲರಾಗಬೇಕು; ಆ ಫಲ ಶಾಶ್ವತವಾಗಿರಬೇಕೆಂದೇ
ನಿಮ್ಮನ್ನು ನೇಮಿಸಿದ್ದೇನೆ. ಹೀಗಿರಲಾಗಿ ನೀವು ನನ್ನ ಹೆಸರಿನಲ್ಲಿ ಪಿತನಿಂದ ಏನು ಕೇಳಿದರೂ ನಿಮಗೆ ಅದು
ಸಿಗುವುದು. 17ನೀವು ಒಬ್ಬರನ್ನೊಬ್ಬರು ಪ್ರೀತಿಸಬೇಕೆಂಬುದೇ ನಾನು ನಿಮಗೆ ಕೊಡುವ ಆಜ್ಞೆ.

### ದ್ವೇಷದಿಂದ ಕೂಡಿದ ಲೋಕ

18 "ಲೋಕವು ನಿಮ್ಮನ್ನು ದ್ವೇಷಿಸಿದರೆ, ನನ್ನ ಮೇಲೆ ಅದಕ್ಕೆ ಮೊದಲೇ ದ್ವೇಷವಿತ್ತೆಂಬುದನ್ನು
ನೆನಪಿನಲ್ಲಿಡಿ. 19ನೀವು ಲೋಕದ ಕಡೆಯವರಾಗಿದ್ದರೆ ಲೋಕವು ನಿಮ್ಮನ್ನು ತನ್ನವರೆಂದು ಮಮತೆಯಿಂದ
ಕಾಣುತ್ತಿತ್ತು. ನೀವಾದರೋ ಲೋಕದ ಕಡೆಗೆ ಸೇರಿದವರಲ್ಲ. ನಾನು ನಿಮ್ಮನ್ನು ಆರಿಸಿಕೊಂಡಿರುವುದರಿಂದ
ನೀವು ಲೋಕದಿಂದ ಬೇರ್ಪಟ್ಟಿದ್ದೀರಿ. ಎಂದೇ ಲೋಕಕ್ಕೆ ನಿಮ್ಮ ಮೇಲೆ ದ್ವೇಷವಿದೆ. 20ಧಣಿಗಿಂತಲೂ
ದಾಸನು ದೊಡ್ಡವನಲ್ಲವೆಂದು ನಾನು ನಿಮಗೆ ಹೇಳಿದ್ದನ್ನು ನೆನಪಿಗೆ ತಂದುಕೊಳ್ಳಿ. ಅವರು ನನ್ನನ್ನು ಹಿಂಸೆಗೆ
ಗುರಿಮಾಡಿದಂತೆ ನಿಮ್ಮನ್ನೂ ಹಿಂಸೆಗೆ ಗುರಿಮಾಡುವರು. ನನ್ನ ಬೋಧನೆಯ ಮಾತನ್ನು ಅವರು ಅನುಸರಿಸಿ
ನಡೆದರೆ ನಿಮ್ಮ ಬೋಧನೆಯ ಮಾತನ್ನೂ ಅನುಸರಿಸಿ ನಡೆಯುವರು. 21ನೀವು ನನ್ನವರಾದುದರಿಂದ ಅವರು
ನಿಮ್ಮನ್ನು ಹೀಗೆ ಕಾಣುವರು. ಏಕೆಂದರೆ ನನ್ನನ್ನು ಕಳುಹಿಸಿದಾತನನ್ನು ಅವರು ಅರಿಯರು. 22ನಾನು ಬಂದು
ಅವರಿಗೆ ಬೋಧನೆ ಮಾಡದೆ ಹೋಗಿದ್ದರೆ ಅವರು ಪಾಪದೋಷಿಗಳು ಎಂದು ಹೇಳಲಾಗುತ್ತಿರಲಿಲ್ಲ. ಆದರೆ
ಈಗ ಅವರ ದೋಷಕ್ಕೆ ಯಾವ ನೆಪವನ್ನೂ ಒಡ್ಡುವಂತಿಲ್ಲ. 23ನನ್ನ ಮೇಲೆ ದ್ವೇಷ ಇದ್ದವನಿಗೆ ನನ್ನ ಪಿತನ
ಮೇಲೆಯೂ ದ್ವೇಷ ಇದೆ. 24ಬೇರೆ ಯಾರೂ ಮಾಡದ ಮಹತ್ತಾದ ಕಾರ್ಯಗಳನ್ನು ನಾನು ಅವರ ನಡುವೆ
ಮಾಡದೆ ಹೋಗಿದ್ದರೆ ಅವರು ಪಾಪದೋಷಿಗಳೆಂದು ಹೇಳಲಾಗುತ್ತಿರಲಿಲ್ಲ. ಆದರೆ ಅವರು ನನ್ನ
ಕಾರ್ಯಗಳನ್ನು ನೋಡಿಯು ಸಹ ನನ್ನ ಮೇಲೆ ಹಾಗು ನನ್ನ ಪಿತನ ಮೇಲೆ ದ್ವೇಷ ಬೆಳೆಸಿದ್ದಾರೆ.
25"ನಿಷ್ಕಾರಣವಾಗಿ ಅವರು ನನ್ನನ್ನು ದ್ವೇಷಿಸಿದರು" ಎಂದು ಅವರ ಧರ್ಮಶಾಸ್ತ್ರದಲ್ಲೇ ಬರೆದಿರುವುದು
ಹೀಗೆ ನೆರವೇರಿದೆ. 26ಪಿತನಿಂದ ಹೊರಡುವ ಸತ್ಯಸ್ವರೂಪಿಯಾದ ಪವಿತ್ರಾತ್ಮರನ್ನು ನಿಮ್ಮ ಪೋಷಕರನ್ನಾಗಿ
ನಾನು ಪಿತನಿಂದಲೇ ಕಳುಹಿಸುವೆನು. ಅವರು ಬಂದು ನನ್ನ ಪರವಾಗಿ ಸಾಕ್ಷಿ ನೀಡುವರು. 27ಮೊತ್ತ
ಮೊದಲಿನಿಂದಲೂ ನನ್ನ ಸಂಗಡ ಇದ್ದ ನೀವು ಕೂಡ ನನ್ನನ್ನು ಕುರಿತು ಸಾಕ್ಷಿ ನೀಡುವವರಾಗಿದ್ದೀರಿ.

**16** "ನಿಮ್ಮ ವಿಸ್ವಾಸ ಕುಸಿಯದಂತೆ ನೀವು ಎಚ್ಚರಿಕೆ ವಹಿಸಬೇಕೆಂದು ನಾನು ಇದನ್ನೆಲ್ಲಾ ನಿಮಗೆ
ಹೇಳಿದ್ದೇನೆ. 2ಜನರು, ನಿಮ್ಮನ್ನು ಪ್ರಾರ್ಥನಾಮಂದಿರದಿಂದ ಬಹಿಷ್ಕರಿಸುವರು, ಅಷ್ಟೇ ಅಲ್ಲ, ನಿಮ್ಮನ್ನು
ಕೊಲ್ಲುವವನು ತಾನು ದೇವರಿಗೆ ಬಲಿಕೊಟ್ಟೆನೆಂದು ಭಾವಿಸುವ ಕಾಲವೂ ಬರಲಿದೆ. 3ನನ್ನನ್ನಾಗಲಿ,
ಪಿತನನ್ನಾಗಲಿ ಅವರು ಅರಿತಿಲ್ಲದ ಕಾರಣ ನಿಮಗೆ ಹೀಗೆ ಮಾಡುವರು. 4ಅಂಥ ಕಾಲ ಬಂದಾಗ ಇದನ್ನೆಲ್ಲಾ
ಕುರಿತು ನಾನು ನಿಮ್ಮನ್ನು ಮೊದಲೇ ಎಚ್ಚರಿಸಿದ್ದೇನೆಂದು ನೀವು ನೆನಸಿಕೊಳ್ಳುವಂತೆ ಇದನ್ನು ಹೇಳುತ್ತಿದ್ದೇನೆ.

### ಪವಿತ್ರಾತ್ಮರ ಆಗಮನ

5 "ನಾನು ನಿಮ್ಮ ಸಂಗಡ ಇದ್ದುದರಿಂದ ಇದನ್ನೆಲ್ಲಾ ಮೊದಲೇ ನಿಮಗೆ ತಿಳಿಸಲಿಲ್ಲ. ಈಗಲಾದರೋ
ನನ್ನನ್ನು ಕಳುಹಿಸಿದಾತನಲ್ಲಿಗೆ ನಾನು ತೆರಳುತ್ತೇನೆ. ನಾನು ಹೋಗುವುದು ಎಲ್ಲಿಗೆ ಎಂದು ನೀವು ಯಾರೂ
ಕೇಳುತ್ತಿಲ್ಲವಾದರೂ 6ಇದನ್ನೆಲ್ಲಾ ನಾನು ನಿಮಗೆ ಹೇಳಿದ್ದರಿಂದ ನಿಮ್ಮ ಹೃದಯವು ದುಃಖಭರಿತವಾಗಿದೆ.
7ವಾಸ್ತವವಾಗಿ ಹೇಳುವುದಾದರೆ, ನಾನು ಹೋಗುವುದು ನಿಮ್ಮ ಹಿತಕ್ಕಾಗಿಯೇ. ನಾನು ಹೋಗದಿದ್ದರೆ,
ಪೋಷಕ ನಿಮ್ಮಲ್ಲಿಗೆ ಬರುವುದಿಲ್ಲ. ನಾನು ಹೋದರೆ ಮಾತ್ರ ಅವರನ್ನು ನಿಮ್ಮಲ್ಲಿಗೆ ಕಳುಹಿಸಿಕೊಡಬಲ್ಲೆ. 8ಆ

ಪೋಷಕ ಬಂದು ಪಾಪ, ನ್ಯಾಯನೀತಿ, ಮತ್ತು ಅಂತಿಮ ತೀರ್ಪು ಇವುಗಳನ್ನು ಕುರಿತು ಲೋಕದ ಜನತೆ ತಾಳಿದ್ದ ತಪ್ಪುಭಾವನೆಗಳನ್ನು ಮನವರಿಕೆಮಾಡಿಕೊಡುವರು. [9]ಪಾಪದ ವಿಷಯವಾಗಿ ಅವರ ತಪ್ಪುಭಾವನೆಯನ್ನು ಮನವರಿಕೆ ಮಾಡಿಕೊಡುವರು. ಏಕೆಂದರೆ, ಅವರು ನನ್ನಲ್ಲಿ ವಿಶ್ವಾಸ ಇಡಲಿಲ್ಲ. [10]ನ್ಯಾಯನೀತಿಯ ವಿಷಯವಾಗಿ ಅವರ ತಪ್ಪುಭಾವನೆಯನ್ನು ಮನವರಿಕೆಮಾಡಿಕೊಡುವರು. ಏಕೆಂದರೆ, ನಾನು ಪಿತನ ಬಳಿಗೆ ಹೋಗುತ್ತೇನೆ ಮತ್ತು ನೀವು ನನ್ನನ್ನು ಕಾಣಲಾರಿರಿ. [11]ಅಂತಿಮ ತೀರ್ಪಿನ ವಿಷಯವಾಗಿ ಅವರ ತಪ್ಪುಭಾವನೆಯನ್ನು ಮನವರಿಕೆಮಾಡಿಕೊಡುವರು. ಏಕೆಂದರೆ, ಇಹದ ಲೋಕಾಧಿಪತಿಗೆ ಈಗಾಗಲೇ ನ್ಯಾಯತೀರ್ಪನ್ನು ಕೊಡಲಾಗಿದೆ. [12]ನಾನು ನಿಮಗೆ ಹೇಳಬೇಕಾದುದು ಇನ್ನೂ ಎಷ್ಟೋ ಇದೆ. ಸಧ್ಯಕ್ಕೆ ಅವು ನಿಮಗೆ ಹೊರಲಾಗದ ಹೊರೆಯಾಗಬಾರದು. [13]ಹೇಗೂ ಸತ್ಯಸ್ವರೂಪಿ ಆದ ಪವಿತ್ರಾತ್ಮ ಬಂದಮೇಲೆ ನಿಮ್ಮನ್ನು ಸಮಗ್ರ ಸತ್ಯದೆಡೆಗೆ ಕರೆದೊಯ್ಯುವರು. ಅವರು ತಮ್ಮಷ್ಟಕ್ಕೆ ತಾವೇ ಏನನ್ನೂ ಬೋಧಿಸದೆ ತಾವು ಕೇಳಿದುದನ್ನು ಕುರಿತೇ ಮಾತನಾಡುವರು; ಮುಂದೆ ನಡೆಯಲಿರುವುದನ್ನೂ ನಿಮಗೆ ತಿಳಿಸುವರು. [14]ಅವರು, ನಾನು ಹೇಳಿದವುಗಳಿಂದಲೇ ಆಯ್ದು ನಿಮಗೆ ತಿಳಿಯಪಡಿಸಿ ನನ್ನ ಮಹಿಮೆಯನ್ನು ಬೆಳಗಿಸುವರು. [15]ಪಿತನಿಗೆ ಇರುವುದೆಲ್ಲವೂ ನನ್ನದೇ. ಆದುದರಿಂದಲೇ ಪವಿತ್ರಾತ್ಮ ನಾನು ಹೇಳಿದವುಗಳಿಂದಲೇ ಆಯ್ದು ನಿಮಗೆ ತಿಳಿಯಪಡಿಸುವರೆಂದು ನಾನು ಹೇಳಿದ್ದು.

## ನೋವು ನಲಿವು

16 "ತುಸುಕಾಲವಾದ ನಂತರ ನೀವು ನನ್ನನ್ನು ಕಾಣಲಾರಿರಿ. ಅನಂತರ ತುಸುಕಾಲ ಕಳೆಯುತ್ತಲೇ ನನ್ನನ್ನು ಪುನಃ ಕಾಣುವಿರಿ," ಎಂದರು ಯೇಸುಸ್ವಾಮಿ.

17 ಇದನ್ನು ಕೇಳಿದ ಕೆಲವು ಮಂದಿ ಶಿಷ್ಯರು, "ಇದೇನು ಇವರು ಹೇಳುತ್ತಿರುವುದು? 'ತುಸುಕಾಲವಾದ ನಂತರ ನೀವು ನನ್ನನ್ನು ಕಾಣಲಾರಿರಿ. ಅನಂತರ ತುಸುಕಾಲ ಕಳೆಯುತ್ತಲೇ ನೀವು ನನ್ನನ್ನು ಪುನಃ ಕಾಣುವಿರಿ ಮತ್ತು ಪಿತನಲ್ಲಿಗೆ ನಾನು ಹೋಗುತ್ತೇನೆ,' ಎನ್ನುತ್ತಾರಲ್ಲ? [18]'ತುಸುಕಾಲ' ಎಂದರೇನು? ಇವರ ಮಾತೇ ನಮಗೆ ಅರ್ಥವಾಗುತ್ತಿಲ್ಲವಲ್ಲಾ," ಎಂದು ತಮ್ಮ ತಮ್ಮೊಳಗೆ ಮಾತನಾಡತೊಡಗಿದರು. [19]ಯೇಸು, ತಮ್ಮಲ್ಲಿ ಅವರು ವಿಚಾರಿಸಬೇಕೆಂದಿದ್ದಾರೆಂದು ತಿಳಿದುಕೊಂಡು, 'ತುಸುಕಾಲದ ನಂತರ ನೀವು ನನ್ನನ್ನು ಕಾಣಲಾರಿರಿ. ಅನಂತರ ತುಸುಕಾಲ ಕಳೆಯುತ್ತಲೇ ನನ್ನನ್ನು ಪುನಃ ಕಾಣುವಿರಿ' ಎಂದು ನಾನು ಹೇಳಿದ್ದನ್ನು ಕುರಿತು ನಿಮ್ಮ ನಿಮ್ಮಲ್ಲಿಯೇ ನೀವು ಚರ್ಚಿಸುತ್ತಿರುವುದೇನು? [20]ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ: ನೀವು ಅತ್ತು ಗೋಳಾಡುವಿರಿ; ಲೋಕವಾದರೋ ನಕ್ಕು ನಲಿದಾಡುವುದು. ನೀವು ದುಃಖಪಡುವಿರಿ. ಆದರೆ ನಿಮ್ಮ ದುಃಖ ಆನಂದವಾಗಿ ಮಾರ್ಪಡುವುದು. [21]ಗರ್ಭಿಣಿಯಾದ ಸ್ತ್ರೀಯು ಪ್ರಸವಿಸುವ ಗಳಿಗೆ ಬಂದಾಗ ವೇದನೆ ಪಡುತ್ತಾಳೆ; ಮಗುವನ್ನು ಹೆರುತ್ತಲೇ ಜಗದಲ್ಲಿ ಮಾನವನೊಬ್ಬನು ಜನಿಸಿದನೆಂಬ ಉಲ್ಲಾಸದಿಂದ ತಾನು ಪಟ್ಟ ವೇದನೆಯನ್ನು ಮರೆತು ಬಿಡುತ್ತಾಳೆ; [22]ನಿಮಗೆ ಈಗ ದುಃಖವಿದೆ; ನಾನು ನಿಮ್ಮನ್ನು ಮರಳಿ ಕಂಡಾಗ ಹರ್ಷಿಸುವಿರಿ. ಆ ಹರ್ಷವನ್ನು ಯಾರೂ ನಿಮ್ಮಿಂದ ಕಸಿದುಕೊಳ್ಳುವುದಿಲ್ಲ. [23]ಆ ದಿನದಂದು ನನ್ನಿಂದ ನೀವೇನನ್ನೂ ಕೇಳುವಂತಿಲ್ಲ. ನಾನು ನಿಮಗೆ ಸತ್ಯವಾಗಿ ಹೇಳುತ್ತೇನೆ: ನೀವು ಪಿತನಲ್ಲಿ ಏನನ್ನು ಬೇಡಿಕೊಂಡರೂ ನಿಮಗೆ ಅವರು ನನ್ನ ಹೆಸರಿನಲ್ಲಿ ಕೊಟ್ಟೇ ತೀರುವರು. [24]ಈ ತನಕ ನನ್ನ ಹೆಸರಿನಲ್ಲಿ ನೀವೇನನ್ನೂ ಕೇಳಲಿಲ್ಲ. ಕೇಳಿ, ನಿಮಗೆ ದೊರಕುವುದು. ಆಗ ನಿಮ್ಮ ಆನಂದವು ತುಂಬಿ ತುಳುಕುವುದು.

## ಲೋಕದ ಮೇಲೆ ವಿಜಯ

25 "ಈ ಸಂಗತಿಗಳನ್ನೆಲ್ಲಾ ನಿಮಗೆ ಸಾಮತಿಗಳ ರೂಪದಲ್ಲಿ ತಿಳಿಸಿರುವೆನು. ಕಾಲವು ಬರಲಿದೆ. ಆಗ ಸಾಮತಿಗಳನ್ನು ಬಳಸದೆ ಸ್ಪಷ್ಟವಾದ ಮಾತಿನಲ್ಲಿ ಪಿತನನ್ನು ಕುರಿತು ನಿಮಗೆ ತಿಳಿಸುವೆನು. [26]ಕಾಲವು ಬಂದಾಗ ನನ್ನ ಹೆಸರು ಹೇಳಿ ನೀವೇ ಪಿತನಲ್ಲಿ ಬೇಡುವಿರಿ. ನಿಮ್ಮ ಪರವಾಗಿ ನಾನು ಪಿತನಲ್ಲಿ ಬೇಡಿಕೊಳ್ಳುವೆನೆಂದು ನಾನು ಹೇಳುವುದಿಲ್ಲ. [27]ಕಾರಣ, ಪಿತನೇ ನಿಮ್ಮನ್ನು ಪ್ರೀತಿಸುತ್ತಾರೆ. ನೀವು ನನ್ನನ್ನು ಪ್ರೀತಿಸಿ ನಾನು ಅವರಿಂದ ಬಂದವನೆಂದು ವಿಶ್ವಾಸಿಸಿದ್ದರಿಂದ ಪಿತನಿಗೆ ನಿಮ್ಮ ಮೇಲೆ ಅಕ್ಕರೆಯಿದೆ. [28]ಹೌದು,

ನಾನು ಪಿತನಿಂದಲೇ ಹೊರಟು ಈ ಲೋಕಕ್ಕೆ ಬಂದಿದ್ದೇನೆ. ಈಗ ಈ ಲೋಕವನ್ನು ಬಿಟ್ಟು ಪಿತನಲ್ಲಿಗೆ
ಹೋಗುತ್ತಿದ್ದೇನೆ," ಎಂದರು. 29ಅದಕ್ಕೆ ಶಿಷ್ಯರು, "ಈಗ ನೀವು ಸಾಮತಿಗಳನ್ನು ಬಳಸದೆ ಸ್ಪಷ್ಟವಾಗಿಯೇ
ಮಾತನಾಡುತ್ತಿದ್ದೀರಿ. 30ನೀವು ಎಲ್ಲವನ್ನೂ ಬಲ್ಲವರು. ಪ್ರಶ್ನೆಗಳಿಗಾಗಿ ನೀವು ಕಾಯಬೇಕಿಲ್ಲ ಎಂದು
ನಮಗೀಗ ತಿಳಿಯಿತು. ಆದುದರಿಂದ ನೀವು ದೇವರಿಂದ ಬಂದವರೆಂದು ನಾವು ವಿಶ್ವಾಸಿಸುತ್ತೇವೆ,"
ಎಂದರು. 31ಆಗ ಯೇಸುಸ್ವಾಮಿ, "ಈಗ ನೀವು ವಿಶ್ವಾಸಿಸುತ್ತೀರೋ? 32ನೀವೆಲ್ಲರೂ ನನ್ನನ್ನು ಒಬ್ಬಂಟಿಗನಾಗಿ
ಬಿಟ್ಟು ನಿಮ್ಮ ನಿಮ್ಮ ಮನೆಗೆ ಚದರಿ ಹೋಗುವ ಕಾಲವು ಬರುತ್ತದೆ. ಈಗಾಗಲೇ ಬಂದಿದೆ. ಆದರೆ ಪಿತನು
ನನ್ನೊಡನೆ ಇರುವುದರಿಂದ ನಾನು ಒಬ್ಬಂಟಿಗನಲ್ಲ. 33ನಿಮಗೆ ನನ್ನಲ್ಲಿ ಶಾಂತಿಸಮಾಧಾನ ಲಭಿಸಲೆಂದು
ಇದನ್ನೆಲ್ಲಾ ನಿಮಗೆ ಹೇಳಿದ್ದೇನೆ. ಲೋಕದಲ್ಲಿ ನಿಮಗೆ ಕಷ್ಟಸಂಕಷ್ಟಗಳು ತಪ್ಪಿದ್ದಲ್ಲ, ಆದರೆ ಧೈರ್ಯವಾಗಿರಿ.
ನಾನು ಲೋಕವನ್ನು ಜಯಿಸಿದ್ದೇನೆ," ಎಂದು ಹೇಳಿದರು.

### ಶಿಷ್ಯರಿಗಾಗಿ ಪ್ರಾರ್ಥನೆ

**17** ಯೇಸುಸ್ವಾಮಿ ಅವರೊಡನೆ ಹೀಗೆ ಮಾತನಾಡಿದ ಮೇಲೆ ಆಕಾಶದತ್ತ ಕಣ್ಣೆತ್ತಿ ನೋಡಿ, "ಪಿತನೇ,
ನಿರೀಕ್ಷಿಸಿದ ಗಳಿಗೆ ಬಂದಿದೆ. ನಿಮ್ಮ ಪುತ್ರನು ನಿಮ್ಮ ಮಹಿಮೆಯನ್ನು ಬೆಳಗಿಸುವಂತೆ ನೀವು ಆತನ
ಮಹಿಮೆಯನ್ನು ಬೆಳಗಿಸಿರಿ. 2ನರಮಾನವರೆಲ್ಲರ ಮೇಲೆ ನೀವು ಆತನಿಗೆ ಅಧಿಕಾರವನ್ನು ಕೊಟ್ಟಿರುವಿರಿ.
ಇದರಿಂದಾಗಿ ನೀವು ಆತನಿಗೆ ಒಪ್ಪಿಸಿರುವ ಎಲ್ಲರಿಗೆ ನಿತ್ಯಜೀವವನ್ನು ಆತನು ನೀಡುವನು. 3ಏಕೈಕ ನಿಜ
ದೇವರಾದ ನಿಮ್ಮನ್ನೂ ನೀವು ಕಳುಹಿಸಿಕೊಟ್ಟ ಯೇಸುಕ್ರಿಸ್ತನನ್ನೂ ಅರಿತುಕೊಳ್ಳುವುದೇ ನಿತ್ಯಜೀವ. 4ನೀವು
ನನಗೆ ಕೊಟ್ಟ ಕಾರ್ಯವನ್ನು ನಾನು ಮಾಡಿ ಮುಗಿಸಿ ನಿಮ್ಮ ಮಹಿಮೆಯನ್ನು ಜಗತ್ತಿಗೆಲ್ಲ ತೋರ್ಪಡಿಸಿದೆನು.
5ಪಿತನೇ, ಈ ಜಗತ್ತು ಉಂಟಾಗುವ ಮೊದಲೇ ನಿಮ್ಮೊಡನೆ ನನಗಿದ್ದ ಅದೇ ಮಹಿಮೆಯನ್ನು ಕೊಟ್ಟು
ನನ್ನನ್ನು ಈಗ ನಿಮ್ಮ ಸನ್ನಿಧಿಯಲ್ಲಿ ಮಹಿಮೆಪಡಿಸಿರಿ.

6 "ನೀವು ಲೋಕದಿಂದ ಆರಿಸಿ ನನಗೆ ಕೊಟ್ಟ ಜನರಿಗೆ ನಿಮ್ಮ ನಾಮವನ್ನು ತಿಳಿಯಪಡಿಸಿದ್ದೇನೆ.
ಇವರು ನಿಮ್ಮವರಾಗಿದ್ದರು. ಆದರೂ ಇವರನ್ನು ನನಗೆ ಕೊಟ್ಟಿರಿ. ನಿಮ್ಮ ಮಾತಿಗೆ ವಿಧೇಯರಾಗಿ ಇವರು
ನುಡಿದಿದ್ದಾರೆ. 7ನೀವು ನನಗೆ ಕೊಟ್ಟಿದೆಲ್ಲವೂ ನಿಜವಾಗಿ ನಿಮ್ಮಿಂದಲೇ ಬಂದಿರುವುದೆಂದು ಈಗ ಇವರಿಗೆ
ತಿಳಿದಿದೆ. 8ನಿಮ್ಮಿಂದ ನಾನು ಕಲಿತುದೆಲ್ಲವನ್ನೂ ಇವರಿಗೆ ತಿಳಿಯಪಡಿಸಿದ್ದೇನೆ. ಅವುಗಳನ್ನು ಅವರು
ಅಂಗೀಕರಿಸಿ ನಿಮ್ಮಿಂದಲೇ ನಾನು ಬಂದುದು ನಿಜವೆಂದು ಅರಿತುಕೊಂಡಿದ್ದಾರೆ. ನನ್ನನ್ನು ಕಳುಹಿಸಿದ್ದು
ನೀವೇ ಎಂದು ವಿಶ್ವಾಸಿಸಿದ್ದಾರೆ.

9 "ನಾನು ಪ್ರಾರ್ಥಿಸುವುದು ಇವರಿಗಾಗಿ, ಲೋಕಕ್ಕಾಗಿ ಅಲ್ಲ. ನೀವೇ ನನಗೆ ಕೊಟ್ಟವರಿಗಾಗಿ
ಪ್ರಾರ್ಥಿಸುತ್ತೇನೆ. 10ಏಕೆಂದರೆ, ಇವರು ನಿಮ್ಮವರು; ಇವರಿಂದ ನನಗೆ ಮಹಿಮೆ ಉಂಟಾಗಿದೆ. ನನ್ನದೆಲ್ಲವೂ
ನಿಮ್ಮದೇ; ನಿಮ್ಮದು ಎಲ್ಲವೂ ನನ್ನದೇ. 11ನಾನಿನ್ನು ಲೋಕದಲ್ಲಿ ಇರುವುದಿಲ್ಲ. ಇವರಾದರೋ ಲೋಕದಲ್ಲಿ
ಇರುತ್ತಾರೆ. ನಾನು ನಿಮ್ಮ ಬಳಿಗೆ ಬರುತ್ತಿದ್ದೇನೆ. ಪವಿತ್ರ ಪಿತನೇ, ನಾವು ಒಂದಾಗಿರುವಂತೆ ನೀವು ನನಗೆ
ಕೊಟ್ಟಿರುವ ಇವರೂ ಒಂದಾಗಿರುವ ಹಾಗೆ ನಿಮ್ಮ ನಾಮದ ಶಕ್ತಿಯಿಂದ ಇವರನ್ನು ಸುರಕ್ಷಿತವಾಗಿರಿಸಿರಿ.
12ನಾನು ಇವರೊಡನೆ ಇದ್ದಾಗ ಇವರನ್ನು ಕಾಪಾಡಿದೆನು. ನೀವಿತ್ತ ಇವರನ್ನು ನಿಮ್ಮ ನಾಮದ ಶಕ್ತಿಯಿಂದ
ಸುರಕ್ಷಿತವಾಗಿ ನೋಡಿಕೊಂಡು ಬಂದೆನು. ಪವಿತ್ರಗ್ರಂಥದ ಮಾತು ನೆರವೇರುವಂತೆ ವಿನಾಶಕ್ಕೆ
ಗುರಿಯಾಗಬೇಕಿದ್ದ ಒಬ್ಬನನ್ನು ಬಿಟ್ಟರೆ, ಇವರಲ್ಲಿ ಬೇರೆ ಯಾರೂ ನಾಶವಾಗಲಿಲ್ಲ. 13ಈಗ ನಾನು ನಿಮ್ಮ
ಬಳಿಗೆ ಬರುತ್ತಿದ್ದೇನೆ. ನನ್ನ ಆನಂದವು ಅವರ ಹೃದಯದಲ್ಲಿ ತುಂಬಿತುಳುಕುವಂತೆ ಈ
ಲೋಕದಲ್ಲಿರುವಾಗಲೇ ಇವುಗಳನ್ನು ಹೇಳುತ್ತಿದ್ದೇನೆ. 14ನಿಮ್ಮ ಸಂದೇಶವನ್ನು ಇವರಿಗೆ ತಿಳಿಸಿದ್ದೇನೆ. ನಾನು
ಲೋಕಕ್ಕೆ ಸೇರಿದವನಲ್ಲ. ಅಂತೆಯೇ, ಇವರೂ ಲೋಕಕ್ಕೆ ಸೇರಿದವರಲ್ಲ. ಈ ಕಾರಣ, ಲೋಕಕ್ಕೆ ಇವರ
ಮೇಲೆ ದ್ವೇಷವಿದೆ. 15ಇವರನ್ನು ಲೋಕದಿಂದ ತೆಗೆದುಬಿಡಬೇಕೆಂದು ನಾನು ನಿಮ್ಮನ್ನು ಕೇಳಿಕೊಳ್ಳುತ್ತಿಲ್ಲ.

ಆದರೆ ಕೇಡಿಗನಿಂದ ಇವರನ್ನು ಕಾಪಾಡಬೇಕೆಂದು ಕೇಳಿಕೊಳ್ಳುತ್ತೇನೆ. [16]ನಾನು ಲೋಕಕ್ಕೆ ಹೇಗೆ
ಸೇರಿದವನಲ್ಲವೋ ಹಾಗೆಯೇ ಇವರೂ ಲೋಕಕ್ಕೆ ಸೇರಿದವರಲ್ಲ. [17]ಇವರನ್ನು ಸತ್ಯಸಂಧರನ್ನಾಗಿಸಿ ನಿಮ್ಮ
ಸೇವೆಗೆ ಮೀಸಲಾಗಿಡಿ. ನಿಮ್ಮ ಮಾತೇ ಸತ್ಯ. [18]ನೀವು ನನ್ನನ್ನು ಲೋಕಕ್ಕೆ ಕಳಿಸಿದಂತೆ ನಾನು ಇವರನ್ನು
ಲೋಕಕ್ಕೆ ಕಳಿಸಿದ್ದೇನೆ. [19]ಸತ್ಯಸಂಧರಾಗಿ ಇವರು ನಿಮ್ಮ ಸೇವೆಗೆ ಮೀಸಲಾಗಬೇಕೆಂದು ನನ್ನನ್ನು ನಾನೇ
ಮೀಸಲಾಗಿಸಿಕೊಂಡಿದ್ದೇನೆ.

20 "ಇವರಿಗಾಗಿ ಮಾತ್ರವಲ್ಲ, ಇವರ ಮಾತನ್ನು ಕೇಳಿ ನನ್ನಲ್ಲಿ ವಿಶ್ವಾಸವಿಡುವವರಿಗಾಗಿಯೂ
ಪ್ರಾರ್ಥಿಸುತ್ತೇನೆ. [21]ಪಿತನೇ, ಇವರೆಲ್ಲಾ ಒಂದಾಗಿರಲಿ. ನೀವು ನನ್ನಲ್ಲಿ, ನಾನು ನಿಮ್ಮಲ್ಲಿ ಇರುವಂತೆಯೇ
ಇವರೂ ನಮ್ಮಲ್ಲಿ ಒಂದಾಗಿರಲಿ. ಹೀಗೆ, ನನ್ನನ್ನು ಕಳುಹಿಸಿದವರು ನೀವೇ ಎಂದು ಲೋಕವು
ವಿಶ್ವಾಸಿಸುವಂತಾಗಲಿ. [22]ನಾವು ಒಂದಾಗಿರುವಂತೆ ಇವರೂ ಒಂದಾಗಿರಲೆಂದು ನೀವು ನನಗಿತ್ತ
ಮಹಿಮೆಯನ್ನು ನಾನು ಇವರಿಗೆ ಕೊಟ್ಟಿದ್ದೇನೆ. [23]ನಾನು ಇವರಲ್ಲಿಯೂ ನೀವು ನನ್ನಲ್ಲಿಯೂ ಇದ್ದು, ಇವರ
ಐಕ್ಯಮತ್ಯವು ಪೂರ್ಣಸಿದ್ಧಿಗೆ ಬರಲಿ. ಆಗ ನೀವೇ ನನ್ನನ್ನು ಕಳುಹಿಸಿರುವಿರಿ ಎಂದೂ ನನ್ನನ್ನು
ಪ್ರೀತಿಸಿದಂತೆಯೇ ಇವರನ್ನು ನೀವು ಪ್ರೀತಿಸಿರುವಿರಿ ಎಂದೂ ಲೋಕಕ್ಕೆ ಮನವರಿಕೆ ಆಗುವುದು. [24]ಪಿತನೇ,
ಇವರನ್ನು ನೀವು ನನಗೆ ಕೊಟ್ಟಿರುವಿರಿ. ಜಗತ್ತು ಉಂಟಾಗುವ ಮೊದಲೇ ನೀವು ನನ್ನನ್ನು ಪ್ರೀತಿಸಿ ನನಗಿತ್ತ
ಮಹಿಮೆಯನ್ನು ಇವರೂ ಕಾಣುವಂತೆ ನಾನಿದ್ದಲ್ಲಿ ಇವರೂ ಇರಬೇಕೆಂದು ಆಶಿಸುತ್ತೇನೆ.
[25]ನೀತಿಸ್ವರೂಪಿಯಾದ ಪಿತನೇ, ಲೋಕವು ನಿಮ್ಮನ್ನು ಅರಿತುಕೊಳ್ಳಲಿಲ್ಲ. ಆದರೆ ನಾನು ಅರಿತಿದ್ದೇನೆ. ನನ್ನನ್ನು
ಕಳುಹಿಸಿದವರು ನೀವೆಂದು ಇವರು ತಿಳಿದುಕೊಂಡಿದ್ದಾರೆ. [26]ನಿಮ್ಮ ನಾಮವನ್ನು ನಾನು ಇವರಿಗೆ
ತಿಳಿಯಪಡಿಸಿದ್ದೇನೆ; ಇನ್ನೂ ತಿಳಿಯಪಡಿಸುತ್ತೇನೆ. ಹೀಗೆ ನೀವು ನನ್ನಲ್ಲಿಟ್ಟ ಪ್ರೀತಿಯು ಇವರಲ್ಲಿಯೂ
ಇರುವಂತಾಗುವುದು; ನಾನೂ ಅವರಲ್ಲಿ ಇರುವಂತಾಗುವುದು," ಎಂದು ಹೇಳಿದರು.

### ಯೇಸುವಿನ ಬಂಧನ

(ಮತ್ತಾ. 26.47–56; ಮಾರ್ಕ 14.43–50; ಲೂಕ 22.47–53)

**18** ಯೇಸುಸ್ವಾಮಿ ಹೀಗೆ ಹೇಳಿದ ಬಳಿಕ ತಮ್ಮ ಶಿಷ್ಯರೊಡನೆ ಹೊರಟು, ಕೆದ್ರೋನ್ ಹಳ್ಳವನ್ನು ದಾಟಿ,
ಅಲ್ಲೇ ಇದ್ದ ತೋಟವನ್ನು ಹೊಕ್ಕರು. [2]ಅವರು ತಮ್ಮ ಶಿಷ್ಯರೊಡನೆ ಆಗಾಗ ಅಲ್ಲಿಗೆ ಬರುವುದು ವಾಡಿಕೆ.
ಅವರನ್ನು ಹಿಡಿದುಕೊಡಲಿದ್ದ ಯೂದನಿಗೆ ಆ ಸ್ಥಳ ಚೆನ್ನಾಗಿ ಗೊತ್ತಿತ್ತು. [3]ಆದುದರಿಂದ ಯೂದನು ಸೈನಿಕರ
ಒಂದು ತಂಡವನ್ನೂ ಮುಖ್ಯ ಯಾಜಕರು ಮತ್ತು ಫರಿಸಾಯರು ಕಳುಹಿಸಿದ ಕಾವಲಾಳುಗಳನ್ನೂ
ಕರೆದುಕೊಂಡು ದೀವಟಿಗೆ, ಪಂಜು ಮತ್ತು ಆಯುಧಗಳ ಸಮೇತ ಅಲ್ಲಿಗೆ ಬಂದನು. [4]ಯೇಸುಸ್ವಾಮಿಗೆ
ತಮಗೆ ಸಂಭವಿಸಲಿರುವುದೆಲ್ಲವೂ ತಿಳಿದಿತ್ತು ಎಂದೇ ಮುಂದೆ ಬಂದು, "ನೀವು ಯಾರನ್ನು
ಹುಡುಕುತ್ತಿದ್ದೀರಿ?" ಎಂದು ಕೇಳಿದರು. [5]ಅವರು, "ನಜರೇತಿನ ಯೇಸುವನ್ನು" ಎಂದರು. ಯೇಸು, "ನಾನೇ
ಆತನು" ಎಂದು ಉತ್ತರಕೊಟ್ಟರು. ಅವರನ್ನು ಹಿಡಿದುಕೊಡಲಿದ್ದ ಗುರುದ್ರೋಹಿ ಯೂದನು ಅವರ
ಸಂಗಡವೇ ನಿಂತುಕೊಂಡಿದ್ದನು. [6]"ನಾನೇ ಆತನು," ಎಂದು ಯೇಸು ನುಡಿಯುತ್ತಲೇ, ಅವರೆಲ್ಲರೂ ಹಿಂದೆ
ಸರಿದು ನೆಲದ ಮೇಲೆ ಬಿದ್ದರು. [7]ಯೇಸು ಮತ್ತೊಮ್ಮೆ, "ನೀವು ಯಾರನ್ನು ಹುಡುಕುತ್ತಿದ್ದೀರಿ?" ಎಂದು
ಕೇಳಲು, "ನಜರೇತಿನ ಯೇಸುವನ್ನು" ಎಂದು ಉತ್ತರ ಬಂದಿತು. [8]ಅದಕ್ಕೆ ಯೇಸು, "ನಾನೇ ಆತನೆಂದು
ನಿಮಗೆ ಆಗಲೇ ಹೇಳಿದೆ. ನೀವು ಹುಡುಕುತ್ತಾ ಇರುವುದು ನನ್ನನ್ನಾದರೆ, ಮಿಕ್ಕ ಇವರನ್ನು ಹೋಗಬಿಡಿ,"
ಎಂದು ನುಡಿದರು. [9]('ನೀವು ನನಗೆ ಕೊಟ್ಟವರಲ್ಲಿ ಒಬ್ಬನನ್ನಾದರೂ ಕಳೆದು ಕೊಳ್ಳಲಿಲ್ಲ' ಎಂದು ತಾವೇ
ನುಡಿದ ಮಾತು ನೆರವೇರುವಂತೆ ಯೇಸು ಹೀಗೆಂದರು). [10]ಅಷ್ಟರೊಳಗೆ ಸಿಮೋನ ಪೇತ್ರನು ತನ್ನಲ್ಲಿದ್ದ
ಖಡ್ಗವನ್ನು ಹಿರಿದು, ಪ್ರಧಾನ ಯಾಜಕನ ಸೇವಕನಾದ ಮಾಲ್ಕನ ಬಲಗಿವಿಯನ್ನು ಕತ್ತರಿಸಿಬಿಟ್ಟನು. [11]ಆಗ
ಯೇಸು ಪೇತ್ರನಿಗೆ, "ನಿನ್ನ ಖಡ್ಗವನ್ನು ಒರೆಯಲ್ಲಿ ಹಾಕು. ನನ್ನ ಪಿತನೇ ಕೊಟ್ಟಿರುವ ಕಷ್ಟದ ಕೊಡವಿದು;
ಇದರಲ್ಲಿರುವುದನ್ನು ನಾನು ಕುಡಿಯದೆ ಹೋದರೆ ಹೇಗೆ?" ಎಂದು ನುಡಿದರು.

### ಅನ್ನನ ಮುಂದೆ ಯೇಸು

12 ಅನಂತರ ಸೈನಿಕರು, ಸಹಸ್ರಾಧಿಪತಿ ಹಾಗು ಯೆಹೂದ್ಯರು ಕಳುಹಿಸಿದ್ದ ಕಾವಲಾಳುಗಳು
ಯೇಸುವನ್ನು ಹಿಡಿದು ಕಟ್ಟಿ ಮೊದಲು ಅನ್ನನ ಬಳಿಗೆ ಕೊಂಡೊಯ್ದರು. 13ಅನ್ನನು, ಆ ವರ್ಷ ಪ್ರಧಾನ
ಯಜಕನಾಗಿದ್ದ ಕಾಯಫನ ಮಾವ. 14ಸಮಸ್ತ ಜನತೆಗಾಗಿ ಒಬ್ಬನು ಸತ್ತರೆ ವಿಹಿತವೆಂದು ಸಲಹೆಕೊಟ್ಟವನು
ಈ ಕಾಯಫನೇ.

### ಗುರುವನ್ನು ಅಲ್ಲಗಳೆದ ಪೇತ್ರ

(ಮತ್ತಾ. 26.69–70; ಮಾರ್ಕ 14.66–68; ಲೂಕ 22.55–57)

15 ಸಿಮೋನ್ ಪೇತ್ರನು ಮತ್ತು ಪ್ರಧಾನ ಯಾಜಕನಿಗೆ ಪರಿಚಿತನಾಗಿದ್ದ ಇನ್ನೊಬ್ಬ ಶಿಷ್ಯನು
ಯೇಸುಸ್ವಾಮಿಯನ್ನು ಹಿಂಬಾಲಿಸುತ್ತಾ ಹೋದರು. ಪರಿಚಿತನಾಗಿದ್ದ ಶಿಷ್ಯನು ಯೇಸುವಿನೊಡನೆ ಪ್ರಧಾನ
ಯಾಜಕನ ಮನೆಯ ಅಂಗಳವನ್ನು ಹೊಕ್ಕನು. 16ಪೇತ್ರನು ಹೊರಗಡೆ ಬಾಗಿಲ ಬಳಿಯಲ್ಲೇ ನಿಂತನು.
ಪರಿಚಿತನಾಗಿದ್ದವನು ಅನಂತರ ಹೊರಗೆ ಬಂದು ದ್ವಾರಪಾಲಕಿಗೆ ಹೇಳಿ ಪೇತ್ರನನ್ನು ಒಳಕ್ಕೆ ಕರೆದುಕೊಂಡು
ಹೋದನು. 17ಆ ದ್ವಾರಪಾಲಕಿಯು ಪೇತ್ರನನ್ನು ನೋಡಿ, "ನೀನೂ ಯೇಸುವಿನ ಶಿಷ್ಯರಲ್ಲಿ ಒಬ್ಬನಲ್ಲವೆ?"
ಎಂದು ಕೇಳಿದಳು. ಅದಕ್ಕೆ ಪೇತ್ರನು, "ಇಲ್ಲ, ನಾನಲ್ಲ," ಎಂದುಬಿಟ್ಟನು. 18ಆಗ ಚಳಿಯಿದ್ದುದರಿಂದ
ಸೇವಕರೂ ಕಾವಲಾಳುಗಳೂ ಇದ್ದಲಿನ ಬೆಂಕಿ ಮಾಡಿ, ಸುತ್ತಲೂ ನಿಂತು ಚಳಿಕಾಯಿಸಿಕೊಳ್ಳುತ್ತಿದ್ದರು.
ಪೇತ್ರನೂ ಅವರ ಸಂಗಡ ನಿಂತುಕೊಂಡು ಚಳಿಕಾಯಿಸಿಕೊಳ್ಳತೊಡಗಿದನು.

### ಪ್ರಧಾನಯಾಜಕನಿಂದ ವಿಚಾರಣೆ

(ಮತ್ತಾ. 26.59–66; ಮಾರ್ಕ 14.55–64; ಲೂಕ 22.66–71)

19 ಅಷ್ಟರಲ್ಲಿ ಪ್ರಧಾನಯಾಜಕನು ಯೇಸುಸ್ವಾಮಿಯನ್ನು ಅವರ ಶಿಷ್ಯರ ವಿಷಯವಾಗಿ ಹಾಗು
ಬೋಧನೆಯ ವಿಷಯವಾಗಿ ವಿಚಾರಿಸಿದನು. 20ಆಗ ಯೇಸುಸ್ವಾಮಿ, "ನಾನು ಬಹಿರಂಗವಾಗಿಯೇ
ಜನರೆಲ್ಲರೂ ಕೇಳುವಂತೆ ಮಾತನಾಡಿದ್ದೇನೆ; ಯೆಹೂದ್ಯರೆಲ್ಲರು ಸಭೆಸೇರುವ
ಪ್ರಾರ್ಥನಾಮಂದಿರಗಳಲ್ಲಿಯೂ ಮಹಾದೇವಾಲಯದಲ್ಲಿಯೂ ನಾನು ಯಾವಾಗಲೂ ಬೋಧನೆ
ಮಾಡಿಕೊಂಡು ಬಂದಿದ್ದೇನೆ. ಮುಚ್ಚುಮರೆಯಾಗಿ ಏನನ್ನೂ ಹೇಳಿಲ್ಲ. 21ನನ್ನನ್ನು ವಿಚಾರಿಸುವುದೇಕೆ? ನಾನು
ಹೇಳಿದ್ದನ್ನು ಯಾರು ಕೇಳಿದ್ದಾರೋ ಅವರನ್ನೇ ವಿಚಾರಿಸಿರಿ. ನಾನು ಬೋಧನೆ ಮಾಡಿದ್ದು ಏನೆಂದು ಅವರು
ಬಲ್ಲರು," ಎಂದು ಉತ್ತರಕೊಟ್ಟರು. 22ಯೇಸು ಹೀಗೆ ಹೇಳಲು ಬಳಿಯಲ್ಲೇ ನಿಂತಿದ್ದ ಕಾವಲಾಳೊಬ್ಬನು,
"ಪ್ರಧಾನ ಯಾಜಕರಿಗೆ ಉತ್ತರಕೊಡುವುದು ಹೀಗೆಯೇ?" ಎಂದು ಕೆನ್ನೆಗೆ ಹೊಡೆದನು. 23ಆಗ ಯೇಸು,
"ನಾನು ಆಡಿದ್ದು ತಪ್ಪಾಗಿದ್ದರೆ, ತಪ್ಪನ್ನು ತೋರಿಸಿಕೊಡು; ಸತ್ಯವಾಗಿದ್ದರೆ ಏಕೆ ಹೊಡೆಯುತ್ತೀ?" ಎಂದರು.
24ಆಗ ಅನ್ನನು ಯೇಸುವನ್ನು ಬಂಧಿಸಿ ಕಾಯಫನ ಬಳಿಗೆ ಕಳುಹಿಸಿದನು.

### ಮತ್ತೊಮ್ಮೆ ಅಲ್ಲಗಳೆದ ಪೇತ್ರ

(ಮತ್ತಾ. 26.71–75; ಮಾರ್ಕ 14.69–72; ಲೂಕ 22.58–62)

25 ಇತ್ತ ಪೇತ್ರನು ನಿಂತು ಚಳಿಕಾಯಿಸಿಕೊಳ್ಳುತ್ತಾ ಇದ್ದನು. ಅಲ್ಲಿದ್ದವರು, "ನೀನು ಯೇಸುವಿನ
ಶಿಷ್ಯರಲ್ಲಿ ಒಬ್ಬನಲ್ಲವೇ?" ಎಂದು ಕೇಳಿದರು. ಪೇತ್ರನು, "ಇಲ್ಲ, ನಾನು ಶಿಷ್ಯನಲ್ಲ," ಎಂದು ನಿರಾಕರಿಸಿದನು.
26ಪ್ರಧಾನಯಾಜಕನ ಸೇವಕರಲ್ಲಿ ಒಬ್ಬನು, (ಇವನು ಪೇತ್ರನು ಕಿವಿಕತ್ತರಿಸಿದವನ ನೆಂಟ) "ನಿನ್ನನ್ನು
ಆತನೊಡನೆ ತೋಟದಲ್ಲಿ ನಾನು ನೋಡಲಿಲ್ಲವೇ?" ಎಂದು ಕೇಳಿದನು. 27ಪೇತ್ರನು ಪುನಃ ಅಲ್ಲಗಳೆದನು.
ಕೂಡಲೇ ಕೋಳಿ ಕೂಗಿತು.

## ಪಿಲಾತನ ಮುಂದೆ ಯೇಸು

(ಮತ್ತಾ. 27.1–2, 11–14; ಮಾರ್ಕ 15.1–5; ಲೂಕ 23.1–5)

28 ಆಮೇಲೆ ಅವರು ಯೇಸುವನ್ನು ಕಾಯಫನ ಮನೆಯಿಂದ ರಾಜ್ಯಪಾಲನ ನಿವಾಸಕ್ಕೆ
ಕೊಂಡೊಯ್ದರು. ಆಗ ಮುಂಜಾನೆ, ಅರಮನೆಯೊಳಗೆ ಹೋದರೆ ಮಡಿಗೆಟ್ಟು ಹಬ್ಬದೂಟಕ್ಕೆ
ಅಡ್ಡಿಯಾದೀತೆಂದು ಅವರೆಲ್ಲರು ಹೊರಗೇ ನಿಂತರು. 29ಆದುದರಿಂದ ಪಿಲಾತನೇ ಅವರ ಬಳಿಗೆ ಬಂದು,
"ಈತನ ಮೇಲೆ ನಿಮ್ಮ ದೂರು ಏನು?" ಎಂದು ಕೇಳಿದನು. 30ಅವರು, "ಇವನು ಅಪರಾಧಿಯಲ್ಲದಿದ್ದರೆ,
ಇವನನ್ನು ನಿಮಗೆ ತಂದೊಪ್ಪಿಸುತ್ತಿರಲಿಲ್ಲ," ಎಂದರು. 31ಅದಕ್ಕೆ ಪಿಲಾತನು, "ಹಾಗಾದರೆ ನೀವೇ
ಕರೆದುಕೊಂಡು ಹೋಗಿ, ನಿಮ್ಮ ಧರ್ಮಶಾಸ್ತ್ರದ ಪ್ರಕಾರ ಈತನಿಗೆ ತೀರ್ಪುಕೊಡಿ," ಎಂದನು. ಯೆಹೂದ್ಯರು,
"ಮರಣದಂಡನೆ ವಿಧಿಸುವ ಅಧಿಕಾರ ನಮಗಿಲ್ಲವಲ್ಲಾ," ಎಂದು ಉತ್ತರಿಸಿದರು. 32ಯೇಸು ತಮಗೆ ಯಾವ
ಬಗೆಯ ಮರಣ ಕಾದಿರುವುದೆಂದು ಸೂಚಿಸಿ ಹೇಳಿದ ಮಾತು ಹೀಗೆ ನೆರವೇರುವಂತಾಯಿತು. 33ಆಗ
ಪಿಲಾತನು ಅರಮನೆಯೊಳಗೆ ಹೋಗಿ ಯೇಸುಸ್ವಾಮಿಯನ್ನು ಕರೆಯಿಸಿ, "ನೀನು ಯೆಹೂದ್ಯರ
ಅರಸನೋ?" ಎಂದು ಕೇಳಿದನು. 34ಅದಕ್ಕೆ ಯೇಸು, "ನೀವಾಗಿಯೇ ಇದನ್ನು ಹೇಳುತ್ತಿರುವಿರೋ ಅಥವಾ
ಬೇರೆ ಯಾರಾದರೂ ನನ್ನನ್ನು ಕುರಿತು ಹೀಗೆ ಹೇಳಿದರೋ?" ಎನ್ನಲು 35ಪಿಲಾತನು, "ನಾನೇನು
ಯೆಹೂದ್ಯನೇ? ನಿನ್ನ ಸ್ವಂತ ಜನರು ಮತ್ತು ಮುಖ್ಯಯಾಜಕರು ನಿನ್ನನ್ನು ನನ್ನ ಕೈಗೆ ಒಪ್ಪಿಸಿದ್ದಾರೆ. ನೀನು
ಏನು ಮಾಡಿದ್ದೀಯಾ?" ಎಂದು ಕೇಳಿದನು. 36ಅದಕ್ಕೆ ಯೇಸು, "ನನ್ನ ಸಾಮ್ರಾಜ್ಯ ಈ ಲೋಕದ್ದಲ್ಲ, ನನ್ನ
ಸಾಮ್ರಾಜ್ಯ ಈ ಲೋಕದ್ದಾಗಿದ್ದರೆ, ಯೆಹೂದ್ಯರ ಕೈಗೆ ನಾನು ಬೀಳದಂತೆ ನನ್ನ ಅನುಯಾಯಿಗಳು
ಕಾದಾಡುತ್ತಿದ್ದರು. ನಿಜವಾಗಿಯೂ ನನ್ನ ಸಾಮ್ರಾಜ್ಯ ಇಹಲೋಕದ್ದಲ್ಲ," ಎಂದರು. 37ಪಿಲಾತನು, "ಹಾಗಾದರೆ
ನೀನೊಬ್ಬ ಅರಸನೋ?" ಎಂದು ಕೇಳಲು ಯೇಸು, " 'ಅರಸ, ಎನ್ನುವುದು ನೀವು ಹೇಳುವ ಮಾತು.
ಸತ್ಯವನ್ನು ಕುರಿತು ಸಾಕ್ಷಿ ಹೇಳುವುದು ನನ್ನ ಕೆಲಸ. ಅದಕ್ಕಾಗಿಯೇ ನಾನು ಹುಟ್ಟಿದುದು. ಅದಕ್ಕಾಗಿಯೇ
ನಾನು ಜಗತ್ತಿಗೆ ಬಂದುದು. ಸತ್ಯಪರರೆಲ್ಲರೂ ನನ್ನ ಮಾತಿಗೆ ಕಿವಿಗೊಡುತ್ತಾರೆ," ಎಂದು ಹೇಳಿದರು. 38ಆಗ
ಪಿಲಾತನು, "ಸತ್ಯ, ಸತ್ಯ ಎಂದರೆ ಏನು?" ಎಂದು ಪ್ರಶ್ನಿಸಿ ಅಲ್ಲಿ ನಿಲ್ಲದೆ ಹೊರಗೆಬಂದನು.

## ಯೇಸುವಿಗೆ ಮರಣದಂಡನೆ

(ಮತ್ತಾ. 27.15–31; ಮಾರ್ಕ 15.6–20; ಲೂಕ 23.13–25)

39 ಹೀಗೆ ಪಿಲಾತನು ಹೊರಗೆ ಯೆಹೂದ್ಯರ ಬಳಿಗೆ ಬಂದು, "ನನಗೆ ಈತನಲ್ಲಿ ಯಾವ
ಅಪರಾಧವೂ ಕಾಣುವುದಿಲ್ಲ. ಪಾಸ್ಕಹಬ್ಬದ ಸಂದರ್ಭದಲ್ಲಿ ಒಬ್ಬ ಸೆರೆಯಾಳನ್ನು ಬಿಡುಗಡೆ ಮಾಡುವ
ಪದ್ಧತಿಯಿದೆಯಷ್ಟೆ? ಆದ್ದರಿಂದ ನೀವು ಬಯಸಿದರೆ ಯೆಹೂದ್ಯರ ಅರಸನನ್ನು ನಾನು ಬಿಡುಗಡೆ
ಮಾಡುತ್ತೇನೆ," ಎಂದು ಹೇಳಿದನು. 40ಅದಕ್ಕೆ ಅವರು, "ಬೇಡ, ಇವನು ಬೇಡ. ನಮಗೆ ಬರಬ್ಬನನ್ನು
ಬಿಟ್ಟುಕೊಡಿ," ಎಂದು ಬೊಬ್ಬೆ ಹಾಕಿದರು. ಬರಬ್ಬನೋ ಒಬ್ಬ ದರೋಡೆಕೋರನಾಗಿದ್ದನು.

## ಯೆಹೂದ್ಯರಿಗೆ ಹೆದರಿದ ಪಿಲಾತ

**19** ಆಮೇಲೆ ಪಿಲಾತನು ಯೇಸುಸ್ವಾಮಿಯನ್ನು ಅಲ್ಲಿಂದ ಕರೆದೊಯ್ದು ಕೊರಡೆಯಿಂದ ಹೊಡೆಸಿದನು.
2ಸೈನಿಕರೋ ಮುಳ್ಳಿನ ಕಿರೀಟವನ್ನು ಹೆಣೆದು ಅವರ ತಲೆಗೆ ಮುಡಿಸಿ, ಕೆನ್ನೇರಳೆ ಬಣ್ಣದ ಅಂಗಿಯನ್ನು
ಅವರಿಗೆ ಉಡಿಸಿ, ಹತ್ತಿರ ಬಂದು, 3"ಯೆಹೂದ್ಯರ ಅರಸನೇ, ನಿನಗೆ ಶುಭವಾಗಲಿ," ಎಂದು ಜರೆಯುತ್ತಾ
ಅವರ ಕೆನ್ನೆಗೆ ಹೊಡೆಯತೊಡಗಿದರು. 4ಪಿಲಾತನು ಮತ್ತೆ ಹೊರಗೆ ಬಂದು ಯೆಹೂದ್ಯರಿಗೆ, "ನೋಡಿ,
ನಾನು ಇವನನ್ನು ನಿಮ್ಮ ಮುಂದೆ ತರುತ್ತಿದ್ದೇನೆ. ನನಗೆ ಇವನಲ್ಲಿ ಯಾವ ಅಪರಾಧವೂ ಕಾಣಿಸುತ್ತಿಲ್ಲ
ಎಂಬುದು ನಿಮಗೆ ತಿಳಿದಿರಲಿ," ಎಂದು ಹೇಳಿದನು. 5ಆಗ ಯೇಸು ಮುಳ್ಳಿನ ಕಿರೀಟವನ್ನೂ ಕೆನ್ನೇರಳೆ

ಬಣ್ಣದ ಅಂಗಿಯನ್ನೂ ಧರಿಸಿದವರಾಗಿ ಹೊರಕ್ಕೆ ಬಂದರು. ಪಿಲಾತನು, “ಇಗೋ, ಈ ಮನುಷ್ಯ!” ಎಂದನು.
[6]ಮುಖ್ಯಯಾಜಕರೂ ಕಾವಲಾಳುಗಳೂ ಯೇಸುವನ್ನು ಕಂಡೊಡನೆ, “ಇವನನ್ನು ಶಿಲುಬೆಗೇರಿಸಿ,
ಶಿಲುಬೆಗೇರಿಸಿ,” ಎಂದು ಬೊಬ್ಬೆಹಾಕಿದರು. ಆಗ ಪಿಲಾತನು, “ಬೇಕಾದರೆ ನೀವೇ ಇವನನ್ನು ಕರೆದುಕೊಂಡು
ಹೋಗಿ ಶಿಲುಬೆಗೇರಿಸಿ. ನನಗಾದರೋ ಇವನಲ್ಲಿ ಯಾವ ಅಪರಾಧವೂ ಕಾಣಿಸಲಿಲ್ಲ,” ಎಂದನು. [7]ಅದಕ್ಕೆ
ಯೆಹೂದ್ಯರು, “ನಮಗೊಂದು ಕಾನೂನು ಉಂಟು. ಅದರ ಮೇರೆಗೆ ಇವನು ಸಾಯಲೇಬೇಕು. ಏಕೆಂದರೆ,
ತಾನು ದೇವರ ಪುತ್ರನೆಂದು ಹೇಳಿಕೊಂಡಿದ್ದಾನೆ,” ಎಂದು ಉತ್ತರಕೊಟ್ಟರು.

8 ಇದನ್ನು ಕೇಳಿದ್ದೇ, ಪಿಲಾತನಿಗೆ ಮತ್ತಷ್ಟು ಭಯವಾಯಿತು. [9]ಅವನು ಮತ್ತೆ ಅರಮನೆಯ ಒಳಕ್ಕೆ
ಬಂದು, “ನೀನು ಎಲ್ಲಿಂದ ಬಂದವನು?” ಎಂದು ಯೇಸುವನ್ನು ಕೇಳಿದನು. ಆದರೆ ಯೇಸು
ಉತ್ತರಕೊಡಲಿಲ್ಲ. [10]ಆಗ ಪಿಲಾತನು, “ನನ್ನೊಡನೆ ನೀನು ಮಾತನಾಡುವುದಿಲ್ಲವೇ? ನಿನ್ನನ್ನು ಬಿಡುಗಡೆ
ಮಾಡುವುದಕ್ಕೂ ನಿನ್ನನ್ನು ಶಿಲುಬೆಗೇರಿಸುವುದಕ್ಕೂ ನನಗೆ ಅಧಿಕಾರವಿದೆ ಎಂಬುದು ನಿನಗೆ ತಿಳಿಯದೋ?”
ಎಂದನು. [11]ಅದಕ್ಕೆ ಯೇಸು, “ನಿಮಗೆ ಮೇಲಿನಿಂದ ಕೊಟ್ಟ ಹೊರತು ನನ್ನ ಮೇಲೆ ನಿಮಗೆ ಯಾವ
ಅಧಿಕಾರವೂ ಇರುತ್ತಿರಲಿಲ್ಲ. ಆದ್ದರಿಂದ ನನ್ನನ್ನು ನಿಮ್ಮ ಕೈಗೆ ಒಪ್ಪಿಸಿದವನಿಗೇ ಪಾಪ ಹೆಚ್ಚು,” ಎಂದು
ನುಡಿದರು. [12]ಇದನ್ನು ಕೇಳಿದ ಮೇಲೆ ಪಿಲಾತನು ಯೇಸುವನ್ನು ಬಿಡುಗಡೆ ಮಾಡಲು ಪ್ರಯತ್ನಿಸಿದನು.
ಯೆಹೂದ್ಯರಾದರೋ, “ಇವನನ್ನು ಬಿಡುಗಡೆಮಾಡಿದರೆ, ನೀವು ರೋಮ್ ಚಕ್ರವರ್ತಿಯ ಮಿತ್ರರಲ್ಲ; ತಾನೇ
ಅರಸನೆಂದು ಹೇಳಿಕೊಳ್ಳುವ ಇವನು ರೋಮ್ ಚಕ್ರವರ್ತಿಗೆ ಶತ್ರು,” ಎಂದು ಕೂಗಿಕೊಂಡರು. [13]ಅವರ ಆ
ಕೂಗನ್ನು ಕೇಳಿ ಪಿಲಾತನು ಯೇಸುವನ್ನು ಹೊರಗೆ ಕರೆಯಿಸಿದನು. ‘ಹಾಸುಗಲ್ಲು’ ಎಂಬ ಕಟ್ಟೆಯ ಮೇಲಿದ್ದ
ನ್ಯಾಯಪೀಠದ ಮೇಲೆ ಕುಳಿತುಕೊಂಡನು. ಯೆಹೂದ್ಯರ ಭಾಷೆಯಲ್ಲಿ ಆ ಸ್ಥಳಕ್ಕೆ ‘ಗಬ್ಬಥ’ ಎಂದು ಹೆಸರು.
[14]ಅಂದು ಹಬ್ಬದ ಹಿಂದಿನ ದಿನ, ಮಧ್ಯಾಹ್ನ ಹನ್ನೆರಡು ಗಂಟೆ ಇರಬಹುದು. ಪಿಲಾತನು ಯೆಹೂದ್ಯರನ್ನು
ನೋಡಿ, “ಇಗೋ, ನಿಮ್ಮ ಅರಸನು,” ಎಂದು ಹೇಳಿದನು.

15 ಅವರಾದರೋ “ಕೊಲ್ಲಿರಿ, ಕೊಲ್ಲಿರಿ; ಶಿಲುಬೆಗೇರಿಸಿರಿ,” ಎಂದು ಕಿರುಚಿದರು. ಪಿಲಾತನು, “ನಿಮ್ಮ
ಅರಸನನ್ನು ಶಿಲುಬೆಗೇರಿಸಲೇ?” ಎಂದನು. ಅದಕ್ಕೆ ಮುಖ್ಯಯಾಜಕರು, “ರೋಮ್ ಚಕ್ರವರ್ತಿಯ ಹೊರತು
ನಮಗೆ ಬೇರೆ ಅರಸನಿಲ್ಲ,” ಎಂದು ಉತ್ತರಕೊಟ್ಟರು.

16 ಕಡೆಗೆ ಪಿಲಾತನು ಯೇಸುವನ್ನು ಶಿಲುಬೆಗೇರಿಸುವುದಕ್ಕಾಗಿ ಅವರಿಗೆ ಒಪ್ಪಿಸಿಬಿಟ್ಟನು. ಅವರು
ಯೇಸುವನ್ನು ತಮ್ಮ ವಶಕ್ಕೆ ತೆಗೆದುಕೊಂಡರು.

### ಶಿಲುಬೆಯ ಮೇಲೆ ಯೇಸು

(ಮತ್ತಾ. 27.32.44; ಮಾರ್ಕ 15.21–32; ಲೂಕ 23.26–43)

17 ಯೇಸುಸ್ವಾಮಿ ತಮ್ಮ ಶಿಲುಬೆಯನ್ನು ತಾವೇ ಹೊತ್ತುಕೊಂಡು ‘ಕಪಾಲ’ ಎಂಬ ಸ್ಥಳಕ್ಕೆ
ಹೋದರು. ಇದಕ್ಕೆ ಯೆಹೂದ್ಯರ ಭಾಷೆಯಲ್ಲಿ ‘ಗೊಲ್ಗೊಥಾ’ ಎಂದು ಹೆಸರು. [18]ಅಲ್ಲಿ ಯೇಸುವನ್ನು
ಶಿಲುಬೆಗೇರಿಸಿದರು. ಅವರ ಅಕ್ಕಪಕ್ಕದಲ್ಲಿ ಇನ್ನಿಬ್ಬರನ್ನೂ ಶಿಲುಬೆಗೆ ಹಾಕಿದರು. [19]ಪಿಲಾತನು ಒಂದು ಫಲಕದ
ಮೇಲೆ, ‘ನಜರೇತಿನ ಯೇಸು, ಯೆಹೂದ್ಯರ ಅರಸ’ ಎಂದು ಬರೆಸಿ ಶಿಲುಬೆಯ ಮೇಲ್ಗಡೆ ಇರಿಸಿದರು.
[20]ಯೇಸುವನ್ನು ಶಿಲುಬೆಗೇರಿಸಿದ ಸ್ಥಳ ನಗರಕ್ಕೆ ಸಮೀಪದಲ್ಲೇ ಇದ್ದುದರಿಂದ, ಹಲವು ಮಂದಿ ಯೆಹೂದ್ಯರು
ಆ ಫಲಕವನ್ನು ಓದಿದರು. ಅದನ್ನು ಹಿಬ್ರಿಯ, ಲತೀನ್ ಮತ್ತು ಗ್ರೀಕ್ ಭಾಷೆಗಳಲ್ಲಿ ಬರೆಯಲಾಗಿತ್ತು.
[21]ಆದುದರಿಂದ ಯೆಹೂದ್ಯರ ಮುಖ್ಯ ಯಾಜಕರು ಪಿಲಾತನಿಗೆ: “ಯೆಹೂದ್ಯರ ಅರಸ ಎಂದು
ಬರೆಯುವುದು ಬೇಡ, ತಾನು ‘ಯೆಹೂದ್ಯರ ಅರಸನೆಂದು ಹೇಳಿಕೊಂಡವನು’ ಎಂದು ಬರೆಯಿರಿ,”
ಎಂದರು. [22]ಅದಕ್ಕೆ ಪಿಲಾತನು, “ನಾನು ಬರೆದುದು ಬರೆದಾಯಿತು,” ಎಂದನು. [23]ಯೇಸುವನ್ನು
ಶಿಲುಬೆಗೇರಿಸಿದ ಬಳಿಕ ಸೈನಿಕರು ಯೇಸುವಿನ ಬಟ್ಟೆಗಳನ್ನು ತೆಗೆದುಕೊಂಡು ಒಬ್ಬೊಬ್ಬರಿಗೆ ಒಂದೊಂದು
ಪಾಲಿನಂತೆ ನಾಲ್ಕು ಪಾಲುಮಾಡಿ ಹಂಚಿಕೊಂಡರು. ಅವರ ಒಳ ಅಂಗಿಯಾದರೋ ಹೊಲಿಗೆಯಿಲ್ಲದೆ
ಮೇಲಿಂದ ಕೆಳಗಿನವರೆಗೆ ಹೆಣೆದದ್ದಾಗಿತ್ತು. [24]ಅದನ್ನು ತೆಗೆದುಕೊಂಡು ಅವರು ತಮ್ಮತಮ್ಮೊಳಗೆ, “ಇದನ್ನು

ಹರಿಯುವುದು ಬೇಡ, ಚೀಟಿ ಹಾಕಿ ಯಾರ ಪಾಲಿಗೆ ಬರುವುದೋ ನೋಡೋಣ," ಎಂದು ಮಾತಾಡಿಕೊಂಡು ಹಾಗೆಯೆ ಮಾಡಿದರು.

"ನನ್ನ ಬಟ್ಟೆಗಳನ್ನು ತಮ್ಮಲ್ಲಿ ಹಂಚಿ
ಕೊಂಡರು;
ನನ್ನ ಅಂಗಿಗಾಗಿ ಚೀಟು ಹಾಕಿದರು,"

ಎಂಬ ಪವಿತ್ರ ಗ್ರಂಥದ ವಾಕ್ಯ ಹೀಗೆ ನೆರವೇರಿತು. [25]ಯೇಸುವಿನ ತಾಯಿ, ತಾಯಿಯ ಸಹೋದರಿ, ಕ್ಲೋಪನ ಹೆಂಡತಿ ಮರಿಯ ಮತ್ತು ಮಗ್ದಲದ ಮರಿಯ – ಇವರು ಶಿಲುಬೆಯ ಬಳಿಯಲ್ಲಿ ನಿಂತಿದ್ದರು. [26]ಯೇಸು ತಮ್ಮ ತಾಯನ್ನೂ ಆಕೆಯ ಪಕ್ಕದಲ್ಲಿ ನಿಂತಿದ್ದ ತಮ್ಮ ಆಪ್ತ ಶಿಷ್ಯನನ್ನೂ ನೋಡಿ, "ಅಮ್ಮಾ, ಇಗೋ, ನಿನ್ನ ಮಗ," ಎಂದರು. [27]ಅನಂತರ ತಮ್ಮ ಶಿಷ್ಯನನ್ನು ಕುರಿತು, "ಇಗೋ, ನಿನ್ನ ತಾಯಿ," ಎಂದರು. ಅಂದಿನಿಂದ ಆ ಶಿಷ್ಯನು ಆಕೆಯನ್ನು ತನ್ನ ಮನೆಯಲ್ಲೇ ಇರಿಸಿಕೊಂಡನು.

## ಯೇಸುವಿನ ಮರಣ

(ಮತ್ತಾ. 27.45–56; ಮಾರ್ಕ 15.33–41; ಲೂಕ 23.44–49)

28 ಇದಾದ ಮೇಲೆ ಯೇಸುಸ್ವಾಮಿ ನೆರವೇರಬೇಕಾದುದೆಲ್ಲವೂ ನೆರವೇರಿದೆ ಎಂದು ತಿಳಿದು ಪವಿತ್ರಗ್ರಂಥದಲ್ಲಿ ಬರೆದುದು ಈಡೇರುವಂತೆ, "ನನಗೆ ದಾಹವಾಗಿದೆ," ಎಂದು ನುಡಿದರು. [29]ಬಳಿಯಲ್ಲೇ ಹುಳಿರಸ ತುಂಬಿದ ಪಾತ್ರೆಯೊಂದಿತ್ತು. ಅವರು ಸ್ಪಂಜನ್ನು ಆ ಹುಳಿರಸದಲ್ಲಿ ತೋಯಿಸಿ ಹಿಸೋಪ್‌ಗಿಡದ ಕೋಲಿಗೆ ಸಿಕ್ಕಿಸಿ, ಯೇಸುವಿನ ಬಾಯಿಗೆ ಮುಟ್ಟಿಸಿದರು. [30]ಯೇಸು ಆ ಹುಳಿರಸವನ್ನು ಸೇವಿಸುತ್ತಲೇ, "ಎಲ್ಲಾ ನೆರವೇರಿತು," ಎಂದು ನುಡಿದು ತಲೆಬಾಗಿ ತಮ್ಮ ಆತ್ಮವನ್ನು ಒಪ್ಪಿಸಿದರು.

## ತಾವು ಇರಿದವನನ್ನೇ ನಿರೀಕ್ಷಿಸುವರು

31 ಅಂದು ಪಾಸ್ಕ ಹಬ್ಬದ ಹಿಂದಿನ ದಿನ. ಮಾರನೆಯ ದಿನ ಸಬ್ಬತ್ ದಿನವೂ ದೊಡ್ಡ ಹಬ್ಬವೂ ಆಗಿತ್ತು. ಸಬ್ಬತ್ ದಿನದಂದು ಶವಗಳು ಶಿಲುಬೆಯ ಮೇಲೆ ತೂಗಾಡುವುದು ಸರಿಯಲ್ಲ ಎಂದುಕೊಂಡು ಶಿಲುಬೆಗೇರಿಸಲಾಗಿದ್ದವರ ಕಾಲುಗಳನ್ನು ಮುರಿದು ಅವರ ಶವವನ್ನು ಅಂದೇ ತೆಗೆಯಿಸಿಬಿಡಲು ಯೆಹೂದ್ಯರು ಪಿಲಾತನಿಂದ ಅಪ್ಪಣೆ ಕೇಳಿಕೊಂಡರು. [32]ಅಂತೆಯೇ ಸೈನಿಕರು ಬಂದು ಯೇಸುವಿನೊಡನೆ ಶಿಲುಬೆಗೇರಿಸಲಾಗಿದ್ದ ಮೊದಲನೆಯವನ ಮತ್ತು ಎರಡನೆಯವನ ಕಾಲುಗಳನ್ನು ಮುರಿದರು. [33]ತರುವಾಯ ಯೇಸುವಿನ ಬಳಿಗೆ ಬಂದರು. ಯೇಸು ಆಗಲೇ ಸತ್ತುಹೋಗಿರುವುದನ್ನು ಕಂಡು, ಅವರ ಕಾಲುಗಳನ್ನು ಮುರಿಯಲಿಲ್ಲ. [34]ಆದರೂ ಸೈನಿಕರಲ್ಲಿ ಒಬ್ಬನು ಈಟಿಯಿಂದ ಅವರ ಪಕ್ಕೆಯನ್ನು ತಿವಿದನು. ಕೂಡಲೇ ರಕ್ತವೂ ನೀರೂ ಅಲ್ಲಿಂದ ಹೊರಗೆ ಹರಿದು ಬಂದವು. [35]ಇದು ಕಣ್ಣಾರೆ ಕಂಡವನ ಹೇಳಿಕೆ. ಈ ಹೇಳಿಕೆ ಸತ್ಯವಾದುದು; ತಾನು ಸತ್ಯವನ್ನೇ ನುಡಿಯುತ್ತಿದ್ದೇನೆಂಬ ಅರಿವು ಅವನಿಗೆ ಇದೆ. ನೀವು ವಿಶ್ವಾಸಿಸಬೇಕೆಂದೇ ಆತನು ಇದನ್ನು ಹೇಳಿದ್ದಾನೆ. [36]'ಆತನ ಎಲುಬೊಂದನ್ನು ಮುರಿಯಕೂಡದು' ಎಂದು ಪವಿತ್ರಗ್ರಂಥದಲ್ಲಿ ಬರೆದಿದೆ. ಆ ವಾಕ್ಯ ನೆರವೇರುವಂತೆ ಹೀಗೆ ನಡೆಯಿತು. [37]'ತಾವು ಇರಿದವನನ್ನೇ ಅವರು ನಿರೀಕ್ಷಿಸುವರು' ಎನ್ನುತ್ತದೆ ಇನ್ನೊಂದು ವಾಕ್ಯ.

## ಶವಸಂಸ್ಕಾರ

(ಮತ್ತಾ. 27.57–61; ಮಾರ್ಕ 15.42–47; ಲೂಕ 23.50–56)

38 ಅರಿಮತಾಯ ಊರಿನ ಜೋಸೆಫ್ ಎಂಬುವನೂ ಕೂಡ ಯೇಸುವಿನ ಶಿಷ್ಯರಲ್ಲಿ ಒಬ್ಬನು. ಈತನು ಯೆಹೂದ್ಯರಿಗೆ ಹೆದರಿ ತಾನು ಶಿಷ್ಯನೆಂದು ತೋರಿಸಿಕೊಳ್ಳುತ್ತಿರಲಿಲ್ಲ. ಮೇಲೆ ಹೇಳಿದ್ದೆಲ್ಲ ನಡೆದಾದ ಮೇಲೆ ಈತನು ಯೇಸುವಿನ ಪಾರ್ಥಿವ ಶರೀರವನ್ನು ಕೊಂಡೊಯ್ಯಲು ಪಿಲಾತನಿಂದ ಅಪ್ಪಣೆ ಕೇಳಿದನು. ಪಿಲಾತನು ಒಪ್ಪಿಗೆ ಕೊಡಲು ಈತನು ಬಂದು ಪಾರ್ಥಿವ ಶರೀರವನ್ನು ಕೊಂಡೊಯ್ದನು. [39]ಈತನು ಮಾತ್ರವಲ್ಲ, ಹಿಂದೊಮ್ಮೆ ಯೇಸುವನ್ನು ರಾತ್ರಿಯಲ್ಲಿ ನೋಡಲು ಬಂದಿದ್ದ ನಿಕೋದೇಮನು ಕೂಡ ಅಲ್ಲಿಗೆ

ಬಂದನು. ಇವನು ರಕ್ತಬೋಳ ಹಾಗೂ ಅಗರು ಕಲಸಿದ ಮೂವತ್ತು ಕಿಲೋಗ್ರಾಮಿನಷ್ಟು ಚೂರ್ಣವನ್ನು ತಂದಿದ್ದನು. [40]ಇವರು ಯೇಸುವಿನ ಪಾರ್ಥಿವ ಶರೀರವನ್ನು ತೆಗೆದು ಯೆಹೂದ್ಯರ ಶವಸಂಸ್ಕಾರದ ಪದ್ದತಿಯಂತೆ ಸುಗಂಧ ದ್ರವ್ಯಗಳನ್ನು ಹಾಕಿ ನಾರುಮಡಿಯಲ್ಲಿ ಸುತ್ತಿದರು. [41]ಯೇಸುವನ್ನು ಶಿಲುಬೆಗೇರಿಸಿದ ಸ್ಥಳದಲ್ಲಿ ಒಂದು ತೋಟವಿತ್ತು. ಆ ತೋಟದಲ್ಲಿ ಅದುವರೆಗೆ ಯಾರ ಶವವನ್ನೂ ಇಡದ ಹೊಸ ಸಮಾಧಿ ಇತ್ತು. [42]ಸಮಾಧಿಯು ಹತ್ತಿರದಲ್ಲೇ ಇದ್ದುದರಿಂದ ಹಾಗೂ ಮರುದಿನ ಪಾಸ್ಕಹಬ್ಬವಾದುದರಿಂದ ಯೇಸುವಿನ ಪಾರ್ಥಿವ ಶರೀರವನ್ನು ಅಲ್ಲೇ ಸಮಾಧಿ ಮಾಡಿದರು.

### ಬರಿದಾಗಿದ್ದ ಸಮಾಧಿ

(ಮತ್ತಾ. 28.1–8; ಮಾರ್ಕ 16.1–8; ಲೂಕ 24.1–12)

**20** ಅಂದು ಭಾನುವಾರ, ಮುಂಜಾನೆ. ಇನ್ನೂ ಕತ್ತಲಾಗಿತ್ತು. ಮಗ್ದಲದ ಮರಿಯಳು ಸಮಾಧಿಯ ಬಳಿಗೆ
ಬಂದಳು. ಸಮಾಧಿಯ ಬಾಗಿಲಿಗೆ ಮುಚ್ಚಲಾಗಿದ್ದ ಕಲ್ಲು ಅಲ್ಲಿಂದ ತೆಗೆದುಹಾಕಿರುವುದನ್ನು ಕಂಡಳು. [2]ಆಗ
ಆಕೆ ಸಿಮೋನ ಪೇತ್ರನ ಮತ್ತು ಯೇಸುವಿಗೆ ಆಪ್ತನಾಗಿದ್ದ ಇನ್ನೊಬ್ಬ ಶಿಷ್ಯನ ಬಳಿಗೆ ಓಡಿ ಬಂದು,
"ಪ್ರಭುವನ್ನು ಸಮಾಧಿಯೊಳಗಿಂದ ತೆಗೆದುಕೊಂಡು ಹೋಗಿಬಿಟ್ಟಿದ್ದಾರೆ; ಅವರನ್ನು ಎಲ್ಲಿ ಇಟ್ಟಿದ್ದಾರೋ
ಗೊತ್ತಿಲ್ಲ," ಎಂದು ಹೇಳಿದಳು. [3]ಇದನ್ನು ಕೇಳಿ ಪೇತ್ರನೂ ಇನ್ನೊಬ್ಬ ಶಿಷ್ಯನೂ ಸಮಾಧಿಯ ಕಡೆಗೆ
ಹೊರಟರು. [4]ಇಬ್ಬರೂ ಓಡಿದರು. ಆ ಇನ್ನೊಬ್ಬ ಶಿಷ್ಯನು ಪೇತ್ರನಿಗಿಂತ ಮುಂದೆ ಓಡಿ ಸಮಾಧಿಯನ್ನು
ಮೊದಲು ತಲುಪಿದನು. [5]ಅವನು ಬಗ್ಗಿ ನೋಡಿದಾಗ ಅಲ್ಲಿ ನಾರುಬಟ್ಟೆಗಳು ಬಿದ್ದಿರುವುದು ಕಾಣಿಸಿತು.
ಆದರೆ ಅವನು ಒಳಗೆ ನುಗ್ಗಲಿಲ್ಲ. [6]ಅವನ ಹಿಂದೆಯೇ ಸಿಮೋನ ಪೇತ್ರನು ಬಂದು ನೆಟ್ಟಗೆ ಸಮಾಧಿಯೊಳಗೆ
ನುಗ್ಗಿದನು; ಅಲ್ಲಿ ನಾರುಮಡಿಗಳು ಬಿದ್ದಿರುವುದನ್ನು ಕಂಡನು. [7]ಯೇಸುವಿನ ತಲೆಗೆ ಸುತ್ತಿದ್ದ ಬಟ್ಟೆ, ಆ
ನಾರುಮಡಿಗಳೊಡನೆ ಇರದೆ, ಅದನ್ನು ಮಡಚಿ ಪ್ರತ್ಯೇಕವಾಗಿ ಇಟ್ಟಿರುವುದನ್ನು ಕಂಡನು. [8]ಸಮಾಧಿಯನ್ನು
ಮೊದಲು ತಲುಪಿದ್ದ ಇನ್ನೊಬ್ಬ ಶಿಷ್ಯನೂ ಆಮೇಲೆ ಒಳಗೆ ನುಗ್ಗಿ ನೋಡಿದನು; ನೋಡಿ ನಂಬಿದನು.
[9]ಯೇಸು ಸತ್ತ ಮೇಲೆ ಮರಳಿ ಜೀವಂತರಾಗಿ ಎದ್ದುಬರಬೇಕು, ಎಂಬ ಪವಿತ್ರಗ್ರಂಥದ ವಾಕ್ಯ ಅವರಿಗೆ
ಅದುವರೆಗೆ ಅರ್ಥವಾಗಿರಲಿಲ್ಲ. [10]ತರುವಾಯ ಆ ಶಿಷ್ಯರು ತಮ್ಮ ಮನೆಗೆ ಹಿಂದಿರುಗಿದರು.

### ಮರಿಯಳಿಗೆ ದರ್ಶನ

[11–12]ಮರಿಯಳು ಅಳುತ್ತಾ ಸಮಾಧಿಯ ಹೊರಗೆ ನಿಂತುಕೊಂಡಿದ್ದಳು. ಆಕೆ ಅಳುತ್ತಾ
ಸಮಾಧಿಯೊಳಗೆ ಬಗ್ಗಿ ನೋಡಿದಾಗ ಶ್ವೇತವಸ್ತ್ರಧಾರಿಗಳಾದ ಇಬ್ಬರು ದೇವದೂತರನ್ನು ಅಲ್ಲಿ ಕಂಡಳು.
ಯೇಸುವಿನ ಪಾರ್ಥಿವ ಶರೀರವನ್ನು ಇಟ್ಟಿದ್ದ ಸ್ಥಳದಲ್ಲಿ, ಒಬ್ಬನು ಅವರ ತಲೆಯಿದ್ದ ಕಡೆಯಲ್ಲೂ ಮತ್ತೊಬ್ಬನು
ಕಾಲಿದ್ದ ಕಡೆಯಲ್ಲೂ ಕುಳಿತಿದ್ದರು. [13]ಅವರು ಆಕೆಯನ್ನು, "ಏಕಮ್ಮಾ ಅಳುತ್ತಿರುವೆ?" ಎಂದು ಕೇಳಿದರು.
"ನನ್ನ ಪ್ರಭುವನ್ನು ತೆಗೆದುಕೊಂಡು ಹೋಗಿ ಬಿಟ್ಟಿದ್ದಾರೆ. ಎಲ್ಲಿ ಇಟ್ಟಿದ್ದಾರೋ ತಿಳಿಯದು," ಎಂದಳು. [14]ಹಾಗೆ
ಹೇಳಿ ಹಿಂದಕ್ಕೆ ತಿರುಗಿದಾಗ ಅಲ್ಲೇ ಯೇಸು ನಿಂತಿರುವುದು ಆಕೆಗೆ ಕಾಣಿಸಿತು. ಆದರೆ ಯೇಸುವೇ
ಅವರೆಂದು ಆಕೆಗೆ ತಿಳಿಯಲಿಲ್ಲ. [15]ಯೇಸು, "ಏಕಮ್ಮಾ ಅಳುತ್ತಿರುವೇ? ಏನನ್ನು ಹುಡುಕುತ್ತಿರುವೇ?" ಎಂದು
ಕೇಳಿದಾಗಲೂ ಮರಿಯಳು ಅವರು ತೋಟಗಾರನೆಂದು ಭಾವಿಸಿ, "ಅಯ್ಯಾ, ನೀವೇನಾದರೂ ಅವರನ್ನು
ಕೊಂಡೊಯ್ದಿದ್ದರೆ ಎಲ್ಲಿ ಇಟ್ಟಿರುವಿರಿ, ಹೇಳಿ; ನಾನು ತೆಗೆದುಕೊಂಡು ಹೋಗುತ್ತೇನೆ," ಎಂದು ಹೇಳಿದಳು.
[16]ಆಗ ಯೇಸು, "ಮರಿಯಾ" ಎಂದು ಹೆಸರಿಡಿದು ಕರೆದರು. ಆಕೆ ಹಿಂದಿರುಗಿ ನೋಡಿ, "ರಬ್ಬೂನಿ"
ಎಂದಳು. (ಯೆಹೂದ್ಯರ ಭಾಷೆಯಲ್ಲಿ ಹಾಗೆಂದರೆ "ಗುರುದೇವಾ" ಎಂದರ್ಥ). [17]ಯೇಸು ಆಕೆಗೆ, "ನನ್ನನ್ನು
ಹಿಡಿದುಕೊಂಡಿರಬೇಡ, ನಾನು ಇನ್ನೂ ಪಿತನ ಬಳಿಗೆ ಏರಿಹೋಗಿಲ್ಲ. ನೀನು ನನ್ನ ಸಹೋದರರ ಬಳಿಗೆ
ಹೋಗಿ ನನ್ನ ಪಿತನೂ ನಿಮ್ಮ ಪಿತನೂ ನನ್ನ ದೇವರೂ ನಿಮ್ಮ ದೇವರೂ ಆಗಿರುವಾತನಲ್ಲಿಗೆ ನಾನು ಏರಿ
ಹೋಗುತ್ತೇನೆಂದು ತಿಳಿಸು," ಎಂದು ಹೇಳಿದರು.

18 ಮಗ್ದಲದ ಮರಿಯಳು ಶಿಷ್ಯರ ಬಳಿಗೆ ಬಂದು, “ನಾನು ಪ್ರಭುವನ್ನು ಕಂಡೆ. ಅವರು ಹೀಗೆಲ್ಲಾ
ಹೇಳಿದರು,” ಎಂದು ತಿಳಿಸಿದಳು.

### ಶಿಷ್ಯರಿಗೆ ದರ್ಶನ

(ಮತ್ತಾ. 28.16–20; ಮಾರ್ಕ 16.14–18; ಲೂಕ 24.36–49)

19 ಅದೇ ಭಾನುವಾರ ಸಂಜೆ ಶಿಷ್ಯರು ಒಂದು ಮನೆಯಲ್ಲಿ ಕೂಡಿದ್ದರು. ಯೆಹೂದ್ಯರಿಗೆ ಅಂಜಿ
ಮನೆಯ ಬಾಗಿಲುಗಳನ್ನು ಮುಚ್ಚಿಕೊಂಡು ಒಳಗೇ ಇದ್ದರು. ಆಗ ಯೇಸು ಬಂದು ಅವರ ನಡುವೆ ನಿಂತರು.
20“ನಿಮಗೆ ಶಾಂತಿ” ಎಂದು ಹೇಳಿ ತಮ್ಮ ಕೈಗಳನ್ನು ಮತ್ತು ಪಕ್ಕೆಗಳನ್ನು ತೋರಿಸಿದರು. ಪ್ರಭುವನ್ನು ಕಂಡು
ಶಿಷ್ಯರಿಗೆ ಮಹದಾನಂದವಾಯಿತು. 21ಯೇಸು ಪುನಃ, “ನಿಮಗೆ ಶಾಂತಿ, ಪಿತನು ನನ್ನನ್ನು
ಕಳುಹಿಸಿದಂತೆಯೇ ನಾನೂ ನಿಮ್ಮನ್ನು ಕಳುಹಿಸುತ್ತೇನೆ,” ಎಂದರು. 22ಅನಂತರ ಅವರ ಮೇಲೆ ಉಸಿರೂದಿ,
“ಪವಿತ್ರಾತ್ಮರನ್ನು ಸ್ವೀಕರಿಸಿರಿ. 23ಯಾರ ಪಾಪಗಳನ್ನು ನೀವು ಕ್ಷಮಿಸುತ್ತೀರೋ, ಅವರಿಗೆ ಅವನ್ನು
ಕ್ಷಮಿಸಲಾಗುವುದು; ಯಾರ ಪಾಪಗಳನ್ನು ನೀವು ಕ್ಷಮಿಸದೆ ಉಳಿಸುತ್ತೀರೋ, ಅವರಿಗೆ ಕ್ಷಮಿಸದೆ
ಉಳಿಸಲಾಗುವುದು,” ಎಂದು ನುಡಿದರು.

### ತೋಮನಿಗೆ ದರ್ಶನ

24 ಹನ್ನೆರಡು ಮಂದಿಯಲ್ಲಿ ಒಬ್ಬನಾದ ದಿದುಮ ಎಂಬ ತೋಮನು, ಯೇಸುಸ್ವಾಮಿ ಬಂದಾಗ
ಶಿಷ್ಯರೊಡನೆ ಇರಲಿಲ್ಲ. 25ಉಳಿದ ಶಿಷ್ಯರು “ನಾವು ಪ್ರಭುವನ್ನು ನೋಡಿದೆವು,” ಎಂದು ಹೇಳಿದರು. ಅದಕ್ಕೆ
ಅವನು, “ಅವರ ಕೈಗಳಲ್ಲಿ ಮೊಳೆಗಳಿಂದಾದ ಗಾಯದ ಕಲೆಯನ್ನು ನಾನು ನೋಡಬೇಕು, ಮೊಳೆಗಳು
ಜಡಿದಿದ್ದ ಜಾಗದಲ್ಲಿ ನನ್ನ ಬೆರಳನ್ನಿಡಬೇಕು, ಅವರ ಪಕ್ಕೆಯಲ್ಲಿ ನನ್ನ ಕೈಯನ್ನು ಇಟ್ಟು ನೋಡಬೇಕು. ಆ
ಹೊರತು ನಾನು ನಂಬುವುದೇ ಇಲ್ಲ,” ಎಂದುಬಿಟ್ಟನು.

26 ಎಂಟು ದಿನಗಳು ಕಳೆದವು. ಶಿಷ್ಯರು ಪುನಃ ಒಳಗೆ ಒಟ್ಟುಗೂಡಿದ್ದರು. ತೋಮನೂ
ಅವರೊಡನೆ ಇದ್ದನು. ಬಾಗಿಲುಗಳು ಮುಚ್ಚಿದ್ದರೂ ಯೇಸು ಬಂದು ಅವರ ನಡುವೆ ನಿಂತು, “ನಿಮಗೆ
ಶಾಂತಿ” ಎಂದರು. 27ಆಮೇಲೆ ತೋಮನಿಗೆ, “ಇಗೋ ನೋಡು, ನನ್ನ ಕೈಗಳು; ನಿನ್ನ ಬೆರಳನ್ನು ತಂದು
ಇಲ್ಲಿಡು. ನಿನ್ನ ಕೈಯನ್ನು ಚಾಚಿ ನನ್ನ ಪಕ್ಕೆಯಲ್ಲಿಡು; ವಿಶ್ವಾಸರಹಿತನಾಗಿರಬೇಡ, ವಿಶ್ವಾಸಿಸು,” ಎಂದು
ಹೇಳಿದರು. 28ಆಗ ತೋಮನು, “ನನ್ನ ಪ್ರಭುವೇ, ನನ್ನ ದೇವರೇ,” ಎಂದನು. 29ಯೇಸು ಅವನಿಗೆ “ನನ್ನನ್ನು
ಕಂಡುದರಿಂದ ತಾನೆ ನಿನಗೆ ವಿಶ್ವಾಸ ಹುಟ್ಟಿತು? ಕಾಣದೆ ವಿಶ್ವಾಸಿಸುವವರು ಧನ್ಯರು,” ಎಂದು ಹೇಳಿದರು.

### ಉಪಸಂಹಾರ

30ಯೇಸು ತಮ್ಮ ಶಿಷ್ಯರ ಕಣ್ಮುಂದೆ ಮಾಡಿದ ಸೂಚಕಕಾರ್ಯಗಳು ಇನ್ನೂ ಎಷ್ಟೋ ಇವೆ. ಅವನ್ನು
ಈ ಪುಸ್ತಕದಲ್ಲಿ ಬರೆದಿಲ್ಲ. 31ಇಲ್ಲಿ ಬರೆದವುಗಳ ಉದ್ದೇಶ ಇಷ್ಟೇ: ಯೇಸು, ದೇವರಪುತ್ರ ಹಾಗು
ಲೋಕೋದ್ಧಾರಕ ಎಂದು ನೀವು ವಿಶ್ವಾಸಿಸಬೇಕು; ವಿಶ್ವಾಸಿಸಿ ಅವರ ಹೆಸರಿನಲ್ಲಿ ಸಜ್ಜೀವವನ್ನು
ಪಡೆಯಬೇಕು.

### ಏಳು ಮಂದಿ ಶಿಷ್ಯರಿಗೆ ದರ್ಶನ

**21** ತರುವಾಯ ಯೇಸುಸ್ವಾಮಿ ತಮ್ಮ ಶಿಷ್ಯರಿಗೆ ಮತ್ತೊಮ್ಮೆ ತಿಬೇರಿಯ ಸರೋವರದ ಬಳಿ
ಕಾಣಿಸಿಕೊಂಡರು. ಅದು ಹೀಗೆ ನಡೆಯಿತು: 2ಸಿಮೋನ ಪೇತ್ರನು, ದಿದುಮನೆಂಬ ತೋಮನು,
ಗಲಿಲೇಯದ ಕಾನಾ ಊರಿನ ನತಾನಯೇಲನು, ಜೆಬೆದಾಯನ ಪುತ್ರರು ಮತ್ತು ಯೇಸುವಿನ ಇನ್ನಿಬ್ಬರು
ಶಿಷ್ಯರು ಒಟ್ಟಿಗೆ ಸೇರಿದ್ದರು. 3ಆಗ ಸಿಮೋನ ಪೇತ್ರನು, “ನಾನು ಮೀನು ಹಿಡಿಯಲು ಹೋಗುತ್ತೇನೆ,”

ಎಂದನು. ಮಿಕ್ಕವರು, "ನಾವೂ ನಿನ್ನೊಡನೆ ಬರುತ್ತೇವೆ," ಎಂದರು. ಅವರೆಲ್ಲರೂ ಹೊರಟು ದೋಣಿಯನ್ನು
ಹತ್ತಿದರು. ಆ ರಾತ್ರಿಯೆಲ್ಲಾ ಅವರಿಗೆ ಒಂದು ಮೀನೂ ಸಿಗಲಿಲ್ಲ. 4ಬೆಳಗಾಗುವಷ್ಟರಲ್ಲಿ ಯೇಸು ತೀರದಲ್ಲಿ
ನಿಂತಿದ್ದರು. ಆದರೆ ಅವರು ಯೇಸು ಎಂದು ಶಿಷ್ಯರಿಗೆ ಹೊಳೆಯಲಿಲ್ಲ. 5ಯೇಸು ಅವರಿಗೆ, "ಮಕ್ಕಳೇ,
ಊಟಕ್ಕೆ ಏನಾದರೂ ಸಿಕ್ಕಿತೇ?" ಎಂದು ಕೇಳಿದರು. "ಏನೂ ಇಲ್ಲ," ಎಂದರು ಅವರು. 6"ದೋಣಿಯ
ಬಲಗಡೆಗೆ ಬಲೆ ಬೀಸಿರಿ; ಮೀನುಗಳು ಸಿಗುತ್ತವೆ," ಎಂದು ಯೇಸು ಹೇಳಲು ಅವರು ಹಾಗೆಯೇ
ಮಾಡಿದರು. ಆಗ ಮೀನುಗಳು ರಾಶಿರಾಶಿಯಾಗಿ ಸಿಕ್ಕಿದವು. ಬಲೆಯನ್ನು ಎಳೆಯಲೂ ಆಗದೆ ಹೋಯಿತು.
7ಆಗ ಯೇಸುವಿನ ಆಪ್ತಶಿಷ್ಯನು ಪೇತ್ರನಿಗೆ, "ಅವರೇ ಪ್ರಭು" ಎಂದನು. ಪ್ರಭುವೆಂದು ಕೇಳಿದ್ದೇ ತಡ, ಬರೀ
ಮೈಯಲ್ಲಿದ್ದ ಪೇತ್ರನು ಬಟ್ಟೆಯನ್ನು ಹಾಕಿಕೊಂಡು ನೀರಿಗೆ ಧುಮುಕಿದನು. 8ಮಿಕ್ಕ ಶಿಷ್ಯರು ಮೀನು ತುಂಬಿದ್ದ
ಬಲೆಯನ್ನು ಎಳೆಯುತ್ತಾ ಸುಮಾರು ಮುನ್ನೂರು ಅಡಿ ದೂರದಲ್ಲಿದ್ದ ದಡಕ್ಕೆ ದೋಣಿಯಲ್ಲೇ ಬಂದರು.
9ಅವರು ದಡವನ್ನು ಸೇರಿದಾಗ ಅಲ್ಲಿ ಇದ್ದಲಿನ ಬೆಂಕಿ ಮಾಡಲಾಗಿತ್ತು. ಕೆಂಡದ ಮೇಲೆ ಮೀನುಗಳಿದ್ದವು.
ರೊಟ್ಟಿಯೂ ಅಲ್ಲಿತ್ತು. 10ಯೇಸು ಅವರಿಗೆ, "ನೀವು ಈಗ ತಾನೇ ಹಿಡಿದ ಮೀನುಗಳಲ್ಲಿ ಕೆಲವನ್ನು ತನ್ನಿ,"
ಎಂದು ಹೇಳಿದರು. 11ಸಿಮೋನ ಪೇತ್ರನು ದೋಣಿಯನ್ನು ಹತ್ತಿ ಬಲೆಯನ್ನು ದಡಕ್ಕೆ ಎಳೆದು ತಂದನು.
ಬಲೆಯ ತುಂಬ ದೊಡ್ಡ ಮೀನುಗಳು – ಒಟ್ಟಿಗೆ ನೂರೈವತ್ತಮೂರು ಇದ್ದವು. ಅಷ್ಟು ಮೀನುಗಳಿದ್ದರೂ
ಬಲೆಯು ಹರಿದಿರಲಿಲ್ಲ. 12ಯೇಸು ಅವರಿಗೆ, "ಬಂದು ಊಟಮಾಡಿ," ಎಂದು ಅವರನ್ನು ಕರೆದರು. ಅವರು
ಪ್ರಭುವೆಂದು ಅರಿತಿದ್ದ ಕಾರಣ ಶಿಷ್ಯರಲ್ಲಿ ಒಬ್ಬನಿಗಾದರೂ, "ನೀವು ಯಾರು?" ಎಂದು ಕೇಳುವಷ್ಟು ಧೈರ್ಯ
ಇರಲಿಲ್ಲ. 13ಯೇಸು ಹತ್ತಿರಕ್ಕೆ ಬಂದು ರೊಟ್ಟಿಯನ್ನು ತೆಗೆದುಕೊಂಡು ಅವರಿಗೆ ಕೊಟ್ಟರು; ಹಾಗೆಯೇ
ಮೀನನ್ನೂ ಕೊಟ್ಟರು.

14 ಯೇಸು ಸತ್ತು ಜೀವಂತರಾಗಿ ಎದ್ದ ಬಳಿಕ ತಮ್ಮ ಶಿಷ್ಯರಿಗೆ ಕಾಣಿಸಿಕೊಂಡದ್ದು ಇದು
ಮೂರನೆಯ ಸಾರಿ.

### ಯೇಸು ಮತ್ತು ಪೇತ್ರ

15 ಅವರೆಲ್ಲರ ಊಟವಾದ ಮೇಲೆ ಯೇಸು ಸಿಮೋನ ಪೇತ್ರನನ್ನು ನೋಡಿ, "ಯೊವಾನ್ನನ
ಮಗನಾದ ಸಿಮೋನನೇ, ಇವರಿಗಿಂತಲೂ ಹೆಚ್ಚಾಗಿ ನೀನು ನನ್ನನ್ನು ಪ್ರೀತಿಸುತ್ತೀಯಾ?" ಎಂದು ಕೇಳಿದರು.
ಅದಕ್ಕೆ ಪೇತ್ರನು, "ಹೌದು ಪ್ರಭೂ, ನಾನು ನಿಮ್ಮನ್ನು ಪ್ರೀತಿಸುತ್ತೇನೆಂದು ನೀವೇ ಬಲ್ಲಿರಿ," ಎಂದನು. ಯೇಸು
ಅವನಿಗೆ, "ನನ್ನ ಕುರಿಮರಿಗಳನ್ನು ಮೇಯಿಸು," ಎಂದರು. 16ಯೇಸು ಎರಡನೆಯ ಬಾರಿ, "ಯೊವಾನ್ನನ
ಮಗನಾದ ಸಿಮೋನನೇ, ನೀನು ನನ್ನನ್ನು ಪ್ರೀತಿಸುತ್ತೀಯಾ?" ಎಂದು ಕೇಳಲು, "ಹೌದು ಪ್ರಭುವೇ, ನಾನು
ನಿಮ್ಮನ್ನು ಪ್ರೀತಿಸುತ್ತೇನೆಂದು ನೀವೇ ಬಲ್ಲಿರಿ," ಎಂದು ಮರುನುಡಿದನು. ಯೇಸು ಅವನಿಗೆ, "ನನ್ನ
ಕುರಿಗಳನ್ನು ಕಾಯಿ," ಎಂದರು. 17ಮೂರನೇ ಬಾರಿಯೂ ಯೇಸು, "ಯೊವಾನ್ನನ ಮಗನಾದ
ಸಿಮೋನನೇ, ನೀನು ನನ್ನನ್ನು ಪ್ರೀತಿಸುತ್ತೀಯಾ?" ಎಂದು ಕೇಳಿದರು. "ನೀನು ನನ್ನನ್ನು ಪ್ರೀತಿಸುತ್ತೀಯಾ?"
ಎಂದು ಯೇಸು ಮೂರನೇ ಬಾರಿ ಕೇಳಿದ್ದನ್ನು ಕಂಡು ಪೇತ್ರನು ನೊಂದುಕೊಂಡನು. "ಪ್ರಭುವೇ, ನಿಮಗೆ
ಎಲ್ಲವು ತಿಳಿದೇ ಇದೆ. ನಾನು ನಿಮ್ಮನ್ನು ಪ್ರೀತಿಸುತ್ತೇನೆ ಎಂದೂ ನಿಮಗೆ ತಿಳಿದಿದೆ," ಎಂದು ಹೇಳಿದನು.
ಅದಕ್ಕೆ ಯೇಸು, "ನನ್ನ ಕುರಿಗಳನ್ನು ಮೇಯಿಸು; 18ನಾನು ನಿನಗೆ ಸತ್ಯವಾಗಿ ಹೇಳುತ್ತಾನೆ, ಕೇಳು:
ತಾರುಣ್ಯದಲ್ಲಿ ನೀನೇ ನಡುಕಟ್ಟಿಕೊಂಡು ಇಷ್ಟಬಂದ ಕಡೆ ನಡೆದೆ. ವೃದ್ಧಾಪ್ಯದಲ್ಲಾದರೋ ನೀನು ಕೈಚಾಚುವೆ.
ಬೇರೊಬ್ಬನು ನಿನ್ನ ನಡುಕಟ್ಟಿ ನಿನಗಿಷ್ಟವಿಲ್ಲದ ಕಡೆ ನಿನ್ನನ್ನು ನಡೆಸಿಕೊಂಡು ಹೋಗುವನು," ಎಂದು
ನುಡಿದರು. 19ಪೇತ್ರನು ಎಂಥ ಸಾವಿನಿಂದ ದೇವರ ಮಹಿಮೆಯನ್ನು ಬೆಳಗಿಸಲಿದ್ದಾನೆಂದು ಸೂಚಿಸಿ ಹಾಗೆ
ಹೇಳಿದರು. ಇದಾದ ಮೇಲೆ ಯೇಸು ಪೇತ್ರನಿಗೆ, "ನೀನು ನನ್ನನ್ನು ಹಿಂಬಾಲಿಸಿ ಬಾ," ಎಂದರು.

## ಯೇಸು ಮತ್ತು ಆಪ್ತ ಶಿಷ್ಯ

20 ಪೇತ್ರನು ಹಿಂದಿರುಗಿ ನೋಡಿದಾಗ, ಯೇಸುವಿನ ಆಪ್ತನಾಗಿದ್ದ ಶಿಷ್ಯನು ಹಿಂದೆ ಬರುವುದನ್ನು ಕಂಡನು. (ಭೋಜನದ ಸಮಯದಲ್ಲಿ ಯೇಸುವಿನ ಪಕ್ಕದಲ್ಲೇ ಒರಗಿ, "ಪ್ರಭುವೇ, ನಿಮ್ಮನ್ನು ಹಿಡಿದುಕೊಡುವಂಥ ಸ್ವಾಮಿದ್ರೋಹಿ ಯಾರು?" ಎಂದು ಕೇಳಿದವನೇ ಅವನು.) [21]ಇವನನ್ನು ಕಂಡು ಪೇತ್ರನು, "ಪ್ರಭೂ, ಇವನ ವಿಷಯವೇನು?" ಎಂದು ಯೇಸುವನ್ನು ಕೇಳಿದನು. [22]ಅದಕ್ಕೆ ಯೇಸು, "ನಾನು ಬರುವ ತನಕ ಅವನು ಹಾಗೆಯೇ ಇರಬೇಕೆಂಬುದು ನನ್ನ ಬಯಕೆ; ಆದರೆ ಅದರಿಂದ ನಿನಗೇನಾಗಬೇಕು? ನೀನು ಅಂತೂ ನನ್ನನ್ನು ಹಿಂಬಾಲಿಸಿ ಬಾ," ಎಂದರು. [23]ಇದರಿಂದಾಗಿ ಆ ಶಿಷ್ಯನಿಗೆ ಸಾವಿಲ್ಲವೆಂಬ ವದಂತಿ ಸೋದರರಲ್ಲಿ ಹಬ್ಬಿತು. ಯೇಸು, 'ನಾನು ಬರುವ ತನಕ ಅವನು ಹಾಗೆಯೇ ಇರಬೇಕೆಂಬುದು ನನ್ನ ಬಯಕೆಯಾದರೆ ಅದರಿಂದ ನಿನಗೇನಾಗಬೇಕು?' ಎಂದು ಹೇಳಿದರೇ ಹೊರತು ಅವನಿಗೆ ಸಾವಿಲ್ಲವೆಂದು ಹೇಳಲಿಲ್ಲ. [24]ಇವುಗಳಿಗೆ ಆ ಶಿಷ್ಯನೇ ಸಾಕ್ಷಿ. ಇದನ್ನೆಲ್ಲಾ ಬರೆದಿಟ್ಟವನೂ ಅವನೇ. ಅವನ ಸಾಕ್ಷಿ ಸತ್ಯವಾದುದೆಂದು ನಾವು ಬಲ್ಲೆವು.

## ಸಮಾಪ್ತಿ

25 ಯೇಸು ಮಾಡಿದ ಕಾರ್ಯಗಳು ಇನ್ನೂ ಎಷ್ಟೋ ಇವೆ. ಅವನ್ನೆಲ್ಲಾ ಒಂದೊಂದಾಗಿ ಬರೆಯಲು ಹೋದರೆ, ಬರೆಯಬೇಕಾದ ಗ್ರಂಥಗಳನ್ನು ಬಹುಶಃ ಲೋಕವೇ ಹಿಡಿಸಲಾರದೆಂದು ನೆನಸುತ್ತೇನೆ.